ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮಾರ್ಚ್ 27 ಬುಧವಾರ 2024

₹4

ಸಂಪುಟ: 44 | ಸಂಚಿಕೆ: 338 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ ಮತ್ತು ಫೋಟೋಗೆ: news@mysurumithra.com ಜಾಹೀರಾತು: ad@mysurumithra.com




ಜೈಲಲ್ಲಿ ಇಂದು 'ಕೌದಿ' ನಾಟಕ ಪ್ರದರ್ಶನ

ಮೈಸೂರು, ಮಾ. 26– ವಿಶ್ವ ರಂಗ ಭೂಮಿ ದಿನಾಚರಣೆ ಅಂಗವಾಗಿ ನಗರದ ಕೇಂದ್ರ ಕಾರಾಗೃಹದಲ್ಲಿ ಮಾರ್ಚ್ 27ರಂದು ಸಂಜೆ 5 ಗಂಟೆಗೆ 'ಕೌದಿ' ನಾಟಕ ಪ್ರದರ್ಶನ ಏರ್ಪಡಿಸಲಾಗಿದೆ. ಈ ನಾಟಕವನ್ನು ಗಣೇಶ ಅಮೀನಗಡ ಅವರ ಕವಿತಾ ರಂಗ ತಂಡ ಪ್ರಸ್ತುತಪಡಿಸಲಿದೆ.

ನಾಟಕಕ್ಕೂ ಮೊದಲು ಇಂಗ್ಲಿಷ್ ಅಧ್ಯಾಪಕರು, ಕ್ರಿಯಾ ಸಂಸ್ಥೆಯ ಸಂಸ್ಥಾಪಕರೂ ಆದ ಪ್ರಸನ್ನಕುಮಾರ್ ಕೆರಗೋಡು ಸಮಾರಂಭ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಹಿರಿಯ ಲೇಖಕರು, ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರದ ಯೋಜನಾ ನಿರ್ದೇಶಕರೂ ಆದ ಡಾ.ನೀಲಗಿರಿ ತಳವಾರ ಭಾಗವಹಿಸುವರು. ನಗರದ ಕೇಂದ್ರ ಕಾರಾಗೃಹದ ಅಧೀಕ್ಷಕ ಮಹಾದೇವ ನಾಯಕ ಉಪಸ್ಥಿತರಿರುವರು. ಮುಖ್ಯ ಅಧೀಕ್ಷಕ ಪಿ.ಎಸ್.ರಮೇಶ್ ಅಧ್ಯಕ್ಷತೆ ವಹಿಸುವರು. ಈಗಾಗಲೇ ಕಲಬುರಗಿ, ಬೀದರ್, ವಿಜಯಪುರ, ಬಾಗಲಕೋಟೆ, ಬಳ್ಳಾರಿ ಜಿಲ್ಲೆಗಳಲ್ಲದೆ ಹೈದರಾಬಾದಿನಲ್ಲೂ 27 ಪ್ರಯೋಗಗಳಾಗಿವೆ.

ಉತ್ತರ ಕರ್ನಾಟಕ ಹಾಗೂ ಹೈದರಾಬಾದ್ ಕರ್ನಾಟಕದಲ್ಲಿ ಇಂದಿಗೂ ಕೌದಿ ಬಳಸುತ್ತಾರೆ. ಬೇಸಿಗೆಗೂ ತಂಪಾಗುವ, ಚಳಿಗಾಲದಲ್ಲಿ ಬೆಚ್ಚಗಿಡುವ ಕೌದಿಯ ಮಹತ್ವ ತಿಳಿಸುವುದರ ಜೊತೆಗೆ ಕೌದಿ ಹೊಲಿಯುವವರ ಸಮಸ್ಯೆಗಳು, ಸಂಕಟಗಳು ಹಾಗೂ ಸವಾಲುಗಳ ಕುರಿತು ಅನಾವರಣಗೊಳಿಸುತ್ತಲೇ ಆಧ್ಯಾತ್ಮಿಕವಾಗಿ ಅದು ಹೇಗೆ ಸಂಕೇತಿಸುತ್ತದೆ ಎಂಬುದನ್ನು ನಾಟಕ ಕಟ್ಟಿಕೊಡುತ್ತದೆ ಎಂದು ಪ್ರಕಟಣೆ ತಿಳಿಸಿದೆ.

ನಾಳೆ ವಿಶೇಷ 'ಸ್ವಾತಿ' ಪೂಜೆ



ಮೈಸೂರು, ಮಾ.26– ನಗರದ ಕಾಳಿದಾಸ ರಸ್ತೆಯಲ್ಲಿರುವ ಶ್ರೀ ಯದುಗಿರಿ ಯತಿರಾಜ ಮಠ, ಮೈಸೂರು ಶಾಖೆಯ ಶ್ರೀ ಲಕ್ಷ್ಮೀನರಸಿಂಹ ಸ್ವಾಮಿ ದೇವಸ್ಥಾನದಲ್ಲಿ ಮಾ.28ರಂದು ಗುರುವಾರ 'ಸ್ವಾತಿ' ನಕ್ಷತ್ರದ ಪ್ರಯುಕ್ತ ವಿಶೇಷ ಪೂಜೆ ಆಯೋಜಿಸಲಾಗಿದೆ. ಅಂದು ಬೆಳಿಗ್ಗೆ 8ಕ್ಕೆ ಸಂಕಲ್ಪ, 9ಕ್ಕೆ ಅಭಿಷೇಕ, 10.30ಕ್ಕೆ ಅಲಂಕಾರ, 11.30ಕ್ಕೆ ಮಹಾಮಂಗಳಾರತಿ, ಮಧ್ಯಾಹ್ನ 12.30ಕ್ಕೆ ಶಾತ್ತುಮೊರೈ, 1 ಗಂಟೆಗೆ ತೀರ್ಥ ಪ್ರಸಾದ ವಿನಿಯೋಗವನ್ನು ಏರ್ಪಡಿಸಲಾಗಿದೆ. ಸಂಜೆ 7.30ಕ್ಕೆ ಪ್ರಾಕಾರೋತ್ಸವ ಹಮ್ಮಿಕೊಳ್ಳಲಾಗಿದೆ ಎಂದು ದೇವಸ್ಥಾನದ ಪ್ರಧಾನ ವ್ಯವಸ್ಥಾಪಕ ವಿದ್ವಾನ್ ಕೆ.ಆರ್.ಯೋಗಾನರಸಿಂಹನ್ (ಮುರುಳಿ ಅಯ್ಯಂಗಾರ್) ತಿಳಿಸಿದ್ದಾರೆ. ಮಾಹಿತಿಗಾಗಿ ಮೊಬೈಲ್ 9342188323, 7598832271 ಸಂಪರ್ಕಿಸಬಹುದು ಎಂದು ಹೇಳಿದ್ದಾರೆ.



ಮೈಸೂರಿನ ಶ್ರೀ ದುರ್ಗಾ ಫೌಂಡೇಶನ್ ವತಿಯಿಂದ ಇತ್ತೀಚೆಗೆ ಎಂ.ಜಿ. ರಸ್ತೆಯಲ್ಲಿರುವ ಸಿಪಾಯಿ ಗ್ರಾಂಡ್ ಹೋಟೆಲ್‌ನಲ್ಲಿ ನಡೆದ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಸಂದರ್ಭದಲ್ಲಿ ಅಗ್ರಹಾರದ ರಾಮಾನುಜ ರಸ್ತೆಯ ನಿವಾಸಿ ಸಂಗೀತ ಶಿಕ್ಷಕಿ ವಿದುಷಿ ಶ್ರೀವಾಣಿ ಅವರಿಗೆ ಕರ್ನಾಟಕ ಮಹಿಳಾ ರತ್ನ ಪ್ರಶಸ್ತಿಯನ್ನು ನೀಡಿ, ಗೌರವಿಸಲಾಯಿತು. ಶ್ರೀ ದುರ್ಗಾ ಫೌಂಡೇಶನ್ ಅಧ್ಯಕ್ಷೆ ರೇಖಾ ಶ್ರೀನಿವಾಸ್, ಸಮಾಜ ಸೇವಕ ಡಾ. ಶಾಂತ ರಾಮಕೃಷ್ಣ, ಜೀವಧಾರ ರಕ್ತ ನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಮುತ್ತಣ್ಣ, ಮಾತೃ ಮಂಡಳಿ ಮಹಿಳಾ ಸಂಘದ ಅಧ್ಯಕ್ಷೆ ಪುಷ್ಪಲತಾ ಚಂದ್ರಶೇಖರ್ ಇನ್ನಿತರರು ಹಾಜರಿದ್ದರು.

ಏ.2ರಿಂದ ಸುದರ್ಶನ ಕ್ರಿಯೆ

ಮೈಸೂರು, ಮಾ. 26– ಮೈಸೂರಿನ ಆರ್ಟ್ ಆಫ್ ಲಿವಿಂಗ್ ವತಿಯಿಂದ ಏ. 2ರಿಂದ 6ರವರೆಗೆ ಆರೋಗ್ಯಕರ ಜೀವನ, ಧ್ಯಾನ, ಯೋಗ, ಪ್ರಾಣಾಯಾಮ, ಸುದರ್ಶನ ಕ್ರಿಯೆಯನ್ನು ಕಲಿಸುವ ಶಿಬಿರವನ್ನು ಲಲಿತಾದ್ರಿಪುರ ರಸ್ತೆಯಲ್ಲಿರುವ ಆರ್ಟ್ ಆಫ್ ಲಿವಿಂಗ್ ಆಶ್ರಮದಲ್ಲಿ ಏರ್ಪಡಿಸಲಾಗಿದೆ. ಶಿಬಿರವು ಬೆಳಿಗ್ಗೆ 6 ರಿಂದ 8.30 ಹಾಗೂ ಸಂಜೆ 6ರಿಂದ 8.30ರವರೆಗೆ ಎರಡು ಅವಧಿಯಲ್ಲಿ ನಡೆಯಲಿದೆ. ಹೆಚ್ಚಿನ ಮಾಹಿತಿಗೆ ಮೊ. 9480476825 ಸಂಪರ್ಕಿಸಬಹುದು.




ಬೆಂಗಳೂರಿನ ರಾಷ್ಟ್ರೀಯ ಕ್ಷಯ ರೋಗ ಸಂಸ್ಥೆಯಿಂದ ಮೈಸೂರಿನ ಪಿಕೆಟಿಬಿ ಮತ್ತು ಇಡಿ ಆಸ್ಪತ್ರೆಯ ನೋಡಲ್ ಬಹು ಔಷಧಿ ನಿರೋಧಕ ಕ್ಷಯ ರೋಗ ಚಿಕಿತ್ಸಾ ಘಟಕದ ಹಿರಿಯ ವೈದ್ಯಾಧಿಕಾರಿ ಡಾ.ಆರ್.ಪಿ.ಸಾಯಿನಾಥ್ ಅವರನ್ನು 28 ವರ್ಷಗಳಿಂದ ಕ್ಷಯರೋಗಿಗಳ ಚಿಕಿತ್ಸೆಗೆ ಅವರು ಸಲ್ಲಿಸಿರುವ ಸೇವೆ ಪರಿಗಣಿಸಿ, ಸನ್ಮಾನಿಸಲಾಯಿತು.



ಮೈಸೂರು ವಿಶ್ವವಿದ್ಯಾನಿಲಯದ ಎಂ.ಎ. ಸ್ನಾತಕೋತ್ತರ ಪದವಿಯ ಇತಿಹಾಸ ವಿಷಯದಲ್ಲಿ ಅತೀ ಹೆಚ್ಚು ಅಂಕಗಳೊಂದಿಗೆ ಐದು ಚಿನ್ನದ ಪದಕಗಳನ್ನು ಪಡೆದ ಎಸ್.ಬಿ.ಆರ್.ಆರ್. ಮಹಾಜನ ಪ್ರಥಮ ದರ್ಜೆ ಕಾಲೇಜಿನ ಹಿರಿಯ ವಿದ್ಯಾರ್ಥಿ ಶಾಬಜ್‌ಖಾನ್ ಅವರನ್ನು ಇತಿಹಾಸ ವಿಭಾಗದ ವತಿಯಿಂದ ವಾರದ ಸಮಾವೇಶದಲ್ಲಿ ಅಭಿನಂದಿಸಲಾಯಿತು. ಈ ವೇಳೆ ನಿವೃತ್ತ ಐಪಿಎಸ್ ಅಧಿಕಾರಿ ಡಾ.ಶಂಕರ್ ಬಿದರಿ, ಪ್ರಾಂಶುಪಾಲರಾದ ಡಾ. ಬಿ.ಆರ್.ಜಯಕುಮಾರಿ, ಮುಖ್ಯಕಾರ್ಯನಿರ್ವಹಣಾಧಿಕಾರಿ ಡಾ.ಎಸ್.ಆರ್. ರಮೇಶ್, ಇತಿಹಾಸ ವಿಭಾಗದ ಮುಖ್ಯಸ್ಥ ಡಾ.ಹೆಚ್.ಶ್ರೀಧರ ಮತ್ತಿತರರು ಉಪಸ್ಥಿತರಿದ್ದರು.

ನಿಧನ



ಅಶ್ವಥ್‌ರಾವ್

ಮೈಸೂರು, ಮಾ. 26– ಮೈಸೂರಿನ ಗಾಯತ್ರಿಪುರಂ ನಿವಾಸಿ, ನಿವೃತ್ತ ಮುಖ್ಯಪೇದೆ ಎಸ್.ಎಚ್. ಅಶ್ವಥ್‌ರಾವ್ (78) ಸೋಮವಾರ ಸಂಜೆ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರರು, ಓರ್ವ ಪುತ್ರಿ ಸೇರಿದಂತೆ ಬಂಧು–ಮಿತ್ರರನ್ನು ಅಗಲಿದ್ದಾರೆ. ಇವರ ಹಿರಿಯ ಪುತ್ರ ಎ.ನಾಗೇಶ್‌ರಾವ್ ಅವರು ಅಹಮದಬಾದ್‌ನ ಸಿಐಎಸ್‌ಎಫ್‌ನಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ.

ಮೃತರ ಅಂತ್ಯಕ್ರಿಯೆ ಚಾಮುಂಡಿಬೆಟ್ಟದ ತಪ್ಪಲಿನಲ್ಲಿರುವ ಹರಿಶ್ಚಂದ್ರ ಘಾಟ್‌ನಲ್ಲಿ ಮಂಗಳವಾರ ಮಧ್ಯಾಹ್ನ ನೆರವೇರಿತು ಎಂದು ಕುಟುಂಬಸ್ಥರು ತಿಳಿಸಿದ್ದಾರೆ.

ಮಿರ್ ಇನಾಯತ್ ಹುಸೇನ್



ಮೈಸೂರು, ಮಾ. 26– ಮೈಸೂರಿನ ಮಂಡಿ ಮೊಹಲ್ಲಾದ ತುರಬ್ ಆಲಿ ಸ್ಟ್ರೀಟ್ ನಿವಾಸಿ ಹಾಗೂ ರೈಲ್ವೆ ಸಿಬ್ಬಂದಿ ಮಿರ್ ಇನಾಯತ್ ಹುಸೇನ್(58) ಸೋಮವಾರ ರಾತ್ರಿ ನಿಧನರಾದರು.

ಮೃತರು ಪತ್ನಿ, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು ಮಿತ್ರರನ್ನು ಅಗಲಿದ್ದಾರೆ. ಅಕ್ಬರ್ ರಸ್ತೆಯಲ್ಲಿರುವ ಮಸೀದಿ–ಇ–ಜಾಫೆರಿಯಲ್ಲಿ ಮಂಗಳವಾರ ನಮಾಜ್–ಇ–ಜನಾಜ ನಡೆದ ನಂತರ ಟಿಪ್ಪು ಸರ್ಕಲ್‌ನಲ್ಲಿರುವ ಮುಸ್ಲಿಂ ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ವೈದ್ಯಕೀಯ ಕ್ಷೇತ್ರದಲ್ಲಿ ಕೆಲಸ ಮಾಡಲು ಮಾನವೀಯ ಮೌಲ್ಯ, ಅಂತಃಕರಣವಿರಬೇಕು

● ಮೈಸೂರು ಜಿಲ್ಲಾಸ್ಪತ್ರೆಯ ಸರ್ಜನ್ ಡಾ.ಟಿ.ಅಮರ್‌ನಾಥ್ ಕಿವಿಮಾತು ● ಸೇವೆಗೆ ಸಮರ್ಪಿಸಿಕೊಂಡರೆ ಉನ್ನತ ಸ್ಥಾನಕ್ಕೇರಬಹುದು





ಮೈಸೂರಿನ ಸರಸ್ವತಿಪುರಂನ ಬಂದಂತಮ್ಮ ಕಾಳಮ್ಮ ಕಲ್ಯಾಣ ಮಂಟಪದಲ್ಲಿ ಮಂಗಳವಾರ ಬಿಜಿಎಸ್ ಇಂಟರ್‌ನ್ಯಾಷನಲ್ ಫೌಂಡೇಷನ್ ಫಾರ್ ಹೆಲ್ತ್ ಸೈನ್ಸ್ ಸಂಸ್ಥೆ ಆಯೋಜಿಸಿದ್ದ ಪದವೀಧರರ ದಿನಾಚರಣೆ ಕಾರ್ಯಕ್ರಮವನ್ನು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ ಉದ್ಘಾಟಿಸಿದರು. ಮತ್ತೊಂದು ಚಿತ್ರದಲ್ಲಿ ಪದವಿ ಪಡೆದ ವಿದ್ಯಾರ್ಥಿಗಳು ದೀಪ ಹಿಡಿದು ಪ್ರತಿಜ್ಞಾ ವಿಧಿ ಸ್ವೀಕರಿಸುತ್ತಿರುವುದು.

ಮೈಸೂರು,ಮಾ.26(ಎಂಟಿವೈ)– ವೈದ್ಯಕೀಯ ಕ್ಷೇತ್ರದಲ್ಲಿ ಕೆಲಸ ಮಾಡುವ ದೃಷ್ಟಿಯಿಂದ ಆಗಮಿಸುವ ವಿದ್ಯಾರ್ಥಿಗಳು ಮಾನವೀಯ ಮೌಲ್ಯ ಹಾಗೂ ಅಂತಃಕರಣದ ಗುಣ ಬೆಳೆಸಿಕೊಳ್ಳುವ ಅಗತ್ಯವಿದೆ ಎಂದು ಮೈಸೂರು ಜಿಲ್ಲಾ ಆಸ್ಪತ್ರೆಯ ಸರ್ಜನ್ ಡಾ.ಟಿ.ಅಮರನಾಥ್ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ಸರಸ್ವತಿಪುರಂನಲ್ಲಿರುವ ಬಂದಂತಮ್ಮ ಕಾಳಮ್ಮ ಕಲ್ಯಾಣ ಮಂಟಪದಲ್ಲಿ ಮಂಗಳವಾರ ಬಿಜಿಎಸ್ ಇಂಟರ್‌ನ್ಯಾಷನಲ್ ಫೌಂಡೇಷನ್ ಫಾರ್ ಹೆಲ್ತ್ ಸೈನ್ಸ್ ಸಂಸ್ಥೆ ಆಯೋಜಿಸಿದ್ದ ಪದವೀಧರರ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ವೈದ್ಯಕೀಯ ಹಾಗೂ ನರ್ಸಿಂಗ್ ಕ್ಷೇತ್ರಕ್ಕೆ ಸೇರಲು ಬಯಸುವವರ ಸಂಖ್ಯೆ ಹೆಚ್ಚಾಗುತ್ತಿದೆ. ಇದು ಒಳ್ಳೆಯ ಬೆಳವಣಿಗೆಯಾದರೂ, ವೈದ್ಯಕೀಯ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸಲು ಪ್ರಮುಖವಾಗಿ ಮಾನವೀಯ ಗುಣ ಹಾಗೂ ಅಂತಃಕರಣ ಇರಲೇಬೇಕು. ಚಿಕಿತ್ಸೆಗಾಗಿ ಆಸ್ಪತ್ರೆಗೆ ಬರುವ ಅನಾರೋಗ್ಯ ಪೀಡಿತರೊಂದಿಗೆ ಮಾನವೀಯ ನೆಲೆಗಟ್ಟಿನಲ್ಲಿ ಸಾವಧಾನದಿಂದ ವರ್ತಿಸಬೇಕು. ಈ ಗುಣ ಹೊಂದಿದ್ದರೆ ಉತ್ತಮವಾಗಿ ಕಾರ್ಯನಿರ್ವಹಿಸಬಹುದು. ಶುಶ್ರೂಷಕರಾದವರು ರೋಗಿಗಳ ಸೇವೆಯಲ್ಲಿ ಸಮರ್ಪಿಸಿಕೊಳ್ಳಬೇಕು. ಆಗ ಮಾತ್ರ ವೃತ್ತಿಯಲ್ಲಿ ಉನ್ನತ ಸ್ಥಾನ ಹೊಂದಬಹುದಾಗಿದೆ ಎಂದು ಸಲಹೆ ನೀಡಿದರು. ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ ಮಾತನಾಡಿ, ಆರೋಗ್ಯ ಕ್ಷೇತ್ರದಲ್ಲಿ ಕೆಲಸ ಮಾಡುವವರಿಗೆ ಸಮಾಜದಲ್ಲಿ ಗೌರವವಿದೆ. ರೋಗಿಗಳಿಗೆ ಆರೈಕೆ ಮಾಡುವುದರೊಂದಿಗೆ ಧೈರ್ಯ ತುಂಬುವ ಕೆಲಸ ಶುಶ್ರೂಷಕರು ಮಾಡಬೇಕು. ಯಾವುದೇ ಕ್ಷೇತ್ರವಾದರೂ ಕಲಿಕೆ ನಿರಂತರ. ಪದವಿ ಮತ್ತು ಸ್ನಾತಕೋತ್ತರ ಪದವಿ ಮುಗಿದ ನಂತರವೂ ಕಲಿಯುವುದನ್ನು ನಿಲ್ಲಿಸಬಾರದು. ಅಭ್ಯಾಸ ಹಾಗೂ ಅನುಭವದಿಂದಲೇ ಕೌಶಲ್ಯ ವೃದ್ಧಿಸಿಕೊಳ್ಳಬಹುದು. ಪದವಿ ಬಳಿಕ ವೃತ್ತಿ ಮಾಡಲು ಹೆಚ್ಚಿನ ಸಮಯ ಮೀಸಲಿಡಬೇಕು. ಅಧ್ಯಯನ ಮುಂದುವರಿಸಿ, ಜನರ ಆರೋಗ್ಯ ಕಾಪಾಡುವ ಕಾಯಕದಲ್ಲಿ ತೊಡಗಿಸಿಕೊಳ್ಳುವಂತೆ ತಿಳಿಸಿದರು. ಆದಿಚುಂಚನಗಿರಿ ಶಾಖಾ ಮಠದ ಶ್ರೀ ಸೋಮನಾಥ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದ ಕಾರ್ಯಕ್ರಮದಲ್ಲಿ ದಿಜಿಶಾ ಜೋಸ್, ಜಿಸಮೋಲ್, ಅಪರ್ಣಾ ಉನ್ನಿಕೃಷ್ಣನ್, ಅಬಿನಾ ಅನಿಲ್, ಬಿಯಾ ಆನ್ ಥಾಮಸ್, ಮರ್ಲಿನ್ ಶಾಜಿ ಸೇರಿದಂತೆ ಸ್ನಾತಕ ವಿಭಾಗದ 57 ಹಾಗೂ ಸ್ನಾತಕೋತ್ತರ ವಿಭಾಗದ 4 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು. ಇದೇ ವೇಳೆ ಪದವೀ ಧರ ವಿದ್ಯಾರ್ಥಿಗಳಿಗೆ ಗಣ್ಯರು ಹಾಗೂ ನರ್ಸಿಂಗ್ ಕಾಲೇಜಿನ ಉಪನ್ಯಾಸಕರು ಎಲ್ಲಾ ವಿದ್ಯಾರ್ಥಿಗಳ ಕೈಯ್ಯಲ್ಲಿದ್ದ ದೀಪ ವನ್ನು ಹಚ್ಚುವ ಮೂಲಕ ಶುಭ ಕೋರಿ ದರು. ಕಾರ್ಯಕ್ರಮದಲ್ಲಿ ಪದವಿ ಹಾಗೂ ಸ್ನಾತಕ ಪದವಿ ಪಡೆದ ವಿದ್ಯಾರ್ಥಿಗಳ ಪೋಷಕರು ಪಾಲ್ಗೊಂಡಿದ್ದರು.

ಈ ಸಂದರ್ಭದಲ್ಲಿ ಜಿಲ್ಲಾ ಶುಶ್ರೂಷಕ ಅಧಿಕಾರಿ ಕೆ.ಎ.ಖದೀಜಾ, ಚೆಲುವಾಂಬ ಆಸ್ಪತ್ರೆಯ ಶುಶ್ರೂಷಕ ಅಧೀಕ್ಷಕಿ ಬಿ.ಎ. ಸುಲಲಿತಾಂಗಿ, ಅಪೊಲೊ ಬಿಜಿಎಸ್ ಆಸ್ಪತ್ರೆಯ ಉಪಾಧ್ಯಕ್ಷ ಎನ್.ಜಿ.ಭರತೀಶ ರೆಡ್ಡಿ, ವೈದ್ಯಕೀಯ ಅಧೀಕ್ಷಕ ಡಾ.ಅಮಾನ್ ನಾಯಕ್ ಇನ್ನಿತರರು ಉಪಸ್ಥಿತರಿದ್ದರು.

ಏ.1ರಿಂದ ಸಮಾಜ ವಿಜ್ಞಾನಗಳ ಸಂಶೋಧನಾ ವಿಧಾನ ಕಾರ್ಯಾಗಾರ

ಮೈಸೂರು, ಮಾ.26– ಮೈಸೂರು ವಿಶ್ವವಿದ್ಯಾನಿಲಯದ ಡಾ. ಬಿ.ಆರ್.ಅಂಬೇಡ್ಕರ್ ಸಂಶೋಧನಾ ಹಾಗೂ ವಿಸ್ತರಣಾ ಕೇಂದ್ರದ ವತಿಯಿಂದ ಮಾನಸಗಂಗೋತ್ರಿಯ ಪ್ರೊ. ಬೆಟ್ರಿಕ್ಸ್ ಡಿ' ಸೌಜ ಸಭಾಂಗಣದಲ್ಲಿ 'ಸಮಾಜ ವಿಜ್ಞಾನಗಳ ಸಂಶೋಧನೆ: ಪ್ರಸ್ತುತ ಪ್ರವೃತ್ತಿಗಳು ಮತ್ತು ಮುಂದಿನ ದಾರಿ' ವಿಷಯ ಕುರಿತು ಏ.1ರಿಂದ 6ರವರೆಗೆ 6 ದಿನಗಳ ಕಾರ್ಯಾಗಾರವನ್ನು ಆಯೋಜಿಸಲಾಗಿದೆ.


ಮೈಸೂರು ವಿಶ್ವವಿದ್ಯಾನಿಲಯದ ವಿವಿಧ ಕಲಾ ಹಾಗೂ ಸಮಾಜ ವಿಜ್ಞಾನ ವಿಭಾಗಗಳು ಮತ್ತು ಸಂಯೋಜಿತ ಕಾಲೇಜುಗಳ ಸಂಶೋಧನಾ ವಿದ್ಯಾರ್ಥಿಗಳು ಈ ಕಾರ್ಯಾಗಾರದಲ್ಲಿ ಭಾಗವಹಿಸಲಿದ್ದು, ಉದ್ಘಾಟನಾ ಸಮಾರಂಭ ಏಪ್ರಿಲ್ 1ರಂದು ಬೆಳಿಗ್ಗೆ 10.30ಕ್ಕೆ ಮೈಸೂರು ವಿಶ್ವವಿದ್ಯಾನಿಲಯದ ಕುಲಸಚಿವರಾದ ಶ್ರೀಮತಿ ವಿ.ಆರ್.ಶೈಲಜಾ ನೆರವೇರಿಸಲಿದ್ದಾರೆ. ಕಾರ್ಯಾಗಾರದ ದಿಕ್ಸೂಚಿ ಭಾಷಣವನ್ನು ಬೆಂಗಳೂರಿನ ಸಾಮಾಜಿಕ ಮತ್ತು ಆರ್ಥಿಕ ಬದಲಾವಣೆ ಸಂಸ್ಥೆಯ ಸಮಾಜಶಾಸ್ತ್ರದ ಹಿರಿಯ ಪ್ರಾಧ್ಯಾಪಕ ಪ್ರೊ.ಜಿ.ಕೆ.ಕಾರಂತ್ ಮಾಡಲಿದ್ದಾರೆ. ಅಧ್ಯಕ್ಷತೆಯನ್ನು ಡಾ. ಬಿ.ಆರ್. ಅಂಬೇಡ್ಕರ್ ಸಂಶೋಧನಾ ಹಾಗೂ ವಿಸ್ತರಣಾ ಕೇಂದ್ರದ ನಿರ್ದೇಶಕ ಪ್ರೊ.ಜೆ. ಸೋಮಶೇಖರ್ ವಹಿಸಲಿದ್ದಾರೆ.

ಆರು ದಿನಗಳು ನಡೆಯಲಿರುವ ಕಾರ್ಯಾಗಾರವು ಒಟ್ಟು ಹದಿನೆಂಟು ಗೋಷ್ಠಿಗಳನ್ನು ಸಂಶೋಧನೆಯ ವಿವಿಧ ಆಯಾಮಗಳಾದ ಸಂಶೋಧನಾ ಪ್ರಕ್ರಿಯೆ, ಸಾಮಾಜಿಕ ಸಂಶೋಧನೆಯಲ್ಲಿ ಬಳಸುವ ಪ್ರಧಾನ ಪರಿಕಲ್ಪನೆಗಳು, ಸಾಹಿತ್ಯಾವಲೋಕನ, ಮಾಹಿತಿಯ ಮೂಲಗಳು, ಗುಣಾತ್ಮಕ ಮತ್ತು ಪರಿಮಾಣಾತ್ಮಕ ವಿಧಾನಗಳು, ಸಾಹಿತ್ಯದ ಅಧ್ಯಯನ ಮತ್ತು ವಿಮರ್ಶೆ, ಸಂಶೋಧನೆಯಲ್ಲಿ ನೈತಿಕತೆ, ಕ್ಷೇತ್ರಾಧ್ಯಯನ, ಸೈದ್ಧಾಂತಿಕ ದೃಷ್ಟಿಕೋನ, ಸುಧಾರಿತ ಉಪಕರಣಗಳ ಅಳವಡಿಕೆ, ಸಂಶೋಧನಾ ಮನೋಭಾವ, ಸಾಮಾಜಿಕ ಸಂಶೋಧನೆಯಲ್ಲಿ ಸಂಖ್ಯಾಶಾಸ್ತ್ರೀಯ, ಕಂಪ್ಯೂಟರ್ ವಿಧಾನಗಳು ಮತ್ತು ಕೃತಕ ಬುದ್ಧಿಮತ್ತೆಯ ಬಳಕೆ, ಸಂಶೋಧನಾ ಬರವಣಿಗೆ – ಇವೇ ಮುಂತಾದ ವಿಚಾರಗಳನ್ನು ಕುರಿತು ಉಪನ್ಯಾಸ ಮತ್ತು ಚರ್ಚೆಗಳು ಇರುತ್ತವೆ.

ಕಾರ್ಯಾಗಾರದಲ್ಲಿ ದೇಶದ ಹಲವಾರು ಪ್ರತಿಷ್ಠಿತ ವಿಶ್ವವಿದ್ಯಾನಿಲಯಗಳ ಹಿರಿಯ ಪ್ರಾಧ್ಯಾಪಕರು, ವಿದ್ವಾಂಸರು ವಿಷಯಗಳನ್ನು ಮಂಡಿಸುತ್ತಾರೆ. ಅವರಲ್ಲಿ ಪ್ರಮುಖವಾಗಿ ಪ್ರೊ. ಸಿ.ಲಕ್ಷ್ಮಣ್–ಚೆನ್ನೈ, ಪ್ರೊ.ಸುಮಿತ್ ಮುಷ್ಕರ್–ಹರಿಯಾಣ, ಪ್ರೊ.ಪಿ.ನಾಗಭೂಷಣ್–ಆಂಧ್ರಪ್ರದೇಶ, ಪ್ರೊ. ರಮಣಯ್ಯ–ಗದಗ, ಪ್ರೊ. ರಹಮತ್ ತರೀಕೆರೆ–ಹಂಪಿ, ಪ್ರೊ.ಆರ್.ನಿರಂಜನ್–ಬಳ್ಳಾರಿ, ಪ್ರೊ.ಡಿ. ನಾರಾಯಣ– ಬೆಂಗಳೂರು, ಪ್ರೊ. ಜಗದೀಶ್–ಬೆಂಗಳೂರು, ಪ್ರೊ. ಎಂ.ಕೃಷ್ಣಮೂರ್ತಿ–ಬೆಂಗಳೂರು, ಪ್ರೊ. ರಾಮಶೇಷ, ಪ್ರೊ. ಪಿ.ಕೆ.ಮಿಶ್ರ–ಮೈಸೂರು. ಪ್ರೊ. ಹರಿನಾರಾಯಣ–ಮೈಸೂರು, ಪ್ರೊ. ಜಿ.ವೆಂಕಟೇಶ ಕುಮಾರ್, ಪ್ರೊ. ಬಿರಾದಾರ್, ಪ್ರೊ. ಆರ್.ಇಂದಿರಾ ಭಾಗವಹಿಸಲಿದ್ದಾರೆ.

ಏ.6ರಂದು ನಡೆಯಲಿರುವ ಕಾರ್ಯಾಗಾರದ ಅಂತಿಮ ಗೋಷ್ಠಿಯಲ್ಲಿ 'ಸಮಾಜ ವಿಜ್ಞಾನ ಸಂಶೋಧನೆ: ಮುಂದಿನ ದಾರಿ' ತಜ್ಞರ ಅಭಿಮತ ಗೋಷ್ಠಿಯ ಚರ್ಚೆಯ ಅಧ್ಯಕ್ಷತೆಯನ್ನು ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್‌ನ ಉಪಾಧ್ಯಕ್ಷ ಪ್ರೊ. ಎಸ್.ಆರ್.ನಿರಂಜನ ವಹಿಸಲಿದ್ದು, ಈ ಗೋಷ್ಠಿಯಲ್ಲಿ ಕುವೆಂಪು ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಪ್ರೊ.ಜೋಗನ್ ಶಂಕರ್, ರಾಯಚೂರು ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಹರೀಶ್‌ರಾಮಸ್ವಾಮಿ, ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಬಿ.ಕೆ. ತುಳಸಿಮಾಲಾ ಮತ್ತು ರಾಣಿಚೆನ್ನಮ್ಮ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಸಿ.ಎಂ. ತ್ಯಾಗರಾಜ್ ಭಾಗವಹಿಸಲಿದ್ದಾರೆ.


ಉದ್ಯಾನವನ ನಿವೇಶನ ಮಾಡಿಲ್ಲ



ಮೈಸೂರು, ಮಾ. 26 (ಆರ್‌ಕೆ)– ಮೈಸೂರಿನ ಶ್ರೀರಾಂ ಪುರದಲ್ಲಿ ಅಭಿವೃದ್ಧಿಪಡಿಸಿರುವ ವಸತಿ ಬಡಾವಣೆಯ ಉದ್ಯಾನವನ ನಿವೇಶನ ಮಾಡಿ ಹಂಚಿಲ್ಲ ಎಂದು ಭವ್ಯ ಭಾರತ ಗೃಹ ನಿರ್ಮಾಣ ಸಹಕಾರ ಸಂಘದ ಅಧ್ಯಕ್ಷರಾದ ಸಿ.ಎನ್.ಮಂಜೇಗೌಡ ತಿಳಿಸಿದ್ದಾರೆ.

'ಉದ್ಯಾನವನವನ್ನೇ ನಿವೇಶನವನ್ನಾಗಿ ಪರಿವರ್ತಿಸಿ ಕೋಟ್ಯಾಂತರ ರೂ.ಗಳಿಗೆ ಮಾರಾಟ' ಶೀರ್ಷಿಕೆಯಡಿ ಮಂಗಳವಾರ 'ಮೈಸೂರು ಮಿತ್ರ'ದಲ್ಲಿ ಬಂದ ವರದಿಗೆ ಪ್ರತಿಕ್ರಿಯೆ ನೀಡಿದ ಅವರು, ಭವ್ಯ ಭಾರತ ಗೃಹ ನಿರ್ಮಾಣ ಸಹಕಾರ ಸಂಘದಿಂದ ಶ್ರೀರಾಂಪುರ ಗ್ರಾಮದ ಸರ್ವೆ ನಂಬರ್ 18/1, 18/2, 19/2, 52/1, 52/2 ರ ಒಟ್ಟು 8 ಎಕರೆ ಭೂಮಿಯಲ್ಲಿ ವಸತಿ ಬಡಾವಣೆ ಅಭಿವೃದ್ಧಿಪಡಿಸಿ, ಮುಡಾದಿಂದ ನಕ್ಷೆ ಅನುಮೋದನೆ ಪಡೆದು ನಿಯಮಾನುಸಾರ ಉದ್ಯಾನವನ, ಸಿಎ ನಿವೇಶನ, ರಸ್ತೆಗೆ ಜಾಗ ಬಿಟ್ಟು ಉಳಿದ ಪ್ರದೇಶದಲ್ಲಿ ವಿವಿಧ ಅಳತೆಯ 79 ನಿವೇಶನ ನಿರ್ಮಿಸಲಾಗಿದೆ ಎಂದರು. ಉದ್ಯಾನವನ ಜಾಗ ಖಾಲಿ ಉಳಿದಿದ್ದು, ಅಲ್ಲಿ ಮನೆ ಯಾರೂ ಕಟ್ಟಿಲ್ಲ. ಈ ಸ್ಥಳಕ್ಕೆ ನೀರು, ಒಳಚರಂಡಿ, ವಿದ್ಯುತ್ ಸಂಪರ್ಕ ಕಲ್ಪಿಸಿಲ್ಲ. ಅಲ್ಲದೇ ಮುಡಾದಿಂದ ಆ ಜಾಗದಲ್ಲಿ ಫಲಕ ಹಾಕಿ ತಂತಿ ಬೇಲಿಯನ್ನೂ ಅಳವಡಿಸಲಾಗಿದೆ. ಉದ್ಯಾನವನದ ಉದ್ದೇಶಕ್ಕಾಗಿ ಮೀಸಲಿರಿಸಿರುವ ಜಾಗದಲ್ಲಿ ನಿವೇಶನ ಮಾರಾಟ ಮಾಡುವ ಪ್ರಶ್ನೆಯೇ ಉದ್ಭವಿಸಲ್ಲ ಎಂದು ಮಂಜೇಗೌಡರು ಪುನರುಚ್ಚರಿಸಿದರು. ಅದೇ ಬಡಾವಣೆಯಲ್ಲಿ 8 ಹೆಚ್ಚುವರಿ ನಿವೇಶನಗಳನ್ನು ಬೇರೆಯವರಿಗೆ ನೋಂದಣಿ ಮಾಡಿಕೊಟ್ಟಿರುವುದು ನಿಜ. ಅವರಿಗೆ ನಿವೇಶನ ಕೊಡುವುದು ಸಂಘದ ಜವಾಬ್ದಾರಿ. ನಾನೇ ಅವರು ಕೇಳಿದರೆ ಸಮಜಾಯಿಷಿ ನೀಡುತ್ತೇನೆ ಎಂದು ಅವರು ತಿಳಿಸಿದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

27.3.2024 ಬುಧವಾರ, ಮಳೆ ನಕ್ಷತ್ರ: ಉತ್ತರಾಭಾದ್ರ 17.03.2024ರಿಂದ 30.03.2024
ಶ್ರೀ ಶೋಭಕೃತ್ ನಾಮ ಸಂವತ್ಸರ, ಉತ್ತರಾಯಣ, ಶಿಶಿರ ಋತು, ಪಾಲ್ಗುಣ ಮಾಸ, ಕೃಷ್ಣ ಪಕ್ಷ,
ತಿಥಿ: ಬಿದಿಗೆ, ನಕ್ಷತ್ರ: ಚಿತ್ತ, ರಾಹುಕಾಲ: ಮಧ್ಯಾಹ್ನ 12 ರಿಂದ 1.30ರವರೆಗೆ

■ **ರಾಮ್‌ಸನ್ಸ್ ಬೊಂಬೆ ಮನೆ:** ದಸರೆ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10ರಿಂದ ಸಂಜೆ 7 ರವರೆಗೆ.

■ **ವ್ಯವಸ್ಥಾಪಕರು :** ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ. ರಾಜೀವ್ ಕಾಂಗ್ರೆಸ್ ಪಕ್ಷ ಸೇರ್ಪಡೆ ಕಾರ್ಯಕ್ರಮ, ಸ್ಥಳ: ಭೂತಾಳೆ ಮೈದಾನ, ಒಕ್ಕಲಿಗರ ಸಂಘ ಸಮುದಾಯ ಭವನ ಎದುರು, ವಿದ್ಯಾರಣ್ಯಪುರಂ, ಬೆಳಗ್ಗೆ 10ಕ್ಕೆ.

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಶ್ರವಣ ಸಮಸ್ಯೆಗಳಿಗೆ ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಆಲನಹಳ್ಳಿ, ಬೆಳಗ್ಗೆಯಿಂದ.

■ **ಭವಾನಿ ಅಸೋಸಿಯೇಟ್ಸ್ :** ಚಾರ್ಟೆರ್ಡ್ ಅಕೌಂಟೆಂಟ್ ವೇಣುಗೋಪಾಲ ಗೆಲ್ಲಾ ಅವರಿಂದ ಹ್ಯಾಂಡ್ಲಿಂಗ್ ಜಿಎಸ್‌ಟಿ ನೋಟೀಸಸ್ ಕುರಿತು ವಿಚಾರ ಸಂಕಿರಣ, ಸ್ಥಳ: ರೋಟರಿ ಚಿಲ್ಡ್ರನ್ಸ್ ಲೈಬ್ರರಿ, ಡಿಜಿ ಹಾಲ್, ಜೆಎಲ್‌ಬಿ ರಸ್ತೆ, ಬೆಳಗ್ಗೆ 10ಕ್ಕೆ.

■ **ಗೋಪಾಲಗೌಡ ಶಾಂತವೇರಿ ಮೆಮೋರಿಯಲ್ ಸ್ಕೂಲ್ ಮತ್ತು ನರ್ಸಿಂಗ್ ಕಾಲೇಜು :** ಪ್ರತಿಜ್ಞಾವಿಧಿ ಮತ್ತು ಪದವೀಧರರ ದಿನಾಚರಣೆ, ಮುಖ್ಯ ಅತಿಥಿಗಳು : ಚೆಲುವಾಂಬ ಆಸ್ಪತ್ರೆ ವೈದ್ಯಕೀಯ ಅಧೀಕ್ಷಕ ಡಾ. ರಾಜೇಂದ್ರ ಕುಮಾರ್, ಗೌರವ ಅತಿಥಿಗಳು : ಕಾಮಗೆರೆ ಹೋಲಿ ಕ್ರಾಸ್ ಕಾಲೇಜ್ ಆಫ್ ನರ್ಸಿಂಗ್ ಪ್ರಿನ್ಸಿಪಾಲ್ ಲೂಸಿ ಜಾನ್, ಅಧ್ಯಕ್ಷತೆ : ಸಿರಿ ಐವಿಎಫ್ ಮೆಡಿಕಲ್ ಡೈರೆಕ್ಟರ್ ಡಾ. ಶಿಲ್ಪಾ ಸಂತೃಪ್ತ್, ಸ್ಥಳ: ರಾಜಗೋಪಾಲ್ ರಾವ್ ರಾಶಿಂಕರ್ ಕಲ್ಯಾಣ ಮಂಟಪ, ನಜರ್‌ಬಾದ್, ಬೆಳಗ್ಗೆ 10.30ಕ್ಕೆ.

■ **ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಮಹಾರಾಣಿ ಮಹಿಳಾ ಕಲಾ ಕಾಲೇಜು :** ಟಿ. ಅನಂತ ಅಯ್ಯಂಗಾರ್ ಶ್ರೀಮತಿ ಕಮಲಮ್ಮ ತಂದೆ ತಾಯಿಗಳ ಸ್ಮರಣಾರ್ಥ ದತ್ತಿ ಉಪನ್ಯಾಸ ಕಾರ್ಯಕ್ರಮ, ಉದ್ಘಾಟನೆ : ಮಹಾರಾಣಿ ಮಹಿಳಾ ಕಲಾ ಕಾಲೇಜು ಪ್ರಿನ್ಸಿಪಾಲ್ ಡಾ. ಬಿ.ವಿ. ವಸಂತಕುಮಾರ್, ಅಧ್ಯಕ್ಷತೆ : ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಮುಖ್ಯ ಅತಿಥಿಗಳು : ಸಮಾಜ ಸೇವಕ ಡಾ. ಪುಷ್ಪಾ ಅಯ್ಯಂಗಾರ್, ಅಕ್ಕಮಹಾದೇವಿ ಸಂಶೋಧನಾ ಪೀಠದ ನಿರ್ದೇಶಕರಾದ ಪ್ರೊ. ಕವಿತಾ ರೈ ಅವರಿಂದ ಖ್ಯಾತ ಕಾದಂಬರಿಗಾರ್ತಿ ವೈದೇಹಿ ಅವರ ಬದುಕು–ಬರಹ ಕುರಿತು ಉಪನ್ಯಾಸ, ಉಪಸ್ಥಿತರು : ಮಹಾರಾಣಿ ಕಾಲೇಜು ಕನ್ನಡ ವಿಭಾಗದ ಮುಖ್ಯಸ್ಥೆ ಡಾ. ಎಂ. ದೇವಮ್ಮಣ್ಣಿ, ಸಂಯೋಜಕ ಡಾ. ಎಂ. ಜಯಶಂಕರ, ಅಧ್ಯಾಪಕ ಕಾರ್ಯದರ್ಶಿ ಎಂ. ನಂಜುಂಡಯ್ಯ, ಸ್ಥಳ: ಜಯಲಕ್ಷ್ಮಮ್ಮಣ್ಣಿ ಸಭಾಂಗಣ, ಮಹಾರಾಣಿ ಮಹಿಳಾ ಕಾಲೇಜು, ಬೆಳಗ್ಗೆ 11.30ಕ್ಕೆ.

■ **ಮೈಸೂರು ಜಿಲ್ಲಾ ಕಾಂಗ್ರೆಸ್ ಸಮಿತಿ:** ಲೋಕಸಭಾ ಚುನಾವಣೆ ಹಿನ್ನೆಲೆ ಮೈಸೂರು ನಗರ ವ್ಯಾಪ್ತಿಯ ಮೂರು ವಿಧಾನಸಭಾ ಕ್ಷೇತ್ರಗಳು ಹಾಗೂ ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಕಾರ್ಯಕರ್ತರ ಸಭೆ, ಉಪಸ್ಥಿತರು: ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವರಾದ ಡಾ.ಹೆಚ್.ಸಿ. ಮಹದೇವಪ್ಪ, ಕೆ.ವೆಂಕಟೇಶ್, ಕೆಪಿಸಿಸಿ ಕಾರ್ಯಾಧ್ಯಕ್ಷ ತನ್ವೀರ್‌ಸೇಠ್, ಸ್ಥಳ:ಕಾಂಗ್ರೆಸ್ ಭವನ, ಮಧ್ಯಾಹ್ನ 3ಕ್ಕೆ

■ **ನಗರ ಜೆಡಿಎಸ್ :** ಲೋಕಸಭಾ ಚುನಾವಣೆ ಹಿನ್ನೆಲೆ ಜಾ.ದಳ ಕಾರ್ಯಕರ್ತರ ಸಭೆ, ಉಪಸ್ಥಿತರು: ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ, ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷ ಜಿ.ಟಿ.ದೇವೇಗೌಡ, ಮಾಜಿ ಸಚಿವ ಸಾ.ರಾ.ಮಹೇಶ್, ಶಾಸಕ ಜಿ.ಡಿ.ಹರೀಶ್‌ಗೌಡ, ಸ್ಥಳ:ರಾಜೇಂದ್ರ ಕಲಾಮಂದಿರ, ಸಂಜೆ 4ಕ್ಕೆ

■ **ಮೈಸೂರು ಜಿಲ್ಲಾ ಹವ್ಯಾಸಿ ರಂಗಕರ್ಮಿಗಳ ವೇದಿಕೆ :** ವಿಶ್ವ ರಂಗಭೂಮಿ ದಿನಾಚರಣೆ, ಮುಖ್ಯ ಅತಿಥಿಗಳು: ಹಿರಿಯ ರಂಗ ನಿರ್ದೇಶಕ ಪ್ರೊ.ಎಚ್.ಎಸ್.ಉಮೇಶ್, ಎಂ.ದ್ವಾರಕಾನಾಥ್, ದೀಪಕ್ ಮೈಸೂರು, ಸನ್ಮಾನಿತರು: ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಪಿ.ಗಂಗಾಧರಸ್ವಾಮಿ, ಪ್ರೊ.ಸಿ.ನಾಗಣ್ಣ, ಬಿ.ವಿ.ಕಾರಂತ ಪುರಸ್ಕೃತ ಸಿ.ಬಸವಲಿಂಗಯ್ಯ, ರಂಗ ಸಮಾಜ ಸದಸ್ಯ ಎಚ್.ಎಸ್. ಸುರೇಶ್‌ಬಾಬು, ಕರ್ನಾಟಕ ನಾಟಕ ಅಕಾಡೆಮಿ ಸದಸ್ಯರಾದ ಎಸ್. ರಾಮು, ಶಾಹಿ ಜಾಹಿದಾ, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಟಿ. ಗುರುರಾಜ್, ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯ ದೇವಾನಂದ ವರಪ್ರಸಾದ್, ಸ್ಥಳ: ಶ್ರೀರಂಗ ವೇದಿಕೆ, ರಂಗಾಯಣ ಆವರಣ, ಸಂಜೆ 5ಕ್ಕೆ.

■ **ಜಿಪಿಐಇಆರ್ ರಂಗ ತಂಡ :** ರಾಷ್ಟ್ರೀಯ ರಂಗೋತ್ಸವ, ಉದ್ಘಾಟನೆ : ಆಳ್ವಾಸ್ ಶಿಕ್ಷಣ ಪ್ರತಿಷ್ಠಾನ, ಮೂಡುಬಿದಿರೆ ಅಧ್ಯಕ್ಷ ಡಾ. ಎಂ. ಮೋಹನ್ ಆಳ್ವಾ, ಅಧ್ಯಕ್ಷತೆ : ಹಿರಿಯ ರಂಗ ನಿರ್ದೇಶಕ ಪ್ರೊ. ಹೆಚ್.ಎಸ್. ಉಮೇಶ್, ಪ್ರಾಸ್ತಾವಿಕ ನುಡಿ : ಹಿರಿಯ ಕಲಾವಿದ ಮೈಮ್ ರಮೇಶ್, ಮುಖ್ಯ ಅತಿಥಿಗಳು : ಅಂತರರಾಷ್ಟ್ರೀಯ ಹಿರಿಯ ಭರತನಾಟ್ಯ ಕಲಾವಿದೆ ಡಾ. ವಸುಂಧರಾ ದೊರೆಸ್ವಾಮಿ, ಉಪಸ್ಥಿತರು : ರಂಗಭೂಮಿ ಕಲಾವಿದ ಅರುಣ್ ಸಾಗರ್, ಹಿರಿಯ ರಂಗಕರ್ಮಿ ರಾಜಶೇಖರ ಕದಂಬ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಎಂ.ಸಿ. ಸುದರ್ಶನ್, ಗೌರವ ಸಮರ್ಪಣೆ : ಪದ್ಮಶ್ರೀ ಪುರಸ್ಕೃತರಾದ ಸೋಮಣ್ಣ, ಸ್ಥಳ: ಕಿರು ರಂಗಮಂದಿರ, ಕಲಾಮಂದಿರ ಆವರಣ, ಸಂಜೆ 6ಕ್ಕೆ.

■ **ಆತ್ಮತೃಪ್ತಿ ಟ್ರಸ್ಟ್, ಕಡೂರು :** ನಾವು ಕಂಡ ಸಿದ್ದರಾಮಯ್ಯ ತತ್ವ–ಸತ್ವದ ಸಂಗಮ ಕನ್ನಡ, ಇಂಗ್ಲೀಷ್ ಮತ್ತು ತಮಿಳು ಭಾಷೆಗಳಲ್ಲಿ ಕೃತಿ ಬಿಡುಗಡೆ ಸಮಾರಂಭ, ಘನ ಉಪಸ್ಥಿತರು: ಮುಖ್ಯಮಂತ್ರಿ ಸಿದ್ದರಾಮಯ್ಯ, ಉದ್ಘಾಟನೆ: ಸಾಹಿತಿ ಡಾ.ಬಿ.ಟಿ.ಲಲಿತಾನಾಯಕ್, ಅಧ್ಯಕ್ಷತೆ: ಶಾಸಕ ಕೆ. ಹರೀಶ್‌ಗೌಡ, ಕೃತಿ ಬಿಡುಗಡೆ: ಸಾಹಿತಿ ನಾಡೋಜ ಬರಗೂರು ರಾಮಚಂದ್ರಪ್ಪ, ಕೃತಿ ಪರಿಚಯ: ರಾಜ್ಯೋತ್ಸವ ಪ್ರಶಸ್ತಿ ವಿಜೇತ ಪ್ರೊ.ಸಿ.ನಾಗಣ್ಣ, ಮುಖ್ಯ ಅತಿಥಿಗಳು: ಸಮಾಜ ಕಲ್ಯಾಣ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ. ಮಹದೇವಪ್ಪ, ಕೃಷಿ ಸಚಿವ ಎನ್. ಚೆಲುವರಾಯಸ್ವಾಮಿ, ರೇಷ್ಮೆ ಮತ್ತು ಪಶು ಸಂಗೋಪನೆ ಸಚಿವ ಕೆ. ವೆಂಕಟೇಶ್, ಗ್ಯಾರಂಟಿ ಸಮಿತಿ ಅಧ್ಯಕ್ಷ ಹೆಚ್.ಎಂ. ರೇವಣ್ಣ, ಸಂಸದ ಹಾಗೂ ತಮಿಳುನಾಡು ವಿಡುದಲೈ ಚಿರುತೆಗಳ ಪಾರ್ಟಿ ಅಧ್ಯಕ್ಷ ತೋಲ್ ತಿರುಮಾವಳವನ್, ಶಾಸಕ ಎಂ.ಆರ್.ಮಂಜುನಾಥ್, ಮಾಜಿ ಎಂಎಲ್‌ಸಿ ಕೆ.ಎ.ಮನೋಹರನ್, ಶಾಸಕರಾದ ತನ್ವೀರ್‌ಸೇಠ್, ಅನಿಲ್ ಚಿಕ್ಕಮಾದು, ಕೆ.ಎಸ್. ಆನಂದ್, ರವಿಶಂಕರ್, ಹೆಚ್.ಎಂ.ಗಣೇಶ್ ಪ್ರಸಾದ್, ದರ್ಶನ್ ಧ್ರುವನಾರಾಯಣ್, ಮಾಜಿ ಶಾಸಕ ಯತೀಂದ್ರ ಸಿದ್ದರಾಮಯ್ಯ, ಸ್ಥಳ: ಕರ್ನಾಟಕ ಕಲಾಮಂದಿರ, ಹುಣಸೂರು ರಸ್ತೆ, ಸಂಜೆ 6ಕ್ಕೆ.

ಸಿಂಧುವಳ್ಳಿ, ಮೈಸೂರು ತಾಲೂಕು

■ **ಮೈಸೂರು ವಿಶ್ವವಿದ್ಯಾನಿಲಯ, ಶ್ರೀ ನಟರಾಜ ಪ್ರತಿಷ್ಠಾನ, ರಾಷ್ಟ್ರೀಯ ಸೇವಾ ಯೋಜನೆ, ಶ್ರೀ ನಟರಾಜ ಮಹಿಳಾ ವಸತಿ ಪ್ರಥಮ ದರ್ಜೆ ಕಾಲೇಜು:** ವಾರ್ಷಿಕ ವಿಶೇಷ ಶಿಬಿರ–2023–24, ಅಧ್ಯಕ್ಷತೆ : ವಾತ್ಸಲ್ಯ ಶಿಕ್ಷಣ ಮಹಾವಿದ್ಯಾಲಯ ಪ್ರಾಂಶುಪಾಲ ಡಾ. ಮಹೇಶ್ ದಳಪತಿ, ಸಹಾಯಕ ಪ್ರಾಧ್ಯಾಪಕ ಡಾ. ಟಿ. ರಮೇಶ್ ಅವರಿಂದ ಗ್ರಾಮೀಣ ಅಭಿವೃದ್ಧಿಯಲ್ಲಿ ಯುವಜನರ ಪಾತ್ರ ಕುರಿತು ಉಪನ್ಯಾಸ, ಮುಖ್ಯ ಅತಿಥಿಗಳು : ಸಿಂಧುವಳ್ಳಿ ಗ್ರಾಪಂ ಸದಸ್ಯರಾದ ಎಂ. ರಾಮೇಗೌಡ, ನಂಜುಂಡ, ಬಿ.ಎಂ. ಮಹದೇವ, ಶ್ರೀಮತಿ ಛಾಯಾ, ಪಾಪಣ್ಣ, ಗ್ರಾಪಂ ಕಾರ್ಯದರ್ಶಿ ಹೆಚ್.ಎಸ್. ಮಂಜುನಾಥ್, ಸ್ಥಳ: ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಸಿಂಧುವಳ್ಳಿ, ಮೈಸೂರು ತಾಲೂಕು, ಸಂಜೆ 4ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10ಕ್ಕೆ ಬದುಕು ಬದಲಿಸಿದ ಶೋಧ–ಬಾನುಲಿ ಸರಣಿ, ಪ್ರಸ್ತುತಿ– ಎನ್.ಎನ್. ಸುರೇಂದ್ರನಾಥ್ ಸಾತ್ವಿಕ್, 6.40 ಪದ ಸಂಸ್ಕೃತಿ–ಟಿ.ವಿ.ಸತ್ಯನಾರಾಯಣ, 6.50 ರೈತರಿಗೆ ಸಲಹೆ, 7.15 ಆರೋಗ್ಯವಾಣಿ– ಪ್ರಾಯೋಜಿತ ಕಾರ್ಯಕ್ರಮ, 9.00 ವೃತ್ತಿಮಾರ್ಗದರ್ಶನ–ಜೀವ ವಿಜ್ಞಾನ ವಿಷಯದಲ್ಲಿ ಇರುವ ಅಧ್ಯಯನ ಮತ್ತು ವೃತ್ತಿಪರ ಅವಕಾಶಗಳು ಕುರಿತು ಡಾ.ಶಾಂತಲಾ ಹರಿದಾಸ್ ಅವರೊಂದಿಗೆ ಸಂದರ್ಶನ, 10.00 ಹರಿಪ್ರಸಾದ್ ಚೌರಾಶಿಯಾ–ಬಾನ್ಸುರಿ ವಾದನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ

ಮಧ್ಯಾಹ್ನ: 12.35 ದೇವರನಾಮ– ಶೇಷಗಿರಿ ದಾಸರು, 12.45 ಜನಪದ ಸಂಗೀತ, 1.20 ಭಾವಗೀತೆಗಳು –ಎ. ಅರುಣಾನಿಧಿ, 3.00 ಎನ್. ವಿಜಯ ಶಿವ–ಹಾಡುಗಾರಿಕೆ, 4.00 ಮಹಿಳಾರಂಗ 'ಸ್ತ್ರೀ ಚೇತನ'. ಭಾಗವಹಿಸುವವರು ಮನಶ್ಶಾಸ್ತ್ರಜ್ಞೆ, ಸಿನೆಮಾ ಹಾಗೂ ರಂಗಭೂಮಿ ಕಲಾವಿದೆ, ಜಾನಪದ ಗಾಯಕಿ ಸರಳಾ ನಟರಾಜ್, 4.45 ಹಿಂದಿ ಪಾಠ, ಪ್ರಸ್ತುತಿ– ಎಸ್. ಈಶ್ವರ ಭಟ್, 6.50 ಕೃಷಿರಂಗ– ಸಾವಯವ ಕೃಷಿಯಲ್ಲಿ ಜೇನು ಸಾಕಾಣಿಕೆ ಮಹತ್ವ ಕುರಿತು ಡಾ.ವಿಜಯ ಕುಮಾರ್ ಅವರೊಂದಿಗೆ ಸಂದರ್ಶನ. ಸಂದರ್ಶಕರು– ಎನ್. ಕೇಶವಮೂರ್ತಿ, 8.00 ಕ್ಷಿತಿಜ–ಸಾಹಿತ್ಯ ಸಾಧಕರೊಂದಿಗೆ ಸಂವಾದ, 9.30 ನಿಶಾಂತ್ ಖಾನ್–ಸಿತಾರ್ ವಾದನ, 10.00 ಜನಪದಗೀತೆ, 10.30 ಸವಿನೆನಪು

ನಕ್ಕರೆ ಅದೇ ಸ್ವರ್ಗ

ಮಗ : ಅಪ್ಪಾ ಬೈಕ್ ಕೊಡ್ಸಪ್ಪಾ, ಫ್ರೆಂಡ್ಸೆಲ್ಲಾ ಬೈಕ್ ತರ್‍ತಾರೆ

ಅಪ್ಪ : (ಕೋಪದಿಂದ) ದೇವರು ನಿಂಗೆ ಎರಡು ಕಾಲು ಯಾಕೆ ಕೊಟ್ಟಿರೋದು?

ಮಗ : ಒಂದು ಬ್ರೇಕ್ ಹಾಕೋಕೆ, ಮತ್ತೊಂದು ಗೇರ್ ಹಾಕೋಕೆ!

ಮೈಸೂರು ಮಿತ್ರ

ಬುಧವಾರ, 27 ಮಾರ್ಚ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ..........

ಅತ್ಯಂತ ಪ್ರಜ್ಞಾವಂತರು ಮತ್ತು ಕಡು ಮೂರ್ಖ ಮನುಷ್ಯರು ಮಾತ್ರ ಜೀವನದಲ್ಲಿ ಎಂದೂ ಬದಲಾಗುವುದಿಲ್ಲ –ಕನ್‌ಫ್ಯೂಷಿಯಸ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ತುಂಬಿದ ಕೆರೇನೂ ನಂಬಿದ ಮನೇನೂ ಬಿಡಬಾರದು

ನಿಮ್ಮ ಪತ್ರಗಳು

■ ಸಂವಿಧಾನ ವಿರೋಧಿ ಹೇಳಿಕೆ ದೇಶದ್ರೋಹ ಅಲ್ಲವೇ?

ಮಾನ್ಯರೆ,

ಸಂಸದ ಅನಂತ ಕುಮಾರ್ ಹೆಗಡೆ ಒಂದೆರಡು ಭಾರಿಯಲ್ಲ ಪದೇ ಪದೆ ಸಂವಿಧಾನ ವಿರೋಧಿ ಹೇಳಿಕೆಯನ್ನು ನೀಡುತ್ತಿದ್ದು ನಾವು ಅಧಿಕಾರಕ್ಕೆ ಬಂದಿರುವುದೇ ಸಂವಿಧಾನ ಬದಲಾಯಿಸುವುದಕ್ಕೆ ಎನ್ನುತ್ತಿದ್ದಾರೆ. ಇನ್ನೊಮ್ಮೆ ಸಂವಿಧಾನ ತಿದ್ದುಪಡಿ ಮಾಡಬೇಕು ಎನ್ನುತ್ತಾರೆ. ಸಂವಿಧಾನ ಈ ದೇಶದ ಪರಮೋಚ್ಛ ಗ್ರಂಥ ಎನ್ನುವ ಪ್ರಧಾನ ಮಂತ್ರಿಗಳು ಇಂತಹ ಬಾಲಿಶ ಹೇಳಿಕೆ ನೀಡುವ ಸಂಸದನ ಮೇಲೆ ಏಕೆ ಕ್ರಮ ಕೈಗೊಳ್ಳಲು ಆಗುತ್ತಿಲ್ಲ. ಪಾಕಿಸ್ತಾನ್ ಜಿಂದಾಬಾದ್ ಎಂದವನ ಮೇಲೆ ಮುಗಿಬಿದ್ದ ನಮ್ಮ ದೇಶಾಭಿಮಾನಿ ರಾಜ್ಯ ಬಿಜೆಪಿ ನಾಯಕರು ಸಂವಿಧಾನ ವಿರೋಧಿಯನ್ನು ಏಕೆ ಪ್ರಶ್ನೆ ಮಾಡುತ್ತಿಲ್ಲ? ದೇಶಾಭಿಮಾನ ಎಂದರೆ ಒಬ್ಬೊಬ್ಬರ ವಿಚಾರದಲ್ಲಿ ಒಂದೊಂದು ರೀತಿ ಇದೆಯೋ. ಅಂಬೇಡ್ಕರ್ ಮೇಲೆ, ಈ ದೇಶದ ಸಂವಿಧಾನದ ಮೇಲೆ ಬಿಜೆಪಿಗೆ ಗೌರವ ಇದ್ದರೆ ಅನಂತಕುಮಾರ್ ಹೆಗಡೆ ಮೇಲೆ ಕ್ರಮ ಕೈಗೊಳ್ಳಲಿ ಇಲ್ಲ ನಾವೆ ಹೇಳಿಸಿದ್ದು ನಾವು ಅಂಬೇಡ್ಕರ್ ವಿರೋಧಿಗಳು ಎಂದು ಒಪ್ಪಿಕೊಳ್ಳಲಿ. ರಾಜ್ಯ ಎಸ್‌ಸಿ, ಎಸ್‌ಟಿ ಮೋರ್ಚಾಗಳು ಸಂವಿಧಾನದ ಪರವಾಗಿ ಇದ್ದರೆ ರಾಜೀನಾಮೆ ಕೊಟ್ಟು ಹೊರ ಬರಲಿ, ಇಲ್ಲ ರಾಜೀನಾಮೆಗೆ ಒತ್ತಾಯಿಸಲಿ. ಸಂವಿಧಾನ ಅಪಾಯದಲ್ಲಿಲ್ಲ ಅಪಾಯದಲ್ಲಿರುವುದು ಕಾಂಗ್ರೆಸ್ ಎನ್ನುವ ಹಿರಿಯ ರಾಜಕಾರಣಿ ನಿಷ್ಠುರವಾದಿ ಸಂಸದ ವಿ.ಶ್ರೀನಿವಾಸಪ್ರಸಾದ್ ಈ ಬಗ್ಗೆ ಮಾತನಾಡಲಿ. ಪದೇ ಪದೆ ಇದನ್ನೇ ಹೇಳುತ್ತಿರುವುದನ್ನು ನೋಡಿದರೆ ಇದು ಬಿಜೆಪಿಯ ಕೃಪಾಪೋಷಿತ ಹೇಳಿಕೆ ಎನ್ನುವುದರಲ್ಲಿ ಸಂಶಯವಿಲ್ಲ.

–ದಡದಹಳ್ಳಿ ರಮೇಶ್, ಚಂದಕವಾಡಿ ಹೋಬಳಿ, ಚಾಮರಾಜನಗರ ಜಿಲ್ಲೆ

■ ಕಸದಿಂದ ಪ್ರಾಣಿಗಳ ಸಾವು

ಮಾನ್ಯರೆ,

ರಾಜ್ಯವನ್ನು ಹಲವು ರೀತಿ ಕಸಮುಕ್ತ ಪ್ರದೇಶ ಮಾಡಲು ಪ್ರಯತ್ನ ಪಟ್ಟರು ಹಲವು ಪ್ರದೇಶಗಳಲ್ಲಿ ಜನರು ಹಸಿ ಕಸ, ಒಣಕಸ, ಪ್ಲಾಸ್ಟಿಕ್ ಮತ್ತು ಗಾಜು ಮುಂತಾದ ರಾಸಾಯನಿಕ ಪದಾರ್ಥಗಳನ್ನು ರಸ್ತೆ ಬದಿಯಲ್ಲಿ ಬಿಸಾಡಿ ಹೋಗುತ್ತಿರುವುದು ಕಂಡು ಬರುತ್ತಿದೆ. ಕಂಡ ಕಂಡಲ್ಲಿ ಕಸ ಬಿಸಾಡುವುದರಿಂದ ಪಶು, ನಾಯಿ ಮುಂತಾದ ಪ್ರಾಣಿಗಳು ಅದನ್ನು ತಿಂದು ಜೀವ ಕಳೆದುಕೊಳ್ಳುವ ಸ್ಥಿತಿ ಬಂದಿದೆ. ಸುತ್ತಮುತ್ತಲು ವಾಸಿಸುವ ಜನರಿಗೆ ಸಾಂಕ್ರಾಮಿಕ ರೋಗಗಳು ಹರಡುವ ಸಾಧ್ಯತೆ ಕೂಡ ಇದೆ. ಹಾಗೂ ಪ್ರವಾಸಿ ತಾಣಗಳಲ್ಲಿ ಪ್ಲಾಸ್ಟಿಕ್ ತ್ಯಾಜ್ಯವನ್ನು ನದಿ ಮತ್ತು ಸಮುದ್ರ ತೀರಗಳಲ್ಲಿ ಹಾಕುವುದರಿಂದ ನೀರಿನಲ್ಲಿ ಸೇರಿ ಆಕ್ಸಿಜನ್ ಪ್ರಮಾಣ ಕಡಿಮೆ ಆಗುತ್ತದೆ. ಮತ್ತು ಸಮುದ್ರವು ಮಾಲಿನ್ಯಗೊಳ್ಳುತ್ತದೆ. ಇದರಿಂದ ಜಲಚರ ಪ್ರಾಣಿಗಳಿಗೆ ಸಮುದ್ರದಲ್ಲಿ ವಾಸಿಸಲು ಸಾಧ್ಯವಾಗುವುದಿಲ್ಲ. ಪರಿಸರ ಮಾಲಿನ್ಯಗೊಳ್ಳುವುದರೊಂದಿಗೆ ಹವಾಮಾನದಲ್ಲಿ ಬಹಳ ಕೆಟ್ಟ ರೀತಿಯ ಪರಿಣಾಮ ಬೀರುತ್ತದೆ.

ಸರ್ಕಾರದಿಂದ ಕಸ ವಿಲೇವಾರಿ ಮಾಡಲು ಎಲ್ಲಾ ರೀತಿಯ ಸೌಲಭ್ಯಗಳು ಸಾರ್ವಜನಿಕರಿಗೆ ಇದ್ದರೂ ಸಹ ಈ ರೀತಿ ಕಸ ಬಿಸಾಡುವುದು ತಪ್ಪು. ಈಗಾಗಲೇ ಪ್ರಾಣಿ ಸಂತತಿ ಕುಸಿತಗೊಂಡಿದೆ. ದಯವಿಟ್ಟು ಸಾರ್ವಜನಿಕರು ಕಸವನ್ನು ಸರಿಯಾದ ರೀತಿ ವಿಂಗಡಿಸಿ ವಿಲೇವಾರಿ ಮಾಡುವುದು ಉತ್ತಮ.

–ಎನ್.ಸುಶ್ಮಿತಾ, ಮಹಾರಾಣಿ ಮಹಿಳಾ ಕಾಲೇಜು, ಮೈಸೂರು.

■ ಐಪಿಎಲ್ ಪಂದ್ಯಗಳು ವಿದ್ಯಾರ್ಥಿಗಳಿಗೆ ಮಾರಕ

ಮಾನ್ಯರೆ,

ಐಪಿಎಲ್ (ಇಂಡಿಯನ್ ಪ್ರೀಮಿಯರ್ ಲೀಗ್) 2008 ರಲ್ಲಿ ಪ್ರಾರಂಭವಾಯಿತು. ವರ್ಷದಿಂದ ವರ್ಷಕ್ಕೆ ಐಪಿಎಲ್‌ನ ಜನಪ್ರಿಯತೆ ಹೆಚ್ಚುತ್ತಿದೆ. 2023 ರಲ್ಲಿ ಐಪಿಎಲ್‌ನ ಮೌಲ್ಯ 92,500 ಕೋಟಿ ರೂಪಾಯಿಗಳು. ಪ್ರಸ್ತುತ ಈ ವರ್ಷ ಇದರ ಮೌಲ್ಯ ಇನ್ನೂ ಹೆಚ್ಚಾದರೂ ಅಚ್ಚರಿಯಿಲ್ಲ. ಐಪಿಎಲ್ ಲಕ್ಷಾಂತರ ಜನರಿಗೆ ಉದ್ಯೋಗ ನೀಡಿದೆ ಹಾಗೂ ಅಪಾರ ಪ್ರಮಾಣದ ತೆರಿಗೆಯು ಸಹ ಭಾರತಕ್ಕೆ ನೀಡುತ್ತದೆ.

ಆದರೆ ಐಪಿಎಲ್ ಕೇವಲ ಬೆರಳೆಣಿಕೆಯಷ್ಟು ಜನರಿಗೆ ಮಾತ್ರ ಭವಿಷ್ಯಕ್ಕೆ ದಾರಿಯಾಗಿದೆ. ಐಪಿಎಲ್‌ನಿಂದಾಗಿ ಲಕ್ಷಾಂತರ ಜನರು ಬೆಟ್ಟಿಂಗ್ ಮುಂತಾದ ಕೆಟ್ಟ ಚಟಗಳಿಗೆ ಬಲಿಯಾಗುತ್ತಿದ್ದಾರೆ. ಒಂದು ಮಾತಿನಲ್ಲಿ ಕೇಳುವುದಾದರೆ ಯುವಜನತೆಗೆ ಐಪಿಎಲ್‌ನ ಕೊಡುಗೆ ಏನು.

ಐಪಿಎಲ್ ಪಂದ್ಯಗಳು ಪ್ರತಿ ವರ್ಷ ಸರಿಯಾಗಿ ಮಾರ್ಚ್‌ನಿಂದ ಏಪ್ರಿಲ್ ತಿಂಗಳಲ್ಲಿ ನಡೆಯುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುವುದು ಖಚಿತ. ಕಾರಣ ಮಾರ್ಚ್ ಮತ್ತು ಏಪ್ರಿಲ್‌ನಲ್ಲಿ ಪರೀಕ್ಷೆಗಳು ಬರುವ ಕಾರಣ ವಿದ್ಯಾರ್ಥಿಗಳು ಓದಿನ ಕಡೆಗೆ ಗಮನ ಹರಿಸುವ ಬದಲು ಐಪಿಎಲ್ ಪಂದ್ಯಗಳ ವೀಕ್ಷಣೆಯಲ್ಲಿ ಕಾಲ ಕಳೆಯುತ್ತಾರೆ. ಇದರಿಂದಾಗಿ ಅವರ ಭವಿಷ್ಯಕ್ಕೆ ದೊಡ್ಡ ಪೆಟ್ಟು ನೀಡಿದಂತಾಗುತ್ತದೆ.

ಭಾರತ ಸರ್ಕಾರ ಐಪಿಎಲ್ ಟೂರ್ನಮೆಂಟ್ ಪ್ರಾರಂಭವಾಗುವ ಸಮಯವನ್ನು ಬೇಸಿಗೆ ರಜೆಯಲ್ಲಿ ಇಲ್ಲವಾದರೆ ನವೆಂಬರ್–ಡಿಸೆಂಬರ್ ತಿಂಗಳಲ್ಲಿ ನಡೆಯುವಂತೆ ಪಂದ್ಯಗಳ ವೇಳಾಪಟ್ಟಿಯನ್ನು ಸಿದ್ದಪಡಿಸಿದರೆ, ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ಕ್ರಿಕೆಟ್ ಪಂದ್ಯಗಳು ನಡೆದರೆ ವಿದ್ಯಾರ್ಥಿಗಳ ಭವಿಷ್ಯಕ್ಕೆ ಅನುಕೂಲವಾಗುತ್ತದೆ. ಕೇಂದ್ರ ಸರ್ಕಾರ ಐಪಿಎಲ್ ಟೂರ್ನಮೆಂಟ್‌ನ ವೇಳಾಪಟ್ಟಿಯನ್ನು ಬದಲಾಯಿಸಬೇಕೆಂದು ದೇಶದ ವಿದ್ಯಾರ್ಥಿಗಳ ಪರವಾಗಿ ಅಗ್ರಹಿಸೋಣ.

–ರಾಸುಮ ಭಟ್, ಸಂಶೋಧನಾ ವಿದ್ಯಾರ್ಥಿ, ಚಿಕ್ಕಮಗಳೂರು.

■ ಬದುಕು–ಬಿಂದು

ಮಾನ್ಯರೆ,

ರೈತ (ಟ) ರು : ತಮ್ಮ ಹಕ್ಕೊತ್ತಾಯಗಳ ಈಡೇರಿಕೆಗಾಗಿ ಹೋರಾಡುತ್ತಿರುವ 'ರೈತ'ರೊಡನೆ 'ರೈಟ'ರು (Writer) ಗಳು ಕೂಡ ಕೈ ಜೋಡಿಸಬೇಕಲ್ಲವೆ?

ಇತ್ತಲೆ : ಎರಡು ತಲೆ ಹಾವು ಇತ್ಯಾದಿಗಳ ಸುದ್ದಿಗಳು ಪತ್ರಿಕೆಗಳಲ್ಲಿ. ಅಂಥ ಮಾನವ ಮಂದಿಯೂ ಇದ್ದಾರಲ್ಲ! (ಎರಡು ನಾಲಗೆಯಂತೂ ಖಚಿತ).

ಉತ್ತರ : "ಹೇಗಿದ್ದೀರಿ?", "ಚೆನ್ನಾಗಿದ್ದೀರಾ?" ಮುಂತಾದ ಕುಶಲ ಪ್ರಶ್ನೆಗಳಿಗೆ ನನ್ನ ಏಕೈಕ ಉತ್ತರ : "ವಯಸ್ಸಾಗುತ್ತಿದೆ!"

ಮೂಡು ಮುಳುಗು : ಲೆಕ್ಕವಿಲ್ಲದಷ್ಟು ಸಲ ಮೂಡುತ್ತಾನೆ, ಮುಳುಗುತ್ತಾನೆ ನೇಸರ? (ಅವನಿಗೆಲ್ಲಿಯ ಬೇಸರ?) ಬಾಡುತ್ತದೆ ಜೀವನ ವನ!

ಗಸ್ತು: ಎಷ್ಟು ವಿಫುಲ ವಿಸ್ತಾರವಾಗಿದೆ ಜಗತ್ತು ! ಇಲ್ಲಿ ತನಗೊಬ್ಬನಿಗೇ ಸ್ಥಾನ ಎಂಬಂತೆ ಮನುಜನ ಗಸ್ತು!

ಮುಖಿ : ಬದಲಾದ ಈ ಕಾಲಘಟ್ಟದಲ್ಲಿ ಹೆಣ್ಣನ್ನು 'ಶಶಿಮುಖಿ' ಎಂದರೆ ಶಿಶುಗಳೂ ನಕ್ಕಾವು; ಪ್ರಾಜ್ಞರೊಬ್ಬರ ಪ್ರಕಾರ, ಅವರು 'ಭೂ ಮುಖಿ!'

ಮಿಥ್ಯ : ಕುವೆಂಪು ಉವಾಚ : "ಮೃತ್ಯು ಜಗತ್ತಿನ ಅತ್ಯುನ್ನತ ಮಿಥ್ಯ!"

–ಸಿಪಿಕೆ,ಮೈಸೂರು.




ಕಾರ್ಕಳ ಆನಂದ ಭಟ್
ಮೊ : 7676554198
ಫ್ಲಾಟ್ ನಂ.204, ಮೂರನೇ ಮಹಡಿ, ಏಕದಂತ ಅಪಾರ್ಟ್‌ಮೆಂಟ್ಸ್, Opp. H.P. ಗ್ಯಾಸ್ ಪೆರ್ವಾಜೆ ರಸ್ತೆ, ಕಾರ್ಕಳ, – 574 104 ಉಡುಪಿ ಜಿಲ್ಲೆ

ದಿಕ್ಕುದೆಸೆ

ಲೋಕಸಭಾ ಚುನಾವಣಾ ಸದ್ದು; ಚುನಾವಣಾ ಬಾಂಡ್ ರದ್ದು!

ಅನಾಮಧೇಯ ಚುನಾವಣಾ ಬಾಂಡ್‌ಗಳಿಂದ (Electoral Bonds) ಮಾಹಿತಿ ಹಕ್ಕು ಮತ್ತು ಅಭಿವ್ಯಕ್ತಿ ಸ್ವಾತಂತ್ರ್ಯದ ಉಲ್ಲಂಘನೆಯಾಗುತ್ತಿರುವುದರಿಂದ ಈ ಯೋಜನೆ ಅಸಂವಿಧಾನಿಕವಾಗಿದೆ. ಆದ್ದರಿಂದ ಇದನ್ನು ರದ್ದುಪಡಿಸುತ್ತಿರುವುದಾಗಿ 15.02.2024ರಂದು ಸುಪ್ರೀಂಕೋರ್ಟ್ ತೀರ್ಪು ನೀಡಿದೆ. ಈ ಬಾಂಡ್‌ಗಳ ಮೂಲಕ ರಾಜಕೀಯ ವ್ಯಕ್ತಿ/ಪಕ್ಷಗಳಿಗೆ ನೀಡುವ ದೇಣಿಗೆಯು ಸಂವಿಧಾನದ ಪರಿಚ್ಛೇದ(19)(1)ಎ) ಅಡಿಯಲ್ಲಿ ಮತದಾರರ ಕೆಲವು ಹಕ್ಕುಗಳನ್ನು ಉಲ್ಲಂಘಿಸುತ್ತದೆಂದು ನ್ಯಾಯಾಲಯ ತಿಳಿಸಿತು. ರಾಜಕೀಯ ಪಕ್ಷಗಳು ಚುನಾವಣೆಗಳಿಗಾಗಿ ನಿಧಿ ಸಂಗ್ರಹಿಸುವಲ್ಲಿ ಒಂದಿಷ್ಟು ಪಾರದರ್ಶಕತೆಯನ್ನು ತರುವ ಕೇಂದ್ರ ಸರಕಾರದ ಯತ್ನಕ್ಕೆ ಈ ತೀರ್ಪಿನಿಂದ ಹಿನ್ನಡೆಯಾಗಿದೆ ಎನ್ನಬಹುದು.

ಭಾರತೀಯ ಸ್ಟೇಟ್ ಬ್ಯಾಂಕ್ (SBI) ಚುನಾವಣಾ ಬಾಂಡ್‌ಗಳನ್ನು ನೀಡುವುದನ್ನು ನಿಲ್ಲಿಸಬೇಕು ಹಾಗೂ 12.04.2019ರಿಂದ ಇಲ್ಲಿಯವರೆಗೆ ಬಾಂಡ್‌ಗಳಿಂದ ದೇಣಿಗೆ ಪಡೆದ ರಾಜಕೀಯ ಪಕ್ಷಗಳ ವಿವರಗಳನ್ನು ಚುನಾವಣಾ ಸಮಿತಿಗೆ ಸಲ್ಲಿಸುವಂತೆ ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಡಿ.ವೈ.ಚಂದ್ರಚೂಡ ನೇತೃತ್ವದಲ್ಲಿ ನ್ಯಾಯಮೂರ್ತಿಗಳಾದ ಸಂಜೀವ ಖನ್ನಾ, ಬಿ.ಆರ್. ಗವಾಯಿ, ಜೆ.ಬಿ.ಪರ್ದಿವಾಲಾ, ಮನೋಜ್ ಮಿಶ್ರಾರ ಒಳಗೊಂಡ ಸಂವಿಧಾನ ಪೀಠವು ಎರಡು ಪ್ರತ್ಯೇಕ ಸರ್ವಾನುಮತದ ತೀರ್ಪು ನೀಡಿದೆ. ಬಾಂಡ್‌ಗಳನ್ನು ರದ್ದುಪಡಿಸಿರುವ ಸುಪ್ರೀಂಕೋರ್ಟ್ ಚುನಾವಣಾ ನಿಧಿ ಸಂಗ್ರಹಿಸಲು ಪರ್ಯಾಯ ಪಾರದರ್ಶಿ ವಿಧಾನಗಳನ್ನು ಸೂಚಿಸಿಲ್ಲ. ಹೀಗಾಗಿ ಕಾರ್ಪೊರೇಟ್ ವಲಯದಿಂದ ಕಪ್ಪು ಹಣವುಳ್ಳವರಿಂದ ರಾಜಕೀಯ ಪಕ್ಷಗಳು ಹಿಂದಿನಂತೆ ಯಥಾಪ್ರಕಾರ ಬೇನಾಮಿಯಾಗಿ ನಿಧಿಯನ್ನು ಸಂಗ್ರಹಿಸುವ ಅನಿವಾರ್ಯತೆ ಸೃಷ್ಟಿಸಿದೆ.



> ❝ ಭಾರತದಲ್ಲಿ ರಾಜಕೀಯ ಪಕ್ಷಗಳಿಗೆ ಹಣಕಾಸು ನೆರವಿನ ಇತಿಹಾಸವು ವಿವಾದಾತ್ಮಕವಾಗಿದೆ. ಈ ವಿಚಾರದಲ್ಲಿ ಕಳೆದ ಎಪ್ಪತ್ತೈದು ವರ್ಷಗಳಲ್ಲಿ ಭಾರತದಲ್ಲಾಗಿರುವ ಚುನಾವಣೆಗಳಲ್ಲಿನ ಬೆಳವಣಿಗೆಗಳನ್ನು ಅವಲೋಕಿಸಬೇಕಾಗಿದೆ. ಚುನಾವಣೆಗಳಲ್ಲಿ ಸ್ಪರ್ಧಿಸಲು ಎಲ್ಲಾ ರಾಜಕೀಯ ಪಕ್ಷಗಳಿಗೆ ಭಾರೀ ಪ್ರಮಾಣದಲ್ಲಿ ಸಂಪನ್ಮೂಲಗಳ ಅವಶ್ಯಕತೆ ಇರುತ್ತದೆ. ಕಾರ್ಯಕರ್ತರು, ಜನಪ್ರತಿನಿಧಿಗಳು ನೀಡುವ ಶುಲ್ಕ, ವಾರ್ಷಿಕ ಚಂದಾ ದೇಣಿಗೆಗಳಿಂದ ಚುನಾವಣಾ ವೆಚ್ಚದ ಹೊರೆಯನ್ನು ನಿರ್ವಹಿಸಲಾಗದಂತಹ ಪರಿಸ್ಥಿತಿ ರಾಜಕೀಯ ಪಕ್ಷಗಳಿಗಿದೆ.

ಪಕ್ಷಗಳಿಗೆ ನಿಧಿ–ಹಳೆ ಇತಿಹಾಸ: ಭಾರತದಲ್ಲಿ ರಾಜಕೀಯ ಪಕ್ಷಗಳಿಗೆ ಹಣಕಾಸು ನೆರವಿನ ಇತಿಹಾಸವು ವಿವಾದಾತ್ಮಕವಾಗಿದೆ. ಈ ವಿಚಾರದಲ್ಲಿ ಕಳೆದ ಎಪ್ಪತ್ತೈದು ವರ್ಷಗಳಲ್ಲಿ ಭಾರತದಲ್ಲಾಗಿರುವ ಚುನಾವಣೆಗಳಲ್ಲಿನ ಬೆಳವಣಿಗೆಗಳನ್ನು ಅವಲೋಕಿಸಬೇಕಾಗಿದೆ. ಚುನಾವಣೆಗಳಲ್ಲಿ ಸ್ಪರ್ಧಿಸಲು ಎಲ್ಲಾ ರಾಜಕೀಯ ಪಕ್ಷಗಳಿಗೆ ಭಾರೀ ಪ್ರಮಾಣದಲ್ಲಿ ಸಂಪನ್ಮೂಲಗಳ ಅವಶ್ಯಕತೆ ಇರುತ್ತದೆ. ಕಾರ್ಯಕರ್ತರು, ಜನಪ್ರತಿನಿಧಿಗಳು ನೀಡುವ ಶುಲ್ಕ, ವಾರ್ಷಿಕ ಚಂದಾ ದೇಣಿಗೆಗಳಿಂದ ಚುನಾವಣಾ ವೆಚ್ಚದ ಹೊರೆಯನ್ನು ನಿರ್ವಹಿಸಲಾಗದಂತಹ ಪರಿಸ್ಥಿತಿ ರಾಜಕೀಯ ಪಕ್ಷಗಳಿಗಿದೆ. ಈ ಹಿನ್ನೆಲೆಯಲ್ಲಿ 1959ರಲ್ಲಿ ಉದ್ಯಮಿಗಳು, ಕಾರ್ಪೊರೇಟ್ ವಲಯದಿಂದ ರಾಜಕೀಯ ಪಕ್ಷಗಳಿಗೆ ದೇಣಿಗೆ ನೀಡುವ ವಿಚಾರವಾಗಿ ಸಂಸತ್ತಿನಲ್ಲಿ ಚರ್ಚೆಗಳಾದವು. ಸಂಸತ್ತು ಚುನಾವಣಾ ವೆಚ್ಚಗಳ ಆಧಾರದಲ್ಲಿ ರಾಜಕೀಯ ಪಕ್ಷಗಳು ಕಂಪೆನಿಗಳಿಂದ 25,000 ರೂ.ವರೆಗೆ ದೇಣಿಗೆ ಪಡೆಯಲು ಅವಕಾಶ ಮಾಡಿಕೊಡಲು ಕಂಪೆನಿ ಕಾಯ್ದೆಗೆ ತಿದ್ದುಪಡಿ ಮಾಡಿತು. ಆದರೆ ಈ ತಿದ್ದುಪಡಿಯನ್ನು ಪರಿಶೀಲಿಸಲು ಸಂಸತ್ತು ರೂಪಿಸಿದ ಪರಿಶೀಲನಾ ಸಮಿತಿಯು ಎರಡು ಕಾರಣಗಳನ್ನು ನೀಡಿ ಕಾರ್ಪೊರೇಟ್ ದೇಣಿಗೆಯನ್ನು ವಿರೋಧಿಸಿತು. ಒಂದನೆಯದಾಗಿ **ಸರಕಾರದಲ್ಲಿರುವವರು, ಉದ್ಯಮಿಗಳು, ಕಾರ್ಪೊರೇಟ್ ವಲಯದವರಿಗೆ ದೇಣಿಗೆ ನೀಡಲು ಬಲಾತ್ಕರಿಸಬಹುದು**. ಎರಡನೆಯದಾಗಿ **ಉದ್ಯಮಿಗಳು ದೇಣಿಗೆ ನೀಡಿ ಸರಕಾರದಲ್ಲಿರುವವರಿಂದ ತಮಗೆ ಬೇಕಾದ ಅನುಕೂಲಗಳನ್ನು ಪಡೆಯಬಹುದು**. ಆದರೆ ಸರಕಾರವೂ ಈ ಕಾಯ್ದೆಯನ್ನು 1960ರಲ್ಲಿ ಅನುಮೋದಿಸಿತು. 1969ರಲ್ಲಿ ಧೋರಣೆ ಬದಲಾಯಿಸಿದ ಕೇಂದ್ರವು ಕಾರ್ಪೊರೇಟ್‌ಗಳಿಂದ ದೇಣಿಗೆ ಪಡೆಯುವುದನ್ನು ಮತ್ತೆ ನಿಷೇಧಿಸಿತು. ಈ ರೀತಿಯ ದೇಣಿಗೆಗಳು ರಾಜಕಾರಣವನ್ನು ಭ್ರಷ್ಟಗೊಳಿಸುವ ಪ್ರವೃತ್ತಿಗೆ ಅವಕಾಶ ನೀಡುತ್ತದೆ ಮತ್ತು ದೇಶದಲ್ಲಿ ಆರೋಗ್ಯಕರ ಪ್ರಜಾತಂತ್ರದ ಬೆಳವಣಿಗೆಯ ಮೇಲೆ ಪ್ರತಿಕೂಲ ಪರಿಣಾಮ ಬೀರುತ್ತದೆ ಎಂದು ಸ್ಪಷ್ಟೀಕರಣ ನೀಡಿತು. ಆದರೆ ದೇಣಿಗೆ ನಿಷೇಧಿಸಿದರೂ ವಾಮಮಾರ್ಗದಿಂದ ರಾಜಕೀಯ ಪಕ್ಷಗಳು ದೇಣಿಗೆ ಪಡೆಯುವುದು ಇದುವರೆಗೆ ನಿಂತಿಲ್ಲ. ನಂತರದ ದಿನಗಳಲ್ಲಿ 'ಸೂಟ್‌ಕೇಸ್' ರಾಜಕೀಯ ಆರಂಭಗೊಂಡಿತು. ಮತ್ತೆ 1985ರಲ್ಲಿ ಕಾರ್ಪೊರೇಟ್ ದೇಣಿಗೆಗೆ ಮತ್ತೆ ಅವಕಾಶ ನೀಡಲಾಯಿತು.

ಅಭ್ಯರ್ಥಿಗಳ ಚುನಾವಣಾ ವೆಚ್ಚದ ಮೇಲೆ ಮಿತಿ: ಭಾರತದಲ್ಲಿ ಚುನಾವಣೆಯಲ್ಲಿ ಸ್ಪರ್ಧಿಸುವ ಅಭ್ಯರ್ಥಿಗಳ ಚುನಾವಣಾ ವೆಚ್ಚದ ಮೇಲೆ ಮಿತಿ ಹೇರಲಾಗಿದೆ. 1951ರಲ್ಲಿ ಒಂದು ಕ್ಷೇತ್ರದಲ್ಲಿ ಅಭ್ಯರ್ಥಿಗೆ ಗರಿಷ್ಠ ಇಪ್ಪತ್ತೈದು ಸಾವಿರ ರೂ.ವರೆಗೆ ಖರ್ಚು ಮಾಡುವ ಅವಕಾಶವಿತ್ತು. ಈ ಬಾರಿಯ ಚುನಾವಣೆಯಲ್ಲಿ ದೊಡ್ಡ ಕ್ಷೇತ್ರಗಳಿಗೆ 95 ಲಕ್ಷ ರೂ. ಮತ್ತು ಸಣ್ಣ ಕ್ಷೇತ್ರಗಳಿಗೆ 75 ಲಕ್ಷ ರೂ. ಮಿತಿ ನಿಗದಿಪಡಿಸಲಾಗಿದೆ. ಆದರೆ ವಾಸ್ತವಿಕವಾಗಿ ಅಭ್ಯರ್ಥಿಗಳು ನಿಗದಿಗಿಂತ ಅನೇಕ ಪಟ್ಟು ಹೆಚ್ಚು ಖರ್ಚು ಮಾಡಲಿದ್ದಾರೆ ಎಂಬುದು ಸಾರ್ವಜನಿಕ ರಹಸ್ಯವಾಗಿದೆ. ಭಾರತದಲ್ಲಿ ಚುನಾವಣಾ ವೆಚ್ಚಕ್ಕೆ ಸಂಬಂಧಿಸಿದಂತೆ ಮಾಜಿ ಪ್ರಧಾನಿ ದಿ. **ಅಟಲ್ ಬಿಹಾರಿ ವಾಜಪೇಯಿಯವರ** ಒಂದು ಸ್ವಾರಸ್ಯಕರ ಹೇಳಿಕೆ **'ಭಾರತೀಯ ರಾಜಕಾರಣಿಗಳು ಸುಳ್ಳು ಚುನಾವಣಾ ವೆಚ್ಚದ ಲೆಕ್ಕವನ್ನು ನೀಡುವ ಮೂಲಕ ತಮ್ಮ ಸಂಸದೀಯ ಜೀವನವನ್ನು ಸುಳ್ಳಿನೊಂದಿಗೆ (LIE) ಆರಂಭಿಸುತ್ತಾರೆ':** ವಾಜಪೇಯಿಯವರ ಈ ಹೇಳಿಕೆಯು ಭಾರತದ ಚುನಾವಣಾ ವ್ಯವಸ್ಥೆಯಲ್ಲಿರುವ ಕಪ್ಪು ಹಣದ ಪ್ರಭಾವವನ್ನು ಸೂಚಿಸುತ್ತದೆ.

ಭಾರತೀಯ ಚುನಾವಣಾ ವ್ಯವಸ್ಥೆಯಲ್ಲಿರುವ ಕಪ್ಪು ಹಣದ ಪ್ರಭಾವದ ಬಗ್ಗೆ ಅನೇಕರು ಮೊಸಳೆ ಕಣ್ಣೀರು ಸುರಿಸುತ್ತಾರೆ. ಪ್ರಜಾಸತ್ತೆಯ ಜೀವಾಳವಾದ ಚುನಾವಣೆಗಳ ಮೇಲೆ ಗಾಢವಾದ ಹಣದ ಪ್ರಭಾವವಿದೆ. ಈ ಕಾರಣದಿಂದ ಜಗತ್ತಿನಲ್ಲಿ ಪ್ರಜಾಸತ್ತಾತ್ಮಕ ಮಾದರಿಯ ರಾಜಕೀಯ ವ್ಯವಸ್ಥೆ ಅತ್ಯಂತ ದುಬಾರಿಯಾಗಿದೆ. ಭಾರತೀಯ ರಾಜಕಾರಣಿಗಳು ಸಾಮಾನ್ಯವಾಗಿ ಚುನಾವಣಾ ಉದ್ದೇಶಕ್ಕಾಗಿ ಉದ್ಯಮಿಗಳಿಂದ ಹಣ ಪಡೆಯುತ್ತಿರುವುದು ಹೊಸ ವಿಚಾರವೇನಲ್ಲ. ಆದರೆ ಈ ರೀತಿ ಪಡೆದ ಹಣದಲ್ಲಿ ಅತ್ಯಲ್ಪ ಪ್ರಮಾಣವನ್ನು ಪಕ್ಷದ ಚುನಾವಣಾ ನಿಧಿಗೆ ನೀಡಿ ಉಳಿದುದನ್ನು ತನ್ನಲ್ಲೇ ಉಳಿಸಿಕೊಳ್ಳುತ್ತಾರೆ. ಇದನ್ನು ರಾಜಕಾರಣಿಗಳು ಕಪ್ಪು ಹಣವನ್ನಾಗಿ ತಮ್ಮಲ್ಲೇ ಉಳಿಸಿಕೊಳ್ಳುತ್ತಾರೆ. ಇದರಿಂದ ತಿಳಿದು ಬರುವ ಸಂಗತಿಯೆಂದರೆ ರಾಜಕಾರಣಿಗಳನ್ನು ಉದ್ಯಮಿಗಳು ದೇಣಿಗೆ ನೀಡಿ ಖರೀದಿಸಲಾಗುವುದಿಲ್ಲ. ಬದಲಾಗಿ ರಾಜಕಾರಣಿಗಳೇ ತಮಗಿರುವ ರಾಜಕೀಯ ಬಲದಿಂದ ಉದ್ಯಮಿಗಳನ್ನು ನಿಯಂತ್ರಿಸುತ್ತಾರೆ. ಭಾರತೀಯ ರಾಜಕೀಯ ವ್ಯವಸ್ಥೆಯಲ್ಲಿಂದು ಸಿದ್ಧಾಂತಕ್ಕಿಂತ ದ್ವೇಷ, ಸೇಡಿನ ವಾತಾವರಣವಿದೆ. ಈ ವಿಷಯದಲ್ಲಿ ಇತ್ತೀಚೆಗೆ ನಿಧನರಾದ ಸಹಾರಾ ಗ್ರೂಪ್‌ನ ಸುಬ್ರತೋರಾಯ್‌ರನ್ನು ಹೆಸರಿಸಬಹುದು. ಇವರ ಸಹಾರಾ ಸಾಮ್ರಾಜ್ಯದಲ್ಲಿ ಲಕ್ಷಾಂತರ ಮಂದಿ ಉದ್ಯೋಗ ಪಡೆದಿದ್ದರು. ಸಹಸ್ರಾರು ಕೋಟಿ ರೂ.ಗಳ ವ್ಯವಹಾರವಿತ್ತು. ರಾಜಕೀಯ ಮಹತ್ವಾಕಾಂಕ್ಷೆ ಹೊಂದಿದ್ದ ಇವರು ಮುಲಾಯಂರ ಸಮಾಜವಾದಿ ಪಕ್ಷ ಸೇರಿ ಅದರ ಓರ್ವ ಪ್ರಮುಖ ನಾಯಕರಾದರು. ಇವರು ಸೋನಿಯಾ ಗಾಂಧಿಯವರ ವಿದೇಶಿ ಮೂಲ ಉಲ್ಲೇಖಿಸಿ ಅವರು ಪ್ರಧಾನಿಯಾಗಲು ಸಾಧ್ಯವಿಲ್ಲವೆಂದು ಹೇಳಿಕೆ ನೀಡಿದರು. ಕಾಕತಾಳೀಯವೆಂಬಂತೆ ಆ ನಂತರ ಅವರಿಗೆ ಸಂಕಷ್ಟಗಳು ಪ್ರಾರಂಭವಾದವು. ಜಾರಿ ನಿರ್ದೇಶನಾಲಯ ಸೇರಿ ಅನೇಕ ಸರಕಾರಿ ತನಿಖಾ ಏಜೆನ್ಸಿಗಳು ಇವರ ಹಿಂದೆ ಬಿದ್ದವು. ಆರ್ಥಿಕ ನಿಯಮಗಳ ಉಲ್ಲಂಘನೆಗೆ ಸಂಬಂಧಿಸಿದ ಪ್ರಕರಣಗಳಲ್ಲಿ ಸೆರೆಮನೆ ಶಿಕ್ಷೆಯನ್ನು ಅನುಭವಿಸಿದರು. ಮೈಸೂರಿನ ಬಿಜೆಪಿ ಅಭ್ಯರ್ಥಿಯಾಗಿ ಮೈಸೂರು ಮಹಾರಾಜರು ಆಯ್ಕೆಯಾದ ಕೆಲವೇ ದಿನಗಳಲ್ಲಿ ಅವರ ಬೆಂಗಳೂರಿನಲ್ಲಿರುವ ಪ್ಯಾಲೇಸ್ ಗ್ರೌಂಡ್‌ನ ಪ್ರದೇಶವನ್ನು ಕರ್ನಾಟಕ ಸರಕಾರವು ವಶಪಡಿಸಿಕೊಳ್ಳುವ ಹುನ್ನಾರದಲ್ಲಿದೆ ಎಂಬ ಸುದ್ದಿ ಹರಿದಾಡುತ್ತಿದೆ. ಭಾರತದಲ್ಲಿ ಉದ್ಯೋಗಪತಿ ತಮ್ಮ ಹಾಗೂ ತಮ್ಮ ಉದ್ಯಮಗಳ ಸುರಕ್ಷೆಯ ದೃಷ್ಟಿಯಿಂದ ಚುನಾವಣಾ ಹಾಗೂ ಇನ್ನಿತರ ಉದ್ದೇಶಕ್ಕಾಗಿ ಹೆಚ್ಚಿನ ಎಲ್ಲ ಪ್ರಮುಖ ರಾಜಕೀಯ ಪಕ್ಷಗಳಿಗೆ ಗೌಪ್ಯವಾಗಿ ತಮ್ಮಲ್ಲಿರುವ ಕಪ್ಪು ಹಣದಿಂದ ದೇಣಿಗೆ ನೀಡುವ ಪರಿಪಾಠ ಕಳೆದ ಎಪ್ಪತ್ತೈದು ವರ್ಷಗಳಿಂದ ಬಂದಿದೆ. ಅದೇ ರೀತಿ ಯಾವುದೇ ಓರ್ವ ಉದ್ಯಮಿ ಅತೀ ಹೆಚ್ಚು ದೇಣಿಗೆ ನೀಡಿದ ಪಕ್ಷ ಚುನಾವಣೆಯಲ್ಲಿ ಸೋತು ಬೇರೊಂದು ಪಕ್ಷ ಅಧಿಕಾರಕ್ಕೆ ಬಂದ ಸಂದರ್ಭಗಳಲ್ಲಿ ಈ ಉದ್ಯಮಿಗಳ ವಿರುದ್ಧ ಸೇಡಿನ ರಾಜಕೀಯ ಮಾಡುವಂತಹ ವಾತಾವರಣ ದೇಶದಲ್ಲಿದೆ. ಇವುಗಳನ್ನು ಅವಲೋಕಿಸಿದ ನಂತರ ಕೇಂದ್ರ ಸರಕಾರವು ದೇಣಿಗೆಯು ರಾಜಕೀಯ ಪಕ್ಷಗಳ ಹಾಗೂ ಉದ್ಯಮಿಗಳ ಲೆಕ್ಕಪತ್ರದಲ್ಲಿ ಆದಾಯ ತೆರಿಗೆಯ ರಿಟರ್ನ್ ಫೈಲ್‌ನಲ್ಲಿ ದಾಖಲಾಗಬೇಕು ಹಾಗೂ ಉದ್ಯಮಿಗಳು ರಾಜಕೀಯ ಸೇಡಿಗೆ ಬಲಿಯಾಗದಂತೆ ತಡೆಯಲು ಜಾರಿಗೆ ತಂದ ಯೋಜನೆಯೇ ಈ ಚುನಾವಣಾ ಬಾಂಡ್‌ಗಳು.

ಏನಿದು ಚುನಾವಣಾ ಬಾಂಡ್(Electoral Bonds): ರಾಜಕೀಯ ಪಕ್ಷಗಳ ಚುನಾವಣಾ ನಿಧಿಯಲ್ಲಿ ಪಾರದರ್ಶಕತೆ ತರುವ ಯತ್ನದ ಭಾಗವಾಗಿ ಕೇಂದ್ರ ಸರ್ಕಾರವು ಜನವರಿ 2, 2018 ರಂದು ಅಧಿಸೂಚನೆ ಮೂಲಕ ಚುನಾವಣಾ ಬಾಂಡ್ ಯೋಜನೆಯನ್ನು ಜಾರಿಗೊಳಿಸಿತು. ಈ ಬಾಂಡ್ ರಾಜಕೀಯ ಪಕ್ಷಗಳು ಪಡೆಯುತ್ತಿದ್ದ ನಗದು ದೇಣಿಗೆಗೆ ಪರ್ಯಾಯ ಎನ್ನಲಾಗಿತ್ತು. ಈ ಯೋಜನೆಯಂತೆ ಭಾರತದ ಯಾವುದೇ ನಾಗರಿಕ ಅಥವಾ ಸ್ಥಾಪಿತ ಘಟಕಗಳು, ಓರ್ವ ವ್ಯಕ್ತಿ ವೈಯಕ್ತಿಕ ನೆಲೆಯಲ್ಲಿ ಅಥವಾ ಕೆಲವು ವ್ಯಕ್ತಿಗಳು ಜಂಟಿಯಾಗಿ ಸೇರಿ ತಮ್ಮ ಗುರುತು ಬಹಿರಂಗಪಡಿಸದೇ ಬಾಂಡ್‌ಗಳನ್ನು ಖರೀದಿಸಬಹುದು. ಬಾಂಡ್‌ಗಳು ಅನಾಮಧೇಯವಾಗಿರುತ್ತದೆ. ಅಂದರೆ ಇದನ್ನು ಖರೀದಿಸಿದ ವ್ಯಕ್ತಿ ಅಥವಾ ಸಂಸ್ಥೆಗಳ ಹೆಸರು ಬಹಿರಂಗ ಪಡಿಸಲಾಗುವುದಿಲ್ಲ. ದೇಣಿಗೆ ಪಡೆದ ರಾಜಕೀಯ ಪಕ್ಷದ ಹೆಸರು ಬಹಿರಂಗವಿರುವುದಿಲ್ಲ.

ಚುನಾವಣಾ ಬಾಂಡ್‌ನಿಂದ ಪಕ್ಷಗಳಿಗೆ ದೊರೆತ ನಿಧಿ: ಚುನಾವಣಾ ಆಯೋಗ ನೀಡಿದ ಮಾಹಿತಿಯಂತೆ ಏಪ್ರಿಲ್ 2019ರಿಂದ ಜನವರಿ 2024ರ ಅವಧಿಯಲ್ಲಿ ಆಳುವ ಬಿಜೆಪಿಗೆ 6060.5 ಕೋಟಿ ರೂ. ಲಭಿಸಿದರೆ, ಪ್ರಾದೇಶಿಕ ಪಕ್ಷಗಳಿಗೆ ದೊರೆತ ಮೊತ್ತ 5221 ಕೋಟಿ ರೂ. ಕಾಂಗ್ರೆಸ್, ಆಮ್ ಆದ್ಮಿ ಪಕ್ಷಗಳು ಅನುಕ್ರಮವಾಗಿ 1421.8 ಮತ್ತು 65.4 ಕೋಟಿ ಬಾಂಡ್ ಮೂಲಕ ಪಡೆದಿವೆ. ಮಮತಾರ ಟಿ.ಎಂ.ಸಿ.ಗೆ 1609.5 ಕೋಟಿ, 22 ಪ್ರಾದೇಶಿಕ ಪಕ್ಷಗಳು ಪಡೆದ ಒಟ್ಟು ಹಣದಲ್ಲಿ ಟಿ.ಎಂ.ಸಿ. ಅತೀ ಹೆಚ್ಚು ಶೇ.30ರಷ್ಟು ಪಡೆದಿದೆ. ತೆಲಂಗಾಣದ ಬಿ.ಆರ್.ಎಸ್. ರೂ. 1214.7 ಕೋಟಿ, ಒಡಿಶಾದ ಬಿಜು ಜನತಾ ದಳಕ್ಕೆ 775.50 ಕೋಟಿ ರೂ. ತಮಿಳ್ನಾಡಿನ ಡಿ.ಎಂ.ಕೆ.ಗೆ 639 ಕೋಟಿ ರೂ. ಆಂಧ್ರಪ್ರದೇಶದ YSRCPಗೆ 337 ಕೋಟಿ ರೂ., ತೆಲುಗುದೇಶಂಗೆ 218.9 ಕೋಟಿ ರೂ. ಶಿವಸೇನೆಗೆ 159.3 ಕೋಟಿ ರೂ. ಲಭಿಸಿದೆ ಎಂದು ದಾಖಲೆ ನೀಡಿದೆ. ಇನ್ನೂ ಕೆಲವು ಪಕ್ಷಗಳು ಅವುಗಳ ಪ್ರಭಾ ವಲಯ ಮೀರಿ ಗಮನಾರ್ಹ ಪ್ರಮಾಣದಲ್ಲಿ ಚುನಾವಣಾ ಬಾಂಡ್‌ಗಳಿಂದ ಹಣ ಪಡೆದಿವೆ. ಹಿಂದಿನಿಂದಲೂ ನಡೆದು ಬಂದ ಸಂಪ್ರದಾಯದಂತೆ ಆಡಳಿತದಲ್ಲಿರುವ ಬಿ.ಜೆ.ಪಿ.ಗೆ ಅತೀ ಹೆಚ್ಚು ಮೊತ ಲಭಿಸಿದೆ. ಆದರೆ ಕೇಂದ್ರ ಹಾಗೂ ಸುಮಾರು 18 ರಾಜ್ಯಗಳಲ್ಲಿ ಅಧಿಕಾರದಲ್ಲಿರುವ ಬಿ.ಜೆ.ಪಿಗೆ ದೇಣಿಗೆಯ ಲೆಕ್ಕಾಚಾರದ ಅನುಪಾತದಲ್ಲಿ ಬಿ.ಜೆ.ಪಿಯ ಓರ್ವ ಸಂಸದನಿಗೆ ತಲಾ 20.03 ಕೋಟಿ ರೂ. ಪಡೆದರೆ ಕಾಂಗ್ರೆಸ್‌ನ ಓರ್ವ ಸಂಸದನಿಗೆ 27.3 ಕೋಟಿ ರೂ., ಟಿ.ಎಂ.ಸಿ.ಯ ಸಂಸದ (73.68 ಕೋಟಿ ರೂ.), ಡಿ.ಎಂ.ಕೆ.ಯ ಸಂಸದನಿಗೆ 79.69 ಕೋಟಿ ರೂ. ಪಡೆದಿದ್ದು ವಿಪಕ್ಷಗಳ ಕಿರುಚಾಟ ಅರ್ಥಹೀನ ಎನಿಸುತ್ತದೆ.

ಬಾಂಡ್‌ಗಳ ವಿರುದ್ಧ ಸುಪ್ರೀಂಗೆ ಅರ್ಜಿ: ಈ ಬಾಂಡ್ ಯೋಜನೆ ವಿರುದ್ಧ ಕಳೆದ ಅಕ್ಟೋಬರ್‌ನಲ್ಲಿ ಕಾಂಗ್ರೆಸ್ ನಾಯಕಿ ಜಯಾಠಾಕೂರ್ ಸಿಪಿಐ(ಎಂ) ಮತ್ತು ಎನ್‌ಜಿಓ ಅಸೋಸಿಯೇಷನ್ ಫಾರ್ ಡೆಮಾಕ್ರಾಟಿಕ್ ರಿಫಾರ್ಮ್ಸ್ ಇವರು ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಕಳೆದ ವರ್ಷ ವಿಚಾರಣೆ ನಡೆಸಿ ತೀರ್ಪನ್ನು ಕಾಯ್ದಿರಿಸಿತ್ತು.

ಬಾಂಡ್ ರದ್ಧತಿ–ಮುಂದೇನು?: ಚುನಾವಣಾ ಬಾಂಡ್ ಅಸಂವಿಧಾನಿಕ ಯೋಜನೆಯಾಗಿರುವುದರಿಂದ ರದ್ದುಪಡಿಸುತ್ತಿರುವುದಾಗಿ ಸುಪ್ರೀಂ ಕೋರ್ಟ್ ತೀರ್ಪು ನೀಡಿದೆ. ಈ ತೀರ್ಪನ್ನು ಕೆಲವು ಪ್ರತಿಪಕ್ಷದ ನಾಯಕರು, ಮಾಧ್ಯಮಗಳು ಸ್ವಾಗತಿಸಿವೆ. 1947ರ ನಂತರ ನಡೆದ ನೂರಾರು ಚುನಾವಣೆಗಳಲ್ಲಿ ಹಣದ ಹೊಳೆಯನ್ನೇ ಹರಿಸಿ ಗೆಲ್ಲುತ್ತಿದ್ದ ಕಾಂಗ್ರೆಸ್ ನಾಯಕರು ಈ ತೀರ್ಪು ಸ್ವಾಗತಿಸಿರುವುದು ಹಾಸ್ಯಾಸ್ಪದವೆನಿಸುತ್ತಿದೆ. ಸಾಲು ಸಾಲು ಹಗರಣಗಳಾದ ಯುಪಿಎ ಸರಕಾರದಲ್ಲಿ ಗೃಹ, ವಿತ್ತ ಸಚಿವರಾಗಿದ್ದ ಪಿ.ಚಿದಂಬರಂ ಈ ಬಾಂಡ್‌ನ್ನು ಕಾನೂನುಬದ್ಧ ಲಂಚ ಎಂದು ಟೀಕಿಸಿದ್ದು ಸೋಜಿಗವೆನಿಸುತ್ತಿದೆ. ದೇಶದಲ್ಲಿ ಸುದೀರ್ಘ ಅವಧಿಯಲ್ಲಿ ಚುನಾವಣೆಗಳಲ್ಲಿ ಕಪ್ಪು ಹಣವೇ ಪ್ರಧಾನ ಪಾತ್ರ ವಹಿಸಿತ್ತು ಎಂಬುದನ್ನು ತಿರಸ್ಕರಿಸುವಂತಿಲ್ಲ. ಈ ಅವಧಿಯುದ್ದಕ್ಕೂ ಸುಪ್ರೀಂಕೋರ್ಟ್ ದೇಶದಲ್ಲಿದ್ದ ಸರಕಾರಗಳನ್ನು ಎಚ್ಚರಿಸಲಿಲ್ಲ. ಗಂಭೀರ ಚರ್ಚೆ, ಚಿಂತನೆ ನಡೆದ ಮಾಹಿತಿ ಇಲ್ಲ. ಸರಕಾರಗಳಿಗೆ ಕಪ್ಪು ಹಣ ನಿಯಂತ್ರಿಸುವಂತೆ ನಿರ್ದೇಶನ ನೀಡಿರುವ ಉದಾಹರಣೆಗಳು ಗಮನಕ್ಕೆ ಬಂದಿಲ್ಲ. ಆದರೆ ಮೊದಲ ಬಾರಿ ಒಂದು ಸರಕಾರವು ಚುನಾವಣೆಗಳಲ್ಲಿ ಕಪ್ಪು ಹಣದ ಪ್ರಭಾವ ತಡೆಯಲು ಬಾಂಡ್‌ಗಳ ಜಾರಿಗೊಳಿಸುವ ಮೂಲಕ ಒಂದು ಉಪಕ್ರಮವನ್ನು ಆರಂಭಿಸಿತು. ಆದರೆ ಸರಕಾರದ ಈ ಪ್ರಯತ್ನವನ್ನು ಪರಿಗಣಿಸದೆ ಸುಪ್ರೀಂಕೋರ್ಟ್ ಇದನ್ನು ರದ್ದುಪಡಿಸಿರುವುದು ಎಷ್ಟು ಸರಿ? ಸುಪ್ರೀಂಕೋರ್ಟ್ ಈ ತೀರ್ಪಿನ ಮೂಲಕ ಪ್ರಸ್ತುತ ಮಾದರಿಯಲ್ಲೇ ಚುನಾವಣೆಗಳಾಗಬೇಕೆಂದು ಬಯಸುತ್ತಿದೆಯೋ? ಬಾಂಡ್‌ಗೆ ಬದಲಾಗಿ ಪರ್ಯಾಯ ಮಾರ್ಗಗಳನ್ನು ಸುಪ್ರೀಂಕೋರ್ಟ್ ಸೂಚಿಸಿಲ್ಲ. ಬಾಂಡ್ ಯೋಜನೆ ಪರಿಪೂರ್ಣವು ಅಲ್ಲ. ಪರಿಪಕ್ವವೂ ಅಲ್ಲ. ಸರಕಾರದ ಪ್ರಕಾರ ಇದೊಂದು ಸುಧಾರಣೆಯೆಡೆಗೆ ಪ್ರಾರಂಭಿಸಿದ ಪ್ರಯತ್ನವಾಗಿತ್ತು ಕೇಂದ್ರ ವಿತ್ತ ಸಚಿವರಾದ ನಿರ್ಮಲಾ ಸೀತಾರಾಮನ್ ಈ ಯೋಜನೆ ಸಂಪೂರ್ಣ ಅಸಮರ್ಪಕತೆಯಿಂದ ಸಮರ್ಪಕತೆಯೆಡೆಗಿನ ಹೆಜ್ಜೆ ಎಂದು ತಿಳಿಸಿರುವುದು ಗಮನಿಸತಕ್ಕ ಅಂಶವಾಗಿದೆ. ಗೃಹ ಸಚಿವ ಅಮಿತ್ ಷಾರವರೂ ಬಾಂಡ್‌ಗಳಿಂದಾಗಿ ರಾಜಕೀಯ ಪಕ್ಷಗಳ ಖಾತೆಗೆ ಅದರ ಮುಖಬೆಲೆಯಷ್ಟೇ ದೇಣಿಗೆ ಜಮೆಯಾಗುತ್ತಿತ್ತು. ಈ ಮೊತ್ತಗಳು ಆದಾಯ ತೆರಿಗೆ ಇಲಾಖೆ ಗಮನಕ್ಕೆ ಬರುವಷ್ಟು ಪಾರದರ್ಶಕತೆ ಹೊಂದಿದೆ ಎಂದು ಸರಿಯಾಗಿ ಹೇಳಿದ್ದಾರೆ. ಆದ್ದರಿಂದ ಸುಪ್ರೀಂಕೋರ್ಟ್ ಈ ಬಾಂಡ್ ಯೋಜನೆ ರದ್ದುಪಡಿಸುವ ಬದಲು ಸುಧಾರಣೆಗಳನ್ನು ತರಲು, ಇನ್ನೂ ಹೆಚ್ಚಿನ ಪಾರದರ್ಶಕತೆ ತರಲು ಮಾರ್ಗದರ್ಶಿ ಸೂಕ್ತ ಸಲಹೆಗಳನ್ನು ನೀಡಬಹುದಿತ್ತು ಅಥವಾ ಪರ್ಯಾಯ ಮಾರ್ಗಗಳನ್ನು ಸೂಚಿಸಬಹುದಿತ್ತು. ಆದರೆ ಸುಪ್ರೀಂಕೋರ್ಟ್ ಬಾಂಡ್ ರದ್ದುಪಡಿಸುವ ತೀರ್ಪು ನೀಡಿರುವುದು ನೆಗಡಿ ಉಪಶಮನಕ್ಕೆ ಮೂಗನ್ನೇ ಕೊಯ್ದಂತೆ ಆಗಿದೆ ಎಂದೆನಿಸುವುದಿಲ್ಲವೇ? ಓಟದ ಸ್ಪರ್ಧೆಯಲ್ಲಿ ಆಟಗಾರ ಮೊದಲ ಹೆಜ್ಜೆ ತಪ್ಪಾಗಿ ಇಟ್ಟಿದ್ದಕ್ಕೆ ತರಬೇತುದಾರ ಕಾಲನ್ನೇ ಕತ್ತರಿಸಿದಂತಾಗುವುದಿಲ್ಲವೇ? ಆದರೂ ಸುಪ್ರೀಂ ಕೋರ್ಟ್ ನೀಡಿರುವ ತೀರ್ಪನ್ನು ಸ್ವಾಗತಿಸೋಣ, ಗೌರವಿಸೋಣ ಹಾಗೂ ಶೀಘ್ರದಲ್ಲಿ ಚುನಾವಣೆಗಳಲ್ಲಿ ಕಪ್ಪು ಹಣದ ಪ್ರಭಾವ ತಡೆಯಲು ಕೇಂದ್ರವು ಉತ್ತಮ ಯೋಜನೆ ತರಲಿ. ಸುಪ್ರೀಂ ಕೋರ್ಟ್ ಸೂಕ್ತ ಮಾರ್ಗದರ್ಶನ ನೀಡಲಿ.

ಅಬಕಾರಿ ಪೊಲೀಸರ ದಾಳಿ; ಎರಡು ಪ್ರತ್ಯೇಕ ಪ್ರಕರಣದಲ್ಲಿ

8 ಲಕ್ಷಕ್ಕೂ ಅಧಿಕ ಮೌಲ್ಯದ ಅಕ್ರಮ ಮದ್ಯ ವಶ



ಹುಂಡೈ ಐ20 ವಾಹನದಲ್ಲಿ ಅಕ್ರಮ ಮದ್ಯ ಸಾಗಿಸಲಾಗುತ್ತಿತ್ತು

ಮೈಸೂರು,ಮಾ.26(ಪಿಎಂ)– ಅಕ್ರಮ ಮದ್ಯ ಸಾಗಾಟ, ಶೇಖರಣೆ ಸಂಬಂಧ ಎರಡು ಪ್ರತ್ಯೇಕ ಪ್ರಕರಣಗಳಲ್ಲಿ 8 ಲಕ್ಷಕ್ಕೂ ಅಧಿಕ ಮೌಲ್ಯದ ಮದ್ಯವನ್ನು ಅಬಕಾರಿ ಪೊಲೀಸರು ವಶಪಡಿಸಿಕೊಂಡಿದ್ದಾರೆ.

ಸೋಮವಾರ ರಾತ್ರಿ ಮೈಸೂರಿನ ಎನ್‌ಆರ್ ಮೊಹಲ್ಲಾದ ಮೇಸ್ಕೋ ಸ್ಕೂಲ್ ರಸ್ತೆಯಲ್ಲಿ ದಾಳಿ ನಡೆಸಿದ ಅಬಕಾರಿ ಪೊಲೀಸರು, ವಿವಿಧ ಬ್ರ್ಯಾಂಡಿನ 88.560 ಲೀಟರ್ ಮದ್ಯ ಹಾಗೂ 46.920 ಲೀಟರ್ ಬಿಯರ್ ಅನ್ನು ವಶಕ್ಕೆ ಪಡೆದರು.

ಹುಂಡೈ ಐ20 ವಾಹನದಲ್ಲಿ (ಕೆಎ–05, ಎಂಜೆ–5627) ಅಕ್ರಮವಾಗಿ ಮದ್ಯ ಸಾಗಾಟ ಮಾಡುತ್ತಿರುವ ಖಚಿತ ಮಾಹಿತಿ ಮೇರೆಗೆ ದಾಳಿ ನಡೆಸಿ ಒಟ್ಟು 8 ಲಕ್ಷ ರೂ. ಮೌಲ್ಯದ ಮದ್ಯವನ್ನು ವಶಕ್ಕೆ ಪಡೆಯಲಾಯಿತು. ಮದ್ಯ ಸಾಗಾಟ ಮಾಡುತ್ತಿದ್ದ ನಾಗರಾಜು ಎಂಬಾತನನ್ನು ಬಂಧಿಸಿ ಠಾಣಾ ಜಾಮೀನಿನ ಮೇಲೆ ಬಿಡುಗಡೆ ಮಾಡಲಾಗಿದೆ. ಈತನಿಗೆ ಮದ್ಯ ಪೂರೈಸಿದ್ದ ಶಂಕರಯ್ಯ ಮತ್ತು ವಾಹನದ ಮಾಲೀಕರ ವಿರುದ್ಧವೂ ಅಬಕಾರಿ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡಿರುವ ಅಬಕಾರಿ ನಿರೀಕ್ಷಕ ಎ.ಎ.ಮುಜಾವರ, ತನಿಖೆ ಮುಂದುವರೆಸಿದ್ದಾರೆ.

ಮತ್ತೊಂದು ಪ್ರಕರಣದಲ್ಲಿ ಮಂಗಳವಾರ ರಾತ್ರಿ ದಾಳಿ ನಡೆಸಿ, 25.920 ಲೀಟರ್ ಮದ್ಯ ಹಾಗೂ 7.800 ಲೀಟರ್ ಬಿಯರ್ ವಶಪಡಿಸಿಕೊಳ್ಳಲಾಗಿದೆ. ಇಲವಾಲ ಹೋಬಳಿಯ ಹೊಸಕೋಟೆ ಗ್ರಾಮದಲ್ಲಿ ಈ ದಾಳಿ ನಡೆಸಿದ್ದು, ಇಲ್ಲಿನ ಶ್ರೀಕಂಠ ಎಂಬುವರಿಗೆ ಸೇರಿದ ಮನೆಯಲ್ಲಿ ಅಕ್ರಮವಾಗಿ ಸಂಗ್ರಹಿಸಿದ್ದ 30 ಸಾವಿರ ರೂ. ಮೌಲ್ಯ ಮದ್ಯ ವಶಪಡಿಸಿಕೊಂಡಿದ್ದು, ಅಬಕಾರಿ ಕಾಯ್ದೆಯಡಿ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಳ್ಳಲಾಗಿದೆ. ಶ್ರೀಕಂಠನನ್ನು ಬಂಧಿಸಿ ಠಾಣಾ ಜಾಮೀನಿನ ಮೇಲೆ ಬಿಡುಗಡೆ ಮಾಡಲಾಗಿದೆ.

ಅಬಕಾರಿ ಆಯುಕ್ತ ಎಫ್.ಹೆಚ್.ಛಲವಾದಿ, ಅಬಕಾರಿ ಉಪಆಯುಕ್ತ ಎಸ್. ನಾಗರಾಜಪ್ಪ ಅವರ ಮಾರ್ಗದರ್ಶನದಲ್ಲಿ ಡಿಸಿ ಸ್ಕ್ವಾಡ್ ಅಬಕಾರಿ ನಿರೀಕ್ಷಕ ಎ.ಎ.ಮುಜಾವರ ಮತ್ತು ಅವರ ತಂಡ ಈ ದಾಳಿಗಳನ್ನು ನಡೆಸಿತು. ಇಲಾಖೆಯ ವಾಹನ ಚಾಲಕರಾದ ಮಂಜು, ಬಿ.ಎಸ್. ಗುರುಮಲ್ಲೇಶ್, ಪೇದೆಗಳಾದ ಎನ್. ಅಜಯ್, ಸಿ.ಪ್ರತಾಪ್ ಕಾರ್ಯಾಚರಣೆಗಳಲ್ಲಿ ಪಾಲ್ಗೊಂಡಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Vishveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಸಾರ್ವಜನಿಕ ತಿಳುವಳಿಕೆ

ಈ ಮೂಲಕ ಸಾರ್ವಜನಿಕರಲ್ಲಿ ತಿಳಿಯಪಡಿಸುವುದೇನೆಂದರೆ, ನಮ್ಮ ಕಕ್ಷಿದಾರರಾದ ಮೈಸೂರು ನಗರ, ಜೆ.ಪಿ. ನಗರ, 'ಎ' ಬ್ಲಾಕ್, 1ನೇ ಮುಖ್ಯ ರಸ್ತೆ, ಶ್ರೀಗಂಧ, ಮನೆ ನಂ.50 ರಲ್ಲಿ ವಾಸವಾಗಿರುವ ಹಾಗೂ ಮೈಸೂರಿನ ಸರಸ್ವತಿಪುರಂ, ಕಾಂತರಾಜ್ ಅರಸ್ ರಸ್ತೆಯಲ್ಲಿರುವ ಮೆ॥ ಸ್ಕಿಲ್ ಟೆಕ್ ಇಂಜಿನಿಯರ್ಸ್ ಅಂಡ್ ಕಂಟ್ರಾಕ್ಟರ್ಸ್ ಪ್ರೈ ಲಿ ರಲ್ಲಿ ಕಾರ್ಯನಿರ್ವಾಹಕ ನಿರ್ದೇಶಕರಾದ ಶ್ರೀ ಆರ್. ಎಸ್. ರಾಜಶೇಖರರವರ ಮಗನಾದ ಶ್ರೀ ಆರ್. ವೀರೇಶ್ ರವರು ದಿನಾಂಕ: 12.03.2024 ರಂದು ಮೈಸೂರು ಜಿಲ್ಲೆ, ಮೈಸೂರು ತಾಲ್ಲೂಕು, ವರುಣ ಹೋಬಳಿ, ವಾಜಮಂಗಲ ಗ್ರಾಮದ ಸರ್ವೆ ನಂಬರ್ 220/2 ರಲ್ಲಿ ವಿಸ್ತೀರ್ಣ 1 ಎಕರೆ 15.08 ಗುಂಟೆ ಮತ್ತು ಸರ್ವೆ ನಂಬರ್ 221/4 ರಲ್ಲಿ ವಿಸ್ತೀರ್ಣ 00 ಎಕರೆ 39.08 ಗುಂಟೆ ಜಮೀನಿಗೆ ಸಂಬಂದಿಸಿದಂತೆ ಈ ಕೆಳಕಂಡ ಮೂಲ ದಾಖಲಾತಿಗಳನ್ನು ಕಛೇರಿಯಿಂದ ಸರಸ್ವತಿಪುರಂ ಶಾಖೆಯ ಹೆಚ್.ಡಿ.ಎಫ್.ಸಿ ಬ್ಯಾಂಕಿಗೆ ಹಾಜರುಪಡಿಸಲು ತೆಗೆದುಕೊಂಡು ಹೋಗುವ ದಾರಿ ಮಧ್ಯದಲ್ಲಿ ಕಳೆದುಕೊಂಡಿರುತ್ತಾರೆ. ಇದರ ಸಂಬಂದವಾಗಿ ನಮ್ಮ ಕಕ್ಷಿದಾರರು ದಿನಾಂಕ: 25.03.2024 ರಂದು ಕರ್ನಾಟಕ ರಾಜ್ಯ ಪೋಲಿಸ್ (ಮೈಸೂರು ನಗರ ವ್ಯಾಪ್ತಿ) ರವರಿಗೆ ದೂರನ್ನು ನೀಡಿದ್ದು, ಸದರಿ ದೂರನ್ನು ದಾಖಲಿಸಿಕೊಂಡು ಲಾಸ್ ರಿಪೋರ್ಟ್/ಕ್ರಮ ಸಂಖ್ಯೆ: 988824 ನಂಬರನ್ನು ನೀಡಿರುತ್ತಾರೆ.

ಹಾಗಾಗಿ, ಈ ಮೂಲಕ ಸಾರ್ವಜನಿಕರಲ್ಲಿ ಕೇಳಿಕೊಳ್ಳುವುದೇನೆಂದರೆ ಈ ಕೆಳಕಂಡ ಷೆಡ್ಯೂಲ್ ಸ್ವತ್ತಿಗೆ ಸಂಬಂದಿಸಿದ ಅಸಲು ದಾಖಲಾತಿ ಪತ್ರಗಳು ಯಾರಿಗಾದರೂ ದೊರಕಿದಲ್ಲಿ, ಸದರಿ ಪತ್ರಗಳನ್ನು ನಮ್ಮ ಕಕ್ಷಿದಾರರಿಗೆ ಅಥವಾ ನಮ್ಮ ಕಛೇರಿ ವಿಳಾಸಕ್ಕೆ ತಲುಪಿಸುವಂತೆ ಕೇಳಿಕೊಳ್ಳುತ್ತೇವೆ.

ದಾಖಲಾತಿಗಳ ವಿವರ

ಪತ್ರದ ವಿವರ–ಕ್ರಯಪತ್ರ, ದಿನಾಂಕ: 16.10.2007, ದಸ್ತಾವೇಜು ಸಂಖ್ಯೆ–MYN-1-10922-2007-08, ಸಿ.ಡಿ.ನಂಬರ್–MYND154, ಉಪನೊಂದಣಾಧಿಕಾರಿಗಳು ಮೈಸೂರು ಉತ್ತರ.

ಪತ್ರದ ವಿವರ–ಕ್ರಯಪತ್ರ, ದಿನಾಂಕ: 16.10.2007, ದಸ್ತಾವೇಜು ಸಂಖ್ಯೆ–MYN-1-10926-2007-08, ಸಿ.ಡಿ.ನಂಬರ್–MYND154, ಉಪನೊಂದಣಾಧಿಕಾರಿಗಳು ಮೈಸೂರು ಉತ್ತರ.

ಷೆಡ್ಯೂಲ್ ಸ್ವತ್ತಿನ ವಿವರ

1. ಮೈಸೂರು ಜಿಲ್ಲೆ, ಮೈಸೂರು ತಾಲ್ಲೂಕು, ವರುಣ ಹೋಬಳಿ, ವಾಜಮಂಗಲ ಗ್ರಾಮದ ಸರ್ವೆ ನಂಬರ್ 220/2 ರಲ್ಲಿ ವಿಸ್ತೀರ್ಣ 1 ಎಕರೆ 15.08 ಗುಂಟೆ ಖುಷ್ಕಿ ಜಮೀನಿಗೆ ಚೆಕ್ಕುಬಂಧಿ: ಪೂರ್ವಕ್ಕೆ: ಸರ್ವೆ ನಂಬರ್ 220/1 ರ ಜಮೀನು, ಪಶ್ಚಿಮಕ್ಕೆ: ಸರ್ವೆ ನಂಬರ್ 222/1 ರ ಜಮೀನು, ಉತ್ತರಕ್ಕೆ: ಸರ್ವೆ ನಂಬರ್ 221/4 ರ ಜಮೀನು, ದಕ್ಷಿಣಕ್ಕೆ: ಸರ್ವೆ ನಂಬರ್ 228/1ರ ಜಮೀನು.

2. ಮೈಸೂರು ಜಿಲ್ಲೆ, ಮೈಸೂರು ತಾಲ್ಲೂಕು, ವರುಣ ಹೋಬಳಿ, ವಾಜಮಂಗಲ ಗ್ರಾಮದ ಸರ್ವೆ ನಂಬರ್ 221/4 ರಲ್ಲಿ ವಿಸ್ತೀರ್ಣ 00 ಎಕರೆ 39.08 ಗುಂಟೆ ಖುಷ್ಕಿ ಜಮೀನಿಗೆ ಚೆಕ್ಕುಬಂಧಿ: ಪೂರ್ವಕ್ಕೆ: ಸರ್ವೆ ನಂಬರ್ 221/2 ರ ಜಮೀನು, ಪಶ್ಚಿಮಕ್ಕೆ: ಸರ್ವೆನಂಬರ್ 221/4ರ ಉಳಿಕೆ ಜಮೀನು, ಉತ್ತರಕ್ಕೆ: ರಸ್ತೆ, ದಕ್ಷಿಣಕ್ಕೆ: ಸರ್ವೆ ನಂಬರ್ 220/2 ರ ಜಮೀನು.

ಶ್ರೀ ಮಹದೇವಸ್ವಾಮಿ ಪಿ. ಬಿ.ಎ.ಎಲ್, ಎಲ್.ಎಲ್.ಬಿ
ವಕೀಲರು
ನಂ. 218/ಕೆ–30, ನಾರಾಯಣಶಾಸ್ತ್ರಿ ರಸ್ತೆ, ಕೆ.ಆರ್. ಮೊಹಲ್ಲಾ, ಮೈಸೂರು

ಸಾರ್ವಜನಿಕ ಪ್ರಕಟಣೆ

ನಮ್ಮ ಕಕ್ಷಿದಾರರಾದ ಶ್ರೀಮತಿ ವೈಶಾಲಿ ವಸಂತ್ ರವರು ಷೆಡ್ಯೂಲ್ ನಲ್ಲಿ ನಮೂದಿಸಿರುವ ಸ್ವತ್ತನ್ನು ಅದರ ಮಾಲೀಕರಾದ ಸುಮಾರು 52 ವರ್ಷ ವಯಸ್ಸಿನ ಶ್ರೀ. ಎಂ. ರಾಜು, ಮತ್ತು ಅವರ ಧರ್ಮಪತ್ನಿ ಸುಮಾರು 42 ವರ್ಷ ವಯಸ್ಸಿನ ಶ್ರೀಮತಿ ಮಂಜುಳಾ ರವರಿಂದ ಖರೀದಿಸಲು ಇಚ್ಛೆಯುಳ್ಳವರಾಗಿದ್ದು, ಷೆಡ್ಯೂಲ್ ಸ್ವತ್ತಿಗೆ ಸಂಬಂಧಪಟ್ಟಂತೆ ಬೇರೆ ಯಾವುದೇ ವ್ಯಕ್ತಿ/ಸಂಘ ಸಂಸ್ಥೆಗಳಿಗೆ ಯಾವುದೇ ರೀತಿಯ ಹಕ್ಕು, ಹಿತಾಸಕ್ತಿ, ಸ್ವಾಧೀನ, ಮಾಲೀಕತ್ವ, ಋಣಭಾರ, ಅಡಮಾನ ಕ್ಲೇಮ್, ತಕರಾರು, ವಗೈರೆಗಳು ಇದ್ದಂತಹ ಪಕ್ಷದಲ್ಲಿ ಅಂತಹ ವ್ಯಕ್ತಿ/ಸಂಘ ಸಂಸ್ಥೆಗಳ ಪ್ರತಿನಿಧಿಗಳು ಈ ಪ್ರಕಟಣೆ ಪ್ರಕಟವಾದ ದಿನದಿಂದ 7 ದಿನಗಳ ಒಳಗೆ ಈ ಕೆಳಗೆ ನಮೂದಿಸಿರುವ ಕಚೇರಿಯ ವಿಳಾಸಕ್ಕೆ ದಾಖಲೆಗಳ ಸಮೇತ ತಮ್ಮ ಹಕ್ಕು, ಹಿತಾಸಕ್ತಿ, ಸ್ವಾಧೀನ, ಮಾಲೀಕತ್ವ, ಋಣಭಾರ, ಅಡಮಾನ ಕ್ಲೇಮ್, ತಕರಾರು ಸಾಬೀತು ಪಡಿಸಬಹುದಾಗಿ ರುತ್ತದೆ. ನಿಗದಿತ ಅವಧಿಯೊಳಗೆ ದಾಖಲೆಯ ಸಮೇತ ತಕರಾರು ವಗೈರೆಗಳು ಬರದೇ ಇದ್ದಲ್ಲಿ ನಮ್ಮ ಕಕ್ಷಿದಾರರು ಷೆಡ್ಯೂಲ್ನಲ್ಲಿ ನಮೂದಿಸಿರುವ ಸ್ವತ್ತನ್ನು ಖರೀದಿಸುವ ನಿಟ್ಟಿನಲ್ಲಿ ಕ್ರಮವಹಿಸಲು ಸಿದ್ಧರಿದ್ದು ಮುಂದೆ ಷೆಡ್ಯೂಲ್ ಸ್ವತ್ತಿಗೆ ಸಂಬಂಧಿಸಿದಂತೆ ಬರಬಹುದಾದಂತಹ ತಂಟೆ ತಕರಾರುಗಳಿಗೆ ನಮ್ಮ ಕಕ್ಷಿದಾರರು ಬಾಧ್ಯರಾಗುವುದಿಲ್ಲ ವೆಂದು ಮತ್ತು ನಮ್ಮ ಕಕ್ಷಿದಾರರು ಷೆಡ್ಯೂಲ್ ಸ್ವತ್ತಿನ ಸದ್ಭಾವಿತ ಖರೀದಿದಾರರೆಂದು ಪರಿಗಣಿಸಲಾಗುವುದು.

ಷೆಡ್ಯೂಲ್ ಸ್ವತ್ತಿನ ವಿವರ

ಮೈಸೂರು ನಗರ, ದೇವರಾಜ ಮೊಹಲ್ಲಾ, ವಿಜಯ ನಗರ 4ನೇ ಹಂತ, 2ನೇ ಘಟ್ಟ, ನಿವೇಶನ ಸಂಖ್ಯೆ 4454 ಕ್ಕೆ ಚಕ್ಕುಬಂದಿ: ಪೂರ್ವಕ್ಕೆ : 12.00 ಮೀಟರ್ ರಸ್ತೆ, ಪಶ್ಚಿಮಕ್ಕೆ : ನಿವೇಶನ ಸಂಖ್ಯೆ 4468
ಉತ್ತರಕ್ಕೆ: ನಿವೇಶನ ಸಂಖ್ಯೆ 4453, ದಕ್ಷಿಣಕ್ಕೆ : ನಿವೇಶನ ಸಂಖ್ಯೆ 4455, ಈ ಮಧ್ಯೆ ಇರುವ ಪೂರ್ವಪಶ್ಚಿಮ 18:00 ಮೀಟರ್, ದಕ್ಷಿಣೋತ್ತರ: 12:00 ಮೀಟರ್ ಒಟ್ಟು 216:00 ಚದರ ಮೀಟರ್ ವಿಸ್ತೀರ್ಣ ಉಳ್ಳ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ವತಿಯಿಂದ ಮಂಜೂರಾದ ಖಾಲಿ ನಿವೇಶನ

ಸಹಿ/–S. M. Harsha Kiran, ADVOCATE
Mob: 7337884885,
Email: nyaayavedevaru@gmail.com
"ಪಾಂಚಜನ್ಯ", #7904, ವಿಜಯನಗರ 4ನೆ ಹಂತ, 2ನೆ ಘಟ್ಟ,(ಮರಿಮಲ್ಲಪ್ಪ ಶಾಲೆ ಹತ್ತಿರ) , ಮೈಸೂರು-12
ದಿನಾಂಕ: 28-02-2024





ಮೈಸೂರು ಮಿತ್ರ
ವಾರ್ಷಿಕೋತ್ಸವ ವಿಶೇಷ ಸಂಚಿಕೆ

"ಮೈಸೂರು ಮಿತ್ರ" ತನ್ನ ಓದುಗರು ಹಾಗೂ ಜಾಹೀರಾತುದಾರರ ಸೇವೆಯಲ್ಲಿ ಏಪ್ರಿಲ್ 16, 2024ಕ್ಕೆ 44 ವರ್ಷಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸಿ, 45ನೇ ವರ್ಷಕ್ಕೆ ಕಾಲಿಡುತ್ತಿರುವ ಈ ಸುಸಂದರ್ಭದಲ್ಲಿ ವರ್ಣರಂಜಿತ ವಿಶೇಷಾಂಕವನ್ನು ಹೊರತರಲಾಗುತ್ತಿದೆ. ಹಾಗಾಗಿ ಜಾಹೀರಾತುದಾರರಿಗೆ ಇದೊಂದು ಸುಸಮಯ. ಮುದ್ರಣದ ದೃಷ್ಟಿಯಿಂದ ತಮ್ಮ ಜಾಹೀರಾತುಗಳನ್ನು ಏಪ್ರಿಲ್ 10, 2024 ರೊಳಗೆ ನೀಡಬೇಕಾಗಿ ಕಳಕಳಿಯ ಮನವಿ.

ಪ್ರಧಾನ ಕಛೇರಿ
0821-2496522, 2496523, 0821-2496520 (5 ಲೈನುಗಳು)
ಮರಿಯ ಫರ್ನಾಂಡೀಸ್, ಜಾಹೀರಾತು ವ್ಯವಸ್ಥಾಪಕರು: 9448525060
ಜಾಯ್ ಅಂಥೋಣಿ ಡೋವ್: 8951668960
ಪ್ರೇಮ: 9880549879
ಕೆ.ಆರ್. ಸರ್ಕಲ್ ಕಛೇರಿ: 0821-2431774
ದೇವರಾಜ ಅರಸ್ ರಸ್ತೆ ಕಛೇರಿ: 0821-2428695

ಕೊಡಗು – ಪ್ರಸಾದ್, ಪೂಜಾ ಆರ್ಕೆಡ್, ಜೂನಿಯರ್ ಕಾಲೇಜು ರಸ್ತೆ, ಮಡಿಕೇರಿ, 9731469871

ಹುಣಸೂರು – ಕೆ. ಕೃಷ್ಣ (ಕೆ.ಕೆ.), EWS 204, KHB ಕಾಲೋನಿ, ಹುಣಸೂರು. 9448720626

ಮಂಡ್ಯ – ಕೆ. ಮೋಹನ್‌ರಾಜ್, 3ನೇ ಕ್ರಾಸ್, ಅಶೋಕನಗರ, ಮಂಡ್ಯ, 8762960325

ಶ್ರೀರಂಗಪಟ್ಟಣ – ವಿನಯ್ ಕಾರೇಕುರ, ಶ್ರೀರಂಗಪಟ್ಟಣ, 9686893234

ಯಳಂದೂರು – ವಿ.ನಾಗರಾಜು, ಮೈತ್ರಿ ಮೆಡಿಕಲ್ಸ್, ಬಳೆಪೇಟೆ, ಯಳಂದೂರು, 9844349191

ಚಾಮರಾಜನಗರ – ಸಿದ್ದಲಿಂಗಸ್ವಾಮಿ, ಸಿ.ಹೆಚ್.ಆರ್. ಕಾಂಪ್ಲೆಕ್ಸ್, ಸರ್ಕಾರಿ ಆಸ್ಪತ್ರೆ ಎದುರು, ಚಾಮರಾಜನಗರ, 9242265657

ಟಿ. ನರಸೀಪುರ – ಕುಮಾರ್, ಸಾರ್ವಜನಿಕ ಆಸ್ಪತ್ರೆ ರಸ್ತೆ, ಆರ್ಯ ಮಹಲ್ ಛತ್ರದ ಎದುರು, ಟಿ. ನರಸೀಪುರ. 9986719590

ಗುಂಡ್ಲುಪೇಟೆ – ಸೋಮಶೇಖರ್, ದ.ರಾ. ಬೇಂದ್ರೆ ನಗರ, ಅಶ್ವಿನಿ ಲೇಔಟ್,ಗುಂಡ್ಲುಪೇಟೆ. 9845995426

ಕೆ.ಆರ್. ನಗರ – ಕೆ.ಟಿ. ರಮೇಶ್, ಸ್ನೇಹ ಎಂಟರ್ ಪ್ರೈಸಸ್, ವಿ.ವಿ.ರಸ್ತೆ, ಕೆ.ಆರ್. ನಗರ. 9448021368

ಮಳವಳ್ಳಿ – ಶಿವಶಂಕರ, ನಂ.47, 1ನೇ ಕ್ರಾಸ್, ಎನ್.ಇ.ಎಸ್ ಮಳವಳ್ಳಿ ಟೌನ್–571430, 9632407806

ಕೊಳ್ಳೇಗಾಲ – ರಾಜು, ಮೈಸೂರು ಮಿತ್ರ ರಿಪೋರ್ಟರ್, #101, ಹುರಳಕೇರಿ ಬೀದಿ, ಕೊಳ್ಳೇಗಾಲ, 9916621007

ಹಾಸನ – ಆರ್.ಎನ್.ಸೋಮೇಶ್‌ಗೌಡ, ಹೋಲಿ ಚಿಲ್ಡ್ರನ್ ಶಾಲೆ ಹತ್ತಿರ, ಜಯನಗರ, 1ನೇ ಹಂತ, 2ನೇ ಕ್ರಾಸ್, ಹಾಸನ. 9448401175

ಕುಶಾಲನಗರ – ರಘು, ಮೈಸೂರು ಮಿತ್ರ ರಿಪೋರ್ಟರ್, ಮನು ಪ್ರೆಸ್, ಐ.ಬಿ.ರಸ್ತೆ, ಕುಶಾಲನಗರ, 9845698401

ಜಯಪುರ – ಬಿಳಿಗಿರಿ, ಜಯಪುರ, 9945479288

ಪಿರಿಯಾಪಟ್ಟಣ – ವೀರೇಶ್, ಪಿರಿಯಾಪಟ್ಟಣ, 8660057128

ವಿರಾಜಪೇಟೆ – ಮಂಜುನಾಥ, ವಿರಾಜಪೇಟೆ, 9900949353

ಕೆ.ಆರ್.ಪೇಟೆ – ಶ್ರೀನಿವಾಸ, ಅಗ್ರಹಾರ ಬಾಚಹಳ್ಳಿ, ಕೆ.ಆರ್.ಪೇಟೆ, 9449326847, 7022757438

ಹೆಚ್.ಡಿ.ಕೋಟೆ – ಮಂಜುನಾಥ ಎಸ್., ಹೆಚ್.ಡಿ.ಕೋಟೆ, 9483574452

ಕೆ.ಎಂ.ದೊಡ್ಡಿ – ಸತೀಶ್ ವಿ.ಎಲ್, ಕೆ.ಎಂ.ದೊಡ್ಡಿ, 9242120338

ನಂಜನಗೂಡು – ರಂಗಸ್ವಾಮಿ, ನಂ.4565, ಕಬಿನಿ ಕಾಲೋನಿ ಓಂಭಾಗ, ನೀಲಕಂಠ ನಗರ, ನಂಜನಗೂಡು ಟೌನ್–571301, 9901602226

ಹುಣಸೂರು – ಹೆಚ್.ಆರ್. ಕೃಷ್ಣಕುಮಾರ್ (ಜನ್ ರಾಮೇಗೌಡ), ನಂದಿನಿ ಮಾರಾಟ ಕೇಂದ್ರ, ಮಾರುತಿ ಪೆಟ್ರೋಲ್ ಬಂಕ್ ಹತ್ತಿರ, ಹಳೆಯ ಬಿ.ಎಂ. ರಸ್ತೆ ಹತ್ತಿರ, ಹುಣಸೂರು, 9060406093

ಕೊಳ್ಳೇಗಾಲ – ನಾಗೇಂದ್ರ ಸ್ವಾಮಿ, ನಂ.7ಎ, 684, 14 ನೇ ಕ್ರಾಸ್, ಬಸವೇಶ್ವರ ನಗರ, ಕೊಳ್ಳೇಗಾಲ, 9448576247, 7899849858



ಮೈಸೂರು ಮಿತ್ರ
ಬುಧವಾರ 27 ಮಾರ್ಚ್ 2024

ಕಾಂಗ್ರೆಸ್ ಅಲೆ ತಡೆಯಲು ಯಾರಿಂದಲೂ ಸಾಧ್ಯವಿಲ್ಲ

ಮದ್ದೂರು ಚುನಾವಣಾ ಪ್ರಚಾರದಲ್ಲಿ ಚಲುವರಾಯಸ್ವಾಮಿ ಪ್ರತಿಪಾದನೆ



ಮದ್ದೂರಿನಲ್ಲಿ ನಡೆದ ಕಾಂಗ್ರೆಸ್ ಕಾರ್ಯಕರ್ತರ ಸಭೆಯನ್ನು ಉದ್ಘಾಟಿಸುತ್ತಿರುವ ಚಲುವರಾಯಸ್ವಾಮಿ.

ಮದ್ದೂರು, ಮಾ.26– ಕಾಂಗ್ರೆಸ್ ಪಕ್ಷಕ್ಕೆ ನಾಮಪತ್ರ ಸಲ್ಲಿಕೆ ದಿನವೇ ಫಲಿತಾಂಶದ ಚಿತ್ರಣ ಸಿಗಬೇಕು. ಕಾಂಗ್ರೆಸ್ ಅಲೆ ತಡೆಯಲು ಯಾರಿಂದಲೂ ಸಾಧ್ಯವಿಲ್ಲ ಎಂಬುದನ್ನು ಜಿಲ್ಲೆಯ ಜನತೆ ರುಜುವಾತು ಮಾಡಬೇಕು. ಇಡೀ ರಾಷ್ಟ್ರದಲ್ಲೇ ಅತ್ಯುತ್ತಮ ಸರ್ಕಾರ ಇದೆ ಅಂದರೆ ಅದು ಕರ್ನಾಟಕದಲ್ಲಿನ ಕಾಂಗ್ರೆಸ್ ಸರ್ಕಾರ ಎಂದು ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಹೇಳಿದರು.

ಮಂಗಳವಾರ ಪಟ್ಟಣದಲ್ಲಿ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ವೆಂಕಟರಮಣೇಗೌಡ (ಸ್ಟಾರ್ ಚಂದ್ರು) ಪರವಾಗಿ ಆಯೋಜಿಸಿದ್ದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿ, ನಮ್ಮಲ್ಲಿ ಒಮ್ಮತದಿಂದ ಅಭ್ಯರ್ಥಿ ಆಯ್ಕೆ ಮಾಡಿದರೆ ಅವರು ಅಭ್ಯರ್ಥಿ ಆಯ್ಕೆಗೆ ಒಂದು ತಿಂಗಳಿಂದ ಡ್ರಾಮ ಮಾಡುತ್ತಿದ್ದಾರೆ. ರಾಮನಗರ, ಕನಕಪುರ, ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ ಆಯ್ತು. ಈಗ ಇಲ್ಲಿಗೆ ಬರ್ತಿದ್ದಾರೆ. ಮೂರು ಮುಖ್ಯಮಂತ್ರಿಗಳನ್ನು ಕೊಟ್ಟ ರಾಮನಗರ ಜಿಲ್ಲೆಯನ್ನು ಬಿಟ್ಟು ಇಲ್ಲಿಗೆ ಬರುತ್ತಿದ್ದಾರೆ. ಯಾರೇ ಬರಲಿ ನಮ್ಮ ಜಿಲ್ಲೆ ನಮ್ಮ ಹೆಮ್ಮೆಯನ್ನು ಮರೆಯಬೇಡಿ. ಹೊರಗಡೆಯಿಂದ ಬಂದವರು ಇಲ್ಲಿ ಓಡಾಡಿಲ್ಲ. ನಾಯಕತ್ವ ಮಂಡ್ಯದ್ದೇ ಇರಬೇಕು ಎಂದರು.

ತಾಲೂಕಿನಲ್ಲಿ ಜೆಡಿಎಸ್ ಸೋಲಿಸಲು ಸಾಧ್ಯವಿಲ್ಲ ಎಂದಿದ್ದರು. ಆದರೆ ತಾಲೂಕಿನ ಜನ 24 ಸಾವಿರ ಲೀಡ್‌ನಲ್ಲಿ ಕಾಂಗ್ರೆಸ್ ಅನ್ನು ಗೆಲ್ಲಿಸಿ ಉದಯ್ ಅವರನ್ನು ಶಾಸಕರನ್ನಾಗಿ ಆಯ್ಕೆ ಮಾಡಿದರು. ಲೋಕಸಭಾ ಚುನಾವಣೆಯಲ್ಲಿ ಸಹ ಇದೇ ರೀತಿ ಲೀಡ್‌ನಲ್ಲಿ ಕಾಂಗ್ರೆಸ್ ಅಭ್ಯರ್ಥಿ ವೆಂಕಟರಮಣೇಗೌಡ (ಸ್ಟಾರ್ ಚಂದ್ರು) ಅವರನ್ನು ಬಹುಮತಗಳಿಂದ ಗೆಲ್ಲಿಸಬೇಕು ಎಂದು ಮನವಿ ಮಾಡಿದರು.

ಕಳೆದ 10 ತಿಂಗಳಲ್ಲಿ 36 ಸಾವಿರ ಕೋಟಿ ರೂ.ಗಳಷ್ಟು ಹಣವನ್ನು ಎಲ್ಲರ ಮನೆಗೆ ತಲುಪಿಸಿದ್ದೇವೆ. ಪ್ರತಿ ಮನೆಗೆ ತಿಂಗಳಿಗೆ 4–5 ಸಾವಿರ ತಲುಪುತ್ತಿದೆ. ಬರದಿಂದ ಸಂಕಷ್ಟಕ್ಕೆ ಸಿಲುಕಿರುವ ರೈತರಿಗೆ ಇದು ಸಹಕಾರಿಯಾಗಲಿದೆ. ಗ್ಯಾರಂಟಿ ಯೋಜನೆಗಳಿಗಾಗಿ ಬಜೆಟ್‌ನಲ್ಲಿ 60 ಸಾವಿರ ಕೋಟಿ ರೂ. ಮೀಸಲಿಡಲಾಗಿದೆ. ಬರ ಪರಿಸ್ಥಿತಿಯಿದ್ದರೂ ಕೇಂದ್ರ ಸರ್ಕಾರ ಬಿಡಿಗಾಸನ್ನೂ ಬಿಡುಗಡೆ ಮಾಡಿಲ್ಲ. ಆದರೂ ನಮ್ಮ ಸರ್ಕಾರ 35 ಲಕ್ಷ ರೈತರಿಗೆ ಎರಡು ಸಾವಿರ ಹಣ ನೀಡಿದೆ ಎಂದರು.

ಸಭೆಯಲ್ಲಿ ಶಾಸಕರಾದ ಎ.ಬಿ.ರಮೇಶ್‌ಬಾಬು ಬಂಡಿಸಿದ್ದೇಗೌಡ, ಕೆ.ಎಂ.ಉದಯ್, ವಿಧಾನಪರಿಷತ್ ಸದಸ್ಯ ಮಧು ಜಿ.ಮಾದೇಗೌಡ, ಶಾಸಕ ನರೇಂದ್ರಸ್ವಾಮಿ, ಕಾಂಗ್ರೆಸ್ ಅಭ್ಯರ್ಥಿ ವೆಂಕಟರಮಣೇಗೌಡ (ಸ್ಟಾರ್ ಚಂದ್ರು), ವಿಧಾನಪರಿಷತ್ ಸದಸ್ಯ ದಿನೇಶ್ ಗೂಳಿಗೌಡ, ವಿಧಾನಪರಿಷತ್ ಮಾಜಿ ಸದಸ್ಯ ಮರಿತಿಬ್ಬೇಗೌಡ, ಮಾಜಿ ಶಾಸಕರಾದ ಬಿ.ರಾಮಕೃಷ್ಣ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸಿ.ಡಿ.ಗಂಗಾಧರ್, ಕಾರ್ಯಾಧ್ಯಕ್ಷ ಎಂ.ಎಸ್.ಚಿದಂಬರ್, ಕೆಎಂಎಫ್ ನಿರ್ದೇಶಕ ಹರೀಶ್‌ಬಾಬು, ಮುಖಂಡರಾದ ಅಂಜನಾ ಶ್ರೀಕಾಂತ್, ಬಸವರಾಜ್, ರಾಜೀವ್ ಸೇರಿದಂತೆ ಹಲವು ಮಂದಿ ಉಪಸ್ಥಿತರಿದ್ದರು.

ಚೆಲುವನಾರಾಯಣಸ್ವಾಮಿಗೆ ವೈರಮುಡಿ ಬ್ರಹ್ಮೋತ್ಸವ ತೀರ್ಥಸ್ನಾನ





ವೈರಮುಡಿ ಬ್ರಹ್ಮೋತ್ಸವ ತೀರ್ಥಸ್ನಾನದ ಪ್ರಯುಕ್ತ ಸೇರಿದ್ದ ಅಪಾರ ಭಕ್ತರು.

ಮೇಲುಕೋಟೆ, ಮಾ.26– ಶ್ರೀನಾರಾಯಣ ಸ್ವಾಮಿ ಭೂಲೋಕಕ್ಕೆ ಅವಿರ್ಭವಿಸಿದ ಜಯಂತ್ಯುತ್ಸವ ಪವಿತ್ರ ದಿನವಾದ ಮೀನ ಮಾಸದ ಹಸ್ತ ನಕ್ಷತ್ರದ ಮಂಗಳವಾರ ಚೆಲುವನಾರಾಯಣಸ್ವಾಮಿಗೆ ವೈರಮುಡಿ ಬ್ರಹ್ಮೋತ್ಸವದ ತೀರ್ಥಸ್ನಾನ ಮಹೋತ್ಸವ ಶ್ರದ್ಧಾಭಕ್ತಿಂದ ನೆರವೇರಿತು.

ಸ್ನಪನ ಶೆಲ್ವರಿಗೆ ನಾಡಿನ ಸುಭೀಕ್ಷತೆಗಾಗಿ ಮಂಗಳವಾದ್ಯ ಮತ್ತು ವೇದಮಂತ್ರದೊಂದಿಗೆ ಅಭಿಷೇಕ ನೆರವೇರಿಸಲಾಯಿತು. ಇದೇ ವೇಳೆ ಕಲ್ಯಾಣಿ ತಾಯಿಗೆ ಪೂಜೆ ನೆರವೇರಿಸಿ ಸ್ನಪರಶೆಲ್ವರನ್ನು ಕಲ್ಯಾಣಿಗೆ ಕೊಂಡೊಯ್ದು ತೀರ್ಥಸ್ನಾನ ನೆರವೇರಿಸಲಾಯಿತು. ಕಲ್ಯಾಣಿಯ ನಾಲ್ಕೂ ಕಡೆ ಸಹಸ್ರಾರು ಸಂಖ್ಯೆಯಲ್ಲಿ ಸೇರಿದ್ದ ಸಾವಿರಾರು ಭಕ್ತರು ಕಲ್ಯಾಣಿಯಲ್ಲಿ ಪವಿತ್ರ ಸ್ನಾನ ಮಾಡಿದರು. ಬೆಳಗ್ಗೆ ತಂಗಳನ್ನದ ಮಂಟಪಕ್ಕೆ ಚೆಲುವನಾರಾಯಣಸ್ವಾಮಿಯ ಉತ್ಸವ ನಡೆದ ನಂತರ ದೇವಾಲಯದ ಅಮ್ಮನವರ ಸನ್ನಿಧಿಯಲ್ಲಿ ಸಂಧಾನ ಸೇವೆ ನೆರವೇರಿತು. ಮಧ್ಯಾಹ್ನ 1 ಗಂಟೆ ವೇಳೆಗೆ ಸ್ವಾಮಿಯ ಉತ್ಸವ ಕಲ್ಯಾಣಿಗೆ ಸಾಗಿದ ನಂತರ ಅಲ್ಲಿ ತೀರ್ಥಸ್ನಾನದ ಪ್ರಕ್ರಿಯೆಗಳು ಆರಂಭವಾಗಿ 2.45ರ ವೇಳೆಗೆ ಮುಕ್ತಾಯವಾದವು.

ಬೆಳಗ್ಗೆ ಐದು ಗಂಟೆಯಿಂದಲೇ ಕಾರ್ಯಪ್ರವೃತ್ತರಾಗಿದ್ದ ಇನ್ಸ್‌ಪೆಕ್ಟರ್ ಸಿದ್ದಪ್ಪ ಮತ್ತು ಸುಮಾರಾಣಿ ನೇತೃತ್ವದ ಮೇಲುಕೋಟೆ ಪೊಲೀಸರ ತಂಡ ತೀರ್ಥಸ್ನಾನವಾಗುವವರೆಗೆ ದೇವಾಲಯದ ಸಾಂಪ್ರದಾಯಿಕ ಪದ್ಧತಿಯಂತೆ ಕಲ್ಯಾಣಿಯ ಪವಿತ್ರ ತೀರ್ಥ ಸ್ಪರ್ಶಿಸದಂತೆ ಕಟ್ಟೆಚ್ಚರ ವಹಿಸಿ ಬಂದೋಬಸ್ತ್ ಮಾಡಿದ್ದರು.

ರಾಜಮುಡಿ ಕಿರೀಟಧಾರಣೆ ಮುಕ್ತಾಯ: ಸಂಜೆ ಪರಕಾಲ ಮಠದಲ್ಲಿ ಪಟ್ಟಾಭಿಷೇಕ ಮಹೋತ್ಸವದ ಕೈಂಕರ್ಯಗಳು ನೆರವೇರಿದವು. ಮಾ.21ರ ವೈರಮುಡಿ ಉತ್ಸವದ ರಾತ್ರಿಯಿಂದ ಚೆಲುವನಾರಾಯಣ ಸ್ವಾಮಿಯನ್ನು ಅಲಂಕರಿಸಿದ್ದ ಬ್ರಹ್ಮೋತ್ಸವದ ಕೊನೆಯ ಉತ್ಸವಾದ ಪಟ್ಟಾಭಿಷೇಕ ಉತ್ಸವದಲ್ಲಿ ಕೊನೆಯ ಭಾರಿ ಅಲಂಕರಿಸಿತ್ತು. ರಾಜಮುಡಿ ಮುಡಿ ಅಲಂಕಾರ ಮುಕ್ತಾಯವಾಗುತ್ತಿದ್ದಂತೆ ಸ್ವಾಮಿಗೆ ಸಮರಭೂಪಾಲ ವಾಹನೋತ್ಸವ ವೈಭವದಿಂದ ನೆರವೇರಿತು.

ಇಂದು ಕಾರ್ಕಹಳ್ಳಿಯಲ್ಲಿ ಜಾತ್ರಾ ಮಹೋತ್ಸವ

ಭಾರತೀನಗರ, ಮಾ.26– ಐತಿಹಾಸಿಕ ಹಿನ್ನೆಲೆ ಹೊಂದಿರುವ ಕಾರ್ಕಹಳ್ಳಿ ಶ್ರೀ ಬಸವೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಮಾ.27 ರಂದು ರಥೋತ್ಸವ ವಿಜೃಂಭಣೆಯಿಂದ ಜರುಗಲಿದೆ.

ಪುರಾತನ ಕಾಲದಿಂದಲೂ ಇರುವ ಈ ದೇವಸ್ಥಾನದಲ್ಲಿ ಪ್ರತೀ ವರ್ಷವೂ ಜಾತ್ರಾ ಮಹೋತ್ಸವವವನ್ನು ನಡೆಸಲಾಗುತ್ತಿದ್ದು, ಹಲವು ವರ್ಷಗಳ ಹಿಂದೆ ಹಬ್ಬ ನಡೆಯುವ ವಿಚಾರದಲ್ಲಿ ಎರಡು ಗುಂಪುಗಳ ನಡುವೆ ಭಿನ್ನಾಭಿಪ್ರಾಯ ಉಂಟಾಗಿ ಪೊಲೀಸ್ ಠಾಣೆ ಮೆಟ್ಟಿಲೇರಿತ್ತು. ಕಾಲಕ್ರಮೇಣ ಉಭಯ ಗುಂಪುಗಳನ್ನು ತಾಲೂಕು ಆಡಳಿತ ಹಾಗೂ ಪೊಲೀಸರು ಒಂದೆಡೆ ಸೇರಿಸಿ ಯಾವುದೇ ಗೊಂದಲಗಳಿಲ್ಲದೆ ಶಾಂತ ರೀತಿಯಲ್ಲಿ ಹಬ್ಬ ಆಚರಿಸಿಕೊಂಡು ಬರುವಂತೆ ತಾಕೀತು ಮಾಡಿದ್ದು. ಈ ಹಬ್ಬ ಆಚರಿಸಲು ತಾಲೂಕು ಆಡಳಿತದಿಂದ ಶ್ರೀ ಬಸವೇಶ್ವರ ದೇವಾಲಯ ಆವರಣದಲ್ಲಿ ಪೂರ್ವಭಾವಿ ಸಭೆ ನಡೆಸಿದಾಗ 2 ಗುಂಪುಗಳ ಮುಖಂಡರು ಒಪ್ಪಿಗೆ ಸೂಚಿಸಿದ ಮೇರೆಗೆ ಹಬ್ಬವನ್ನು ನಿಗದಿ ಪಡಿಸಿದ್ದರಿಂದ ಪೂಜಾ ವಿಧಿವಿಧಾನಗಳಿಗೆ ಅಣಿಯಾಗಿದೆ. ಈ ಹಿನ್ನೆಲೆಯಲ್ಲಿ ದೇವಸ್ಥಾನವನ್ನು ಹೂಗಳಿಂದ ಶೃಂಗಾರಗೊಳಿಸಲಾಗಿದೆ.

ಚೆಕ್‌ಪೋಸ್ಟ್ ಪರಿಶೀಲನೆ



ಮಂಡ್ಯ, ಮಾ.26– ಲೋಕಸಭಾ ಸಾರ್ವತ್ರಿಕ ಚುನಾವಣೆಯ ಅಂಗವಾಗಿ ಸ್ಥಾಪಿತವಾಗಿರುವ ಚೆಕ್‌ಪೋಸ್ಟ್‌ಗಳನ್ನು ಜಿಲ್ಲಾಧಿಕಾರಿ ಡಾ. ಕುಮಾರ ಮಂಗಳವಾರ ಪರಿಶೀಲನೆ ನಡೆಸಿದರು. ಶ್ರೀರಂಗಪಟ್ಟಣ ತಾಲೂಕಿನ ಗೆಂಡೆ ಹೊಸಹಳ್ಳಿ ಬಳಿ ಸ್ಥಾಪಿತವಾಗಿರುವ ಚೆಕ್ ಪೋಸ್ಟ್‌ಗಳಲ್ಲಿ ಸಿಬ್ಬಂದಿಗಳ ನಿಯೋಜನೆ, ಸಿಸಿ ಕ್ಯಾಮರಾ, ವಾಹನಗಳ ತಪಾಸಣೆ ಕುರಿತು ಮಾಹಿತಿ ಪಡೆದುಕೊಂಡರು.

ಕಿಕ್ಕೇರಿ ಬಳಿ ಸ್ಮಶಾನ ಜಾಗ ಒತ್ತುವರಿ, ಅಂತ್ಯಸಂಸ್ಕಾರಕ್ಕೆ ಅಡ್ಡಿ

ಪೊಲೀಸರು, ಅಧಿಕಾರಿಗಳ ಮಧ್ಯಪ್ರವೇಶದಿಂದ ಅಂತ್ಯಸಂಸ್ಕಾರ



ಕಿಕ್ಕೇರಿ ಹೋಬಳಿಯ ರಾಮನಹಳ್ಳಿಯಲ್ಲಿ ಸರ್ಕಾರಿ ಸ್ಮಶಾನ ಜಾಗದಲ್ಲಿ ಮಂಗಳವಾರ ಮೃತ ಮಂಜುನಾಥ್ ಶವ ಅಂತ್ಯಕ್ರಿಯೆ ಮಾಡಲು ಅಡ್ಡಿಪಡಿಸುತ್ತಿದ್ದ ಒತ್ತುವರಿದಾರರಿಗೆ ಕಂದಾಯ ಇಲಾಖೆ, ಪೊಲೀಸರು ತಿಳಿ ಹೇಳಿ ಅಂತ್ಯಕ್ರಿಯೆ ಮಾಡಲಾಯಿತು.

ಕಿಕ್ಕೇರಿ, ಮಾ.26– ಹೋಬಳಿಯ ರಾಮನಹಳ್ಳಿ ಗ್ರಾಮದಲ್ಲಿರುವ ಸರ್ಕಾರಿ ಸ್ಮಶಾನ ಜಾಗದಲ್ಲಿ ಶವ ಸಂಸ್ಕಾರ ಮಾಡಲು ಒತ್ತುವರಿದಾರ ಅಡ್ಡಿಪಡಿಸಿದ ವಿಲಕ್ಷಣ ಘಟನೆ ಮಂಗಳವಾರ ಜರುಗಿದೆ.

ಮಂಗಳವಾರ ಗ್ರಾಮದ ಮಂಜುನಾಥ್(65) ಅನಾರೋಗ್ಯದಿಂದ ಮೃತರಾಗಿದ್ದರು. ಈ ಕುಟುಂಬದವರಿಗೆ ಯಾವುದೇ ಜಮೀನು ಇಲ್ಲದೆ ಸುಮಾರು 20 ವರ್ಷಗಳ ಹಿಂದೆ ಗ್ರಾಮದಲ್ಲಿ ನೆಲೆಸಿ ಕೂಲಿ ಮಾಡಿಕೊಂಡಿದ್ದರು. ಮನೆ ವಾರಸುದಾರನಿಲ್ಲದೆ ನೋವು, ಮತ್ತೊಂದೆಡೆ ಶವ ಸಂಸ್ಕಾರಕ್ಕೆ ಜಾಗವಿಲ್ಲ ಎಂದು ಗೋಳಾಡುತ್ತಿದ್ದರು. ಅಂತಿಮವಾಗಿ ಗ್ರಾಮದಲ್ಲಿ ಸುಮಾರು ಎರಡು ಎಕರೆ ಸರ್ಕಾರಿ ಸ್ಮಶಾನ ಜಾಗವಿರುವುದನ್ನು ಗ್ರಾಮ ಮುಖಂಡರು, ಹಿರಿಯರು ತಿಳಿಸಿದರು. ಅದರಂತೆ ಮೃತ ಕುಟುಂಬದವರು ಗ್ರಾಮಸ್ಥರ ಸಹಕಾರದೊಂದಿಗೆ ಮೃತ ಮಂಜುನಾಥ್ ದೇಹವನ್ನು ಸರ್ಕಾರಿ ಜಾಗಕ್ಕೆ ವಾಹನದಲ್ಲಿ ತೆಗೆದುಕೊಂಡು ಹೋಗಲಾಗಿದೆ. ಈ ವೇಳೆಯಲ್ಲಿ ಸ್ಮಶಾನ ಇರುವ ಜಾಗವನ್ನು ಒತ್ತುವರಿ ಮಾಡಿಕೊಂಡಿರುವ ಒತ್ತುವರಿದಾರರು ಗಲಾಟೆ ಮಾಡಬಹುದು ಎಂದು ಮುಂಜಾಗ್ರತೆಯಾಗಿ ಕಿಕ್ಕೇರಿಯ ನಾಡಕಚೇರಿ ಅಧಿಕಾರಿಗಳಿಗೆ, ಕಿಕ್ಕೇರಿ ಪೊಲೀಸರಿಗೆ ತಿಳಿಸಲಾಗಿತ್ತು.

ಸ್ಮಶಾನದ ಜಾಗಕ್ಕೆ ಶವವನ್ನು ಮೃತ ಕುಟುಂಬದವರು ತೆಗೆದುಕೊಂಡು ಹೋಗಿದ್ದಾಗ ಸ್ಮಶಾನ ಜಾಗ ಒತ್ತುವರಿ ಮಾಡಿಕೊಂಡಿರುವ ವ್ಯಕ್ತಿ ತಮ್ಮದು ಜಾಗ ಎಂದು ತೀವ್ರ ಗಲಾಟೆ ಮಾಡಲು ಆರಂಭಿಸಿದರು. ತಮಗೆ ಈ ಜಾಗ ಕಂದಾಯ ಇಲಾಖೆಯಿಂದ ದುರಸ್ತಿಯಾಗಿದೆ. ತಾವು ಅನುಭವದಾರರಾಗಿದ್ದು, ಈ ಜಾಗದಲ್ಲಿ ಶವ ಊಳಲು ಬಿಡುವುದಿಲ್ಲ. ತೆಂಗು, ಕಬ್ಬು ಬೆಳೆದಿರುವುದು ಕಾಣುವುದಿಲ್ಲವೇ ಎಂದು ಜೋರಾಗಿ ಗಲಾಟೆ ಮಾಡಲು ಮುಂದಾದರು.

ಗಲಾಟೆ ನಡುವೆ ಸ್ಥಳಕ್ಕೆ ಆಗಮಿಸಿದ್ದ ಕಂದಾಯ ಇಲಾಖೆಯವರು ಸ್ಮಶಾನ ಜಾಗವನ್ನು ಸರ್ವೆ ಮಾಡಲು ಮುಂದಾದರು. ಸ್ಮಶಾನ ಜಾಗವನ್ನು ಒತ್ತುವರಿ ಮಾಡಿರುವುದು ಕಂಡು ಬಂದಿದೆ. ತೊಂದರೆ ನೀಡಿದರೆ ಕಾನೂನು ಕ್ರಮ ಜರುಗಿಸಬೇಕಾಗಲಿದೆ ಎಂದು ಒತ್ತುವರಿದಾರರಿಗೆ ತಿಳುವಳಿಕೆ ಹೇಳಿದರು. ಒತ್ತುವರಿದಾರರು ಅಧಿಕಾರಿಗಳ ಮಾತಿಗೆ ಜಗ್ಗದಿರುವುದನ್ನು ಕಂಡು ಪೊಲೀಸರು ಮಧ್ಯಪ್ರವೇಶಿಸಿದರು. ಸರ್ಕಾರಿ ಜಾಗ ಅತಿಕ್ರಮಣ ಮಾಡಿಕೊಂಡು ಗಲಾಟೆ ಮಾಡುತ್ತಿರುವುದು ಸರಿಯಲ್ಲ. ಶವ ಸಂಸ್ಕಾರಕ್ಕೆ ಅಡ್ಡಿಪಡಿಸಿದರೆ ಕಾನೂನು ಕ್ರಮ ತೆಗೆದುಕೊಳ್ಳಬೇಕಾಗುತ್ತದೆ ಎಂದು ಎಚ್ಚರಿಸಿದರು.

ಅಂತಿಮವಾಗಿ ಪೊಲೀಸರ ರಕ್ಷಣೆಯಲ್ಲಿ ಮೃತ ಮಂಜುನಾಥ್ ದೇಹವನ್ನು ಗ್ರಾಮಸ್ಥರ ಸಮ್ಮುಖದಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಯಿತು. ಕಂದಾಯ ಇಲಾಖೆ ರಾಜಸ್ವ ನಿರೀಕ್ಷಕ ಗೋಪಾಲಕೃಷ್ಣ, ಗ್ರಾಮ ಆಡಳಿತಾಧಿಕಾರಿ ಸುನಿಲ್ ಗಾಣಿಗೇರ, ಕಿಕ್ಕೇರಿ ಪೊಲೀಸರು ಹಾಜರಿದ್ದರು.

ಕಾರು ಬೈಕು ಡಿಕ್ಕಿ: ಬೈಕ್ ಸವಾರ ಸಾವು

ಶ್ರೀರಂಗಪಟ್ಟಣ, ಮಾ.26– ಕಾರು ಡಿಕ್ಕಿ ಹೊಡೆದ ಪರಿಣಾಮ ಬೈಕ್ ಸವಾರ ಸಾವನ್ನಪ್ಪಿರುವ ಘಟನೆ ತಾಲೂಕಿನ ಚಿನ್ನಾಯಕನಹಳ್ಳಿ ಗ್ರಾಮದ ಬಳಿ ನಡೆದಿದೆ.

ಗಂಜಾಂ ಗ್ರಾಮದ ಮರಿಸ್ವಾಮಿ(72) ಮೃತಪಟ್ಟವರು. ಬನ್ನೂರು– ಶ್ರೀರಂಗಪಟ್ಟಣ ಮಾರ್ಗದ ಚಿನ್ನಾಯಕನಹಳ್ಳಿ ಗ್ರಾಮದ ಬಳಿಯಲ್ಲಿರುವ ಪೆಟ್ರೋಲ್ ಬಂಕ್‌ನಲ್ಲಿ ಬೈಕಿಗೆ ಪೆಟ್ರೋಲ್ ಹಾಕಿಸಿಕೊಂಡು ಗಂಜಾಂಗೆ ಹೋಗಲು ರಸ್ತೆ ಬಳಿ ಬಂದ ವೇಳೆ ಶ್ರೀರಂಗಪಟ್ಟಣದಿಂದ ಬನ್ನೂರಿಗೆ ಹೋಗುತ್ತಿದ್ದ ಕಾರು ಬೈಕಿಗೆ ಡಿಕ್ಕಿ ಹೊಡೆದ ಪರಿಣಾಮ ಮರಿಸ್ವಾಮಿ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಸ್ಥಳಕ್ಕೆ ಶ್ರೀರಂಗಪಟ್ಟಣ ಗ್ರಾಮಾಂತರ ಪೊಲೀಸ್ ಠಾಣೆಯ ಸಿಪಿಐ ಬಿ.ಜಿ.ಕುಮಾರ್ ಇತರ ಪೊಲೀಸರ ತಂಡ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿ ಶವವನ್ನು ಸಾರ್ವಜನಿಕ ಆಸ್ಪತ್ರೆಗೆ ಸಾಗಿಸಿ, ಪಂಚನಾಮೆ ನಡೆಸಿ ವಾರಸುದಾರರಿಗೆ ನೀಡಿದ್ದಾರೆ. ಈ ಕುರಿತು ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ.

ಮೂರನೇ ಪುಟದಿಂದ

ಎನ್‌ಡಿಎ ಅಭ್ಯರ್ಥಿ ಹೆಚ್.ಡಿ.ಕುಮಾರಸ್ವಾಮಿ

ನರೇಂದ್ರ ಮೋದಿ ಅವರು ಮತ್ತೆ ಪ್ರಧಾನಿ ಆಗಲು ಕರ್ನಾಟಕದಿಂದ 28 ಮಂದಿ ಮೈತ್ರಿ ಅಭ್ಯರ್ಥಿಗಳನ್ನು ಕೊಡುಗೆಯಾಗಿ ನೀಡಬೇಕು. ನಿಮ್ಮಲ್ಲಿ ಯಾವುದೇ ವೈಮನಸ್ಸು ಇದ್ದರೂ ಅದನ್ನು ದೂರವಿಟ್ಟು ಎನ್‌ಡಿಎ ಅಭ್ಯರ್ಥಿ ಪರ ಕೆಲಸ ಮಾಡುವಂತೆ ಆದೇಶಿಸಿದರು. ಒಂದೆರಡು ದಿನದಲ್ಲೇ ಕ್ಷೇತ್ರದ ಸಂಸದೆ ಸುಮಲತಾ ಅವರನ್ನೂ ಭೇಟಿ ಮಾಡಿ ಮಾತನಾಡುವುದಾಗಿ ತಿಳಿಸಿದರು. ಜೆಡಿಎಸ್ ಸಭೆ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಕುಮಾರಸ್ವಾಮಿ, ಪಕ್ಷದ ಉಳಿವಿಗಾಗಿ ನಾನು ಕೆಲವು ಕಠಿಣ ತೀರ್ಮಾನ ಕೈಗೊಳ್ಳಬೇಕಾಗಿದೆ. ಹಳೇ ಮೈಸೂರು ಭಾಗದಲ್ಲಿ ಜೆಡಿಎಸ್ ಮುಗಿಸಿದ್ದೇವೆ ಎಂದು ಕಾಂಗ್ರೆಸ್‌ನವರು ದಿನನಿತ್ಯ ಭಜನೆ ಮಾಡುತ್ತಿದ್ದಾರೆ, ನಮ್ಮ ಪಕ್ಷವನ್ನು ಯಾರಿಂದಲೂ ಮುಗಿಸಲು ಸಾಧ್ಯವಿಲ್ಲ. ಇವರಿಗೆ ಉತ್ತರ ಕೊಡುವ ಮತ್ತು ಪಕ್ಷವನ್ನು ಗಟ್ಟಿಗೊಳಿಸುವ, ಮೋದಿ ಅವರ ಕೈಬಲಪಡಿಸುವ ಉದ್ದೇಶದಿಂದಲೇ ನಾನು, ಮಂಡ್ಯ ಕಾರ್ಯಕರ್ತರ ಒತ್ತಡಕ್ಕೆ ತಲೆ ಬಾಗಿದ್ದೇನೆ. ಹೀಗೆಂದ ತಕ್ಷಣ ನನ್ನ ರಾಜಕೀಯ ಕರ್ಮಭೂಮಿ ರಾಮನಗರ ಜಿಲ್ಲೆಯನ್ನು ಬಿಡುವ ಮಾತೇ ಇಲ್ಲ. ನಾನು ಈ ಜಿಲ್ಲೆಗೆ ಬರುವುದಕ್ಕೂ ಮುನ್ನ ಹಾಗೂ ಬಂದ ನಂತರ ಯಾವ ರೀತಿ ಅಭಿವೃದ್ಧಿ ಆಗಿದೆ ಎಂಬ ಚಿತ್ರಣ ಕಣ್ಣ ಮುಂದಿದೆ, ನಾನು ಅಲ್ಲಿದ್ದರೂ, ಇದೇ ನನ್ನ ಕ್ಷೇತ್ರ. ಕಳೆದ 15 ವರ್ಷಗಳಲ್ಲಿ ಮೂರು ಬಾರಿ ನನಗೆ ಹೃದಯ ಶಸ್ತ್ರಚಿಕಿತ್ಸೆ, ಮೆದುಳಿಗೆ ಆಘಾತವನ್ನು ಎದುರಿಸಿದರೂ ದೇವರು ನನಗೆ ರಾಜ್ಯದ ಸೇವೆ ಮಾಡಲೆಂದು ದೀರ್ಘಾಯುಸ್ಸು ನೀಡಿದ್ದಾರೆ. ನಾನು, ನನ್ನ ಕಾರ್ಯಕರ್ತರನ್ನು ಕೈಬಿಡುವುದಿಲ್ಲ. ಸೇವೆ ಮಾಡುವ ಉದ್ದೇಶದಿಂದ ಚುನಾವಣಾ ಕಣಕ್ಕಿಳಿಯುತ್ತಿದ್ದೇನೆ. ಇದಕ್ಕೆ ರಾಮನಗರದ ಜನತೆ ಅನ್ಯಥಾ ಭಾವಿಸುವುದು ಬೇಡ ಎಂದು ಮನವಿ ಮಾಡಿಕೊಂಡಿದ್ದಾರೆ.

ಕಳೆದ ಚುನಾವಣೆಯಲ್ಲಿ ನಿಂದನೆ; ಈಗ ವಂದನೆ!

ಚುನಾವಣಾ ದಿಕ್ಸೂಚಿ ಎಂದರು. ಬೆಂಗಳೂರಲ್ಲಿ ಬಿಜೆಪಿ, ರಾಮನಗರದಲ್ಲಿ ಜೆಡಿಎಸ್ ಸ್ಟ್ರಾಂಗ್ ಎಂದು ವಕೀಲರನ್ನು ಕಣಕ್ಕಿಳಿಸಿದರು. ಆದರೆ ಗೆದ್ದಿದ್ದು ಕಾಂಗ್ರೆಸ್ ಅಭ್ಯರ್ಥಿ ಎಂದರು. ನಾನು ಯಾವತ್ತು ಅವರನ್ನು ವೈರಿಗಳು ಅಂತ ಕರೆಯಲ್ಲ. ಅವರು ಬೇಕಾದರೆ ಕರೆಯಲಿ. ನನಗೆ ಕುಮಾರಸ್ವಾಮಿ ಬಗ್ಗೆ ಪ್ರೀತಿ ಇದೆ, ದೇವೇಗೌಡರ ಮೇಲೆ ಗೌರವವಿದೆ. ಆದರೆ ದುರಂತ ಅಂದರೆ ಹೋದ ಕಡೆಯಲ್ಲೆಲ್ಲ ಇದು ನನ್ನ ಕರ್ಮಭೂಮಿ ಅನ್ನೋದು. ಒಳ್ಳೆಯದಲ್ಲ ಎಂದು ಹೇಳಿದರು. ನನಗೂ ಹಲವರು ಕ್ಷೇತ್ರ ಬದಲಿಸುವಂತೆ ಸಲಹೆ ನೀಡಿದರು. ಆದರೆ ನಾನು ಹುಟ್ಟಿ ಬೆಳೆದ ಊರನ್ನು ಬಿಡಲ್ಲ ಅಂದೆ. ಆದರೆ ಅವರು ಕನಕಪುರ, ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ರಾಮನಗರ ಜಿಲ್ಲೆ ಬಿಟ್ಟು ಈಗ ಮಂಡ್ಯದ ಕಡೆ ಕಾಲಾಕುತ್ತಿದ್ದಾರೆ. ನಮ್ಮ ಜಿಲ್ಲೆಯನ್ನು ಬಿಟ್ಟುಬಿಡಿ. ಏನೋ ಒಂದಷ್ಟು ಜನಸೇವೆ ಮಾಡಬೇಕೆಂದಿದ್ದೀವಿ ಎಂದರು. ಪ್ರಧಾನಮಂತ್ರಿ ಮಾಡಿದಾಗ ಥ್ಯಾಂಕ್ಸ್ ಹೇಳಲಿಲ್ಲ. ಮುಖ್ಯಮಂತ್ರಿ ಮಾಡಿದಾಗ ಧನ್ಯವಾದ ಹೇಳಲಿಲ್ಲ. ನೀವು ಅವರಿಗೆ ಬುದ್ಧಿ ಕಲಿಸಲಿಲ್ಲ, ನಾವು ಬುದ್ಧಿ ಕಲಿಸ್ತೀವಿ ಅಂತ ಬಿಜೆಪಿಯವರು ಹೇಳುತ್ತಿದ್ದಾರೆ. ಜಿಲ್ಲೆಯ ಅಭಿವೃದ್ಧಿ, ರೈತರ ಪ್ರಗತಿಗಾಗಿ ರೈತ ಕುಟುಂಬದಿಂದ ಬಂದವರನ್ನು ಅಭ್ಯರ್ಥಿಯಾಗಿ ಕಣಕ್ಕಿಳಿಸಿದ್ದೇವೆ. ಅವರನ್ನು ಗೆಲ್ಲಿಸಬೇಕೆಂದು ಮನವಿ ಮಾಡಿದರು.

ಶಾಸಕ ಗಣಿಗ ರವಿಕುಮಾರ್ ಮಾತನಾಡಿ, ಕುಮಾರಸ್ವಾಮಿ ಅಭ್ಯರ್ಥಿ ಅಂತ ಗೊತ್ತಾಗುತ್ತಿದ್ದಂತೆ ಜೆಡಿಎಸ್, ಬಿಜೆಪಿಯ ನೂರಾರು ಮುಖಂಡರು ಸಾಗರೋಪಾದಿಯಲ್ಲಿ ಕಾಂಗ್ರೆಸ್ ಸೇರಲು ಬರುತ್ತಿದ್ದಾರೆ. ಮುಂದಿನ ದಿನಗಳಲ್ಲಿ ಅಲ್ಲಿಂದ ಪ್ರವಾಹದಂತೆ ಕಾಂಗ್ರೆಸ್ ಕಡೆ ಬರಲಿದ್ದಾರೆ. ಸುಳ್ಳು ಮತ್ತು ಅಭಿವೃದ್ಧಿ ಮೇಲೆ ಈ ಚುನಾವಣೆ. ಸತ್ಯ, ಅಭಿವೃದ್ಧಿ ಬೇಕಿದ್ದರೆ ಕಾಂಗ್ರೆಸ್ ಬೆಂಬಲಿಸಿ. ಕಣ್ಣೀರಾಕಿ ವೋಟ್ ಕೇಳುವವರಿಗೆ ಕಿವಿಗೊಡಬೇಡಿ ಎಂದರು. ಸಭೆಯಲ್ಲಿ ಶಾಸಕರಾದ ರಮೇಶ್‌ಬಾಬು ಬಂಡಿಸಿದ್ದೇಗೌಡ, ಪಿ.ಎಂ.ನರೇಂದ್ರಸ್ವಾಮಿ, ವಿಧಾನಪರಿಷತ್ ಸದಸ್ಯ ದಿನೇಶ್ ಗೂಳಿಗೌಡ, ಮಾಜಿ ಶಾಸಕರಾದ ಹೆಚ್.ಬಿ.ರಾಮು, ಮರಿತಿಬ್ಬೇಗೌಡ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸಿ.ಡಿ.ಗಂಗಾಧರ್, ಮಾಜಿ ಸಚಿವ ಎಂ.ಎಸ್.ಆತ್ಮಾನಂದ, ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಅಂಜನಾ ಶ್ರೀಕಾಂತ್, ಜಿಲ್ಲಾ ಕಾಂಗ್ರೆಸ್ ಕಾರ್ಯದರ್ಶಿ ಚಿದಂಬರ್, ಕಾರ್ಯಾಧ್ಯಕ್ಷ ಎಂ.ಎಸ್.ಚಿದಂಬರ್, ಮುಖಂಡರಾದ ದಡದಪುರ ಶಿವಣ್ಣ, ತ್ಯಾಗರಾಜು, ಯೋಗೇಶ್, ರಾಧಾಕೃಷ್ಣ, ಶಿವಪ್ಪ ಉಪಸ್ಥಿತರಿದ್ದರು.

ಮೋದಿ ಪ್ರೇರಣೆಯಿಂದ ರಾಜಕೀಯಕ್ಕೆ ಬಂದಿದ್ದೇನೆ...

ಬಂದಿತು. ಮಹಾರಾಜರು ಯಾವ ಕಾರಣಕ್ಕೆ ರಾಜ ಕೀಯಕ್ಕೆ ಬಂದಿದ್ದಾರೆ ಎಂದು ಕೆಲವರು ಪ್ರಶ್ನಿಸತೊಡಗಿದರು. ಆದರೆ ಏನೇ ಸಂಕಷ್ಟ ಇದ್ದರೂ ದೇಶಕ್ಕಾಗಿ ಸಹಿಸಿಕೊಳ್ಳಲೇಬೇಕು. ಈ ಮೂಲಕ ನರೇಂದ್ರ ಮೋದಿ ಅವರ ವಿಕಸಿತ ಭಾರತ ಪರಿಕಲ್ಪನೆಯಲ್ಲಿ ದೇಶ ವನ್ನು ಪ್ರಗತಿ ಪಥದತ್ತ ಕೊಂಡೊಯ್ಯಲು ನಾವೆಲ್ಲಾ ಒತ್ತಾಸೆಯಾಗಿ ನಿಲ್ಲಬೇಕು ಎಂದು ಯದುವೀರ್ ಸಲಹೆ ನೀಡಿದರು.

ನಾನು ಅಭ್ಯರ್ಥಿಯಾಗಿ ಘೋಷಣೆಯಾದ ಸಂದರ್ಭದಲ್ಲಿ ಸಮಸ್ಯೆ ಹೊತ್ತು ಅರಮನೆಗೆ ಹೇಗೆ ಹೋಗುವುದು ಎಂಬ ಪ್ರಶ್ನೆ ಜನರಲ್ಲಿತ್ತು. ಆದರೆ ಈಗ ಮತ್ತೊಮ್ಮೆ ಸ್ಪಷ್ಟಪಡಿಸುತ್ತೇನೆ. ಅರಮನೆಯಿಂದ ಹೊರಗೆ ಕಚೇರಿ ತೆರೆಯುತ್ತೇನೆ. ಯಾವಾಗಲೂ ನಾನು ನಿಮ್ಮ ಜೊತೆ ಇರುತ್ತೇನೆ. ಅದನ್ನು ನಿಮ್ಮ ಕಚೇರಿ ಎಂದು ಭಾವಿಸಿ. ಜನರ ಸಮಸ್ಯೆ ಏನೇ ಇದ್ದರೂ ಪರಿಹಾರ ಮಾಡುತ್ತೇನೆ ಎಂದು ಭರವಸೆ ನೀಡಿದರು.

ಇಲ್ಲಿ ಹಿಂದುಳಿದ ವರ್ಗಗಳ ಸಮಾವೇಶ ನಡೆಯುತ್ತಿದೆ. ಅರಸು ಜನಾಂಗದವರು ಕೂಡ ಹಿಂದುಳಿದ ವರ್ಗಕ್ಕೆ ಸೇರಿದ್ದಾರೆ. ನಿಮ್ಮ ದನಿ ನನ್ನ ದನಿಯಾಗಲಿದ್ದು, ನನ್ನ ಗೆಲುವು ನಿಮಗೆ ಶಕ್ತಿ ಕೊಡುತ್ತದೆ. ನಿಮ್ಮ ಎಲ್ಲಾ ರೀತಿಯ ಕಷ್ಟಗಳಿಗೆ ನಾನು ಸ್ಪಂದಿಸುತ್ತೇನೆ. ನಿಮ್ಮ ಪರವಾಗಿ ಕೆಲಸ ಮಾಡುವುದು ನನ್ನ ಸೌಭಾಗ್ಯ ಎಂದು ಯದುವೀರ್ ಹೇಳಿದರು. ವಿಶ್ವಕರ್ಮ ಸೇರಿದಂತೆ ಬಹಳಷ್ಟು ಸಮುದಾಯದವರು ಆರ್ಥಿಕವಾಗಿ ಶಕ್ತಿವಂತರಾಗಲು ಬಿಜೆಪಿ ಸರ್ಕಾರ ಬಹಳಷ್ಟು ಸಾಲ ಸೌಲಭ್ಯ ನೀಡಿದ್ದು, ಇದರ ಸದುಪಯೋಗ ಮಾಡಿಕೊಳ್ಳಬೇಕು. ನರೇಂದ್ರ ಮೋದಿ ಸರ್ಕಾರ ಮತ್ತೆ ಅಧಿಕಾರಕ್ಕೆ ಬಂದರೆ ಇಂತಹ ಹಲವು ಯೋಜನೆಗಳು ಸಾಕಾರಗೊಳ್ಳಲಿವೆ ಎಂದು ಆಶ್ವಾಸನೆ ನೀಡಿದರು. ಮೈಸೂರು ಮಹಾರಾಜರು ಕರ್ನಾಟಕದ ಪರಂಪರೆಯ ರಕ್ಷಣೆ ಮಾಡಿದರು. ಈ ಮೂಲಕ ಸುವರ್ಣಯುಗ ತಂದರು. ಅದರಂತೆ ಈಗ ನರೇಂದ್ರ ಮೋದಿ ಭಾರತದ ಪರಂಪರೆ ರಕ್ಷಣೆ ಮಾಡಿ ಸುವರ್ಣ ಭಾರತ ನಿರ್ಮಾಣ ಮಾಡಲಿದ್ದಾರೆ. ದೇಶದ ಪ್ರಗತಿಗಾಗಿ ಶ್ರಮಿಸುತ್ತಿರುವ ನರೇಂದ್ರ ಮೋದಿ ಬೆಂಬಲಿಸಿ ಎಂದು ಯದುವೀರ್ ಮನವಿ ಮಾಡಿದರು.

ಈ ವೇಳೆ ಮಾತನಾಡಿದ ಬಿಜೆಪಿ ರಾಜ್ಯ ಹಿಂದುಳಿದ ವರ್ಗಗಳ ಅಧ್ಯಕ್ಷ ರಘು ಕೌಟಿಲ್ಯ, ಯದುವೀರ್ ಯಾವುದೇ ಜಾತಿ, ಧರ್ಮದ ಭೇದ–ಭಾವವಿಲ್ಲದೆ ಎಲ್ಲರನ್ನು ಸಮಾನರಾಗಿ ಕಾಣುತ್ತಾರೆ. ಈ ಹಿನ್ನೆಲೆಯಲ್ಲಿ ಅವರನ್ನು ಬೆಂಬಲಿಸಿ ಎಂದು ಮನವಿ ಮಾಡಿದರು. ಯದುವೀರ್ ಅವರ ಗೆಲುವು ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ಗೆಲುವು, ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ಗೆಲುವಾಗಲಿದೆ. ಈ ಹಿನ್ನೆಲೆಯಲ್ಲಿ ಎಲ್ಲರೂ ಬಿಜೆಪಿ ಬೆಂಬಲಿಸಬೇಕು ಎಂದು ಕೋರಿದರು.

ಹಿಂದುಳಿದ ವರ್ಗಗಳ ಶ್ರೇಯೋಭಿವೃದ್ಧಿಗೆ ಶ್ರಮಿಸಿದ್ದೇನೆ ಎಂದು ಮುಖ್ಯ ಮಂತ್ರಿ ಸಿದ್ದರಾಮಯ್ಯ ಹೇಳುತ್ತಾರೆ. ದೇವರಾಜ ಅರಸ್ ಅಭಿವೃದ್ಧಿ ನಿಗಮಕ್ಕೆ ಯಡಿಯೂರಪ್ಪ ಮುಖ್ಯಮಂತ್ರಿ ಆಗಿದ್ದಾಗ 180 ಕೋಟಿ ರೂಪಾಯಿ ನೀಡಿದ್ದರು. ಆದರೆ ಸಿದ್ದರಾಮಯ್ಯ 30 ಕೋಟಿ ರೂಪಾಯಿ ನೀಡಿದ್ದಾರೆ. ಇದು ಹಿಂದುಳಿದ ವರ್ಗಗಳ ಬಗ್ಗೆ ಅವರಿಗಿ ರುವ ಬದ್ಧತೆ ತೋರಿಸುತ್ತದೆ ಎಂದು ಟೀಕಿಸಿದರು. ಯಾವುದೇ ಆಸೆ, ಆಮಿಷ ಗಳಿಗೆ ಒಳಗಾಗಬೇಡಿ. ಹರುಷದ ಕೂಳಿಗೆ ಹೋಗಿ ವರುಷದ ಕೂಳು ಕಳೆದುಕೊಂಡಂತೆ ಕಾಂಗ್ರೆಸ್ ಬೆಂಬಲಿಸಿದರೆ ಮುಂದೆ ಬಹಳ ಕಷ್ಟ ಅನುಭವಿಸಬೇಕಾಗುತ್ತದೆ ಎಂದು ರಘು ಕೌಟಿಲ್ಯ ಎಚ್ಚರಿಸಿದರು. ಸಂಸದ ಪ್ರತಾಪ್ ಸಿಂಹ, ನಗರ ಬಿಜೆಪಿ ಅಧ್ಯಕ್ಷ ಎಲ್.ನಾಗೇಂದ್ರ, ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ, ಮಾಜಿ ಮೇಯರ್ ಸಂದೇಶ್ ಸ್ವಾಮಿ, ಬಿಜೆಪಿ ಅಲ್ಪಸಂಖ್ಯಾತ ಮೋರ್ಚಾ ಅಧ್ಯಕ್ಷ ಡಾ.ಅನಿಲ್ ಥಾಮಸ್, ರಾಜ್ಯ ಉಪಾಧ್ಯಕ್ಷ ರಾಜೇಂದ್ರ, ಮಾಜಿ ಶಾಸಕ ಸಿದ್ದರಾಜು ಸೇರಿದಂತೆ ಹಲವರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

ರಾಜೀವ್ ಕಾಂಗ್ರೆಸ್ ಸೇರ್ಪಡೆ; ಬಿಜೆಪಿ ನಾಯಕರ ಭಾವಚಿತ್ರ ಬಳಕೆ ವಿರುದ್ಧ ದೂರು

ಕಾಂಗ್ರೆಸ್ ಪಕ್ಷ ಸೇರ್ಪಡೆ ಕಾರ್ಯಕ್ರಮದಲ್ಲಿ ಬಿಜೆಪಿ ಶಾಸಕರ ಭಾವಚಿತ್ರ ಬಳಸಿರುವ ಬಗ್ಗೆ ಚುನಾವಣಾ ಆಯೋಗಕ್ಕೆ ದೂರು ನೀಡಲಾಗುವುದು ಎಂದು ಶಾಸಕ ಟಿ.ಎಸ್.ಶ್ರೀವತ್ಸ ತಿಳಿಸಿದರು. ಬಿಜೆಪಿ ನಾಯಕರ ಅನುಮತಿ ಇಲ್ಲದೆ ಅವರ ಭಾವಚಿತ್ರ ಹಾಕಿರುವುದು ಅಕ್ಷಮ್ಯ ಅಪರಾಧ. ಇದರಿಂದ ಕೆಟ್ಟ ಸಂದೇಶ ರವಾನೆ ಮಾಡಿದಂತಾ ಗುತ್ತದೆ. ಬಿಜೆಪಿ ಶಾಸಕ ಎಸ್.ಟಿ.ಸೋಮಶೇಖರ್ ಫೋಟೋ ಹಾಕಿದ್ದು, ಇದಕ್ಕೆ ಅವರು ಅನುಮತಿ ಕೊಟ್ಟಿಲ್ಲ ಎಂದು ತಿಳಿದು ಬಂದಿದೆ ಎಂದರು. ಒಕ್ಕಲಿಗ ಸಮುದಾಯದ ಹೆಚ್.ಡಿ.ದೇವೇಗೌಡ, ಹೆಚ್.ಡಿ.ಕುಮಾರಸ್ವಾಮಿ ಅವರಂತಹ ಶ್ರೇಷ್ಠ ನಾಯಕರು ನಮ್ಮ ಜೊತೆಗಿದ್ದಾರೆ. ಇದರಿಂದ ಒಕ್ಕಲಿಗ ಸಮುದಾಯದ ಮತಗಳು ನಮಗೆ ಬರುವುದಿಲ್ಲ ಎಂಬ ಅನುಮಾನ ಬೇಡ. ಒಕ್ಕಲಿಗರು ಕೂಡ ನಮ್ಮ ಕೈ ಹಿಡಿಯಲಿದ್ದಾರೆ ಎಂದು ಹೇಳಿದರು. ಮಾಜಿ ಮುಡಾ ಅಧ್ಯಕ್ಷ ಹೆಚ್.ವಿ.ರಾಜೀವ್‌ಗೆ ಬಿಜೆಪಿ ಎಲ್ಲಾ ಕೊಟ್ಟಿತ್ತು. ಮುಡಾ ಅಧ್ಯಕ್ಷ ಸ್ಥಾನ, ರಾಜ್ಯ ಮಟ್ಟದ ಜವಾಬ್ದಾರಿ, ಕೋರ್ ಕಮಿಟಿ ಜವಾಬ್ದಾರಿ ನೀಡಿತ್ತು. ಆದರೆ ಈಗ ಅವರು ಕಾಂಗ್ರೆಸ್ ಸೇರ್ಪಡೆಯಾಗುತ್ತಿದ್ದಾರೆ. ಮುಡಾದಲ್ಲಿ ಏನೇನು ಅಡಗಿದೆಯೋ ಗೊತ್ತಿಲ್ಲ. ಅದನ್ನೆಲ್ಲಾ ಮರೆಮಾಚಲು ಕಾಂಗ್ರೆಸ್ ಗೆ ಹೋಗುತ್ತಿದ್ದಾರೆ ಎಂದರು. ಎಲ್ಲವನ್ನು ಅನುಭವಿಸಿ ಪಕ್ಷ ಬಿಡುತ್ತಿರುವುದಕ್ಕೆ ನಮಗೆ ಬೇಸರವಿದೆ. ಆದರೆ ಇದಕ್ಕೆಲ್ಲಾ ತಕ್ಕ ಉತ್ತರ ನೀಡುತ್ತೇವೆ ಎಂದು ಶ್ರೀವತ್ಸ ಎಚ್ಚರಿಸಿದರು.

ಮಂತ್ರಿ ಸ್ಥಾನ ಖಚಿತ: ಸಂಸದ ಪ್ರತಾಪ್‌ಸಿಂಹ ಭವಿಷ್ಯ

ದುಡ್ಡು ತಂದು ಕಟ್ಟಿಸಿದ್ದನಾ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ದಟತನದಿಂದ ಮಾತನಾಡಿದ್ದರು. ಮಹಾರಾಜರಿಗೆ ಗೌರವ ಕೊಡದಿರುವ ಕಾಂಗ್ರೆಸ್ ಅಭ್ಯರ್ಥಿಯನ್ನು ಬೆಂಬಲಿಸಬೇಕೇ ಎಂದು ಯೋಚಿಸಿ ಎಂದರು.

ಮಹಿಷ ದಸರಾ ಆಚರಣೆಗೆ ಅವಕಾಶ ಕೊಟ್ಟು ಎಚ್ಚರ ತಪ್ಪಿದ್ದರೆ ದೊಡ್ಡ ಅನಾಚಾರ ಆಗುತ್ತಿತ್ತು. ಇದನ್ನೆಲ್ಲಾ ಸೂಕ್ಷ್ಮವಾಗಿ ಗಮನಿಸಬೇಕು. ಮಹಾರಾಜರನ್ನು ಬೀದಿಯಲ್ಲಿ ನಿಂತು ನಿಂದಿಸುವ ವ್ಯಕ್ತಿ ಆ ಸ್ಥಾನಕ್ಕೆ ಬರದಂತೆ ಎಚ್ಚರಿಕೆ ವಹಿಸಿ. ದೇಶಕ್ಕೆ ಮೋದಿ ಹೇಗೆ ಬೇಕೊ, ಹಾಗೆಯೇ ಮೈಸೂರಿಗೆ ಯದುವೀರ್ ಬೇಕು ಎಂಬುದನ್ನು ಮರೆಯದಿರಿ ಎಂದು ಪ್ರತಾಪ್ ಸಿಂಹ ಸಲಹೆ ನೀಡಿದರು. ಮಹಾರಾಜರ ಪರಂಪರೆ ಮುಂದುವರೆಯಬೇಕೇ ಹೊರತು, ಮಹಾರಾಜರನ್ನು ಟೀಕಿಸುವ ಸಿದ್ದರಾಮಯ್ಯ ಪರಂಪರೆ ಮುಂದುವರೆಯಬಾರದು ಎಂದು ಅವರು ಅಭಿಪ್ರಾಯಪಟ್ಟರು.

ಚುನಾವಣೆಯಲ್ಲಿ ಹಣ, ಹೆಂಡದ ಹೊಳೆ ಹರಿಸುತ್ತಾರೆ. ಇದಕ್ಕೆ ಆಸೆ ಪಟ್ಟು ಇದರಲ್ಲಿ ಕೊಚ್ಚಿ ಹೋಗಬಾರದು. ದೇಶದ ಹಿತವನ್ನು ಗಮನಿಸಿ ಬಿಜೆಪಿ ಬೆಂಬಲಿಸಿ. ಯಾವುದೇ ಕಾರಣಕ್ಕೂ ಮೈಮರೆಯಬಾರದು ಎಂದು ಮನವಿ ಮಾಡಿದರು. ಮೈಸೂರು ಸಂಸ್ಥಾನದ ಕೊಡುಗೆ ಸದಾ ನಮ್ಮ ಮುಂದೆ ಇದೆ. ಮೀಸಲಾತಿ ಜಾರಿ, ಮೈಸೂರು ಮೆಡಿಕಲ್ ಕಾಲೇಜು ಸ್ಥಾಪನೆ ಸೇರಿದಂತೆ ಬಹಳಷ್ಟು ಕೊಡುಗೆಗಳನ್ನು ಮಹಾರಾಜರು ನೀಡಿದ್ದಾರೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಕೂಡ ಮಹಾರಾಜರ ಪರಂಪರೆಗೆ ಅನುಗುಣವಾಗಿ ಮುನ್ನಡೆಯುತ್ತಿದ್ದಾರೆ. ಇದನ್ನು ಪರಿಗಣಿಸಿ ಬಿಜೆಪಿ ಬೆಂಬಲಿಸಿ ಎಂದು ಹೇಳಿದರು. ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದಲ್ಲಿ 1,300 ಗ್ರಾಮಗಳಿವೆ. ಎಲ್ಲಾ ಕಡೆ ಯದುವೀರ್ ಹೋಗಲು ಸಾಧ್ಯವಿಲ್ಲ. ಆದಕಾರಣ ನಾವೇ ಅಭ್ಯರ್ಥಿ ಎಂದು ಭಾವಿಸಿ ನೀವೇ ಬಿಜೆಪಿ ಪರ ಪ್ರಚಾರ ಮಾಡಿ ಎಂದು ಪ್ರತಾಪ್ ಸಿಂಹ ಹೇಳಿದರು.

ಇಂದು ಬಿಜೆಪಿ–ಜೆಡಿಎಸ್ ಜಂಟಿ ಸಮಾವೇಶ

ಆವರಣದಲ್ಲಿ ಸಂಜೆ 6 ಗಂಟೆಗೆ ಬಿಜೆಪಿ ಹಾಗೂ ಜೆಡಿಎಸ್ ಕಾರ್ಯಕರ್ತರ ಸಭೆ ನಡೆಯಲಿದ್ದು, ಎರಡು ಪಕ್ಷಗಳ ಸಾವಿರಾರು ಕಾರ್ಯಕರ್ತರು ಪಾಲ್ಗೊಳ್ಳಲಿದ್ದಾರೆ. ಈ ಸಭೆಯಲ್ಲಿ ಕೂಡ ವಿಜಯೇಂದ್ರ, ಹೆಚ್.ಡಿ.ಕುಮಾರಸ್ವಾಮಿ, ಯದುವೀರ್ ಒಡೆಯರ್ ಸೇರಿದಂತೆ ಹಲವು ಮುಖಂಡರು ಭಾಗಿಯಾಗುವರು ಎಂದು ಮಾಹಿತಿ ನೀಡಿದರು.

ಯಾವ ಡ್ಯಾಮೇಜು ಇಲ್ಲ: ಮಾಜಿ ಮುಡಾ ಅಧ್ಯಕ್ಷ ರಾಜೀವ್ ಕಾಂಗ್ರೆಸ್ ಸೇರ್ಪಡೆಯಿಂದ ಬಿಜೆಪಿಗೆ ಯಾವ ಡ್ಯಾಮೇಜು ಆಗುವುದಿಲ್ಲ. ಕೆ.ಆರ್.ಕ್ಷೇತ್ರದಲ್ಲಿ ಟಿಕೆಟ್ ಸಿಗದ ಕಾರಣ ಅವರಿಗೆ ಮುನಿಸಿತ್ತು. ಜೊತೆಗೆ ಕಳೆದ ಚುನಾವಣೆಯಲ್ಲಿ ನಮ್ಮ ಪಕ್ಷದ ವಿರುದ್ಧ ಕೆಲಸ ಮಾಡಿದ್ದರು. ಈಗ ರಾಜೀವ್ ಕಾಂಗ್ರೆಸ್ ಸೇರುವುದು ಅಚ್ಚರಿ ಏನಲ್ಲ ಎಂದು ಸ್ಪಷ್ಟಪಡಿಸಿದರು. ಕಾಂಗ್ರೆಸ್ ನವರಂತೆ ನಾವೂ ಆಪರೇಷನ್ ಮಾಡುವ ಅಗತ್ಯವಿಲ್ಲ. ಪ್ರತಿದಿನ ನಡೆಯುವ ಸಮಾವೇಶಗಳಲ್ಲಿ ಕಾಂಗ್ರೆಸ್‌ನ ಬಹಳಷ್ಟು ಮುಖಂಡರು ಹಾಗೂ ಕಾರ್ಯಕರ್ತರು ಬಿಜೆಪಿ ಸೇರ್ಪಡೆಯಾಗುತ್ತಿದ್ದಾರೆ ಎಂದು ತಿಳಿಸಿದರು. ಬಿಜೆಪಿ ಜೊತೆ ಜೆಡಿಎಸ್ ಜೊತೆಯಾಗಿರುವುದು ನಮಗೆ ಆನೆ ಬಲ ಬಂದಂತಾಗಿದೆ. ನಮ್ಮ ಶಕ್ತಿ ಜೊತೆಗೆ ಜೆಡಿಎಸ್ ದೊಡ್ಡ ಶಕ್ತಿ ಸೇರಿರುವ ಕಾರಣ ಯದುವೀರ್ ಗೆಲುವಿಗೆ ಅನುಕೂಲವಾಗಲಿದೆ ಎಂದು ನಾಗೇಂದ್ರ ವಿಶ್ವಾಸ ವ್ಯಕ್ತಪಡಿಸಿದರು.

ಬಿಜೆಪಿ ರಾಜ್ಯ ಉಪಾಧ್ಯಕ್ಷ ರಾಜೇಂದ್ರ, ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ, ಮುಖಂಡರಾದ ಗಿರಿಧರ್, ಕೇಬಲ್ ಮಹೇಶ್ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ಮಾ.29 ಬಿಜೆಪಿ–ಜೆಡಿಎಸ್ ಮುಖಂಡರ ಜಂಟಿ ಸಭೆ

ಅಸಮಾಧಾನದ ಬೆನ್ನಲ್ಲೇ ಈ ಸಭೆ ಕರೆಯಲಾಗಿದೆ. ನರೇಂದ್ರ ಮೋದಿ ಅವರನ್ನು ಮತ್ತೆ ಪ್ರಧಾನಿಯನ್ನಾಗಿ ಮಾಡುವ ಉದ್ದೇಶದಿಂದ ನಾವು ಕರ್ನಾಟಕದಲ್ಲಿ 28ಕ್ಕೆ 28 ಕ್ಷೇತ್ರಗಳನ್ನೂ ಗೆಲ್ಲಲೇಬೇಕು. ಇದಕ್ಕಾಗಿ ನಮ್ಮಲ್ಲಿರುವ ವೈಮನಸ್ಸನ್ನು ಹೋಗಲಾಡಿಸಿ, ಪಕ್ಷದ ಅಭ್ಯರ್ಥಿಗಳ ಪರ ಕೆಲಸ ಮಾಡಬೇಕು. ಮೈತ್ರಿ ಧರ್ಮ ಪಾಲನೆ ಮಾಡುವಂತೆ ರಾಜ್ಯ ನಾಯಕರಿಂದ ಉಭಯ ಪಕ್ಷಗಳ ಕಾರ್ಯಕರ್ತರಿಗೆ ಸ್ಪಷ್ಟ ಸೂಚನೆ ಸಭೆಯಲ್ಲಿ ನೀಡಲಿದ್ದಾರೆ.

ಮೈತ್ರಿಯಲ್ಲಿ ಚ್ಯುತಿ ಬಂದರೆ ಅಥವಾ ನೀವು ಕಾರ್ಯಕರ್ತರು ಅಪಸ್ವರ ಎತ್ತಿದರೆ, ಅದನ್ನು ಕಾಂಗ್ರೆಸ್ ರಾಜಕೀಯವಾಗಿ ಲಾಭ ಪಡೆಯುತ್ತದೆ. ಆ ಪಕ್ಷದ ಮುಖಂಡರು ಇದನ್ನೇ ಬಂಡವಾಳ ಮಾಡಿಕೊಂಡು ನಿಮ್ಮನ್ನು ಖರೀದಿ ಮಾಡುವ ಯತ್ನ ನಡೆದಿರುವುದೂ ನಮ್ಮ ಗಮನಕ್ಕೆ ಬಂದಿದೆ. ಜನ ಮೋದಿ ಪರ ಇದ್ದಾರೆ, ನೀವು ಕಾಂಗ್ರೆಸ್ ಮುಖಂಡರ ಆಮಿಷಗಳಿಗೆ ಬಲಿಯಾಗಬೇಡಿ, ನಮ್ಮಲ್ಲಿ ಯಾರೇ ಅಭ್ಯರ್ಥಿಯಾಗಿದ್ದರೂ ನಿಮ್ಮ ವೈಮನಸ್ಸು ಮರೆತು ಒಗ್ಗಟ್ಟಿನಿಂದ ಕೆಲಸ ಮಾಡಿ.

ಲಕ್ಷ್ಮಣನನ್ನು ಜೈಲಿಗೆ ಕಳುಹಿಸುತ್ತೇನೆ

ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣನನ್ನು ಖಂಡಿತವಾಗಿಯೂ ಜೈಲಿಗೆ ಕಳುಹಿಸುತ್ತೇನೆ ಎಂದು ಸಂಸದ ಪ್ರತಾಪ್ ಸಿಂಹ ಘರ್ಜಿಸಿದರು. ನನ್ನ ವಿರುದ್ಧ ಸುಳ್ಳು ಆರೋಪ ಮಾಡಿರುವ ಸಂಬಂಧ ಎರಡು ಕ್ರಿಮಿನಲ್ ಕೇಸ್ ದಾಖಲಿಸಿದ್ದೇನೆ. ಇದರಿಂದ ಖಂಡಿತವಾಗಿಯೂ ಲಕ್ಷ್ಮಣನನ್ನು ಜೈಲಿಗೆ ಕಳುಹಿಸುತ್ತೇನೆ ಎಂದರು. ಕಳೆದ 47 ವರ್ಷಗಳ ಬಳಿಕ ಒಕ್ಕಲಿಗರಿಗೆ ಕಾಂಗ್ರೆಸ್ ಟಿಕೆಟ್ ಕೊಟ್ಟಿದೆ ಎಂದು ಹೋದಲ್ಲಿ, ಬಂದಲ್ಲಿ ನಾನು ಒಕ್ಕಲಿಗ... ಒಕ್ಕಲಿಗ... ಎಂದು ಹೇಳಿಕೊಂಡು ಓಡಾಡುತ್ತಿದ್ದಾರೆ. ಅವರಿಗೆ ಒಕ್ಕಲಿಗ ಎಂಬ ಸರ್ಟಿಫಿಕೇಟ್ ಕೊಟ್ಟವರು ಯಾರು ಎಂದು ಪ್ರಶ್ನಿಸಿದ ಪ್ರತಾಪ್ ಸಿಂಹ, ಆ ವ್ಯಕ್ತಿ ಯಾವ ಒಕ್ಕಲಿಗ ಎಂದು ನನಗಂತೂ ಗೊತ್ತಿಲ್ಲ ಎಂದು ಗೇಲಿ ಮಾಡಿದರು.


ಮೂವರು ಜಲಸಮಾಧಿ

ಕರಣ್(21) ಸಾವನ್ನಪ್ಪಿದವರು. ತಾಲೂಕಿನ ಕಲ್ಲಹಳ್ಳಿ ಕೈಗಾರಿಕಾ ಪ್ರದೇಶದಲ್ಲಿರುವ ಫ್ರಾಕ್ಸಾನ್ ಕಾರ್ಖಾನೆಯಲ್ಲಿ ಕೆಲಸ ಮಾಡುತ್ತಿದ್ದ ಅನಿಲ್, ಮೋಹನ್, ಕರಣ್ ಜೊತೆಗೆ ಹೋಳಿ ಹಬ್ಬಕ್ಕೆಂದು ಬಂದಿದ್ದ ಅನಿಲ್ ತಮ್ಮ ಮಿಲನ್ ಸೇರಿದಂತೆ ನಾಲ್ವರು ಸೋಮವಾರ ಬಿಸಿಲ ಬೇಗೆಯಿಂದ ಕಲ್ಲಹಳ್ಳಿ ಬಳಿಯ ಗೊದ್ದನಪುರ ಸೇತುವೆ ಬಳಿ ಕಪಿಲಾ ನದಿಯಲ್ಲಿ ಈಜಲು ತೆರಳಿದ್ದಾರೆ. ಈ ವೇಳೆ ಸುಳಿಗೆ ಸಿಲುಕಿ ಮಿಲನ್, ಮೋಹನ್, ಕರಣ್ ಮೂವರೂ ಮುಳುಗಿದ್ದಾರೆ.

ವಿಷಯ ತಿಳಿದು ಸ್ಥಳಕ್ಕಾಗಮಿಸಿದ ನಂಜನಗೂಡು ಪಟ್ಟಣ ಠಾಣೆ ಪೊಲೀಸರು ಅಗ್ನಿಶಾಮಕದಳ ಮತ್ತು ನುರಿತ ಈಜುಗಾರರ ಸಹಾಯದಿಂದ ಬೋಟ್‌ಗಳ ಸಹಾಯದಿಂದ ಶವಗಳ ಶೋಧ ಕಾರ್ಯಾಚರಣೆ ನಡೆಸಿದರು. ಆದರೆ ಶವಗಳು ಸೋಮವಾರ ಪತ್ತೆಯಾಗಿರಲಿಲ್ಲ. ಆದರೆ ಮಂಗಳವಾರ ಬೆಳಗ್ಗೆ ಮಿಲನ್ ಮತ್ತು ಮೋಹನ್ ಶವಗಳು ದೊರೆತಿದ್ದು, ಕರಣ್ ಶವಕ್ಕಾಗಿ ಶೋಧ ಕಾರ್ಯ ಮುಂದುವರೆದಿದೆ.

ನಂಜನಗೂಡು ಪಟ್ಟಣ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ಬಸವರಾಜು ಸ್ಥಳಕ್ಕೆ ಭೇಟಿ ನೀಡಿದ್ದರು. ಮರಣೋತ್ತರ ಪರೀಕ್ಷೆ ನಂತರ ಮಿಲನ್ ಮತ್ತು ಮೋಹನ್ ದೇಹಗಳನ್ನು ವಾರಸುದಾರರಿಗೆ ಹಸ್ತಾಂತರಿಸಿದರು. ಈ ಸಂಬಂಧ ನಂಜನಗೂಡು ಪಟ್ಟಣ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ಮೈಸೂರು ಮಿತ್ರ



ಲೋಕಸಭಾ ಚುನಾವಣೆ–2024: ಮೈಸೂರು ಜೈಲಿನಲ್ಲಿ ಪೊಲೀಸರಿಂದ ದಿಢೀರ್ ಪರಿಶೀಲನೆ

●ಸಿಮ್ ಕಾರ್ಡ್, ನಗದು, ಬ್ಲೇಡ್, ಚಾಕು, ಮಾರಕಾಸ್ತ್ರಗಳು ವಶಕ್ಕೆ ●ಹೊರ ಪ್ರಪಂಚದ ಸಮಾಜಘಾತುಕ ಶಕ್ತಿಗಳೊಂದಿಗೆ ಖೈದಿಗಳ ಸಂಪರ್ಕ ಶಂಕೆ



ಮೈಸೂರು, ಮಾ. 26 (ಆರ್‌ಕೆ)– ಮೈಸೂರಿನ ಕೇಂದ್ರ ಕಾರಾಗೃಹದ ಮೇಲೆ ಇಂದು ಬೆಳಗ್ಗೆ ದಿಢೀರ್ ದಾಳಿ ನಡೆಸಿದ ಪೊಲೀಸರು, ಪರಿಶೀಲನೆ ವೇಳೆ ಮಾರಕಾಸ್ತ್ರಗಳು ಸೇರಿದಂತೆ ನಿರ್ಬಂಧಿತ ನಾನಾ ಪದಾರ್ಥಗಳನ್ನು ಕೈದಿಗಳ ಕೊಠಡಿ ಗಳಿಂದ ವಶಪಡಿಸಿಕೊಂಡರು.

ಲೋಕಸಭಾ ಸಾರ್ವತ್ರಿಕ ಚುನಾವಣೆ ಹಿನ್ನೆಲೆಯಲ್ಲಿ ನಗರ ಪೊಲೀಸ್ ಆಯುಕ್ತ ಬಿ.ರಮೇಶ್, ಡಿಸಿಪಿಗಳಾದ ಎಂ.ಮುತ್ತುರಾಜ್, ಎಸ್.ಜಾಹ್ನವಿ ನೇತೃತ್ವದಲ್ಲಿ ಬೆಳಗ್ಗೆ 10.45ಕ್ಕೆ ದಾಳಿ ನಡೆಸಿದ ಪೊಲೀಸರು, ಇಡೀ ಜೈಲು ಜಾಲಾಡಿದರು.

ಪುರುಷರು ಮತ್ತು ಮಹಿಳಾ ಕೈದಿಗಳನ್ನು ಪರಿಶೀಲಿಸಿದ ಅವರು, ಸ್ನಾನದ ಮನೆ, ತರಬೇತಿ ಕೇಂದ್ರ, ಅಡುಗೆ ಮನೆಗಳನ್ನು ತಪಾಸಣೆ ಮಾಡಿದಾಗ ಮೊಬೈಲ್ ಸಿಮ್ ಕಾರ್ಡ್, ನಗದು, ಬ್ಲೇಡ್, ಚಾಕುವಿನಂತಹ ಮಾರಕಾಸ್ತ್ರಗಳು ಸೇರಿದಂತೆ ಹಲವು ಪದಾರ್ಥಗಳು ಪತ್ತೆಯಾದವು.

ಜೈಲಿನಲ್ಲಿದ್ದುಕೊಂಡೇ ಕದ್ದು ಮುಚ್ಚಿ ಹೊರಗಿನ ಸಮಾಜಘಾತುಕ ವ್ಯಕ್ತಿಗಳು, ಕ್ರಿಮಿನಲ್ ಹಿನ್ನೆಲೆಯುಳ್ಳವರು, ಕೆಲ ರಾಜಕೀಯ ವ್ಯಕ್ತಿಗಳೊಂದಿಗೆ ಸಂಪರ್ಕ ಹೊಂದಿದ್ದು, ರಿಯಲ್ ಎಸ್ಟೇಟ್, ಹಣ ಕಾಸು ಲೇವಾದೇವಿ, ಆಸ್ತಿಗಳಿಗೆ ಸಂಬಂಧಿತ ವಿವಾದಗಳ ವಿಷಯದಲ್ಲಿ ಕೆಲ ಜೈಲು ವಾಸಿಗಳು ವಹಿವಾಟು ನಡೆಸುತ್ತಿದ್ದಾರೆ ಎಂಬ ಮಾಹಿತಿಯನ್ವಯ ಮಂಗಳವಾರ ಪೊಲೀಸ್ ಅಧಿಕಾರಿಗಳು ಪರಿಶೀಲನೆ ನಡೆಸಿದರು. ಜೈಲಿನ ಪ್ರತಿಯೊಂದು ಸೆಲ್ ಅನ್ನು ತಪಾಸಣೆ ಮಾಡಿದ ಪೊಲೀಸರಿಗೆ ಶ್ವಾನದಳ, ಬೆರಳಚ್ಚು ಮುದ್ರೆ ಘಟಕ, ಸಿಎಆರ್ ತುಕಡಿ ಸಾಥ್ ನೀಡಿದವು. ಮೊಬೈಲ್ ಮೂಲಕ ಹೊರಗಿನ ಕೆಲ ರಾಜಕೀಯ ಮುಖಂಡರೊಂದಿಗೆ ಸಂಪರ್ಕ ಸಾಧಿಸಿ ಚುನಾವಣೆ ಸಂಬಂಧ ಪ್ರಕ್ರಿಯೆ ನಡೆಸಲಾಗುತ್ತಿದೆ ಎಂಬ ಮಾಹಿತಿಯನ್ವಯ ಇಂದು ದಾಳಿ ನಡೆಸಿ ಕೈದಿಗಳ ಚಲನವಲನಗಳ ಮೇಲೆ ನಿಗಾ ವಹಿಸಿದ ಅಧಿಕಾರಿಗಳು, ಸಂಶಯಾಸ್ಪದ ಕೈದಿಗಳಿಗೆ ಎಚ್ಚರಿಕೆ ನೀಡಿದರು.






ಜೈಲಿನ ಕಾಂಪೌಂಡ್ ಹೊರಭಾಗದಲ್ಲಿ ಮೊದಲೇ ಪೊಲೀಸ್ ಸರ್ಪಗಾವಲು ಹಾಕಿ, ಮಾರಕಾಸ್ತ್ರ ಮತ್ತು ಇತರ ವಸ್ತುಗಳನ್ನು ಹೊರಗೆ ಎಸೆಯದಂತೆ ಎಚ್ಚರ ವಹಿಸಲಾಗಿತ್ತು. ಸುಮಾರು 200 ಮಂದಿ ಪೊಲೀಸ್ ಸಿಬ್ಬಂದಿ ಪರಿಶೀಲನೆ ನಡೆಸಿದರು.

ಹೊರಗಿನಿಂದ ಯಾವುದೇ ವಸ್ತು ಜೈಲು ಆವರಣ ಪ್ರವೇಶಿಸದಂತೆ ಹಾಗೂ ಒಳಗೆ ಮಾರಕಾಸ್ತ್ರ ಮೊಬೈಲ್‌ನಂತಹ ಎಲೆಕ್ಟ್ರಾನಿಕ್ಸ್ ಉಪಕರಣ ಸಾಗಿಸದಂತೆ ದಿನದ 24 ಗಂಟೆಯೂ ಎಚ್ಚರ ವಹಿಸಿ ಅಹಿತಕರ ಘಟನೆಗೆ ಅವಕಾಶ ನೀಡಬಾರದು. ಜೈಲು ವಾಸಿಗಳ ವರ್ತನೆ, ಚಟುವಟಿಕೆಗಳ ಮೇಲೆ ನಿಗಾ ವಹಿಸುವಂತೆ ಜೈಲು ಅಧಿಕಾರಿಗಳಿಗೆ ಸೂಚನೆ ನೀಡಿದ ಪೊಲೀಸ್ ಅಧಿಕಾರಿಗಳು, ಮೆಟಲ್ ಹ್ಯಾಂಡ್ ಡಿಟೆಕ್ಟರ್‌ಗಳ ಮೂಲಕ ತಪಾಸಣೆ ನಡೆಸಿದರು.

ಎಲ್ಲಾ ಉಪವಿಭಾಗಗಳ ಎಸಿಪಿಗಳು, ಪೊಲೀಸ್ ಇನ್ಸ್‌ಪೆಕ್ಟರ್‌ಗಳು ಮತ್ತು ಸಿಬ್ಬಂದಿ ಜೈಲು ದಾಳಿ ಸಂದರ್ಭ ಪಾಲ್ಗೊಂಡು ಜಾಲಾಡಿದ್ದನ್ನು ಇಲ್ಲಿ ಸ್ಮರಿಸಬಹುದಾಗಿದೆ.

ವಿಶೇಷಚೇತನರು, ವಯೋವೃದ್ಧ ಮತದಾರರ ಆರೋಗ್ಯದ ಬಗ್ಗೆ ನಿಗಾ

●ಮನೆ–ಮನೆಗೆ ತೆರಳಿ ಆರೋಗ್ಯ ಮಾಹಿತಿ ಸಂಗ್ರಹ, ಸಲಹೆಗಳ ಸಹಕಾರ ●ಮೈಸೂರು ಜಿಲ್ಲೆಯಲ್ಲಿ 33,887 ವಿಶೇಷಚೇತನರು, 41,617 ಮಂದಿ 85 ವರ್ಷ ಮೇಲ್ಪಟ್ಟ ಮತದಾರರು



ಮೈಸೂರು, ಮಾ.26(ಜಿಎ)–ಲೋಕಸಭಾ ಚುನಾವಣೆಗೆ ಜಿಲ್ಲಾಡಳಿತ ಎಲ್ಲಾ ರೀತಿ ಸಿದ್ಧತೆಗಳನ್ನು ಮಾಡಿಕೊಳ್ಳುತ್ತಿದ್ದು, ಆರೋಗ್ಯ ಇಲಾಖೆ ವಯೋವೃದ್ಧರ ಆರೋಗ್ಯದ ಮೇಲೆ ನಿಗಾ ಇಡಲು ಮುಂದಾಗಿದೆ.

ಈ ಬಾರಿ ಲೋಕಸಭಾ ಚುನಾವಣೆಯಲ್ಲಿ 85 ವರ್ಷ ಮೇಲ್ಪಟ್ಟವರು ಮತ್ತು ವಿಶೇಷಚೇತನರಿಗೆ ಮತಗಟ್ಟೆಗೆ ತೆರಳಿ ಅಥವಾ ಮನೆಯಿಂದಲೇ ಮತದಾನ ಮಾಡಲು ಅವಕಾಶ ಕಲ್ಪಿಸಿದ್ದು, ಈ ಹಿನ್ನೆಲೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ವಿಶೇಷಚೇತನರು ಮತ್ತು ವಯೋವೃದ್ಧರ ಮನೆಗಳಿಗೆ ಭೇಟಿ ನೀಡಿ ಅವರ ಆರೋಗ್ಯ ವಿಚಾರಿಸಲಿದೆ.

ಕರ್ನಾಟಕದಲ್ಲಿ ಎರಡು ಹಂತದಲ್ಲಿ ಮತದಾನ ನಡೆಯಲಿದ್ದು, ಏ.26ರಂದು ಚಾಮರಾಜನಗರ, ಮೈಸೂರು–ಕೊಡಗು ಸೇರಿದಂತೆ 14 ಕ್ಷೇತ್ರಗಳಲ್ಲಿ ಚುನಾವಣೆ ನಡೆಯಲಿದೆ. ಈ ಬಾರಿ ಬೇಸಿಗೆ ಬೇಗೆ ಹೆಚ್ಚಾಗಿರುವುದರಿಂದ ಮತಗಟ್ಟೆಯಲ್ಲಿ ನೀರು, ಶೌಚಾಲಯ, ನೆರಳಿನ ವ್ಯವಸ್ಥೆ ಸೇರಿದಂತೆ ಪ್ರಮುಖ ಸೌಕರ್ಯಗಳನ್ನು ಒದಗಿಲು ಜಿಲ್ಲಾಡಳಿತ ಸಿದ್ಧತೆ ನಡೆಸಿದೆ.

ಮೈಸೂರು ಜಿಲ್ಲೆಯಲ್ಲಿ 33,887 ಮಂದಿ ವಿಶೇಷಚೇತನರು, 41,617 ಮಂದಿ 85 ವರ್ಷ ಮೇಲ್ಪಟ್ಟವರು ಮತ್ತು 1,994 ಮಂದಿ ಶತಾಯುಷಿಗಳು ಮತದಾನ ಮಾಡಲಿದ್ದಾರೆ ಎಂದು ಜಿಲ್ಲಾಧಿಕಾರಿಗಳು ಮಾಹಿತಿ ನೀಡಿದ್ದು, ಹೀಗಾಗಿ ಆರೋಗ್ಯ ಇಲಾಖೆಯ ತಂಡವು ಇವರುಗಳ ಮನೆ ಮನೆಗೆ ಭೇಟಿ ನೀಡಿ ಆರೋಗ್ಯದ ಬಗ್ಗೆ ಗಮನಹರಿಸಲಿದೆ ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ.ಪಿ.ಸಿ.ಕುಮಾರಸ್ವಾಮಿ 'ಮೈಸೂರು ಮಿತ್ರ'ನಿಗೆ ತಿಳಿಸಿದರು.

ಆರೋಗ್ಯ ಇಲಾಖೆ ವತಿಯಿಂದ ಸ್ವೀಪ್ ಕಾರ್ಯಕ್ರಮದ ಅಂಗವಾಗಿ ತಾಲೂಕು ಮತ್ತು ಜಿಲ್ಲಾ ಕೇಂದ್ರಗಳಲ್ಲಿ ಈಗಾಗಲೇ ಮತದಾನ ಹೆಚ್ಚಿಸಲು ಪ್ರಚಾರ ಮಾಡಲಾಗುತ್ತದೆ. ಹಾಗೇ ಪ್ರಾಥಮಿಕ ಆರೋಗ್ಯ ಕೇಂದ್ರ ಸೇರಿದಂತೆ ಎಲ್ಲಾ ಆಸ್ಪತ್ರೆಗಳಲ್ಲಿ ವೈದ್ಯರು ಲಭ್ಯವಿರುವಂತೆ ಮತ್ತು ಮತ ಕೇಂದ್ರದಲ್ಲಿ ಇಲಾಖೆಯಿಂದ ಸೂಕ್ತ ವ್ಯವಸ್ಥೆ ಕಲ್ಪಿಸಲು ಸೂಚನೆ ನೀಡಲಾಗಿದೆ ಎಂದರು. ಮೈಸೂರು ಜಿಲ್ಲೆಯಾದ್ಯಂತ ಇರುವ ವಿಶೇಷಚೇತನರು ಮತ್ತು ವಯೋವೃದ್ಧರ ಬಗ್ಗೆ ಮಾಹಿತಿ ಪಡೆಯಲು ಆಶಾ ಕಾರ್ಯಕರ್ತೆಯರ ತಂಡ ಅವರ ಮನೆಗಳಿಗೆ ಭೇಟಿ ನೀಡುತ್ತಿದ್ದು, ಅದರೊಟ್ಟಿಗೆ ಅವರ ಆರೋಗ್ಯದ ಬಗ್ಗೆ ಮಾಹಿತಿ ಪಡೆದು ಸೂಕ್ತ ಸಲಹೆ ನೀಡಲಾಗುತ್ತದೆ. ಬೇಸಿಗೆಯಿಂದ ತೀವ್ರ ಉಷ್ಣಾಂಶವಿರುವುದಿಂದ ಮತಗಟ್ಟೆಗೆ ಮತದಾರರು ಭೇಟಿ ನೀಡಿದ ಸಂದರ್ಭದಲ್ಲಿ ಆರೋಗ್ಯದಲ್ಲಿ ಏರುಪೇರು ಉಂಟಾದರೆ ಸೂಕ್ತ ಔಷಧಿಗಳನ್ನು ನೀಡಲು ಎಲ್ಲಾ ರೀತಿ ಸಿದ್ಧತೆಗಳನ್ನು ಇಲಾಖೆ ಮಾಡಿಕೊಳ್ಳುತ್ತಿದೆ ಎಂದು ಮಾಹಿತಿ ನೀಡಿದರು.

ಸಿದ್ದರಾಮಯ್ಯರ 'ಗ್ಯಾರಂಟಿ' ಬಡ, ಮಧ್ಯಮ ವರ್ಗಕ್ಕೆ ವರದಾನ

●ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಅಭಿಮತ ●ಈ ಯೋಜನೆಗಳ ಜನರಿಗೆ ಮನವರಿಕೆ ಮಾಡಿಕೊಡುವುದು ಯುವ ಕಾಂಗ್ರೆಸ್ ಕರ್ತವ್ಯ



ಕೆ.ಆರ್.ಕ್ಷೇತ್ರದ ಯುವ ಕಾಂಗ್ರೆಸ್ ಸಮಿತಿಯ ವಾರ್ಡ್ ಹಾಗೂ ಬೂತ್ ಮಟ್ಟದ ನೂತನ ಪದಾಧಿಕಾರಿಗಳಿಗೆ ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ನೇಮಕಾತಿ ಪತ್ರ ವಿತರಿಸಿದರು.

ಮೈಸೂರು, ಮಾ.26(ಎಂಟಿವೈ)– ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಜಾರಿಗೊಳಿಸಿರುವ ಐದು ಗ್ಯಾರಂಟಿ ಯೋಜನೆಗಳು ಬಡ ಹಾಗೂ ಮಧ್ಯಮ ವರ್ಗಗಳ ಕುಟುಂಬಗಳಿಗೆ ವರದಾನವಾಗಿ ಮಾರ್ಪಟ್ಟಿವೆ ಎಂದು ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ರಾಮಸ್ವಾಮಿ ವೃತ್ತದ ಬಳಿಯ ತಮ್ಮ ಗೃಹ ಕಚೇರಿಯಲ್ಲಿ ಕೆ.ಆರ್.ಕ್ಷೇತ್ರದ ವಿವಿಧ ವಾರ್ಡ್ ಹಾಗೂ ಬೂತ್‌ಗಳಿಗೆ ನಿಯೋಜಿಸಿರುವ ನೂತನ ಪದಾಧಿಕಾರಿಗಳಿಗೆ ಪ್ರಮಾಣ ಪತ್ರ ವಿತರಿಸಿ ಮಾತನಾಡಿದ ಅವರು, ರಾಜ್ಯ ಸರ್ಕಾರದ ಬಹುನಿರೀಕ್ಷಿತ ಯೋಜನೆಗಳಾದ ಗೃಹಲಕ್ಷ್ಮೀ, ಶಕ್ತಿ, ಗೃಹಜ್ಯೋತಿ, ಯುವ ನಿಧಿ, ಅನ್ನಭಾಗ್ಯ ಯೋಜನೆಗಳು ಬಡ ಹಾಗೂ ಮಧ್ಯಮ ವರ್ಗದ ಜನರ ಬದುಕನ್ನು ಗೌರವಯುತವಾಗಿಸಿವೆ. ಇಂದು ಈ ಯೋಜನೆಗಳ ಸೌಲಭ್ಯವನ್ನು ಬಹುತೇಕ ಕುಟುಂಬಗಳು ಪಡೆಯುತ್ತಿವೆ. ವಿರೋಧ ಪಕ್ಷಗಳು ಸರ್ಕಾರದ ವಿರುದ್ಧ ತಪ್ಪು ಸಂದೇಶ ರವಾನಿಸುವ ನಿಟ್ಟಿನಲ್ಲಿ ಗ್ಯಾರಂಟಿ ಯೋಜನೆಗಳನ್ನು ಟೀಕಿಸುತ್ತಿವೆ. ಈ ಗ್ಯಾರಂಟಿ ಯೋಜನೆಗಳ ಸದುಪಯೋಗವನ್ನು ಕೇವಲ ಕಾಂಗ್ರೆಸ್ ಬೆಂಬಲಿತರು ಮಾತ್ರ ಪಡೆಯುತ್ತಿಲ್ಲ. ಇಂದು ಪಕ್ಷಾತೀತವಾಗಿ ಜನ ಕಾಂಗ್ರೆಸ್ ಸರ್ಕಾರದ ಕಾರ್ಯವೈಖರಿಯನ್ನು ಪ್ರಶಂಸಿಸುತ್ತಿದ್ದಾರೆ ಎಂದರು.

ಯುವಕರು ದೇಶದ ಆಸ್ತಿ. ಮುಂದಿನ ಲೋಕಸಭಾ ಚುನಾವಣೆಯಲ್ಲಿ ದೇಶದ ರಾಜಕೀಯ ಚಿತ್ರಣವನ್ನು ಬದಲಾಯಿಸಬಲ್ಲ ಸಾಮರ್ಥ್ಯ ಯುವ ಸಮುದಾಯಕ್ಕೆ ಇದೆ. ಆದ್ದರಿಂದ ಯುವ ಕಾಂಗ್ರೆಸ್ ಪದಾಧಿಕಾರಿಗಳು ಮುಂದಿನ ದಿನಗಳಲ್ಲಿ ಪಾದರಸದಂತೆ ಕೆಲಸ ಮಾಡಬೇಕು. ಸರ್ಕಾರದ ಜನಪರ ಯೋಜನೆ ಮೂಲಕ ಲೋಕಸಭಾ ಚುನಾವಣೆಗೆ ಮತ ಕೇಳಬೇಕು. ಈ ಹಿಂದೆ ಪ್ರಧಾನಿ ನರೇಂದ್ರ ಮೋದಿ ಅಧಿಕಾರಕ್ಕೆ ಬಂದ ಕೂಡಲೆ ವರ್ಷಕ್ಕೆ 2 ಕೋಟಿ ಉದ್ಯೋಗ ಸೃಷ್ಟಿಸುವುದಾಗಿ ಭರವಸೆ ನೀಡಿದ್ದರು. ಆದರೆ, ನಂತರ ಪಕೋಡಾ ಮಾರುವಂತೆ ಸಲಹೆ ನೀಡಿದರು. ಮತ ಪಡೆಯುವುದಕ್ಕಾಗಿ ಯುವ ಸಮುದಾಯವನ್ನು ಬಳಸಿಕೊಂಡು ದ್ರೋಹ ಬಗೆದಿದ್ದಾರೆ. ಆದರೆ ಮುಖ್ಯಮಂತ್ರಿ ಸಿದ್ದರಾಮಯ್ಯ ನುಡಿದಂತೆ ನಡೆದಿದ್ದಾರೆ. ನಾವು ಅಧಿಕಾರಕ್ಕೆ ಬಂದರೆ ಯುವ ಸಮುದಾಯದ ಪರ ಯೋಜನೆ ರೂಪಿಸುತ್ತೇವೆ ಎಂದು ತಿಳಿಸಿದ್ದರು. ಅದರಂತೆ ಯುವ ನಿಧಿ ಯೋಜನೆ ಅನುಷ್ಠಾನಗೊಳಿಸಿ ನಿರುದ್ಯೋಗಿ ಪದವೀಧರರಿಗೆ ಮಾಸಿಕ 3000 ರೂ. ಡಿಪ್ಲೊಮಾದಾರರಿಗೆ ಮಾಸಿಕ 1500 ರೂ. ನೀಡುತ್ತಿರುವುದು ನಿರುದ್ಯೋಗಿಗಳಿಗೆ ವರದಾನವಾಗಿದೆ ಎಂದು ತಿಳಿಸಿದರು.

ಜಿಲ್ಲಾ ಮತ್ತು ರಾಜ್ಯ ಮಟ್ಟದಲ್ಲಿ ಉದ್ಯೋಗ ಮೇಳ, ಕೌಶಲ್ಯ ಅಭಿವೃದ್ಧಿ ಕಾರ್ಯಕ್ರಮ ಆಯೋಜಿಸಿ ಲಕ್ಷಾಂತರ ಯುವಕ–ಯುವತಿಯರಿಗೆ ನೆರವಾಗಿದ್ದಾರೆ. ಶಕ್ತಿ ಯೋಜನೆಯ ಮೂಲಕ ಎಲ್ಲಾ ಹಂತದ ವಿದ್ಯಾರ್ಥಿನಿಯರಿಗೂ ಉಚಿತ ಬಸ್ ಪ್ರಯಾಣ ನೀಡಿದ್ದಾರೆ. ಯುವ ಕ್ರೀಡಾಪಟುಗಳಿಗೆ ಪ್ರೋತ್ಸಾಹ ಧನದ ಮೂಲಕ ಉತ್ತೇಜಿಸುತ್ತಿದ್ದಾರೆ. ಇಂತಹ ವಿಚಾರಗಳನ್ನು ಯುವ ಸಮುದಾಯಕ್ಕೆ ಯುವ ಕಾಂಗ್ರೆಸ್ ಪದಾಧಿಕಾರಿಗಳು ತಿಳಿಸುವ ಮೂಲಕ ಜಾಗೃತಿ ಮೂಡಿಸಬೇಕು. ಯುವ ಕಾಂಗ್ರೆಸ್ ಮೂಲಕ ಬಹಳಷ್ಟು ಜನ ಎತ್ತರಕ್ಕೆ ಬೆಳೆದಿದ್ದಾರೆ. ನಾಯಕತ್ವ ಬೆಳೆಸಿಕೊಳ್ಳಲು ಯುವ ಕಾಂಗ್ರೆಸ್ ಒಳ್ಳೆಯ ವೇದಿಕೆಯಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಯುವ ಜನತೆಯ ಬಗ್ಗೆ ಹೆಚ್ಚು ಕಾಳಜಿ ಹೊಂದಿದ್ದಾರೆ. ಅವರ ಕೈ ಬಲಪಡಿಸುವ ಮೂಲಕ ದೇಶದಲ್ಲಿ ಸಂವಿಧಾನ ವಿರೋಧಿ ಬಿಜೆಪಿಯನ್ನು ಕಿತ್ತೊಗೆಯಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ನಗರ ಯುವ ಕಾಂಗ್ರೆಸ್ ಅಧ್ಯಕ್ಷ ಸೈಯದ್ ಅಬ್ರಾರ್, ಕೃಷ್ಣರಾಜ ಕ್ಷೇತ್ರ ಯುವ ಕಾಂಗ್ರೆಸ್ ಅಧ್ಯಕ್ಷ ರಾಕೇಶ್, ಕಾಂಗ್ರೆಸ್ ಮುಖಂಡ ರವಿಶಂಕರ್, ಅಸಂಘಟಿತ ಕಾರ್ಮಿಕರ ವಿಭಾಗದ ಅಧ್ಯಕ್ಷ ವಿನಯ್ ಕುಮಾರ್. ಜೆ, ಮಂಜುನಾಥ್ ಎಸ್, ಹಿಂದುಳಿದ ವರ್ಗಗಳ ಸಮಿತಿಯ ಅಧ್ಯಕ್ಷ ಕುಮಾರ್ ಕುಮ್ಮಿ, ಶಂಕರ್, ಗುಣಶೇಖರ್, ಮಹ್ಮದ್ ಫಾರೂಖ್, ಜಗನ್ನಾಥ್ ಭೋವಿ, ಸುಂದರ್, ರಾಘವೇಂದ್ರ ಮತ್ತು ಕಾಂಗ್ರೆಸ್ ಪಕ್ಷದ ಹಲವಾರು ಮುಖಂಡರು ಉಪಸ್ಥಿತರಿದ್ದರು.

ಪ್ರಜಾಪ್ರಭುತ್ವ ರಕ್ಷಣೆಗಾಗಿ ಬಿಜೆಪಿ ವಿರುದ್ಧ ಮತ ಚಲಾಯಿಸಿ

ಮತದಾರರಲ್ಲಿ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ಅಧ್ಯಕ್ಷ ಶಿವರಾಮು ಮನವಿ

ಮೈಸೂರು, ಮಾ.26(ಜಿಎ)– ಪ್ರಜಾಪ್ರಭುತ್ವದ ರಕ್ಷಣೆಗಾಗಿ ಲೋಕಸಭಾ ಚುನಾವಣೆಯಲ್ಲಿ ಮತದಾರರು ಬಿಜೆಪಿ ವಿರುದ್ಧ ಮತ ಚಲಾಯಿಸುವಂತೆ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ಅಧ್ಯಕ್ಷ ಕೆ.ಎಸ್.ಶಿವರಾಮು ಮನವಿ ಮಾಡಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರಕ್ಕೆ ಮತ್ತೊಮ್ಮೆ ಅಧಿಕಾರ ನೀಡುವುದು ಪ್ರಜಾಪ್ರಭುತ್ವಕ್ಕೆ ಅಪಾಯ. ಅವರು ಗೆದ್ದರೆ ಈ ಚುನಾವಣೆಯೇ ದೇಶದ ಕೊನೆ ಚುನಾವಣೆಯಾಗುವ ಸಾಧ್ಯತೆಯೂ ಇದೆ ಎಂದು ಆತಂಕ ವ್ಯಕ್ತಪಡಿಸಿದರು.

ದೇವರ ಹೆಸರನ್ನು ಹೇಳುತ್ತಾ ಬಂಡವಾಳಶಾಹಿ ಪರ ಆಡಳಿತ ನಡೆಸುವ ನರೇಂದ್ರ ಮೋದಿಯಿಂದ ಭಾರತ ದೇಶ ಬೂದಿಯಾಗುತ್ತಿದೆ. ಅವರಿಗೆ ಮತ್ತೆ ಅಧಿಕಾರ ದೊರೆತರೆ ಮೀಸಲಾತಿಯನ್ನು ತೆಗೆದುಹಾಕುವುದೇ ಅವರ ಗುರಿಯಾಗಿದ್ದು, ಹಿಂದುಳಿದವರನ್ನು ಶಾಶ್ವತವಾಗಿ ಮೇಲ್ವರ್ಗದವರ ಗುಲಾಮರಾಗಿಸುವ ಉದ್ದೇಶ ಹೊಂದಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಸಂಸದ ಪ್ರತಾಪ ಸಿಂಹನನ್ನು ನಾವು ಸೈದ್ಧಾಂತಿಕವಾಗಿ ವಿರೋಧಿಸುತ್ತಿದ್ದೆವು. ಆದರೆ, ಅವರದೇ ಪಕ್ಷದ ಮುಖಂಡರು ರಾಜಕೀಯವಾಗಿ ಮುಗಿಸಿಬಿಟ್ಟರು. ನಿರುದ್ಯೋಗದ ಅಸಮಾನತೆ, ಬಡತನದ ಕುರಿತು ಗಮನಹರಿಸದ ಬಿಜೆಪಿ ಮತ್ತೊಮ್ಮೆ ಅಧಿಕಾರಕ್ಕೆ ಬರಲೇಬಾರದು. ಹಿಂದುಳಿದವರೆಲ್ಲರೂ ಕಾಂಗ್ರೆಸ್ ಪಕ್ಷವನ್ನೇ ಈ ಬಾರಿ ಬೆಂಬಲಿಸಬೇಕು ಎಂದು ಮನವಿ ಮಾಡಿದರು. ಸುದ್ದಿಗೋಷ್ಠಿಯಲ್ಲಿ ವೇದಿಕೆ ಮುಖಂಡರಾದ ಯೋಗೇಶ್ ಉಪ್ಪಾರ್, ಲೋಕೇಶ್ ಮಾದಾಪುರ, ಮಂಜುನಾಥ್, ರಘುನಂದನ್ ಉಪಸ್ಥಿತರಿದ್ದರು.

ಡಿ.ಕೆ.ಸುರೇಶ್‌ರಿಂದ ಉಚಿತ ಉಡುಗೊರೆ ಯೋಜನೆ ಆರೋಪ ತನಿಖೆ ನಡೆಸಿ ಸೂಕ್ತ ಕ್ರಮಕ್ಕೆ ರಾಜ್ಯ ಮುಖ್ಯ ಚುನಾವಣಾಧಿಕಾರಿಗೆ ಚುನಾವಣಾ ಆಯೋಗ ಸೂಚನೆ

●ಮಾಜಿ ಪ್ರಧಾನಿ ದೇವೇಗೌಡರಿಂದ ಸಾಕ್ಷಿ ಸಮೇತ ದೂರು ●ಡಾ.ಮಂಜುನಾಥ್ ಈ ಕ್ಷೇತ್ರದ ಎನ್‌ಡಿಎ ಅಭ್ಯರ್ಥಿ

ಬೆಂಗಳೂರು, ಮಾ. 26(ಕೆಎಂಶಿ)– ಕಾಂಗ್ರೆಸ್ ಸಂಸದ ಡಿ.ಕೆ.ಸುರೇಶ್ ಅವರು, ತಾವು ಸ್ಪರ್ಧಿಸಿರುವ ಬೆಂಗಳೂರು ಗ್ರಾಮಾಂತರ ಕ್ಷೇತ್ರದ ಮತದಾರರಿಗೆ ಉಚಿತ ಕೊಡುಗೆಗಳನ್ನು ನೀಡಲು ಯೋಜನೆ ರೂಪಿಸುತ್ತಿದ್ದಾರೆ ಎಂಬ ಆರೋಪಕ್ಕೆ ಸಂಬಂಧಿಸಿದಂತೆ ತನಿಖೆ ನಡೆಸಿ, ತಕ್ಷಣವೇ ಸೂಕ್ತ ಕ್ರಮ ಕೈಗೊಳ್ಳಿ ಎಂದು ಕೇಂದ್ರ ಚುನಾವಣಾ ಆಯೋಗ ಕರ್ನಾಟಕದ ಮುಖ್ಯ ಚುನಾವಣಾಧಿಕಾರಿಗಳಿಗೆ ಸೂಚಿಸಿದೆ.

ಇತ್ತೀಚೆಗಷ್ಟೇ ಕ್ಷೇತ್ರದ ವ್ಯಾಪ್ತಿಯಲ್ಲಿ ಕುಕ್ಕರ್ ಸೇರಿದಂತೆ ಕೆಲವು ಉಡುಗೊರೆಗಳನ್ನು ಮತದಾರರಿಗೆ ನೀಡಲು ಸಂಗ್ರಹಿಸಿಟ್ಟಿದ್ದ ಸ್ಥಳಗಳಿಗೆ ಬಿಜೆಪಿ ಮತ್ತು ಜೆಡಿಎಸ್ ಕಾರ್ಯಕರ್ತರು ದಾಳಿ ಮಾಡಿ, ಅವುಗಳನ್ನು ವಶಕ್ಕೆ ತೆಗೆದುಕೊಂಡಿದ್ದರು.

ತದನಂತರ ಕುಮಾರಸ್ವಾಮಿ ಸುದ್ದಿಗೋಷ್ಠಿ ನಡೆಸಿ, ಕ್ಷೇತ್ರದಲ್ಲಿ ಜಿಲ್ಲಾಧಿಕಾರಿ ಸೇರಿದಂತೆ ಎಲ್ಲರೂ ಸುರೇಶ್ ಮರ್ಜಿಯಲ್ಲಿದ್ದಾರೆ, ಆಯೋಗ ಇಲ್ಲಿ ಕ್ರಮ ಕೈಗೊಳ್ಳಲು ವಿಫಲವಾಗಿದೆ ಎಂದು ದಾಖಲೆ ಸಮೇತ ಆರೋಪ ಮಾಡಿದ್ದರು.

ಆಯೋಗ ಕಠಿಣ ಕ್ರಮ ಕೈಗೊಳ್ಳದಿದ್ದರೆ, ನಾವು ಕೇಂದ್ರ ಚುನಾವಣಾ ಆಯೋಗಕ್ಕೆ ದೂರು ನೀಡಬೇಕಾಗುತ್ತದೆ, ತಕ್ಷಣವೇ ಮಧ್ಯೆ ಪ್ರವೇಶ ಮಾಡಬೇಕೆಂದು ಒತ್ತಾಯಿಸಿದ್ದರು. ಈ ಬೆಳವಣಿಗೆಗೆ ಸಂಬಂಧಿಸಿದಂತೆ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು, ಕೇಂದ್ರ ಚುನಾವಣಾ ಆಯೋಗಕ್ಕೆ ಪತ್ರ ಬರೆದು ದಾಖಲೆ ಸಮೇತ ದೂರು ನೀಡಿದ್ದರು.

ಗೌಡರ ದೂರಿನ ಆಧಾರದ ಮೇಲೆ ಕೇಂದ್ರ ಚುನಾವಣಾ ಆಯೋಗ, ರಾಜ್ಯದ ಸಿಇಓಗೆ ಪತ್ರ ಬರೆದು, ಮಾದರಿ ನೀತಿ ಸಂಹಿತೆ ಮತ್ತು ಸಂಬಂಧಿತ ಕಾನೂನು ನಿಬಂಧನೆಗಳನ್ನು ಗಮನದಲ್ಲಿಟ್ಟುಕೊಂಡು ಕ್ರಮ ಕೈಗೊಳ್ಳುವಂತೆ ಆದೇಶಿಸಿದೆ.

ಬೆಂಗಳೂರು ಗ್ರಾಮಾಂತರ ಕ್ಷೇತ್ರದಲ್ಲಿ ಡಿ.ಕೆ.ಸುರೇಶ್ ವಿರುದ್ಧ ದೇವೇಗೌಡರ ಅಳಿಯ ಹಾಗೂ ಹೃದಯ ತಜ್ಞ ಡಾ.ಸಿ.ಎನ್.ಮಂಜುನಾಥ್ ಬಿಜೆಪಿ ಅಭ್ಯರ್ಥಿಯಾಗಿ ಕಣದಲ್ಲಿದ್ದಾರೆ. ಕಾಂಗ್ರೆಸ್ ಸಂಸದ ಸುರೇಶ್ ಸಹೋದರ ಡಿ.ಕೆ.ಶಿವಕುಮಾರ್ ಉಪಮುಖ್ಯಮಂತ್ರಿ ಆಗಿದ್ದು, ಅಧಿಕಾರ ದುರ್ಬಳಕೆ ಮಾಡಿಕೊಳ್ಳುತ್ತಿದ್ದಾರೆ ಎಂಬ ಆರೋಪವೂ ಗೌಡರ ಪತ್ರದಲ್ಲಿ ಸೇರಿತ್ತು.

ಗ್ಯಾರಂಟಿ ಯೋಜನೆಯಿಂದ ಜನರಿಗೆ ನೆಮ್ಮದಿ ಬದುಕು

ಜನತೆಗೆ ಮುಡಾ ಅಧ್ಯಕ್ಷ ಕೆ.ಮರಿಗೌಡರ ಗ್ಯಾರಂಟಿ

ಮೈಸೂರು, ಮಾ.26(ಬಿಎಲ್‌ಯು)– ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಜಾರಿಗೊಳಿಸಿರುವ ಪಂಚ ಗ್ಯಾರಂಟಿ ಯೋಜನೆಯಿಂದ ರಾಜ್ಯದಲ್ಲಿ ಜನರು ನೆಮ್ಮದಿಯಿಂದ ಬದುಕುತ್ತಿದ್ದಾರೆ ಎಂದು ಮುಡಾ ಅಧ್ಯಕ್ಷ ಕೆ.ಮರಿಗೌಡ ಅಭಿಪ್ರಾಯಪಟ್ಟರು.

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ರಾಮಕೃಷ್ಣನಗರದ ತಮ್ಮ ಗೃಹ ಕಚೇರಿಯಲ್ಲಿ ನಡೆದ ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಮುಂಚೂಣಿ ಘಟಕದ ಅಧ್ಯಕ್ಷರ ಸಭೆಯಲ್ಲಿ ಮಾತನಾಡಿದ ಅವರು, ಅಧಿಕಾರಕ್ಕೆ ಬಂದ ಒಂದೇ ತಿಂಗಳ ಅವಧಿಯಲ್ಲಿ ಐದು ಗ್ಯಾರಂಟಿಗಳನ್ನು ಸಿದ್ದರಾಮಯ್ಯ ಜಾರಿಗೊಳಿಸಿ, ಜನರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ ಎಂದರು.

ಗೃಹಲಕ್ಷ್ಮಿ ಯೋಜನೆಯಿಂದ 1.20 ಕೋಟಿ ಕುಟುಂಬದ ಯಜಮಾನಿಯರಿಗೆ 2 ಸಾವಿರ ರೂಪಾಯಿ ದೊರೆಯುತ್ತಿದೆ. ಗೃಹಜ್ಯೋತಿ ಯೋಜನೆಯಿಂದ 200 ಯೂನಿಟ್ ತನಕ ಉಚಿತ ವಿದ್ಯುತ್ ದೊರೆಯುತ್ತಿದೆ. ಅನ್ನಭಾಗ್ಯ ಯೋಜನೆಯಿಂದ 4.5 ಕೋಟಿ ಜನರಿಗೆ ಪಡಿತರ ಸಿಗುತ್ತಿದೆ. ಶಕ್ತಿ ಯೋಜನೆಯಿಂದ ಎಲ್ಲಾ ಮಹಿಳೆಯರು ಉಚಿತವಾಗಿ ಪ್ರಯಾಣ ಮಾಡುವ ಸೌಲಭ್ಯ ದೊರೆತಿದೆ. ಯುವ ನಿಧಿ ಯೋಜನೆಯಲ್ಲಿ ಪದವೀಧರರಿಗೆ ನಿರುದ್ಯೋಗ ಭತ್ಯೆ ಸಿಗುತ್ತಿದೆ. ಈ ಮೂಲಕ ರಾಜ್ಯದ ಎಲ್ಲಾ ವರ್ಗದ ಜನರಿಗೆ ಗ್ಯಾರಂಟಿ ಯೋಜನೆಯ ಸೌಲಭ್ಯ ದೊರೆಯುತ್ತಿದೆ ಎಂದು ಮರಿಗೌಡರು ಹೇಳಿದರು.



ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಚುನಾವಣೆ ಹಿನ್ನೆಲೆಯಲ್ಲಿ ಮಂಗಳವಾರ ರಾಮಕೃಷ್ಣನಗರದಲ್ಲಿ ನಡೆದ ಚಾಮುಂಡೇಶ್ವರಿ ಕ್ಷೇತ್ರದ ಕಾಂಗ್ರೆಸ್ ಸಭೆಯಲ್ಲಿ ಮುಡಾ ಅಧ್ಯಕ್ಷ ಕೆ.ಮರಿಗೌಡ ಮಾತನಾಡಿದರು.

ಇದನ್ನು ಮನಗಂಡು ರಾಜ್ಯದ ಜನರು ಕಾಂಗ್ರೆಸ್ ಬೆಂಬಲಿಸಬೇಕು. ಕೇಂದ್ರ ಸರ್ಕಾರದ ಜನವಿರೋಧಿ ನೀತಿಗೆ ತಕ್ಕ ಪಾಠ ಕಲಿಸಬೇಕು. ಈ ಮೂಲಕ ನಮ್ಮ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ ಅವರನ್ನು ಗೆಲ್ಲಿಸಬೇಕು ಎಂದು ಮನವಿ ಮಾಡಿದರು.

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಕಾಂಗ್ರೆಸ್ ಕಚೇರಿ ಆವರಣದಲ್ಲಿ ನಾಳೆ(ಮಾರ್ಚ್ 27) ಚಾಮುಂಡೇಶ್ವರಿ ಕ್ಷೇತ್ರದ ಸಭೆ ನಡೆಯಲಿದ್ದು, ಹೆಚ್ಚಿನ ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಬೇಕು ಎಂದು ಮರೀಗೌಡರು ಮನವಿ ಮಾಡಿದರು.

ಚಾಮುಂಡೇಶ್ವರಿ ಕ್ಷೇತ್ರದ ಇಲವಾಲ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗುರುಸ್ವಾಮಿ, ಚಾಮುಂಡೇಶ್ವರಿ ಬ್ಲಾಕ್ ಅಧ್ಯಕ್ಷ ಜೆ.ಸತೀಶ್ ಕುಮಾರ್, ಮಾಜಿ ಮೇಯರ್ ಚಿಕ್ಕಣ್ಣ, ಮಹಿಳಾ ಘಟಕದ ಅಧ್ಯಕ್ಷೆ ಭಾಗ್ಯ ಲೋಕೇಶ್, ನಾಗರತ್ನ, ಹರೀಶ್ ಮೊಗಣ್ಣ ಸೇರಿದಂತೆ ಹಲವರು ಸಭೆಯಲ್ಲಿ ಭಾಗವಹಿಸಿದ್ದರು.

ಮೈಸೂರು ಮಿತ್ರ ಬುಧವಾರ 27 ಮಾರ್ಚ್ 2024

ಕೊಡಗಿನ ಮತ್ತಷ್ಟು ಅಭಿವೃದ್ಧಿಗೆ ನನ್ನನ್ನು ಗೆಲ್ಲಿಸಿ

ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ್ ಮನವಿ



ತಲಕಾವೇರಿ ಕ್ಷೇತ್ರದಲ್ಲಿ ಮಂಗಳವಾರ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ್ ವಿಶೇಷ ಪೂಜೆ ಸಲ್ಲಿಸಿದರು. ಶಾಸಕರಾದ ಎ.ಎಸ್.ಪೊನ್ನಣ್ಣ, ಡಾ.ಮಂತರ್‌ಗೌಡ ಇದ್ದರು.

ಮಡಿಕೇರಿ, ಮಾ.26–ಅಭಿವೃದ್ಧಿ ಕಾರ್ಯಗಳನ್ನು ಹೀಗೂ ಮಾಡಬಹುದು ಎಂದು ಕೊಡಗಿನ ಇಬ್ಬರು ಕಾಂಗ್ರೆಸ್ ಶಾಸಕರು ಕೇವಲ 10 ತಿಂಗಳಲ್ಲಿ ತೋರಿಸಿದ್ದಾರೆ. ಕೊಡಗನ್ನು ಮತ್ತಷ್ಟು ಅಭಿವೃದ್ಧಿಗೊಳಿಸಲು ನನ್ನನ್ನು ಗೆಲ್ಲಿಸಿ ಎಂದು ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ್ ಮನವಿ ಮಾಡಿದರು.

ಭಾಗಮಂಡಲ ಮತ್ತು ತಲಕಾವೇರಿ ಕ್ಷೇತ್ರದಲ್ಲಿ ಮಂಗಳವಾರ ವಿಶೇಷ ಪೂಜೆ ಸಲ್ಲಿಸಿ, ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್‌ನ ನೂತನ ಶಾಸಕರಾದ ಎ.ಎಸ್.ಪೊನ್ನಣ್ಣ ಮತ್ತು ಡಾ.ಮಂತರ್ ಗೌಡ ಅವರ ಆಯ್ಕೆಯಿಂದ ಕಳೆದ 20–25 ವರ್ಷಗಳ ಕೆಟ್ಟ ಆಡಳಿತದ ಕೊಡಗಿಗೆ ಮುಕ್ತಿ ಸಿಕ್ಕಿದೆ. ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದಲ್ಲಿ ಕಿಡಿ ಹೊತ್ತಿಸುವ ವ್ಯವಸ್ಥೆಗೆ ಮುಕ್ತಿ ಸಿಗಬೇಕಾಗಿದೆ. ಕೊಡಗಿನಲ್ಲಿ ಮತ್ತಷ್ಟು ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲು ಜನರು ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಗೆಲ್ಲಿಸುತ್ತಾರೆ ಎನ್ನುವ ನಂಬಿಕೆ ಇದೆ ಎಂದರು.

ಮಡಿಕೇರಿ ಮತ್ತು ವಿರಾಜಪೇಟೆ ಕ್ಷೇತ್ರಗಳಲ್ಲಿ ಪ್ರವಾಸ ಮಾಡಿದ್ದೇನೆ. ಎಲ್ಲಿ ನೋಡಿದರೂ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿವೆ. ಕೇವಲ 10 ತಿಂಗಳಲ್ಲಿ 350 ಕೋಟಿ ರೂ.ಗೂ ಅಧಿಕ ಅನುದಾನ ತಂದು ವಿವಿಧ ಅಭಿವೃದ್ಧಿ ಕಾರ್ಯಗಳಿಗೆ ಶಂಕುಸ್ಥಾಪನೆಗಳು ನೆರವೇರಿಸಲಾಗಿದೆ. ಕೊಡಗಿನ ಕೆಲವು ಕಡೆ ಕಾಮಗಾರಿಯೇ ಮುಗಿದಿದೆ. ಜಿಲ್ಲೆಯಲ್ಲಿ ಅಭಿವೃದ್ಧಿಯೊಂದೆ ಗುರಿಯಾಗಿದ್ದು, 10 ತಿಂಗಳಲ್ಲಿ ಯಾವುದೇ ಕೋಮು ಗಲಭೆ ನಡೆದಿಲ್ಲ. ಎಲ್ಲರೂ ಒಗ್ಗಟ್ಟಿನಿಂದ ಇದ್ದಾರೆ. ಶಾಸಕರಾದವರು ಅಭಿವೃದ್ಧಿ ಕಾರ್ಯಗಳನ್ನು ಹೀಗೂ ಮಾಡಬಹುದು ಎನ್ನುವುದನ್ನು ಎ.ಎಸ್.ಪೊನ್ನಣ್ಣ ಹಾಗೂ ಡಾ.ಮಂತರ್‌ಗೌಡ ಇಬ್ಬರು ತೋರಿಸಿಕೊಟ್ಟಿದ್ದು, ಜನರಿಗೆ ಈಗ ಅಭಿವೃದ್ಧಿ ಎಂದರೆ ಏನು? ಶಾಸಕರೆಂದರೆ ಹೇಗಿರಬೇಕು? ಎನ್ನುವುದು ಅರ್ಥವಾಗಿದೆ ಎಂದು ಹೇಳಿದರು.

ಇದೇ ವೇಳೆ ಕಾಂಗ್ರೆಸ್ ವಕ್ತಾರ ಟಾಟೂ ಮೊಣ್ಣಪ್ಪ, ಮುಖಂಡರಾದ ಹೆಚ್.ಎಸ್.ಚಂದ್ರಮೌಳಿ, ಮಿದೇರಿರ ನವೀನ್, ತೆನ್ನಿರ ಮೈನಾ ಮತ್ತಿತರರು ಹಾಜರಿದ್ದರು.

ಭಾಗಮಂಡಲ, ತಲಕಾವೇರಿಯಲ್ಲಿ ಪೂಜೆ

ಕಾಂಗ್ರೆಸ್ ಅಭ್ಯರ್ಥಿಯಾದ ಬಳಿಕ ಮೊದಲ ಬಾರಿಗೆ ಜಿಲ್ಲೆಗೆ ಆಗಮಿಸಿದ ಎಂ.ಲಕ್ಷ್ಮಣ್ ಅವರನ್ನು ಕೊಡಗು ಗಡಿ ಭಾಗ ಆನೆಚೌಕೂರಿನಲ್ಲಿ ಶಾಸಕರಾದ ಅಜ್ಜಿಕುಟ್ಟಿರ ಎಸ್.ಪೊನ್ನಣ್ಣ, ಡಾ.ಮಂತರ್‌ಗೌಡ, ಜಿಲ್ಲಾಧ್ಯಕ್ಷ ಧರ್ಮಜ ಉತ್ತಪ್ಪ ಸೇರಿದಂತೆ ಪಕ್ಷದ ಕಾರ್ಯಕರ್ತರು ಆತ್ಮೀಯವಾಗಿ ಬರಮಾಡಿಕೊಂಡರು. ಬಳಿಕ ಭಾಗಮಂಡಲ ಮತ್ತು ತಲಕಾವೇರಿ ಕ್ಷೇತ್ರಕ್ಕೆ ತೆರಳಿದ ಎಂ.ಲಕ್ಷ್ಮಣ್ ಅವರು ವಿಶೇಷ ಪೂಜೆ ಸಲ್ಲಿಸಿ, ತಮ್ಮ ಗೆಲುವಿಗಾಗಿ ಪ್ರಾರ್ಥಿಸಿ ಪ್ರಚಾರ ನಡೆಸಿದರು.

ಇಂದು ಬಿಜೆಪಿ ಕಾರ್ಯಕರ್ತರ ಬೃಹತ್ ಸಮಾವೇಶ



ಮಡಿಕೇರಿಯ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ನಾಪಂಡ ರವಿ ಕಾಳಪ್ಪ ಮಾತನಾಡಿದರು.

ಮಡಿಕೇರಿ, ಮಾ.26– ನಗರದ ಕ್ರಿಸ್ಟಲ್ ಕೋರ್ಟ್ ಸಭಾಂಗಣದಲ್ಲಿ ಮಾ.27ರಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ನೇತೃತ್ವದಲ್ಲಿ ಪಕ್ಷದ ಕಾರ್ಯಕರ್ತರ ಬೃಹತ್ ಸಮಾವೇಶ ನಡೆಯಲಿದೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ನಾಪಂಡ ರವಿ ಕಾಳಪ್ಪ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿ.ವೈ.ವಿಜಯೇಂದ್ರ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಗ್ಗೆ ವಿಶೇಷ ಆಸಕ್ತಿ ಹೊಂದಿದ್ದಾರೆ. ಅತ್ಯಧಿಕ ಮತಗಳ ಅಂತರದಿಂದ ಪಕ್ಷದ ಅಭ್ಯರ್ಥಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರನ್ನು ಗೆಲ್ಲಿಸುವ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ತಕ್ಕ ಉತ್ತರ ನೀಡಲು ಮುಂದಾಗಿದ್ದಾರೆ. ಕಳೆದ ಬಾರಿ ಲೋಕಸಭಾ ಚುನಾವಣೆಯಲ್ಲಿ ಪ್ರತಾಪ್ ಸಿಂಹ ಸುಮಾರು 1.30 ಲಕ್ಷ ಮತಗಳ ಅಂತರದಿಂದ ಗೆಲುವು ಸಾಧಿಸಿದ್ದರು. ಈ ಬಾರಿ ಯದುವೀರ್ 2 ಲಕ್ಷ ಮತಗಳ ಅಂತರದಿಂದ ಗೆಲುವು ಸಾಧಿಸಲಿದ್ದಾರೆ. ಕೊಡಗು ಜಿಲ್ಲೆಯಲ್ಲಿ ಕಳೆದ ಬಾರಿ 85 ಸಾವಿರ ಮತಗಳ ಅಂತರವಿತ್ತು. ಈ ಬಾರಿ 1 ಲಕ್ಷಕ್ಕೂ ಅಧಿಕ ಗೆಲುವಿನ ಮತಗಳನ್ನು ನೀಡಲಾಗುವುದು. ಈ ನಿಟ್ಟಿನಲ್ಲಿ ಬುಧವಾರ ಪಕ್ಷದ ಕಾರ್ಯಕರ್ತರ ಬೃಹತ್ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದರು.

ಸಮಾವೇಶದಲ್ಲಿ ಅಭ್ಯರ್ಥಿ ಯದುವೀರ್, ಸಂಸದ ಪ್ರತಾಪ್ ಸಿಂಹ, ಕೊಡಗು ಉಸ್ತುವಾರಿ ಅಶ್ವತ್ಥ್ ನಾರಾಯಣಗೌಡ, ಮಾಜಿ ಶಾಸಕರಾದ ಎಸ್.ಎ.ರಾಮದಾಸ್, ಕೆ.ಜಿ.ಬೋಪಯ್ಯ, ಎಂ.ಪಿ.ಅಪ್ಪಚ್ಚು ರಂಜನ್, ವಿಧಾನ ಪರಿಷತ್ ಸದಸ್ಯ ಸುಜಾ ಕುಶಾಲಪ್ಪ, ಸಂಚಾಲಕ ರವಿ ಶಂಕರ್, ಪಕ್ಷದ ಎಲ್ಲಾ ಚುನಾಯಿತ ಪ್ರತಿನಿಧಿಗಳು, ವಿವಿಧ ಮೋರ್ಚಾ ಅಧ್ಯಕ್ಷರು, ಪದಾಧಿಕಾರಿಗಳು ಸೇರಿದಂತೆ 4 ಸಾವಿರಕ್ಕೂ ಅಧಿಕ ಕಾರ್ಯಕರ್ತರು ಪಾಲ್ಗೊಳ್ಳಲಿದ್ದಾರೆ ಎಂದು ಮಾಹಿತಿ ನೀಡಿದರು.

> ಕೊಡಗು–ಮೈಸೂರು ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಅವರು ಏ.3ರಂದು ನಾಮಪತ್ರ ಸಲ್ಲಿಸಲಿದ್ದು, ಕೊಡಗು ಜಿಲ್ಲೆಯಿಂದ ಸಾವಿರಾರು ಬಿಜೆಪಿ ಕಾರ್ಯಕರ್ತರು ಮೈಸೂರಿಗೆ ತೆರಳಲಿದ್ದಾರೆ. ಈ ಬಾರಿ ಯದುವೀರ್ ಅವರಿಗೆ ಕೊಡಗು ಜಿಲ್ಲೆಯಿಂದ 1 ಲಕ್ಷ ಮತಗಳ ಲೀಡ್ ನೀಡುತ್ತೇವೆ.
>
> -ನಾಪಂಡ ರವಿ ಕಾಳಪ್ಪ, ಬಿಜೆಪಿ ಜಿಲ್ಲಾಧ್ಯಕ್ಷ

ಸಿಎಂಗೆ ಸರ್ಕಾರ ಪತನದ ಭಯ: ರಾಜ್ಯದ 28 ಲೋಕಸಭಾ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಕಡಿಮೆ ಗೆಲುವು ಸಾಧಿಸಿದರೆ ಸರ್ಕಾರ ಪತನವಾಗುತ್ತದೆ ಎನ್ನುವ ಆತಂಕದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಇದ್ದಾರೆ. ಇದೇ ಕಾರಣಕ್ಕೆ ಮೈಸೂರು–ಕೊಡಗು ಕ್ಷೇತ್ರ ಸೇರಿದಂತೆ 20ಕ್ಕೂ ಹೆಚ್ಚು ಕ್ಷೇತ್ರಗಳನ್ನು ಗೆಲ್ಲುವ ಪ್ರಯತ್ನದಲ್ಲಿದ್ದಾರೆ. ಆದರೆ, ಸಿದ್ದರಾಮಯ್ಯ ಅವರ ಈ ಪ್ರಯತ್ನ ಫಲ ನೀಡುವುದಿಲ್ಲ ಎಂದು ರವಿ ಕಾಳಪ್ಪ ಭವಿಷ್ಯ ನುಡಿದರು.

ಬೋಗಸ್ ಶ್ವೇತಪತ್ರ: ವಿರಾಜಪೇಟೆ ಶಾಸಕ ಎ.ಎಸ್.ಪೊನ್ನಣ್ಣ ಬೋಗಸ್ ಶ್ವೇತಪತ್ರ ಬಿಡುಗಡೆ ಮಾಡಿದ್ದಾರೆ ಎಂದು ಜಿಲ್ಲಾ ಬಿಜೆಪಿ ವಕ್ತಾರ ಸುಬ್ರಹ್ಮಣ್ಯ ಉಪಾಧ್ಯಾಯ ಟೀಕಿಸಿದರು.

ಅವರು ಬಿಡುಗಡೆ ಮಾಡಿರುವ ಶ್ವೇತಪತ್ರದಲ್ಲಿ ಅರ್ಧದಷ್ಟು ಅನುದಾನ ಹಿಂದಿನ ಶಾಸಕ ಕೆ.ಜಿ.ಬೋಪಯ್ಯ ಅವರ ಅವಧಿಯದ್ದಾಗಿದೆ. ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಪೊನ್ನಣ್ಣ ಜನರನ್ನು ಮರುಳು ಮಾಡಲು ಶ್ವೇತಪತ್ರ ಬಿಡುಗಡೆ ಮಾಡಿದ್ದಾರೆ. ಆದರೆ, ಕೊಡಗು ಜಿಲ್ಲೆಯ ಜನ ಬುದ್ಧಿವಂತರಾಗಿದ್ದು, ಇದನ್ನೆಲ್ಲ ನಂಬುವುದಿಲ್ಲ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಮಹೇಶ್ ಜೈನಿ, ವಿ.ಕೆ.ಲೋಕೇಶ್, ಜಿಲ್ಲಾ ವಕ್ತಾರ ಅರುಣ್ ಕುಮಾರ್ ಹಾಗೂ ನಗರಾಧ್ಯಕ್ಷ ಉಮೇಶ್ ಸುಬ್ರಮಣಿ ಉಪಸ್ಥಿತರಿದ್ದರು.

ಏ.15ರಿಂದ ಕೊಡವ ಮುಸ್ಲಿಂ ಕುಟುಂಬಗಳ ನಡುವಿನ ಕ್ರಿಕೆಟ್ ಪಂದ್ಯಾವಳಿ

ವಿರಾಜಪೇಟೆ, ಮಾ.26–ಕೊಡವ ಮುಸ್ಲಿಂ ಕುಟುಂಬಗಳ ನಡುವಿನ ಕ್ರಿಕೆಟ್ ಪಂದ್ಯಾವಳಿ ಕುವೇಲರ ಕುಟುಂಬದ ಆಶ್ರಯದಲ್ಲಿ ಏ.15 ರಿಂದ 21ರ ವರೆಗೆ ವಿರಾಜಪೇಟೆ ಸಮೀಪದ ಚಾಮಿಯಾಲ ಗ್ರಾಮದ ದಿ.ಕುವೇಲರ ಉಸ್ಮಾನ್ ಹಾಜಿ ಅವರ ಮೈದಾನದಲ್ಲಿ ನಡೆಯಲಿದೆ ಎಂದು ಪಂದ್ಯಾವಳಿ ಸಮಿತಿಯ ಅಧ್ಯಕ್ಷ ಕುವೇಲೆರ ಅನಿಸ್ ಉಸ್ಮಾನ್ ತಿಳಿಸಿದರು.

ಕ್ರಿಕೆಟ್ ಪಂದ್ಯಾವಳಿ ಹಾಗೂ ಕುವೇಲೆರ ಕುಟುಂಬದ ಲೋಗೋ ಬಿಡುಗಡೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪ್ರಥಮ ವರ್ಷದ ಕ್ರಿಕೆಟ್ ಪಂದ್ಯಾವಳಿ 7 ದಿನ ನಡೆಯಲಿದ್ದು, ಒಟ್ಟು 64 ತಂಡಗಳು ಭಾಗವಹಿಸಲಿವೆ. ಪ್ರಥಮ ಬಹುಮಾನ 1 ಲಕ್ಷ ರೂ. ನಗದು ಹಾಗೂ ಟ್ರೋಫಿ, ದ್ವಿತೀಯ ಬಹುಮಾನ 50 ಸಾವಿರ ರೂ. ನಗದು ಹಾಗೂ ಟ್ರೋಫಿ, ಮೂರು ಮತ್ತು ನಾಲ್ಕನೇ ಬಹುಮಾನ ಟ್ರೋಫಿ ನೀಡಲಾಗುವುದು ಎಂದು ಮಾಹಿತಿ ನೀಡಿದರು.

ಇದೇ ವೇಳೆ ಕ್ರಿಕೆಟ್ ಪಂದ್ಯಾವಳಿ ಹಾಗೂ ಕುವೇಲೆರ ಕುಟುಂಬದ ಲೋಗೋವನ್ನು ಶಾಸಕ ಎ.ಎಸ್.ಪೊನ್ನಣ್ಣ ಬಿಡುಗಡೆಗೊಳಿಸಿದರು. ಸಮಿತಿಯ ಪ್ರಮುಖರಾದ ಕುವೇಲೆರ ಕುಟುಂಬದ ಅರ್ಶಾದ್, ಅಸ್ಫಾಕ್, ಆಲೀರ ಪವಿಲ್ ಉಸ್ಮಾನ್, ಶಜೀರ್, ರಶೀದ್, ಪುದಿಯತ್ ಮುನೀರ್, ಪರವಂಡ ಸಿರಾಜ್, ಕೋಲುಮಂಡ ರಫೀಕ್, ಕನ್ನಡಿಯಂಡ ಹನೀಫ್ ಮತ್ತಿತರರು ಉಪಸ್ಥಿತರಿದ್ದರು.

ಬೆಳ್ಳಿ ಟ್ರೋಫಿ ಕುಂಡ್ಯೋಳಂಡ ಕುಟುಂಬಕ್ಕೆ ಹಸ್ತಾಂತರ



ಕೊಡವ ಹಾಕಿ ಅಕಾಡೆಮಿಯಿಂದ ಬೆಳ್ಳಿಯ ರೋಲಿಂಗ್ ಟ್ರೋಫಿಯನ್ನು ಕುಂಡ್ಯೋಳಂಡ ಕುಟುಂಬಸ್ಥರಿಗೆ ಹಸ್ತಾಂತರಿಸಲಾಯಿತು.

ಮಡಿಕೇರಿ, ಮಾ.26–ಕೊಡವ ಕುಟುಂಬಗಳ ನಡುವಿನ ಪ್ರತಿಷ್ಠಿತ ಕುಂಡ್ಯೋಳಂಡ ಹಾಕಿ ಹಬ್ಬಕ್ಕೆ ದಿನಗಣನೆ ಆರಂಭಗೊಂಡಿದ್ದು, ಕೊಡವ ಹಾಕಿ ಅಕಾಡೆಮಿ 1 ಕೆಜಿ ಬೆಳ್ಳಿಯ ರೋಲಿಂಗ್ ಟ್ರೋಫಿಯನ್ನು ಕುಂಡ್ಯೋಳಂಡ ಕುಟುಂಬಸ್ಥರಿಗೆ ಹಸ್ತಾಂತರಿಸಿತು.

ನಗರದ ಖಾಸಗಿ ಹೋಟೆಲ್ ಸಭಾಂಗಣದಲ್ಲಿ ಮಂಗಳವಾರ ಹಾಕಿ ಅಕಾಡೆಮಿಯ ಪ್ರಮುಖರು ಹಾಗೂ ಕುಂಡ್ಯೋಳಂಡ ಕುಟುಂಬದ ಮುಖ್ಯಸ್ಥರು ಹಾಕಿ ಹಬ್ಬದ ಯಶಸ್ಸಿಗಾಗಿ ಸಮಾಲೋಚಿಸಿದರು. ಈ ಸಂದರ್ಭ ಅಕಾಡೆಮಿಯ ಪದಾಧಿಕಾರಿಗಳು ಬೆಳ್ಳಿಯ ಟ್ರೋಫಿಯನ್ನು ಕುಂಡ್ಯೋಳಂಡ ಕುಟುಂಬದ ಪ್ರಮುಖರಿಗೆ ನೀಡಿ, ಶುಭ ಕೋರಿದರು.

ಕೊಡವ ಹಾಕಿ ಅಕಾಡೆಮಿ ಅಧ್ಯಕ್ಷ ಪಾಂಡಂಡ ಕೆ.ಬೋಪಣ್ಣ, ಉಪಾಧ್ಯಕ್ಷ ಕುಕ್ಕೇರ ಜಯ ಚಿಣ್ಣಪ್ಪ, ಕ್ರೀಡಾಕೂಟದ ಸಂಚಾಲಕ ಕುಂಡ್ಯೋಳಂಡ ದಿನೇಶ್ ಕಾರ್ಯಪ್ಪ, ಅಧ್ಯಕ್ಷ ರಮೇಶ್ ಮುದ್ದಯ್ಯ, ಖಜಾಂಚಿ ಕುಂಡ್ಯೋಳಂಡ ವಿಶು ಪೂವಯ್ಯ, ಕಾರ್ಯಾಧ್ಯಕ್ಷ ಮೇಕೇರಿರ ರವಿ ಪೆಮ್ಮಯ್ಯ, ನಿರ್ದೇಶಕರಾದ ಮಾಳೇಟಿರ ಶ್ರೀನಿವಾಸ್, ಚೆಯ್ಯಂಡ ಸತ್ಯ, ಡೀನಾ ಪೂವಯ್ಯ ಹಾಗೂ ಕುಂಡ್ಯೋಳಂಡ ಕುಟುಂಬಸ್ಥರು ಉಪಸ್ಥಿತರಿದ್ದರು.

ಮಾ.30ರಿಂದ ಹಾಕಿ ಹಬ್ಬ: ಮಾ.30 ರಿಂದ ಏ.28ರವರೆಗೆ ನಾಪೋಕ್ಲುವಿನ ಕೆಪಿಎಸ್ ಶಾಲೆಯ ಜನರಲ್ ತಿಮ್ಮಯ್ಯ ಕ್ರೀಡಾಂಗಣದಲ್ಲಿ ಹಾಕಿ ಹಬ್ಬ ನಡೆಯಲಿದ್ದು, ಈಗಾಗಲೇ 360 ತಂಡಗಳು ಹೆಸರು ನೋಂದಾಯಿಸಿಕೊಂಡಿವೆ.

ನೇಣು ಬಿಗಿದುಕೊಂಡು ವ್ಯಕ್ತಿ ಆತ್ಮಹತ್ಯೆ



ಸುಂಟಿಕೊಪ್ಪ, ಮಾ.26–ವ್ಯಕ್ತಿಯೋರ್ವ ತನ್ನ ಮನೆಯ ಬಳಿಯ ಮರಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಕಾನ್‌ಬೈಲ್ ಬೈಚನಹಳ್ಳಿ (ನೆಟ್ಲಿ 'ಬಿ') ಗ್ರಾಮದಲ್ಲಿ ಸೋಮವಾರ ಸಂಜೆ ನಡೆದಿದೆ.

ಕಾನ್‌ಬೈಲ್ ಬೈಚನಹಳ್ಳಿ ಗ್ರಾಮದ ನಿವಾಸಿ ಸಂಜೀವ ಪೂಜಾರಿ ಅವರ ಪುತ್ರ ಮನು ಆತ್ಮಹತ್ಯೆ ಮಾಡಿಕೊಂಡ ವ್ಯಕ್ತಿ. ಈತ ಮನೆಯ ಅನತಿ ದೂರದಲ್ಲಿರುವ ಮರಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದು, ಆತ್ಮಹತ್ಯೆಗೆ ನಿಖರವಾದ ಕಾರಣ ತಿಳಿದು ಬಂದಿಲ್ಲ.

ಸಂಜೀವ ಪೂಜಾರಿ ಅವರ ಮತ್ತೊಬ್ಬ ಪುತ್ರ ಲೋಕೇಶ್ 7 ತಿಂಗಳ ಹಿಂದೆ ಮರದಿಂದ ಬಿದ್ದು ಮೃತಪಟ್ಟಿದ್ದರು. ಈಗ ಇನ್ನೊಬ್ಬ ಮಗನನ್ನು ಕಳೆದುಕೊಂಡ ಪೋಷಕರ ಆಕ್ರಂದನ ಮುಗಿಲು ಮುಟ್ಟಿತ್ತು. ಮೃತ ಮನುಗೆ ತಂದೆ, ತಾಯಿ, ಪತ್ನಿ, ಇಬ್ಬರು ಮಕ್ಕಳು ಇದ್ದಾರೆ. ಸುಂಟಿಕೊಪ್ಪ ಪೊಲೀಸ್ ಠಾಣಾಧಿಕಾರಿ ಎಂ.ಸಿ.ಶ್ರೀಧರ್ ಹಾಗೂ ಸಿಬ್ಬಂದಿ ಸ್ಥಳ ಪರಿಶೀಲಿಸಿ, ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಮಡಿಕೇರಿ ಜಿಲಾಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆ ನಡೆಸಿ, ನಂತರ ಶವವನ್ನು ಕುಟುಂಬಸ್ಥರಿಗೆ ಹಸ್ತಾಂತರಿಸಲಾಯಿತು.

ಬಿ.ವಿ.ಚಂದ್ರಶೇಖರ್ ನಿಧನ



ಮಡಿಕೇರಿ, ಮಾ.26–ಸುಂಟಿಕೊಪ್ಪ ಸಮೀಪದ ಕೊಡಗರಹಳ್ಳಿಯ ನಂದಿ ಕಾಫಿ ಎಸ್ಟೇಟ್ ಮಾಲೀಕ ಬಿ.ವಿ.ಚಂದ್ರಶೇಖರ್ (86) ಅವರು ಮಂಗಳವಾರ ಸ್ವಗೃಹದಲ್ಲಿ ನಿಧನರಾದರು.

ಮೃತರು ಪತ್ನಿ ಸೀತೆ, ಹಿರಿಯ ಪತ್ರಕರ್ತ ಬಿ.ಸಿ.ದಿನೇಶ್, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಸಂಜೆ ಸ್ವಗ್ರಾಮದಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಯಿತು.

ಎಲ್ಲಾ ಭರವಸೆ ಈಡೇರಿಸಿದ ಕಾಂಗ್ರೆಸ್: ಗಣೇಶ್ ಪ್ರಸಾದ್



ಗುಂಡ್ಲುಪೇಟೆ ತಾಲೂಕಿನ ಹಾಲಹಳ್ಳಿಯಲ್ಲಿ ನಡೆದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಶಾಸಕ ಗಣೇಶ್ ಪ್ರಸಾದ್ ಮಾತನಾಡಿದರು.

ಗುಂಡ್ಲುಪೇಟೆ, ಮಾ.26–ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ನೀಡಿದ್ದ ಎಲ್ಲಾ ಭರವಸೆಗಳನ್ನೂ ಈಡೇರಿಸಿ ರಾಜ್ಯದ ಮತದಾರರ ಮೆಚ್ಚುಗೆಗೆ ಪಾತ್ರವಾಗಿದೆ ಎಂದು ಶಾಸಕ ಹೆಚ್.ಎಂ.ಗಣೇಶ್ ಪ್ರಸಾದ್ ಹೇಳಿದರು.


ತಾಲೂಕಿನ ಹಾಲಹಳ್ಳಿ ಗ್ರಾಮದಲ್ಲಿ ಮಂಗಳವಾರ ಆಯೋಜಿಸಿದ್ದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯ ಕಾಂಗ್ರೆಸ್ ಜನಪರ ಕಾರ್ಯಕ್ರಮ ನಡೆಸುತ್ತಿದೆ. ತಾಲೂಕಿನಲ್ಲಿ ಗ್ರಾಪಂ, ವಿವಿಧ ಸಹಕಾರ ಸಂಘಗಳು, ಡೇರಿಗಳಲ್ಲಿ ಕಾಂಗ್ರೆಸ್ ಬೆಂಬಲಿತರ ಆಡಳಿತವಿದೆ. ಚಾಮರಾಜನಗರ ಲೋಕಸಭೆ ಕ್ಷೇತ್ರಕ್ಕೆ ಕಾಂಗ್ರೆಸ್‌ನಿಂದ ಸುನಿಲ್ ಬೋಸ್ ಹೆಸರು ಅಂತಿಮವಾಗಿದ್ದು, ಘೋಷಣೆಯಷ್ಟೇ ಬಾಕಿಯಿದೆ. ಆದ್ದರಿಂದ ಕಾರ್ಯಕರ್ತರು ಸರ್ಕಾರದ ಜನಪರ ಯೋಜನೆಗಳನ್ನು ಮನೆ ಮನೆಗೆ ತಲುಪಿ, ಲೋಕಸಭೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯ ಗೆಲುವಿಗೆ ಶ್ರಮಿಸಬೇಕು ಎಂದು ಮನವಿ ಮಾಡಿದರು.

ಸುಳ್ಳಿನ ಕಂತೆ ಕಟ್ಟುವ ಬಿಜೆಪಿ: ಬಿಜೆಪಿಯವರು ಸುಳ್ಳು ಭರವಸೆ ನೀಡುವ ಮೂಲಕ ಜನತೆಯ ದಾರಿ ತಪ್ಪಿಸುತ್ತಿದ್ದಾರೆ. ಇತ್ತೀಚೆಗೆ ಪಟ್ಟಣದಲ್ಲಿ ಕುಡಿಯುವ ನೀರಿನ ಕೃತಕ ಸಮಸ್ಯೆ ಸೃಷ್ಟಿಸಲಾಗಿದೆ. ಅಗತ್ಯ ಪ್ರಮಾಣದ ಕೊಳವೆ ಬಾವಿ ಕೊರೆಸುವ ಜತೆಗೆ ದಿನದ 24 ಗಂಟೆಯೂ ಕುಡಿಯುವ ನೀರು ಪೂರೈಸುವ ಎಕ್ಸ್‌ಪ್ರೆಸ್ ಲೈನ್ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದೆ ಎಂದರು. ಮಾಜಿ ಶಾಸಕ ನಿರಂಜನ್‌ಕುಮಾರ್ ಅಭಿವೃದ್ಧಿ ವಿಚಾರದಲ್ಲಿ ರಾಜಕೀಯ ಮಾಡುವುದು ಸರಿಯಲ್ಲ. ಪಟ್ಟಣದ ಮಡಹಳ್ಳಿ ರಸ್ತೆಯಲ್ಲಿ ತಮ್ಮದೇ ಕಲ್ಯಾಣ ಮಂಟಪ ವಿದ್ದರೂ ಆ ರಸ್ತೆಯನ್ನೇ ಅಭಿವೃದ್ಧಿ ಪಡಿಸಿಲ್ಲ. ಇಂತಹವರಿಂದ ಯಾವ ಅಭಿವೃದ್ಧಿ ಸಾಧ್ಯ ಎಂದು ಕುಟುಕಿದರು.

ನಿನ್ನೆ ಕ್ಷೇತ್ರಕ್ಕೆ ಭೇಟಿ ನೀಡಿದ್ದ ಬಿಜೆಪಿ ಅಭ್ಯರ್ಥಿ ಚುನಾವಣೆ ಸಂದರ್ಭದಲ್ಲಿ ಅನುಕಂಪ ಗಳಿಸುವ ಸಲುವಾಗಿ ದಿ.ಮಹದೇವಪ್ರಸಾದ್ ಅವರ ಸಮಾಧಿಗೆ ಭೇಟಿ ನೀಡಿದ್ದಾರೆ. ಆದರೆ, ಮಹದೇವಪ್ರಸಾದ್ ಎಂದೂ ಬಿಜೆಪಿ ಸಂಸ್ಕೃತಿಯನ್ನು ಒಪ್ಪಿರಲಿಲ್ಲ. ಆದ್ದರಿಂದ ಮತದಾರರು ಬಿಜೆಪಿಯ ಸುಳ್ಳುಗಳ ಬಗ್ಗೆ ಎಚ್ಚರದಿಂದಿರಬೇಕು ಎಂದು ಹೇಳಿದರು.

ಕಾಂಗ್ರೆಸ್ ಜಿಲ್ಲಾಧ್ಯಕ್ಷ ಮರಿಸ್ವಾಮಿ ಮಾತನಾಡಿದರು. ಕಾಡಾ ಮಾಜಿ ಅಧ್ಯಕ್ಷ ಹೆಚ್.ಎಸ್.ನಂಜಪ್ಪ, ಚಾಮುಲ್ ನಿರ್ದೇಶಕ ಎಚ್.ಎಸ್.ನಂಜುಂಡ ಪ್ರಸಾದ್, ಮಾಜಿ ಸಂಸದ ಎ.ಸಿದ್ದರಾಜು, ಜಿಪಂ ಮಾಜಿ ಸದಸ್ಯರಾದ ಕೆ.ಎಸ್.ಮಹೇಶ್, ಕೆರೆಹಳ್ಳಿ ನವೀನ್, ಪಿ.ಚನ್ನಪ್ಪ, ಬಿ.ಕೆ.ಬೊಮ್ಮಯ್ಯ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಮುನಿರಾಜು, ರಾಜಶೇಖರ್, ತಾಪಂ ಮಾಜಿ ಅಧ್ಯಕ್ಷ ಹೆಚ್.ಎನ್.ಬಸವರಾಜು, ನಾಜಿಮುದ್ದೀನ್, ಲಿಂಗರಾಜು ಹಲವರು ಇದ್ದರು.

ಮಾ.29ರಂದು ಕಾಂಗ್ರೆಸ್ ಕಾರ್ಯಕರ್ತರ ಸಭೆ



ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರ ಪೂರ್ವಭಾವಿ ಸಭೆಯಲ್ಲಿ ಶಾಸಕ ಸಿ.ಪುಟ್ಟರಂಗಶೆಟ್ಟಿ ಮಾತನಾಡಿದರು.

ಚಾಮರಾಜನಗರ, ಮಾ.26–ಚಾಮರಾಜನಗರ ಲೋಕಸಭೆ ಕ್ಷೇತ್ರದ ಚುನಾವಣೆ ಸಂಬಂಧ ಮಾ.29ರಂದು ಬೆಳಗ್ಗೆ 11ಕ್ಕೆ ನಗರದ ನಂಜನಗೂಡು ರಸ್ತೆಯ ಖಾಸಗಿ ಕಲ್ಯಾಣ ಮಂಟಪದಲ್ಲಿ ಕಾಂಗ್ರೆಸ್ ಕಾರ್ಯಕರ್ತರ ಸಭೆ ಹಮ್ಮಿಕೊಳ್ಳಲಾಗಿದೆ ಎಂದು ಶಾಸಕ ಸಿ.ಪುಟ್ಟರಂಗಶೆಟ್ಟಿ ಹೇಳಿದರು.

ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಮಂಗಳವಾರ ನಡೆದ ಪಕ್ಷದ ವಿವಿಧ ಪದಾಧಿಕಾರಿಗಳು, ಮುಖಂಡರು ಮತ್ತು ಕಾರ್ಯಕರ್ತರ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಅಂದಿನ ಸಭೆಯಲ್ಲಿ ಸಚಿವರಾದ ಎಚ್.ಸಿ.ಮಹದೇವಪ್ಪ ಕೆ.ವೆಂಕಟೇಶ್, ಕೆಪಿಸಿಸಿ ಕಾರ್ಯಾಧ್ಯಕ್ಷ ತನ್ವೀರ್ ಸೇಠ್ ಸೇರಿದಂತೆ ಪಕ್ಷದ ಜಿಲ್ಲಾ ಶಾಸಕರು ಭಾಗವಹಿಸಲಿದ್ದಾರೆ ಎಂದರು.

ಕಾಡಾ ಅಧ್ಯಕ್ಷ ಪಿ.ಮರಿಸ್ವಾಮಿ ಮಾತನಾಡಿ, ಈ ಬಾರಿ ಲೋಕಸಭೆ ಚುನಾವಣೆಯಲ್ಲಿ ಪಕ್ಷದ ಕಾರ್ಯಕರ್ತರು ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳನ್ನು ಪ್ರತಿಯೊಬ್ಬ ಮತದಾರರಿಗೂ ಮನವರಿಕೆ ಮಾಡಿಕೊಡಬೇಕು ಎಂದು ತಿಳಿಸಿದರು.

ಕಾಂಗ್ರೆಸ್ ಜಿಲ್ಲಾ ಉಪಾಧ್ಯಕ್ಷ ಬಿ.ಕೆ.ರವಿಕುಮಾರ್, ಪ್ರಧಾನ ಕಾರ್ಯದರ್ಶಿಗಳಾದ ಚಿಕ್ಕಮಹಾದೇವ್, ಆರ್.ಮಹಾದೇವ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಮಹಮದ್ ಅಸ್ಗರ್, ಎ.ಎಸ್.ಗುರುಸ್ವಾಮಿ, ಒಬಿಸಿ ರಾಜ್ಯ ಪ್ರಧಾನ ಕಾರ್ಯದರ್ಶಿ ಸಿ.ಎ.ಮಹದೇವಶೆಟ್ಟಿ, ಎಸ್ಟಿ ಘಟಕದ ಪ್ರಧಾನ ಕಾರ್ಯದರ್ಶಿ ಪು.ಶ್ರೀನಿವಾಸ ನಾಯಕ, ಎಪಿಎಂಸಿ ಸದಸ್ಯ ಎ.ಎಸ್.ಪ್ರದೀಪ್, ಜಿಪಂ ಮಾಜಿ ಸದಸ್ಯರಾದ ಕೆ.ಪಿ.ಸದಾಶಿವಮೂರ್ತಿ, ಅರಕಲವಾಡಿ ಸೋಮನಾಯಕ, ಕಾವೇರಿ ಮತ್ತಿತರರು ಹಾಜರಿದ್ದರು.

ಚಿರತೆ ದಾಳಿ: ಹಸುವಿಗೆ ಗಂಭೀರ ಗಾಯ




ಚಾಮರಾಜನಗರ, ಮಾ.26–ಜಮೀನಿನಲ್ಲಿ ಮೇಯುತ್ತಿದ್ದ ಹಸುವಿನ ಮೇಲೆ ಚಿರತೆ ದಾಳಿ ನಡೆಸಿ ಗಂಭೀರವಾಗಿ ಗಾಯಗೊಳಿಸಿರುವ ಘಟನೆ ಮಂಗಳವಾರ ನಗರದ ಸೋಮವಾರಪೇಟೆಯಲ್ಲಿ ನಡೆದಿದೆ.

ಸೋಮವಾರಪೇಟೆಯ ರೈತ ನಂಜುಂಡಸ್ವಾಮಿ ಅವರು ಜಮೀನಿನಲ್ಲಿ ಹಸು ಮೇಯಲು ಬಿಟ್ಟಿದ್ದರು. ಈ ವೇಳೆ ಚಿರತೆ ದಾಳಿ ಮಾಡಿ ಗಂಭೀರ ಗಾಯಗೊಳಿಸಿದೆ. ಇದರಿಂದ ಗ್ರಾಮಸ್ಥರು ಆತಂಕಕ್ಕೊಳಗಾಗಿದ್ದಾರೆ.

ಚಿರತೆ ಸೆರೆಗೆ ಒತ್ತಾಯ: ಅರಣ್ಯ ಇಲಾಖೆಯ ಅಧಿಕಾರಿಗಳು ಬೋನಿಟ್ಟು ಚಿರತೆ ಸೆರೆ ಹಿಡಿಯಬೇಕು. ಚಿರತೆ ದಾಳಿಯಿಂದ ಗಂಭೀರಗೊಂಡ ಹಸುವಿನ ಮಾಲೀಕರಿಗೆ ಸೂಕ್ತ ಪರಿಹಾರ ನೀಡಬೇಕು ಎಂದು ನಗರಸಭಾ ಮಾಜಿ ಸದಸ್ಯ ಸೋಮವಾರಪೇಟೆ ಮಹದೇವಯ್ಯ ಒತ್ತಾಯಿಸಿದ್ದಾರೆ.

ಶಿಕ್ಷಣ, ಆರೋಗ್ಯಕ್ಕೆ ಹೆಚ್ಚಿನ ಆದ್ಯತೆ

ಸಂವಾದದಲ್ಲಿ ಚಾ.ನಗರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಎಸ್.ಬಾಲರಾಜು ಭರವಸೆ



ಚಾಮರಾಜನಗರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದಲ್ಲಿ ನಡೆದ ಸಂವಾದದಲ್ಲಿ ಬಿಜೆಪಿ ಅಭ್ಯರ್ಥಿ ಎಸ್.ಬಾಲರಾಜು ಮಾತನಾಡಿದರು. ದೇವರಾಜ ಕಪ್ಪಸೋಗೆ, ಲಕ್ಕೂರು ಪ್ರಸಾದ್ ಇದ್ದರು.

ಚಾಮರಾಜನಗರ, ಮಾ.26– ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ ಶಿಕ್ಷಣ ಹಾಗೂ ಆರೋಗ್ಯಕ್ಕೆ ಹೆಚ್ಚಿನ ಆದ್ಯತೆ ನೀಡುವ ಗುರಿಯನ್ನು ಹೊಂದಿದ್ದೇನೆ ಎಂದು ಬಿಜೆಪಿ ಅಭ್ಯರ್ಥಿ ಎಸ್.ಬಾಲರಾಜು ಹೇಳಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಕಚೇರಿಯಲ್ಲಿ ಮಂಗಳವಾರ ಪತ್ರಕರ್ತರೊಂದಿಗೆ ನಡೆದ ಸಂವಾದದಲ್ಲಿ ಮಾತನಾಡಿದ ಅವರು, ಪ್ರವಾಸೋದ್ಯಮ, ಶಿಕ್ಷಣ, ಆರೋಗ್ಯ ಸೇರಿದಂತೆ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಆದ್ಯತೆ ನೀಡುವ ಜೊತೆಗೆ ಪ್ರಧಾನಿ ನರೇಂದ್ರ ಮೋದಿ ಅವರ ಕನಸಿನ ವಿಕಸಿತ ಭಾರತದ ಯೋಜನೆಗಳನ್ನು ಜಾರಿಗೊಳಿಸುವ ಪ್ರಯತ್ನದೊಂದಿಗೆ ಲೋಕಸಭೆ ಚುನಾವಣೆ ಎದುರಿಸುತ್ತಿದ್ದೇನೆ ಎಂದು ತಿಳಿಸಿದರು.

ನನ್ನ ರಾಜಕೀಯ ಗುರುಗಳಾದ ದಿ.ರಾಜಶೇಖರಮೂರ್ತಿ ಅವರ ಪ್ರಾಮಾಣಿಕತೆಯ ರಾಜಕೀಯದಲ್ಲಿ ಪಳಗಿದ ನಾನು, ನನ್ನ 32 ವರ್ಷಗಳ ರಾಜಕೀಯ ಜೀವನದಲ್ಲಿ ಕೊಳ್ಳೇಗಾಲ ಶಾಸಕನಾಗಿ ದೊರಕಿದ ಅವಕಾಶದಲ್ಲಿ ನೆನಪಿನಲ್ಲಿ ಉಳಿಯುವಂತಹ ಕುಂತೂರು ಸಕ್ಕರೆ ಕಾರ್ಖಾನೆ ಸಮಸ್ಯೆ, ಕಬಿನಿ ಜಲಾಶಯದಿಂದ ಪೂರ್ಣಾವಧಿ ಬೆಳೆ ಮತ್ತು ಕುಡಿಯುವ ನೀರು, ಯಳಂದೂರಿನಲ್ಲಿ ಪದವಿ ಕಾಲೇಜು ಸೇರಿದಂತೆ ಹಲವು ಅಭಿವೃದ್ಧಿ ಕಾರ್ಯ ಮಾಡಿದ್ದೇನೆ. ಇವೆಲ್ಲವೂ ನನ್ನ ಗೆಲುವಿಗೆ ಸಹಕಾರಿಯಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ನರೇಂದ್ರ ಮೋದಿಯವರು ಮತ್ತೊಮ್ಮೆ ಪ್ರಧಾನಿಯಾಗಬೇಕು. ಈ ನಿಟ್ಟಿನಲ್ಲಿ ಜೆಡಿಎಸ್ ನಾಯಕರು ಕೂಡ ನಮಗೆ ಸಂಪೂರ್ಣ ಬೆಂಬಲ ನೀಡಿದ್ದಾರೆ. ಹೀಗಾಗಿ ಕ್ಷೇತ್ರದಲ್ಲಿ ಬಿಜೆಪಿ ಗೆಲುವಿಗೆ ಪೂರಕವಾದ ವಾತಾವರಣವಿದೆ. ಕ್ಷೇತ್ರದಲ್ಲಿ ಮಹಿಳಾ ಮತದಾರರು ಹೆಚ್ಚಿನ ಸಂಖ್ಯೆಯಲ್ಲಿದ್ದು, ಅವರಲ್ಲಿ ಅನೇಕರಿಗೆ ಕಾಂಗ್ರೆಸ್‌ನ ಗ್ಯಾರಂಟಿ ಸೌಲಭ್ಯ ದೊರಕಿಲ್ಲ. ಇದರಿಂದ ಮಹಿಳಾ ಮತದಾರರು ನನ್ನನ್ನು ಬೆಂಬಲಿಸಲಿದ್ದಾರೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.


ಬಿಜೆಪಿ–ಜೆಡಿಎಸ್ ನಾಯಕರ ನಡುವೆ ಸಮನ್ವಯತೆ ಕೊರತೆ ಸಂಬಂಧ ಆರೋಪಗಳಿದ್ದು, ನಾಳೆ ಜೆಡಿಎಸ್ ರಾಜ್ಯಾಧ್ಯಕ್ಷ ಎಚ್.ಡಿ.ಕುಮಾರಸ್ವಾಮಿ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರ ಸಮ್ಮುಖದಲ್ಲಿ ಸಮನ್ವಯ ಸಮಿತಿ ಸಭೆ ನಡೆಯಲಿದೆ. ಇದರಲ್ಲಿ ಎರಡು ಪಕ್ಷಗಳ ನಾಯಕರು ಭಾಗವಹಿಸಲಿದ್ದು, ಸಭೆ ಬಳಿಕ ಎರಡು ಪಕ್ಷಗಳ ನಾಯಕರು ಒಗ್ಗಟ್ಟಿನಿಂದ ಕೆಲಸ ಮಾಡಲಿದ್ದಾರೆ ಎಂದು ಹೇಳಿದರು.

> ಏ.3ರಂದು ನಾನು ಪಕ್ಷದ ನಾಯಕರು, ಕಾರ್ಯಕರ್ತರೊಡಗೂಡಿ ನಾಮಪತ್ರ ಸಲ್ಲಿಸುತ್ತೇನೆ. ಈ ಬಾರಿ ಲೋಕಸಭಾ ಚುನಾವಣೆ ರಾಷ್ಟ್ರೀಯ ವಿಚಾರವಾಗಿದೆ. ಕ್ಷೇತ್ರದಲ್ಲಿ ಹೆಚ್ಚು ಕಾಂಗ್ರೆಸ್‌ನ ಶಾಸಕರಿದ್ದರೂ ಮೋದಿಯವರ ಅಭಿವೃದ್ಧಿ ಕಾರ್ಯಗಳು ಮತ್ತು ಮತದಾರರಿಗೆ ಮೋದಿಯವರ ಬಗ್ಗೆ ಇರುವ ವಿಶೇಷ ಅಭಿಮಾನ ನನ್ನ ಗೆಲುವಿಗೆ ಶ್ರೀರಕ್ಷೆಯಾಗಲಿದೆ.
>
> -ಎಸ್.ಬಾಲರಾಜು, ಬಿಜೆಪಿ ಅಭ್ಯರ್ಥಿ

ನಾನು, ನನ್ನ ರಾಜಕೀಯ ಗುರುಗಳಾದ ದಿ.ರಾಜಶೇಖರ ಮೂರ್ತಿ, ಗೆಳೆಯ ದಿ.ಆರ್.ಧ್ರುವನಾರಾಯಣ, ಮಾಜಿ ಸಚಿವ ದಿ.ಎಚ್.ಎಸ್.ಮಹದೇವಪ್ರಸಾದ್ ಅವರ ಸಮಾಧಿಗೆ ಭೇಟಿ ನೀಡಿ ನಮನ ಸಲ್ಲಿಸಿರುವುದು ರಾಜಕೀಯ ಗಿಮಿಕ್ ಇಲ್ಲ. ಆಶೀರ್ವಾದ ಪಡೆಯಲು ಸಮಾಧಿಗೆ ಭೇಟಿ ನೀಡಿದ್ದೆ ಹೊರತು, ಬೇರೆ ರಾಜಕೀಯ ಇಲ್ಲ ಎಂದು ಸ್ಪಷ್ಟಪಡಿಸಿದರು.

ಸಂವಾದದಲ್ಲಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ದೇವರಾಜ ಕಪ್ಪಸೋಗೆ, ಪ್ರಧಾನ ಕಾರ್ಯದರ್ಶಿ ಲಕ್ಕೂರು ಪ್ರಸಾದ್ ಇದ್ದರು.

ಆಕರ್ಷಕ ಮತದಾರರ ಆಮಂತ್ರಣ ಪತ್ರ ಅನಾವರಣ



ಚಾಮರಾಜನಗರ, ಮಾ.26–ಜಿಲ್ಲೆಯಲ್ಲಿ ಈ ಬಾರಿ 18 ವರ್ಷ ತುಂಬಿದ ನೂತನ ಮತದಾರರನ್ನು ಮತಗಟ್ಟೆಗಳಿಗೆ ಸೆಳೆದು ಮತದಾನ ಪ್ರಮಾಣ ಹೆಚ್ಚಿಸುವ ಸಲುವಾಗಿ ನಗರದ ಜಿಲ್ಲಾಡಳಿತ ಭವನದ ಮುಂಭಾಗ (ಗೇಟ್)ದಲ್ಲಿ ಆಕರ್ಷಕವಾಗಿ ವಿನ್ಯಾಸಗೊಳಿಸಿ ಅಳವಡಿಸಲಾಗಿರುವ ಮತದಾರರ ಬೃಹತ್ ಆಮಂತ್ರಣ ಪತ್ರವನ್ನು ಮಂಗಳವಾರ ಅನಾವರಣಗೊಳಿಸಲಾಯಿತು.

ನಗರದಲ್ಲಿ ಲೋಕಸಭಾ ಸಾರ್ವತ್ರಿಕ ಚುನಾವಣೆ ಅಂಗವಾಗಿ ಜಿಲ್ಲಾ ಸ್ವೀಪ್ ಕಾರ್ಯಕ್ರಮದಡಿ ಹಮ್ಮಿಕೊಂಡಿದ್ದ ಜಾಗೃತಿ ಜಾಥಾದಲ್ಲಿ ಜಿಲ್ಲೆಯ ಯುವ ಮತದಾರರನ್ನು ಮತಗಟ್ಟೆಗಳಿಗೆ ಕರೆತರಲು ಮದುವೆಯ ಆಹ್ವಾನ ಪತ್ರದ ಮಾದರಿಯಲ್ಲಿ ತಯಾರಿಸಿ ಅಳವಡಿಸಲಾಗಿರುವ 'ಮತದಾನದ ಮಮತೆಯ ಕರೆಯೋಲೆ' ಆಮಂತ್ರಣ ಪತ್ರವನ್ನು ಜಿಲ್ಲಾ ಚುನಾವಣಾಧಿಕಾರಿ ಶಿಲ್ಪಾನಾಗ್ ಅನಾವರಣಗೊಳಿಸಿದರು. ಜಿಪಂ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಆನಂದ್ ಪ್ರಕಾಶ್ ಮೀನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು, ಬಿಆರ್‌ಟಿ ಹುಲಿ ಸಂರಕ್ಷಿತ ಪ್ರದೇಶದ ಅರಣ್ಯ ಸಂರಕ್ಷಣಾಧಿಕಾರಿ ದೀಪಾ ಜೆ.ಕಂಟ್ರಾಕ್ಟರ್, ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಜಿಲ್ಲಾ ಚುನಾವಣಾ ರಾಯಭಾರಿ ದೀಪಾ ಬುದ್ದೆ, ಜಿಪಂ ಉಪಕಾರ್ಯದರ್ಶಿ ಪಿ.ಲಕ್ಷ್ಮೀ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಮಂಜುನಾಥ್, ತಾಪಂ ಕಾರ್ಯನಿವಾಹಕಾಧಿಕಾರಿ ಕೃಷ್ಣಪ್ಪ ಇತರರು ಇದ್ದರು.

ನಾಳೆ ಚಾ.ನಗರ ವಿವಿಯ ಸಂಸ್ಥಾಪನಾ ದಿನಾಚರಣೆ

ಚಾಮರಾಜನಗರ, ಮಾ.26–ಚಾಮರಾಜನಗರ ವಿಶ್ವವಿದ್ಯಾನಿಲಯದ ಪ್ರಥಮ ವರ್ಷದ ಸಂಸ್ಥಾಪನಾ ದಿನಾಚರಣೆಯನ್ನು ಮಾ.28ರಂದು ಬೆಳಗ್ಗೆ 11 ಗಂಟೆಗೆ ನಗರದ ಸುವರ್ಣ ಗಂಗೋತ್ರಿಯ ನಿಜಗುಣ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ. ಶಿವಮೊಗ್ಗ ಕುವೆಂಪು ವಿಶ್ವವಿದ್ಯಾನಿಲಯದ ವಿಶ್ರಾಂತ ಕುಲಪತಿ ಪಿ.ವೆಂಕಟರಾಮಯ್ಯ ಕಾರ್ಯಕ್ರಮ ಉದ್ಘಾಟಿಸಲಿದ್ದು, ಚಾಮರಾಜನಗರ ವಿವಿಯ ಕುಲಪತಿ ಪ್ರೊ.ಎಂ.ಆರ್.ಗಂಗಾಧರ್ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ವೈ.ಕೆ.ಮೋಳೆಯಲ್ಲಿ ಕೊಂಡೋತ್ಸವ



ಯಳಂದೂರು, ಮಾ.26–ತಾಲೂಕಿನ ವೈ.ಕೆ.ಮೋಳೆ ಗ್ರಾಮದಲ್ಲಿ ಶ್ರೀ ದೊಡ್ಡಮ್ಮ ಮತ್ತು ಚಿಕ್ಕಮ್ಮತಾಯಿ, ಚಾಮುಂಡೇಶ್ವರಿ ದೇವಿಯ ಜಾತ್ರೆ ಮಹೋತ್ಸವದ ಕೊಂಡೋತ್ಸವ ಸಾವಿರಾರು ಭಕ್ತರ ಸಮ್ಮುಖದಲ್ಲಿ ನಡೆಯಿತು.

ಕೊಂಡೋತ್ಸವ ಹಿನ್ನೆಲೆಯಲ್ಲಿ ಮುಂಜಾನೆಯಿಂದಲೇ ದೇವಾಲಯದಲ್ಲಿ ಗ್ರಾಮ ದೇವತೆ ದೊಡ್ಡಮ್ಮ ತಾಯಿಗೆ ವಿಶೇಷ ಹೂವಿನ ಅಲಂಕಾರ, ಗಿರಿಜನರಿಂದ ವಿಶೇಷ ಪೂಜೆ ನಡೆಸಲಾಯಿತು. ನಂತರ ದೊಡ್ಡಮ್ಮ, ಚಿಕ್ಕಮ್ಮ ತಾಯಿ, ಚಾಮುಂಡೇಶ್ವರಿ ಉತ್ಸವ ಮೂರ್ತಿಯನ್ನು ತಾಲೂಕಿನ ಅಂಬಳೆ ಕೆರೆಯಲ್ಲಿ ಪೂಜೆ ಸಲ್ಲಿಸಿದ ಬಳಿಕ ನೀರು ತಂದು ಸ್ವಚ್ಛಗೊಳಿಸಲಾಯಿತು. ಬಳಿಕ ಹೂವು, ಹೊಂಬಾಳೆ, ವಿವಿಧ ಪುಷ್ಪಾಲಂಕಾರಗಳಿಂದ ಸಿಂಗರಿಸಲಾಯಿತು. ಸತ್ತಿಗೆ, ಸೂರಪಾನಿ, ಚಾಮರ, ಕೊಂಬು, ಕಹಳೆ ವಾದ್ಯ ಮೇಳಗಳೊಂದಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಸಾಗಿತು. ನಂತರ ಕೊಂಡೋತ್ಸವ ಸ್ಥಳಕ್ಕೆ (ದೇವಾಲಯದ ಆವರಣದಲ್ಲಿ) ಉತ್ಸವ ಮೂರ್ತಿ ಆಗಮಿಸುತ್ತಿದ್ದಂತೆ ಭಕ್ತರ ಹರ್ಷೋದ್ಗಾರ ಮೊಳಗಿತು. ಉತ್ಸವ ಮೂರ್ತಿ ಹೊತ್ತ ಅರ್ಚಕರು ಕೊಂಡ ಹಾದು ಭಕ್ತಿ ಪರಕಾಷ್ಠೆ ಮೆರೆದರು.

ಚಿಕ್ಕಮಗಳೂರಲ್ಲಿ ಮಂಗನ ಕಾಯಿಲೆಗೆ ಮತ್ತೊಂದು ಬಲಿ

ಚಿಕ್ಕಮಗಳೂರು: ಜಿಲ್ಲೆಯಲ್ಲಿ ಮಂಗನ ಕಾಯಿಲೆಗೆ ಮತ್ತೊಂದು ಬಲಿಯಾಗಿದೆ. ಮಂಗನ ಕಾಯಿಲೆಯಿಂದ ಬಳಲುತ್ತಿದ್ದ ವೃದ್ಧೆಯೊಬ್ಬರು ಚಿಕಿತ್ಸೆ ಫಲಿಸದೇ ಸಾವನ್ನಪ್ಪಿರುವುದಾಗಿ ತಿಳಿದು ಬಂದಿದೆ.

ಚಿಕ್ಕಮಗಳೂರು ಜಿಲ್ಲೆಯ ಕೊಪ್ಪ ತಾಲೂಕಿನ ಬಿಂತ್ರವಳ್ಳಿ ಗ್ರಾಮದ ರತ್ನ (68) ಎಂಬುವವರಿಗೆ ಮಂಗನಕಾಯಿಲೆ ತಗುಲಿತ್ತು. ಪರೀಕ್ಷೆಯಲ್ಲಿ ದೃಢಪಟ್ಟ ನಂತರ, ಅವರನ್ನು ಮಣಿಪಾಲದ ಖಾಸಗಿ ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಿಸಲಾಗಿತ್ತು. ಮಣಿಪಾಲದಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ವೃದ್ಧೆ ರತ್ನ ಎಂಬುವರು ಚಿಕಿತ್ಸೆ ಫಲಿಸದೇ ಸಾವನ್ನಪ್ಪಿರುವುದಾಗಿ ತಿಳಿದು ಬಂದಿದೆ. ಈ ಮೂಲಕ ಚಿಕ್ಕಮಗಳೂರಿನಲ್ಲಿ ಮಂಗನಕಾಯಿಲೆಗೆ ಮತ್ತೊಂದು ಬಲಿಯನ್ನು ಪಡೆದಂತೆ ಆಗಿದೆ. ಮಲೆನಾಡು ಭಾಗದಲ್ಲಿ ದಿನದಿಂದ ದಿನಕ್ಕೆ ಮಂಗನಕಾಯಿಲೆ ಹೆಚ್ಚುತ್ತಿದೆ. ಕೊಪ್ಪ, ಎನ್‌ಆರ್ ಪುರ, ಶೃಂಗೇರಿ ತಾಲೂಕಿನಲ್ಲಿ ಕಾಯಿಲೆ ಹೆಚ್ಚುತ್ತಿದೆ. ಸದ್ಯ ಆಸ್ಪತ್ರೆಯಲ್ಲಿ11 ಕೆಎಫ್‌ಡಿ ಸೋಂಕಿತರು ಚಿಕಿತ್ಸೆ ಪಡೆಯುತ್ತಿದ್ದಾರೆ.

ಚೆಸ್ಕಾಂ ಕಚೇರಿಗೆ ರೈತರ ಮುತ್ತಿಗೆ

ಸಮರ್ಪಕ ವಿದ್ಯುತ್ ಪೂರೈಕೆ, ಅಕ್ರಮ-ಸಕ್ರಮ ಯೋಜನೆ ಮರು ಜಾರಿಗೆ ಆಗ್ರಹ



ಸಮರ್ಪಕ ವಿದ್ಯುತ್ ಪೂರೈಕೆಗೆ ಆಗ್ರಹಿಸಿ ರೈತರು ಹಿನಕಲ್ ಬಳಿ ಇರುವ ಚೆಸ್ಕಾಂ ಕಚೇರಿಗೆ ಮುತ್ತಿಗೆ ಹಾಕಿದರು.

ಮೈಸೂರು, ಮಾ.26(ಜಿಎ)– ಸಮರ್ಪಕ ವಿದ್ಯುತ್ ಪೂರೈಕೆ, ಅಕ್ರಮ ಸಕ್ರಮ ಯೋಜನೆ ಮರು ಜಾರಿಗೆ ಒತ್ತಾಯಿಸಿ ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರರ ಸಂಘದ ವತಿಯಿಂದ ಹಿನಕಲ್ ಬಳಿ ಇರುವ ಚೆಸ್ಕಾಂ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಲಾಯಿತು.

ಕೃಷಿ ಪಂಪ್‌ಸೆಟ್‌ಗಳಿಗೆ 10 ಗಂಟೆ ವಿದ್ಯುತ್ ಪೂರೈಕೆ ಮಾಡುವುದು ಸೇರಿದಂತೆ ಹಗಲಿನಲ್ಲಿ ಸರ್ಕಾರದ ಆದೇಶದಂತೆ ಸಮರ್ಪಕ ವಿದ್ಯುತ್ ಪೂರೈಕೆ ಮಾಡುವಲ್ಲಿ ಚೆಸ್ಕಾಂ ವಿಫಲವಾಗಿದೆ. ಅಲ್ಲದೆ ಹೊಸ ವಿದ್ಯುತ್ ಸಂಪರ್ಕ ಪಡೆಯಲು ರೈತರಿಗೆ ಸಾಧ್ಯವಾಗುತ್ತಿಲ್ಲ. ಸರ್ಕಾರದ ಆದೇಶವಿದೆ ಎಂದು ಯಾವುದೇ ನೋಂದಣಿ ಮಾಡಿಕೊಳ್ಳದೆ ವಿಳಂಬ ನೀತಿ ಅನುಸರಿಸಲಾಗುತ್ತಿದೆ. ಕಾಡಂಚಿನ ಪ್ರದೇಶಗಳಿಗೆ ಹಗಲಿನಲ್ಲಿ ವಿದ್ಯುತ್ ಪೂರೈಕೆ ಮಾಡುತ್ತಿಲ್ಲ. ಮಾನವ, ಪ್ರಾಣಿ ಸಂಘರ್ಷ ತಡೆಯುತ್ತಿಲ್ಲ. ಟಿಸಿ ಸುಟ್ಟು ಹೋದರೆ 72 ಗಂಟೆಯಲ್ಲಿ ಬದಲಾಯಿಸಬೇಕು ಎಂಬ ನಿಯಮವಿದ್ದರೂ ಪಾಲನೆಯಾಗುತ್ತಿಲ್ಲ ಎಂದು ರೈತರು ಆಕ್ರೋಶ ವ್ಯಕ್ತಪಡಿಸಿದರು.

ರೈತರ ಜಮೀನುಗಳಲ್ಲಿ ಜೋತು ಬಿದ್ದಿರುವ ವಿದ್ಯುತ್ ತಂತಿಗಳನ್ನು ಸರಿಪಡಿಸಿಲ್ಲ. ಸೋಲಾರ್ ಪಂಪ್‌ಸೆಟ್ ಅಳವಡಿಕೆಗೆ ಮೊದಲು ಇದ್ದಂತೆ 23 ಸಾವಿರ ಕಟ್ಟಿಸಿಕೊಂಡು ಸರ್ಕಾರವೇ ಉಳಿದ ಹಣವನ್ನು ನೀಡಬೇಕು. ಕೃಷಿ ಮಾಡುವ ಯುವಕರಿಗೆ ತೊಂದರೆಯಾಗದಂತೆ ನೀತಿ ನಿಯಮಗಳನ್ನು ರೂಪಿಸಬೇಕು. ವಿದ್ಯುತ್ ಅವಘಡದಿಂದ ಮೃತಪಟ್ಟವರಿಗೆ 25 ಲಕ್ಷ ರೂ. ಪರಿಹಾರ ನೀಡಬೇಕು. ಕಬ್ಬಿನ ಬೆಳೆ ನಷ್ಟಕ್ಕೆ 30 ದಿನದೊಳಗೆ ಪರಿಹಾರ ಒದಗಿಸಬೇಕು. ಸರ್ಕಾರ ಚುನಾವಣಾ ಪ್ರಣಾಳಿಕೆಯಂತೆ ಪ್ರತಿ ಕುಟುಂಬಕ್ಕೆ 200 ಯೂನಿಟ್ ಉಚಿತ ವಿದ್ಯುತ್ ನೀಡಬೇಕು. ಷರತ್ತು ವಿಧಿಸಿ ಸರಾಸರಿಯಂತೆ ನೀಡುವುದನ್ನು ನಿಲ್ಲಿಸಬೇಕು. ಅಕ್ರಮ ಸಕ್ರಮ ಯೋಜನೆಯನ್ನು ಕೂಡಲೇ ಮರು ಜಾರಿ ಮಾಡಬೇಕೆಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಅಧ್ಯಕ್ಷ ಹಳ್ಳಿಕೆರೆ ಹುಂಡಿ ಭಾಗ್ಯರಾಜ್, ರಾಜ್ಯ ಉಪಾಧ್ಯಕ್ಷ ಅಂಕನಹಳ್ಳಿ ತಿಮ್ಮಪ್ಪ, ಕೆರೆಹುಂಡಿ ರಾಜಣ್ಣ, ಎಚ್.ಹನುಮಯ್ಯ, ಹಾಡ್ಯರವಿ, ಹಾಲಿನ ನಾಗರಾಜ್, ಮುದ್ದಹಳ್ಳಿ ಚಿಕ್ಕಸ್ವಾಮಿ, ಅಂಬಳೆ ಮಾದೇವಸ್ವಾಮಿ, ಕೊಂತಯ್ಯನ ಹುಂಡಿ ಮಹೇಶ್, ದೇವೇಂದ್ರಕುಮಾರ್, ಶಿವರುದ್ರಪ್ಪ ಅಂಡುವಿನಹಳ್ಳಿ ಮರಿಸೋಮಪ್ಪ ಜಗದೀಶ್, ದೇವಣ್ಣ ಮಲಿಯೂರು ಹರ್ಷ, ಪ್ರವೀಣ್, ಮಹೇಂದ್ರ, ಬಸವರಾಜಪ್ಪ, ದೇವನೂರು ನಾಗೇಂದ್ರ ಸಿದ್ದರಾಜು, ಅರಳಿಕಟ್ಟೆ ಕುಮಾರ್, ಪ್ರಭುಸ್ವಾಮಿ, ಜನ್ನೂರು ಶಾಂತರಾಜ್, ಗುಂಡ್ಲಾ ಮಲ್ಲೇಶ್, ಶಂಕರ್, ಮಾದಪ್ಪ, ಬೆಳ್ತೂರು ನಂಜಪ್ಪ, ಲೋಕೇಶ್ ಇನ್ನಿತರರು ಪಾಲ್ಗೊಂಡಿದ್ದರು.

ಜಿಲ್ಲೆಯಲ್ಲಿ ಕೃಷಿಗೆ ನದಿ ನೀರು ಬಳಕೆ ನಿಷಿದ್ಧ



ಮೈಸೂರು, ಮಾ.26(ಆರ್‌ಕೆ)– ಪಂಪ್‌ಸೆಟ್ ಬಳಸಿ ಅಥವಾ ಕಾಲುವೆ ಮೂಲಕ ಕೃಷಿ ಮತ್ತು ಇತರ ಖಾಸಗಿ ಚಟುವಟಿಕೆಗಳಿಗೆ ಅಕ್ರಮವಾಗಿ ನದಿ ನೀರು ಬಳಸುವುದನ್ನು ಮೈಸೂರು ಜಿಲ್ಲೆಯಾದ್ಯಂತ ನಿಷೇಧಿಸಲಾಗಿದೆ.

ಈ ಸಂಬಂಧ ಜಿಲ್ಲಾಧಿಕಾರಿ ಡಾ. ಕೆ.ವಿ.ರಾಜೇಂದ್ರ ಅವರು ಆದೇಶ ಹೊರಡಿಸಿದ್ದು, ಮೈಸೂರು ಜಿಲ್ಲೆಯಾದ್ಯಂತ ನದಿ ಹಾಗೂ ನದಿ ಮೂಲಗಳಿಂದ ಅನಧಿಕೃತವಾಗಿ ಪಂಪ್‌ಸೆಟ್ ಬಳಸಿ ಅಥವಾ ಕಾಲುವೆಗಳ ಮೂಲಕ ನದಿ ನೀರನ್ನು ಕೃಷಿ, ಇತರೆ ಖಾಸಗಿ ಚಟುವಟಿಕೆಗಳಿಗೆ ಬಳಸುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ ಎಂದು ತಿಳಿಸಿದ್ದಾರೆ.

ಪಿರಿಯಾಪಟ್ಟಣ ತಾಲೂಕಿನ ಕಾವೇರಿ ನದಿ ದಡದಲ್ಲಿರುವ ಗ್ರಾಮಗಳ ಜಮೀನಿನ ಮಾಲೀಕರು ಅನಧಿಕೃತವಾಗಿ ಕಾವೇರಿ ನದಿಗೆ ಪಂಪ್‌ಸೆಟ್‌ಗಳನ್ನು ಅಳವಡಿಸಿರುವುದರಿಂದ ಪಿರಿಯಾಪಟ್ಟಣ ಜನರಿಗೆ ಕುಡಿಯುವ ನೀರು ಸರಬರಾಜು ಮಾಡಲು ತೊಂದರೆಯಾಗಿದೆ ಎಂದು ತಹಸೀಲ್ದಾರರು ವರದಿ ನೀಡಿರುವ ಹಿನ್ನೆಲೆಯಲ್ಲಿ ನದಿ ನೀರನ್ನು ಕೃಷಿ ಉದ್ದೇಶಕ್ಕೆ ಬಳಸುವುದನ್ನು ಜಿಲ್ಲೆಯಾದ್ಯಂತ ನಿಷೇಧಿಸಿ ಇಂದು ಜಿಲ್ಲಾಧಿಕಾರಿಗಳು ಆದೇಶಿಸಿದ್ದಾರೆ.

ಪುನರ್ಜನ್ಮ, ಕರ್ಮ ಸಿದ್ಧಾಂತ, ಮುಕ್ತಿ 'ವಡ್ಡಾರಾಧನೆ' ಕಥೆಗಳ ಪ್ರಮುಖ ಅಂಶ

ಪದ್ಮಶ್ರೀ ಜೈನ ಮಹಿಳಾ ಸಮಾಜದ ಅಧ್ಯಕ್ಷೆ ಲತಾ ಸುದರ್ಶನ್



'ಶಿವಕೋಟಿ ಆಚಾರ್ಯರ 'ವಡ್ಡಾರಾಧನೆ' ಕೃತಿ ಕುರಿತ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡುತ್ತಿರುವ ಲತಾ ಸುದರ್ಶನ್

ಮೈಸೂರು,ಮಾ.26(ಪಿಎಂ)– ಜೈನ ಧರ್ಮವು ನಂಬಿರುವ ಪುನರ್ಜನ್ಮ, ಕರ್ಮ ಸಿದ್ಧಾಂತ ಮತ್ತು ಮುಕ್ತಿಯ ಅಂಶಗಳನ್ನು ಶಿವಕೋಟಿ ಆಚಾರ್ಯರ 'ವಡ್ಡಾರಾಧನೆ' ಕೃತಿಯ ಕಥಾಸಂಕಲನದಲ್ಲಿ ಪ್ರಧಾನವಾಗಿ ಕಾಣಬಹುದು ಎಂದು ಪದ್ಮಶ್ರೀ ಜೈನ ಮಹಿಳಾ ಸಮಾಜದ ಅಧ್ಯಕ್ಷೆ ಲತಾ ಸುದರ್ಶನ್ ಹೇಳಿದರು.

ಮೈಸೂರಿನ ಶಂಕರಮಠದ ರಸ್ತೆಯ 4ನೇ ಕ್ರಾಸ್‌ನಲ್ಲಿರುವ ಪದ್ಮಶ್ರೀ ಜೈನ ಮಹಿಳಾ ಸಮಾಜದ ಸಭಾಂಗಣದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು (ಕಸಾಪ) ಮತ್ತು ಪದ್ಮಶ್ರೀ ಜೈನ ಮಹಿಳಾ ಸಮಾಜದ ಜಂಟಿ ಆಶ್ರಯದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಎ.ಶಾಂತಿ ರಾಜ ಶಾಸ್ತ್ರಿ ಅವರ ದತ್ತಿ ಕಾರ್ಯಕ್ರಮದಲ್ಲಿ ಶಿವಕೋಟಿ ಆಚಾರ್ಯರ 'ವಡ್ಡಾರಾಧನೆ' ಕೃತಿ ಕುರಿತು ಅವರು ಉಪನ್ಯಾಸ ನೀಡಿದರು.

ಜೈನ ಧರ್ಮದ ಯಾವುದೇ ಕೃತಿಯಾದರೂ ಪುನರ್ಜನ್ಮ ಕರ್ಮ ಸಿದ್ಧಾಂತ ಮತ್ತು ಮುಕ್ತಿ ಅಂಶಗಳನ್ನು ಪ್ರಮುಖವಾಗಿ ಕಾಣಬಹುದು. ಅಂತೆಯೇ ವಡ್ಡಾರಾಧನೆ ಕಥಾ ಸಂಕಲನವೂ ಈ ಮೂರು ಅಂಶಗಳನ್ನು ಒಳಗೊಂಡಿದೆ. ಕನ್ನಡದ ಮೊದಲ ಗದ್ಯಕೃತಿ ಎಂದು ವಡ್ಡಾರಾಧನೆಯನ್ನು ಗುರುತಿಸಲಾಗಿದೆ. ಶ್ರೇಷ್ಠ ಜೈನ ಕವಿಯಾದ ಶಿವಕೋಟಿ ಆಚಾರ್ಯರು ಹಳೆಗನ್ನಡದಲ್ಲಿ ಇದನ್ನು ರಚಿಸಿದ್ದು, ಇದರಲ್ಲಿ 19 ಮಂದಿ ಮಹಾತ್ಮರ ಜೀವನ ಕಥೆಗಳಿವೆ. ಭ್ರಾಜಿಷ್ಣು ಎಂಬಾತನು ಇದನ್ನು ಕನ್ನಡಕ್ಕೆ ಅನುವಾದಿಸಿರುವುದಾಗಿ ಹೇಳಲಾಗಿದೆ ಎಂದು ವಿವರಿಸಿದರು.

ಭ್ರಾಜಿಷ್ಣು ಇಂದಿನ ಬೀದರ್ ಜಿಲ್ಲೆಯವನು ಎನ್ನಲಾಗಿದ್ದು, ಈತನು ಕ್ರಿ.ಶ. 800ರಿಂದ 870ರ ಅವಧಿಯಲ್ಲಿ ವಡ್ಡಾರಾಧನೆಯನ್ನು ಕನ್ನಡದಲ್ಲಿ ರಚಿಸಿದನು ಎಂದು ಹೇಳಲಾಗುತ್ತದೆ. ಇದರಲ್ಲಿ ಸದ್ಯ ಲಭ್ಯವಾಗಿರುವುದು 19 ಕಥೆಗಳು ಮಾತ್ರ. ಆದರೆ ಇನ್ನೂ 150 ಕಥೆಗಳು ಇವೆ ಎನ್ನಲಾಗುತ್ತಿದೆ. ಮಹನೀಯರು ತಮ್ಮ ಕರ್ಮಗಳನ್ನು ಸಹಿಸಿ ಸ್ವರ್ಗಕ್ಕೆ ಹೋದ ಬಗ್ಗೆ ಇಲ್ಲಿನ ಕಥೆಗಳಲ್ಲಿ ವಿವರಿಸಲಾಗಿದೆ. ಸಂಸ್ಕೃತ ಮತ್ತು ಪ್ರಾಕೃತದಲ್ಲಿ ಶ್ಲೋಕಗಳು ಇಲ್ಲಿವೆ ಎಂದರು.

ಈ ಕೃತಿಯಲ್ಲಿ ಬರುವ ಎಲ್ಲಾ ಕಥೆಗಳು ಒಂದೇ ರೀತಿಯಲ್ಲಿ ನಿರೂಪಿತವಾದಂತೆ ಕಂಡು ಬರುತ್ತವೆ. ರಾಜ, ರಾಣಿ ಮತ್ತು ಮಂತ್ರಿಗಳು ಇಲ್ಲಿನ ಕಥೆಗಳಲ್ಲಿ ಸಾಮಾನ್ಯವಾಗಿ ಕಂಡುಬರುವ ಪ್ರಮುಖ ಪಾತ್ರಗಳಾಗಿವೆ. ಶಿವಕೋಟಿ ಆಚಾರ್ಯರು ಸ್ವಾರಸ್ಯಕರವಾದ ಉಪ ಕಥೆಗಳನ್ನು ಇಲ್ಲಿ ಉಲ್ಲೇಖಿಸಿದ್ದಾರೆ. ವಡ್ಡಾರಾಧನೆಯ ಮತ್ತೊಂದು ವಿಶಿಷ್ಟ ಅಂಶವೆಂದರೆ ಐತಿಹಾಸಿಕ ಅಂಶಗಳನ್ನು ಒಳಗೊಂಡಿರುವುದಾಗಿದೆ ಎಂದು ತಿಳಿಸಿದರು.

ಭಾರತೀಯ ಜೈನ್ ಮಿಲನ್ ಅಂತಾರಾಷ್ಟ್ರೀಯ ವಿಭಾಗದ ರಾಷ್ಟ್ರೀಯ ಉಪಾಧ್ಯಕ್ಷ ಎನ್.ಪ್ರಸನ್ನ ಕುಮಾರ್ ಉದ್ಘಾಟಿಸಿದರು. ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಕಾರ್ಯದರ್ಶಿ ಮ.ನ.ಲತಾಮೋಹನ್, ಖಜಾಂಚಿ ಜಿ.ಪ್ರಕಾಶ್, ಪದ್ಮಶ್ರೀ ಜೈನ ಮಹಿಳಾ ಸಮಾಜದ ಕಾರ್ಯದರ್ಶಿ ವಾಗೀಶ್ವರಿ ಮತ್ತಿತರರು ಹಾಜರಿದ್ದರು.



ಹುಟ್ಟುಹಬ್ಬ ಆಚರಿಸಿಕೊಂಡ ಜೆಡಿಎಸ್ ಮುಖಂಡ ಗೆಜ್ಜಗಳ್ಳಿ ಲೋಕೇಶ್ ಅವರನ್ನು ಶಾಸಕ ಜಿ.ಡಿ.ಹರೀಶ್ ಗೌಡರು, ಅಭಿನಂದಿಸಿ ಶುಭಾಶಯ ಕೋರಿದರು. ಈ ವೇಳೆ ಸಿಂಧುವಳ್ಳಿ ಕೃಷ್ಣಯ್ಯ, ಫೋಟೋ ಮಹೇಶ್, ಗೆಜ್ಜಗಳ್ಳಿ ಮಹೇಶ್, ಚಿಕ್ಕಕಾನ್ಯ ಮಹಾದೇವ ಸ್ವಾಮಿ, ತಳೂರು ಮಾದೇಶ್, ಸ್ವಾಮಿ, ಜಗದೀಶ್, ಸರ್ವೆ ಜಮೀರ್ ಇನ್ನಿತರರು ಉಪಸ್ಥಿತರಿದ್ದರು

ಆಮಿಷಕ್ಕೊಳಗಾಗದೆ ನೈತಿಕ ಮತದಾನ ಮಾಡಿ

ಕಾರ್ಮಿಕರಿಗೆ ಕೈಗಾರಿಕಾ ಇಲಾಖೆ ಜಂಟಿ ನಿರ್ದೇಶಕ ದಿನೇಶ್ ಸಲಹೆ



ಮೈಸೂರಿನ ಕೂರ್ಗಳ್ಳಿ ಬಳಿಯ ಶಾಹಿ ಎಕ್ಸ್‌ಪೋರ್ಟ್ ಕಾರ್ಮಿಕರಿಗೆ ಜಿಲ್ಲಾ ಸ್ವೀಪ್ ಸಮಿತಿಯಿಂದ ಮತದಾನದ ಬಗ್ಗೆ ಜಾಗೃತಿ ಮೂಡಿಸಲಾಯಿತು.

ಮೈಸೂರು, ಮಾ. 26(ಆರ್‌ಕೆ)– ಯಾವುದೇ ಆಸೆ–ಆಮಿಷಕ್ಕೊಳಗಾಗದೆ ಲೋಕಸಭಾ ಚುನಾವಣೆಯಲ್ಲಿ ನೈತಿಕ ಮತದಾನ ಮಾಡಬೇಕೆಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ದಿನೇಶ್ ಇಂದಿಲ್ಲಿ ಕಾರ್ಮಿಕರಿಗೆ ಸಲಹೆ ನೀಡಿದ್ದಾರೆ.

ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಮೈಸೂರಿನ ಕೂರ್ಗಳ್ಳಿ ಬಳಿಯ ಶಾಹಿ ಎಕ್ಸ್‌ಪೋರ್ಟ್ ಪ್ರೈವೇಟ್ ಲಿಮಿಟೆಡ್ ಘಟಕದಲ್ಲಿ ಇಂದು ಏರ್ಪಡಿಸಿದ್ದ ಮತದಾರರ ಜಾಗೃತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡುತ್ತಿದ್ದ ಅವರು, 18 ವರ್ಷ ಮೇಲ್ಪಟ್ಟ ಎಲ್ಲಾ ಪ್ರಜೆಗಳಿಗೆ ಮತದಾನ ಮಾಡುವ ಹಕ್ಕು ನೀಡಿರುವುದರಿಂದ ತಪ್ಪದೇ ಹಕ್ಕು ಚಲಾಯಿಸಿ ಪ್ರಜಾಪ್ರಭುತ್ವವನ್ನು ಗಟ್ಟಿಗೊಳಿಸಬೇಕು ಎಂದರು.

ಭಾರತದ ಪ್ರತಿಯೊಬ್ಬ ಪ್ರಜೆಯೂ ಮತದಾನ ಮಾಡಬೇಕು. ಬೇರೆಯವರಿಗೂ ಪ್ರೇರೇಪಣೆ ನೀಡಿ ಮತದಾನದ ಪ್ರಮಾಣ ಹೆಚ್ಚಿಸಬೇಕಿದೆ. ಮತದಾರರ ಸಹಾಯಕ್ಕಾಗಿ ನೀಡಿರುವ ಆ್ಯಪ್ ಅನ್ನು ಡೌನ್‌ಲೋಡ್ ಮಾಡಿಕೊಂಡು ಮಾಹಿತಿ ಪಡೆಯಬಹುದಾಗಿದ್ದು, ಚುನಾವಣೆ ಸಂಬಂಧ ಯಾವುದೇ ಅಕ್ರಮ, ದೂರುಗಳಿದ್ದರೆ ಸಿ–ವಿಜಲ್ ಆ್ಯಪ್ ಮೂಲಕ ಸಲ್ಲಿಸಿದಲ್ಲಿ ಅಧಿಕಾರಿಗಳು ತಕ್ಷಣ ಕ್ರಮ ಕೈಗೊಳ್ಳುವರು ಎಂದು ದಿನೇಶ್ ಇದೇ ವೇಳೆ ಕಾರ್ಮಿಕರಿಗೆ ಮಾಹಿತಿ ನೀಡಿದರು.

ರೋಗಿಗಳು, ವಿಶೇಷಚೇತನ ಮತದಾರರು, 85 ವರ್ಷ ಮೇಲ್ಪಟ್ಟ ಹಿರಿಯ ಮತದಾರರಿಗೆ ಮನೆಯಿಂದಲೇ ಮತದಾನ ಮಾಡಲು ಅವಕಾಶ ನೀಡಲಾಗಿದೆ. ಆ ಸೌಲಭ್ಯ ಬಳಸಿಕೊಂಡು ತಪ್ಪದೇ ಮತದಾನ ಮಾಡುವ ಮೂಲಕ ಭವ್ಯ ಭಾರತ ನಿರ್ಮಾಣ ಮಾಡಬೇಕು ಎಂದು ಅವರು ತಿಳಿಸಿದರು.

ಶಾಹಿ ಎಕ್ಸ್‌ಪೋರ್ಟ್ ಮುಖ್ಯಸ್ಥರಾದ ಜೆ.ಸಿ. ಗುರುಮೂರ್ತಿ, ಸಂತೋಷ್ ಕುಮಾರ್, ವ್ಯವಸ್ಥಾಪಕ ನಿರ್ದೇಶಕ ಶುಭದೇವರಾಜೇ ಅರಸ್, ಕಾರ್ಮಿಕ ಕಲ್ಯಾಣಾಧಿಕಾರಿ ಚೈತ್ರ, ಘಟಕದ ಕಾರ್ಮಿಕರು ಈ ಸಂದರ್ಭ ಉಪಸ್ಥಿತರಿದ್ದರು.

ಉಚಿತ ಖೋ ಖೋ ತರಬೇತಿ ಶಿಬಿರ

ಮೈಸೂರು, ಮಾ. 26– ಮೈಸೂರಿನ ದಿ ಯುನೈಟೆಡ್ ಸ್ಪೋರ್ಟ್ಸ್ ಕ್ಲಬ್ ವತಿಯಿಂದ ದಟ್ಟಗಳ್ಳಿಯ ಕನಕದಾಸನಗರದಲ್ಲಿರುವ ರೋಟರಿ ಮೈಸೂರು ಆವರಣದಲ್ಲಿ ಏ. 15 ರಿಂದ ಮೇ 15 ರವರೆಗೆ 8 ರಿಂದ 16 ವರ್ಷದ ಗಂಡು ಮತ್ತು ಹೆಣ್ಣು ಮಕ್ಕಳಿಗೆ ಉಚಿತ ಖೋ ಖೋ ತರಬೇತಿ ನೀಡಲಾಗುವುದು. ಶಿಬಿರವು ಬೆಳಗ್ಗೆ 6.30 ರಿಂದ 8.30 ರವರೆಗೆ ನಡೆಯಲಿದೆ. ಹೆಚ್ಚಿನ ಮಾಹಿತಿಗೆ ಮೊ. 98452 20205 ಸಂಪರ್ಕಿಸಬಹುದು.

ಮೈಸೂರು ಮಿತ್ರ

45ನೇ ವಾರ್ಷಿಕೋತ್ಸವ ಕಥಾ ಸ್ಪರ್ಧೆ

'ಮೈಸೂರು ಮಿತ್ರ' ಪ್ರಾದೇಶಿಕ ದಿನ ಪತ್ರಿಕೆ 44 ವರ್ಷಗಳನ್ನು ಯಶಸ್ವಿಯಾಗಿ ಪೂರೈಸಿ 45ನೇ ವರ್ಷಕ್ಕೆ ಪಾದಾರ್ಪಣೆಗೈಯ್ಯುವ ಈ ಸುಸಂದರ್ಭದಲ್ಲಿ 16–04–2024 (ಮಂಗಳವಾರ)ರಂದು ವರ್ಣರಂಜಿತ ಆಕರ್ಷಕ ವಿಶೇಷಾಂಕವನ್ನು ಹೊರತರಲಾಗುತ್ತಿದೆ. ಇದರ ಅಂಗವಾಗಿ ಪ್ರತಿ ವರ್ಷದಂತೆ ಈ ಬಾರಿಯೂ ಕಥಾ ಸ್ಪರ್ಧೆ ಏರ್ಪಡಿಸಲಾಗಿದೆ. 'ಮೈಸೂರು ಮಿತ್ರ' ಪ್ರಸರಣ ಹೊಂದಿರುವ ಐದು ಜಿಲ್ಲೆಗಳ (ಮೈಸೂರು, ಚಾಮರಾಜನಗರ, ಕೊಡಗು, ಮಂಡ್ಯ ಮತ್ತು ಹಾಸನ) ಪ್ರತಿಭಾವಂತ ಕಥೆಗಾರರನ್ನು ಬೆಳಕಿಗೆ ತರುವುದು ಸಹ ಈ ಸ್ಪರ್ಧೆಯ ಮೂಲ

ಉತ್ತಮವಾದ ಐದು ಕಥೆಗಳಿಗೆ ನಗದು ಬಹುಮಾನ

- ಪ್ರಥಮ ಬಹುಮಾನ : ರೂ. 6,000
- ದ್ವಿತೀಯ ಬಹುಮಾನ : ರೂ. 5,000
- ತೃತೀಯ ಬಹುಮಾನ : ರೂ. 4,000
- ಪ್ರೋತ್ಸಾಹಕ ಬಹುಮಾನಗಳು (ಎರಡು) : ರೂ. 2,500

ಸ್ಪರ್ಧೆಯ ನಿಯಮಗಳು

- ಒಬ್ಬರು ಒಂದೇ ಕಥೆಯನ್ನು ಕಳುಹಿಸಬೇಕು.
- ಕಥೆಯನ್ನು ಕಂಪ್ಯೂಟರ್‌ನಲ್ಲಿ ಟೈಪ್ ಮಾಡಿ news@mysuru-mithra.com ಇ–ಮೇಲ್ ಮಾಡಬಹುದು. ಇಲ್ಲವೆ ಅಂಚೆ ಮೂಲಕವೂ ಕಳಿಸಬಹುದು. ಕಥೆ ಐದು ಪುಟಗಳನ್ನು (ಒಂದೇ ಮಗ್ಗಲು) ಮೀರದಂತಿರಬೇಕು. ಅನುವಾದ– ರೂಪಾಂತರಗಳನ್ನು ಪರಿಗಣಿಸುವುದಿಲ್ಲ.
- ಸ್ಪರ್ಧಿಗಳು ಕಥೆಯ ಶಿರೋನಾಮೆ, ತಮ್ಮ ಹೆಸರು–ವಿಳಾಸ, ಪಾಸ್‌ಪೋರ್ಟ್ ಸೈಜಿನ ಭಾವಚಿತ್ರ ಮತ್ತು ಕಿರು ಪರಿಚಯವನ್ನು ಪ್ರತ್ಯೇಕ ಹಾಳೆಯಲ್ಲಿ ಸ್ಫುಟವಾಗಿ ಬರೆದು ಕಥೆಯೊಡನೆ ಲಗತ್ತಿಸಬೇಕು.
- ಸ್ಪರ್ಧೆಗೆ ಕಳುಹಿಸಲಾಗುವ ಕಥೆ ಈಗಾಗಲೇ ಬೇರೆಲ್ಲೂ ಪ್ರಕಟವಾಗಿರಕೂಡದು. ತೀರ್ಪುಗಾರರ ಮಂಡಳಿಯ ತೀರ್ಮಾನವೇ ಅಂತಿಮ ವಾದುದು. ಪ್ರಥಮ ಬಹುಮಾನಿತ ಕಥೆಯನ್ನು ವಿಶೇಷಾಂಕದಲ್ಲಿಯೂ, ಇತರ ಬಹುಮಾನ ಪಡೆದ ಕಥೆಗಳನ್ನು ಯಥಾವಕಾಶ 'ವಾರದ ಮಿತ್ರ' ಸಾಪ್ತಾಹಿಕ ಪುರವಣಿಯಲ್ಲಿಯೂ ಪ್ರಕಟಿಸಲಾಗುವುದು.
- ಬಹುಮಾನಿತ ಕಥೆಗಳ ಸಂಪೂರ್ಣ ಸ್ವಾಮ್ಯ 'ಮೈಸೂರು ಮಿತ್ರ'ನಿಗೆ ಸೇರಿದ್ದು. ಅಂಚೆಯಲ್ಲಿ ಕಥೆಗಳು ಸೂಕ್ತ ಸಮಯಕ್ಕೆ ತಲುಪದಿದ್ದಲ್ಲಿ 'ಮೈಸೂರು ಮಿತ್ರ' ಜವಾಬ್ದಾರಿಯಲ್ಲ ಮತ್ತು ಕಥೆಗಳನ್ನು ಯಾವ ಕಾರಣಕ್ಕೂ ಹಿಂತಿರುಗಿಸಲಾಗುವುದಿಲ್ಲ. ಆದ್ದರಿಂದ ಸ್ಪರ್ಧಿಗಳು ಕಥೆಯ ಒಂದು ಪ್ರತಿಯನ್ನು ತಮ್ಮ ಬಳಿ ಇರಿಸಿಕೊಳ್ಳುವುದೊಳಿತು.
- ಈ ನಿಯಮಾವಳಿಯನ್ನು ಪಾಲಿಸದ ಕಥೆಗಳನ್ನು ತಿರಸ್ಕರಿಸಲಾಗುವುದು.
- ಯಾವುದೇ ರೀತಿ ಪ್ರಭಾವ ಬೀರುವುದನ್ನು ಅನರ್ಹತೆ ಎಂದು ಪರಿಗಣಿಸಲಾಗುವುದು.

ವಿ.ಸೂ.: 'ಮೈಸೂರು ಮಿತ್ರ' ಮತ್ತು 'ಸ್ಟಾರ್ ಆಫ್ ಮೈಸೂರ್' ಪತ್ರಿಕೆಗಳ ಉದ್ಯೋಗಿಗಳು ಹಾಗೂ ಅವರ ಸಂಬಂಧಿಗಳು ಸ್ಪರ್ಧೆಯಲ್ಲಿ ಭಾಗವಹಿಸುವಂತಿಲ್ಲ.

ಕಥೆ ನಮ್ಮ ಕೈಸೇರಲು ಕೊನೆಯ ದಿನಾಂಕ 05–04–2024

ವಿಳಾಸ: ಸಂಪಾದಕರು, 'ಮೈಸೂರು ಮಿತ್ರ' ವಾರ್ಷಿಕ ವಿಶೇಷಾಂಕ ಇಂಡಸ್ಟ್ರಿಯಲ್ 'ಎ' ಲೇಔಟ್, ಬನ್ನಿಮಂಟಪ, ಮೈಸೂರು–570 015
ದೂರವಾಣಿ : 2496520, 2496521, 2496526, 2496527

ತೆರೆಮರೆಯಲ್ಲಿರುವ ಸಾಧಕಿಯರನ್ನು ಬೆಳಕಿಗೆ ತರುವುದೇ ಮಹಿಳಾ ದಿನಾಚರಣೆ ಉದ್ದೇಶ

ಮೃಗಾಲಯದ ಮಾಜಿ ಅಧ್ಯಕ್ಷೆ ಮಲ್ಲಿಗೆ ವೀರೇಶ್ ಅಭಿಮತ

ಮೈಸೂರು,ಮಾ.26(ಎಂಟಿವೈ)– ಮಹಿಳಾ ದಿನಾಚರಣೆ ಕೇವಲ ಒಂದು ದಿನಕ್ಕೆ ಮಾತ್ರ ಸೀಮಿತಗೊಳ್ಳದೆ, ವರ್ಷವಿಡೀ ಮಹಿಳೆಯರು ಸಾಧನೆ ಮಾಡುವುದರೊಂದಿಗೆ ತೆರೆಮರೆಯಲ್ಲಿ ಕಾರ್ಯನಿರ್ವಹಿಸುತ್ತಿರುವವರಿಗೂ ಪ್ರೋತ್ಸಾಹ ನೀಡಬೇಕು ಎಂದು ಕರ್ನಾಟಕ ಮೃಗಾಲಯ ಪ್ರಾಧಿಕಾರದ ಮಾಜಿ ಅಧ್ಯಕ್ಷೆ ಮಲ್ಲಿಗೆ ವೀರೇಶ್ ಸಲಹೆ ನೀಡಿದ್ದಾರೆ.

ಮೈಸೂರಿನ ರಾಮಕೃಷ್ಣನಗರದಲ್ಲಿರುವ ರಮಾಗೋವಿಂದ ರಂಗಮಂದಿರದಲ್ಲಿ ಸಖಿ ಫೌಂಡೇಷನ್ ಮತ್ತು ಸೂರ್ಯ ಚಾರಿಟೆಬಲ್ ಟ್ರಸ್ಟ್ ವತಿಯಿಂದ ಮಂಗಳವಾರ ಆಯೋಜಿಸಿದ್ದ ವಿಶ್ವ ಮಹಿಳಾ ದಿನದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಮಹಿಳೆಯರನ್ನು ಗುರುತಿಸಿ ಗೌರವಿಸುತ್ತಿದ್ದೇವೆ. ಸಾಕಷ್ಟು ಹೆಸರು ಮಾಡಿದವರನ್ನು ಸುಲಭವಾಗಿ ಗುರುತಿಸಬಹುದು. ಆದರೆ, ತೆರೆಮರೆಯಲ್ಲಿ ಶ್ರಮಿಸುತ್ತಿರುವವರನ್ನು ಗುರುತಿಸಿ, ಪ್ರೋತ್ಸಾಹಿಸುವ ಜವಾಬ್ದಾರಿ ಎಲ್ಲರದ್ದಾಗಿದೆ ಎಂದರು.

ಅನೇಕ ಮಹಿಳೆಯರು ರಾಜಕೀಯ ಕ್ಷೇತ್ರದಲ್ಲೂ ಸಾಧನೆ ಮಾಡುತ್ತಿದ್ದಾರೆ. ಯಾರಿಗೆ ರಾಜಕೀಯ ಶಕ್ತಿ ನೀಡಬೇಕೆಂಬ ನಿರ್ಧಾರವನ್ನೂ ಅವರೇ ಮಾಡುವಂತಾಗಬೇಕು. ಮನೆಯಲ್ಲಿ ಪುರುಷರು(ಪತಿ) ಹೇಳಿದರು ಎಂದ ಮಾತ್ರಕ್ಕೆ ಮತದಾನ ಮಾಡುವುದಕ್ಕಿಂತ, ಯಾರು ಒಳ್ಳೆಯ ಕೆಲಸ ಮಾಡಿದ್ದಾರೆ, ಮಹಿಳಾ ಪರ ಯಾವ ಸರ್ಕಾರಗಳು ಕಾರ್ಯಕ್ರಮ ರೂಪಿಸಿವೆ ಎಂದು ಆಲೋಚನೆ ಮಾಡಿ, ಮತದಾನ ಮಾಡುವತ್ತ ಗಮನ ಹರಿಸಬೇಕು ಎಂದು ಸಲಹೆ ನೀಡಿದರು.



ಮೈಸೂರಿನ ರಾಮಕೃಷ್ಣನಗರದಲ್ಲಿರುವ ರಮಾಗೋವಿಂದ ರಂಗಮಂದಿರದಲ್ಲಿ ಸಖಿ ಫೌಂಡೇಷನ್ ವತಿಯಿಂದ ಆಯೋಜಿಸಿದ್ದ ಮಹಿಳಾ ದಿನದ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿರುವ ಸುಧಾ ಯೋಗಣ್ಣ, ಪುಷ್ಪಾ ಅಯ್ಯಂಗಾರ್, ವಿದುಷಿ ನೇತ್ರಾ ನಂದನ್, ಜಯಲಕ್ಷ್ಮೀ ವೆಂಕಟರಾಮು, ಸುಮತಿ ಸುಬ್ರಹ್ಮಣ್ಯ ಅವರಿಗೆ ಸ್ಫೂರ್ತಿ ಸಖಿ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಸಖಿ ಫೌಂಡೇಷನ್ ವತಿಯಿಂದ ನಡೆಸುತ್ತಿರುವ ಮಹಿಳಾ ದಿನಾಚರಣೆ ಇತರೆ ಕಾರ್ಯಕ್ರಮಕ್ಕಿಂತ ವಿಭಿನ್ನವಾಗಿದೆ. 'ಮಹಿಳೆಯರು ಸಾಧನೆ ಮಾಡಲು ಪ್ರೋತ್ಸಾಹಿಸಿದ ಪುರುಷರಿಗೂ ಪ್ರಣಾಮಗಳು' ಕಾರ್ಯಕ್ರಮದ ಮೂಲಕ ಗೌರವ ಸಲ್ಲಿಸಿದ್ದು ವಿಶೇಷ, ಇಂತಹ ಕಾರ್ಯಕ್ರಮಗಳು ಒಂದು ದಿನಕ್ಕೆ ಮಾತ್ರ ಸೀಮಿತವಾಗಬಾರದು ಎಂದರು.

ಇದೇ ವೇಳೆ ಸ್ವಾಸ್ಥ್ಯ ಸಮಾಜಕ್ಕಾಗಿ ಸಖಿ ಮಾನವ ಸರಪಳಿ ವಿಷಯ ಕುರಿತು ಸಾಹಿತಿ ಬಿ.ಆರ್.ನಾಗರತ್ನ ಮಾತನಾಡಿ, ಆರೋಗ್ಯಕರ ಸಮಾಜ ನಿರ್ಮಾಣದಲ್ಲಿ ಮಹಿಳೆ ಪಾತ್ರ ಬಹುಮುಖ್ಯ. ಕುಟುಂಬ ನಿರ್ವಹಣೆಯಲ್ಲೂ ತಮ್ಮ ಜವಾಬ್ದಾರಿಯನ್ನು ಯಶಸ್ವಿಯಾಗಿ ನಿಭಾಯಿಸುತ್ತಿದ್ದಾರೆ. ಮಕ್ಕಳನ್ನು ಸಮಾಜಕ್ಕೆ ಸತ್ಪ್ರಜೆಯಾಗಿ ನೀಡುತ್ತಿದ್ದಾರೆ ಎಂದು ಹರ್ಷ ವ್ಯಕ್ತಪಡಿಸಿದರು.

ಇದೇ ವೇಳೆ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿರುವ ಸುಧಾ ಯೋಗಣ್ಣ, ಪುಷ್ಪಾ ಅಯ್ಯಂಗಾರ್, ವಿದುಷಿ ನೇತ್ರಾ ನಂದನ್, ಜಯಲಕ್ಷ್ಮೀ ವೆಂಕಟರಾಮು, ಸುಮತಿ ಸುಬ್ರಹ್ಮಣ್ಯ ಅವರಿಗೆ ಸ್ಫೂರ್ತಿ ಸಖಿ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ.ರಾಜೀವ್, ಸಮಾಜ ಸೇವಕ ರಘುರಾಂ ವಾಜಪೇಯಿ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರು ಮಿತ್ರ



ಸಿಎಸ್‌ಕೆ ಅಬ್ಬರಕ್ಕೆ ಗುಜರಾತ್ ಧೂಳೀಪಟ

ಅಂಕಪಟ್ಟಿಯಲ್ಲಿ ಅಗ್ರಸ್ಥಾನಕ್ಕೇರಿದ ಚೆನ್ನೈ ಸೂಪರ್ ಕಿಂಗ್ಸ್

ಚೆನ್ನೈ, ಮಾ.26– ಬ್ಯಾಟಿಂಗ್, ಬೌಲಿಂಗ್ ಹಾಗೂ ಫೀಲ್ಡಿಂಗ್‌ನಲ್ಲಿ ಅತ್ಯುತ್ತಮ ಪ್ರದರ್ಶನ ತೋರಿದ ಚೆನ್ನೈ ಸೂಪರ್ ಕಿಂಗ್ಸ್, ಗುಜರಾತ್ ಟೈಟಾನ್ಸ್ ವಿರುದ್ಧ 63 ರನ್‌ಗಳ ಭರ್ಜರಿ ಜಯ ಸಾಧಿಸಿತು. ಆ ಮೂಲಕ ಅಂಕಪಟ್ಟಿಯಲ್ಲಿ ಅಗ್ರಸ್ಥಾನಕ್ಕೇರಿತು.



ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಚೆನ್ನೈ 6 ವಿಕೆಟ್ ನಷ್ಟಕ್ಕೆ 206 ರನ್ ಗಳಿಸಿತು. ಕಠಿಣ ಸವಾಲನ್ನು ಬೆನ್ನಟ್ಟಿದ ಗುಜರಾತ್ 20 ಓವರ್‌ಗಳಲ್ಲಿ 8 ವಿಕೆಟ್ ನಷ್ಟಕ್ಕೆ 143 ರನ್ ಗಳಿಸಿ ಸೋಲೊಪ್ಪಿಕೊಂಡಿತು.

ಬೃಹತ್ ಮೊತ್ತ ಬೆನ್ನತ್ತಿದ ಗುಜರಾತ್, ತಂಡದ ಮೊತ್ತ 34 ರನ್ ಆಗುವಷ್ಟರಲ್ಲಿ ಆರಂಭಿಕರಾದ ಶುಭ್‌ಮನ್ ಗಿಲ್ 8, ವೃದ್ಧಿಮಾನ್ ಸಾಹ 21 ರನ್ ಗಳಿಸಿ ನಿರ್ಗಮಿಸಿದರು. ನಂತರ ಬಂದ ವಿಜಯ ಶಂಕರ್ 12 ರನ್ ಗಳಿಸಿದ್ದ ವೇಳೆ ಧೋನಿ ಹಿಡಿದ ಅದ್ಭುತ ಕ್ಯಾಚ್‌ಗೆ ಬಲಿಯಾದರು. ಇನ್ನು 21 ರನ್ ಗಳಿಸಿದ್ದ ವೇಳೆ ಸಿಕ್ಸರ್ ಸಿಡಿಸಲು ಹೋಗಿ ರಹಾನೆ ಹಿಡಿದ ಉತ್ತಮ ಕ್ಯಾಚ್‌ಗೆ ಡೇವಿಡ್ ಮಿಲ್ಲರ್ ಔಟಾದರು. ಮತ್ತೊಂದೆಡೆ ಇಂಪ್ಯಾಕ್ಟ್ ಪ್ಲೇಯರ್ ಆಗಿ ಕಣಕ್ಕಿಳಿದ ಸಾಯಿ ಸುದರ್ಶನ್ 37 ರನ್ ಗಳಿಸಿ ನಿರ್ಗಮಿಸಿದರು. ಗುಜರಾತ್ ಪರ ಯಾರೊಬ್ಬರೂ ಕ್ರೀಸ್‌ನಲ್ಲಿ ಗಟ್ಟಿಯಾಗಿ ನಿಂತು ಆಡದ ಕಾರಣ ಸೋಲು ಅನುಭವಿಸಿತು. ಉಳಿದಂತೆ ಅಜ್ಮತುಲ್ಲಾ ಒಮರ್ಜಾಯ್ 11, ರಾಹುಲ್ ತೆವಾಟಿಯಾ 6, ಉಮೇಶ್ ಯಾದವ್ 10 ರನ್ ಗಳಿಸಿದರು.

ಚೆನ್ನೈ ಪರ ದೀಪಕ್ ಚಹರ್, ತುಷಾರ್ ದೇಶಪಾಂಡೆ, ಮುಸ್ತಫಿಜುರ್ ರೆಹಮಾನ್ ತಲಾ 2, ಡ್ಯಾರಿಯಲ್ ಮಿಚೆಲ್, ಮತೀಶ ಪತಿರಣ ತಲಾ ಒಂದೊಂದು ವಿಕೆಟ್ ಕಬಳಿಸಿದರು.

ಇದಕ್ಕೂ ಮುನ್ನಾ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಚೆನ್ನೈ ಸೂಪರ್ ಕಿಂಗ್ಸ್‌ಗೆ ಆರಂಭಿಕ ಆಟಗಾರರಾದ ಋತುರಾಜ್ ಗಾಯಕ್ವಾಡ್ ಮತ್ತು ರಚಿನ್ ರವೀಂದ್ರ ಮೊದಲ ವಿಕೆಟ್‌ಗೆ 32 ಎಸೆತಗಳಲ್ಲಿ 62 ರನ್ ಜೊತೆಯಾಟವಾಡುವ ಮೂಲಕ ಸ್ಫೋಟಕ ಆರಂಭ ನೀಡಿದರು. ಆರಂಭದಿಂದಲೇ ಅಬ್ಬರಿಸಿದ ರಚಿನ್ ರವೀಂದ್ರ ಕೇವಲ 20 ಎಸೆತಗಳಲ್ಲಿ 6 ಬೌಂಡರಿ, 3 ಸಿಕ್ಸರ್ ಒಳಗೊಂಡ 46 ರನ್ ಗಳಿಸಿ ನಿರ್ಗಮಿಸಿದರು. ನಂತರ ಬಂದ ಅಜಿಂಕ್ಯಾ ರಹಾನೆ 12 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. ಮತ್ತೊಂದೆಡೆ 36 ಎಸೆತಗಳಲ್ಲಿ 5 ಬೌಂಡರಿ, 1 ಸಿಕ್ಸರ್ ಒಳಗೊಂಡ 46 ರನ್ ಗಳಿಸಿದ್ದ ನಾಯಕ ಋತುರಾಜ್ ಗಾಯಕ್ವಾಡ್ ಸಹ ವಿಕೆಟ್ ಒಪ್ಪಿಸಿ ನಿರ್ಗಮಿಸಿದರು. ನಂತರ ಬಂದ ಶಿವಂ ದುಬೆ ಸಿಕ್ಸರ್‌ಗಳ ಸುರಿಮಳೆಗೈದರು. ಅಲ್ಲದೇ ಕೇವಲ 23 ಎಸೆತಗಳಲ್ಲಿ 2 ಬೌಂಡರಿ, 5 ಸಿಕ್ಸರ್ ಒಳಗೊಂಡ 51 ರನ್ ಗಳಿಸಿ ಔಟಾದರು. ಡ್ಯಾರಿಯಲ್ ಮಿಚೆಲ್ ಹಾಗೂ ಸಮೀರ್ ರಿಜ್ವಿ ಇನ್ನಿಂಗ್ಸ್‌ನ ಅಂತಿಮ ಹಂತದಲ್ಲಿ ಬಿರುಸಿನ ಬ್ಯಾಟಿಂಗ್ ಮಾಡುವ ಮೂಲಕ ತಂಡದ ಮೊತ್ತವನ್ನು 200ರ ಗಡಿ ದಾಟಿಸಿದರು. ಮಿಚೆಲ್ 2 ಬೌಂಡರಿ ಒಳಗೊಂಡ 24 ರನ್ ಗಳಿಸಿದರೇ, ರಿಜ್ವಿ 6 ಎಸೆತದಲ್ಲಿ 14 ರನ್ ಸಿಡಿಸಿದರು. ರವೀಂದ್ರ ಜಡೇಜಾ ಅಜೇಯ 7 ರನ್ ಸಿಡಿಸಿದರು.

ಗುಜರಾತ್ ಟೈಟಾನ್ಸ್ ಪರ ರಶೀದ್ ಖಾನ್ 2, ರವಿ ಶ್ರೀನಿವಾಸನ್ ಸಾಯಿ ಕಿಶೋರ್, ಸ್ಪೆನ್ಸರ್ ಜಾನ್ಸನ್ ಹಾಗೂ ಮೋಹಿತ್ ಶರ್ಮಾ ತಲಾ ಒಂದೊಂದು ವಿಕೆಟ್ ಉರುಳಿಸಿದರು. ಶಿವಂ ದುಬೆ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

ಅಂಕಪಟ್ಟಿ ವಿವರ

ತಂಡ	ಪಂದ್ಯಗಳು	ಗೆಲುವು	ಸೋಲು	ಡ್ರಾ	ಅಂಕ
ಚೆನ್ನೈ	2	2	0	0	4
ರಾಜಸ್ಥಾನ್	1	1	0	0	2
ಕೊಲ್ಕತ್ತಾ	1	1	0	0	2
ಪಂಜಾಬ್	2	1	1	0	2
ಬೆಂಗಳೂರು	2	1	1	0	2
ಗುಜರಾತ್	2	1	1	0	2
ಹೈದರಾಬಾದ್	1	0	1	0	0
ಮುಂಬೈ	1	0	1	0	0
ಡೆಲ್ಲಿ	1	0	1	0	0
ಲಕ್ನೋ	1	0	1	0	0

ಇಂದಿನ ಪಂದ್ಯ

[ಮಾ. 27]

ಸನ್‌ರೈಸರ್ಸ್ ಹೈದರಾಬಾದ್/ ಮುಂಬೈ ಇಂಡಿಯನ್ಸ್

ಸ್ಥಳ: ಹೈದರಾಬಾದ್, ರಾಜೀವ್‌ಗಾಂಧಿ ಅಂತರರಾಷ್ಟ್ರೀಯ ಕ್ರೀಡಾಂಗಣ,

ಸಮಯ: ಸಂಜೆ 7.30ಕ್ಕೆ

ಅಶ್ವತ್ಥನಾರಾಯಣ, ನಾರಾಯಣಗೌಡರ ಮನೆಗೆ ಕುಮಾರಸ್ವಾಮಿ ಭೇಟಿ; ಬೆಂಬಲ ಕೋರಿಕೆ



ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಅವರು ಮಾಜಿ ಡಿಸಿಎಂ ಅಶ್ವತ್ಥ ನಾರಾಯಣ ನಿವಾಸಕ್ಕೆ ಮಂಗಳವಾರ ಭೇಟಿ ನೀಡಿದರು. ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ಜೆಡಿಎಸ್ ಯುವ ಮುಖಂಡ ನಿಖಿಲ್ ಕುಮಾರಸ್ವಾಮಿ ಇತರರಿದ್ದಾರೆ

ಬೆಂಗಳೂರು, ಮಾ. 26– ಮಂಡ್ಯ ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಅಭ್ಯರ್ಥಿಯಾಗಿ ಸ್ಪರ್ಧಿಸುತ್ತಿರುವ ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಅವರು ಬಿಜೆಪಿಯ ಮಾಜಿ ಸಚಿವರಾದ ಕೆ.ಸಿ. ನಾರಾಯಣ ಗೌಡ ಮತ್ತು ಮಾಜಿ ಉಪ ಮುಖ್ಯಮಂತ್ರಿ ಅಶ್ವತ್ಥನಾರಾಯಣ ಅವರನ್ನು ಭೇಟಿ ಮಾಡಿ, ಬೆಂಬಲ ಕೋರಿದರು.

ಬೆಂಗಳೂರಿನ ಡಾಲರ್ಸ್ ಕಾಲೋನಿಯಲ್ಲಿರುವ ಮಾಜಿ ಸಚಿವ ಕೆ.ಸಿ. ನಾರಾಯಣಗೌಡರ ನಿವಾಸಕ್ಕೆ ತೆರಳಿದ ಕುಮಾರಸ್ವಾಮಿ, ಒಂದು ಗಂಟೆಗಳ ಕಾಲ ಅವರ ಮನೆಯಲ್ಲಿ ಚರ್ಚಿಸಿ ತಾವು ಮಂಡ್ಯದಿಂದ ಸ್ಪರ್ಧಿಸುತ್ತಿದ್ದು ಬೆಂಬಲ ನೀಡುವಂತೆ ಕೋರಿದರು ಎನ್ನಲಾಗಿದೆ.

ಈ ವೇಳೆ ನಾರಾಯಣಗೌಡರು ಕುಮಾರಸ್ವಾಮಿಗೆ ಮೈಸೂರು ಪೇಟ ತೊಡಿಸಿ, ಶಾಲು ಹೊದಿಸಿ, ಹಾರ ಹಾಕಿ ಸ್ವಾಗತಿಸಿದರು. ನಾರಾಯಣಗೌಡರು ಕುಮಾರಸ್ವಾಮಿ ಅವರ ವಿರುದ್ಧ ಬಂಡೆದ್ದು, ಬಿಜೆಪಿ ಸೇರಿ, ಕೆ.ಆರ್.ಪೇಟೆಯಲ್ಲಿ ಕಮಲ ಅರಳಿಸಿದ್ದರು. ಕುಮಾರಸ್ವಾಮಿ ಮತ್ತು ನಾರಾಯಣಗೌಡ ನಡುವೆ ವೈಮನಸ್ಸು ತಾರಕಕ್ಕೇರಿತ್ತು. ಇದೀಗ ಕುಮಾರಸ್ವಾಮಿ ಅವರೇ ನಾರಾಯಣ ಗೌಡರ ನಿವಾಸಕ್ಕೆ ತೆರಳಿ ಮತ್ತೆ ವಿಶ್ವಾಸ ಗಳಿಸಲು ಪ್ರಯತ್ನಿಸಿದ್ದಾರೆ. ಈ ವೇಳೆ ಮಾಜಿ ಉಪ ಮುಖ್ಯಮಂತ್ರಿ ಅಶ್ವತ್ಥನಾರಾಯಣ ಉಪಸ್ಥಿತರಿದ್ದರು.

ಇದಕ್ಕೂ ಮುನ್ನ ಕುಮಾರಸ್ವಾಮಿ ಅವರು ಸಂಜಯ್‌ನಗರದಲ್ಲಿರುವ ಅಶ್ವತ್ಥನಾರಾಯಣ ಅವರ ನಿವಾಸಕ್ಕೆ ಭೇಟಿ ನೀಡಿ ಬೆಂಬಲ ಯಾಚಿಸಿದರು. ನಂತರ ಅಶ್ವತ್ಥನಾರಾಯಣ ಅವರ ಜೊತೆ ನಾರಾಯಣಗೌಡರ ಮನೆಗೆ ಭೇಟಿ ನೀಡಿದ್ದರು.

ಮಂಡ್ಯ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸುವ ಕುಮಾರಸ್ವಾಮಿಯವರು ತಮ್ಮಿಂದ ದೂರವಾಗಿರುವ ಎಲ್ಲಾ ಮುಖಂಡರನ್ನು ಭೇಟಿ ಮಾಡಿ ಬೆಂಬಲ ಯಾಚಿಸುತ್ತಿದ್ದಾರೆ.

ಈ ವೇಳೆ ಮಾತನಾಡಿದ ಮಾಜಿ ಸಿಎಂ ಕುಮಾರಸ್ವಾಮಿಯವರು, ನಾರಾಯಣ ಗೌಡ, ಅಶ್ವತ್ಥನಾರಾಯಣ ಅವರು ನನ್ನ ಹಳೇ ಸ್ನೇಹಿತರು. ಒಟ್ಟಿಗೆ ಕೆಲಸ ಮಾಡಿದವರು. ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಎಲ್ಲರನ್ನು ಭೇಟಿ ಮಾಡಿ, ವಿಶ್ವಾಸಕ್ಕೆ ತೆಗೆದುಕೊಳ್ಳುತ್ತಿದ್ದೇನೆ ಎಂದರು.

ಕುಮಾರವ್ಯಾಸ ಪ್ರಶಸ್ತಿ ಪುರಸ್ಕೃತ ಪ್ರಸಿದ್ಧ ಗಮಕಿ ಕೃ.ರಾಮಚಂದ್ರರಿಗೆ 'ಪರಂಪರೆ'ಯಿಂದ ಸನ್ಮಾನ

ಮೈಸೂರು, ಮಾ.26(ಎಂಕೆ)– ರಾಜ್ಯ ಸರ್ಕಾರದಿಂದ ಕುಮಾರವ್ಯಾಸ ಪ್ರಶಸ್ತಿಗೆ ಭಾಜನರಾದ ಪ್ರಸಿದ್ಧ ಗಮಕಿ ಹಾಗೂ ವ್ಯಾಖ್ಯಾನಕಾರ ಕೃ.ರಾಮಚಂದ್ರ ಅವರನ್ನು ಪರಂಪರೆ ವತಿಯಿಂದ ಗೌರವಿಸಲಾಯಿತು.



ಕುಮಾರವ್ಯಾಸ ಪ್ರಶಸ್ತಿ ಪುರಸ್ಕೃತ ಪ್ರಸಿದ್ಧ ಗಮಕಿ ಕೃ.ರಾಮಚಂದ್ರ ಹಾಗೂ ಅವರ ಪತ್ನಿ ವಿದುಷಿ ತುಳಸಿ ರಾಮಚಂದ್ರ ಅವರನ್ನು ಪರಂಪರೆ ವತಿಯಿಂದ ಗೌರವಿಸಲಾಯಿತು. ಸುತ್ತೂರು ಶ್ರೀ, ನಾಡೋಜ ಟಿ.ವಿ.ವೆಂಕಟಾಚಲ ಶಾಸ್ತ್ರಿ, ಸಂಸ್ಕೃತ ವಿದ್ವಾಂಸ ಡಾ.ಹೆಚ್.ವಿ.ನಾಗರಾಜರಾವ್ ಮತ್ತಿತರರಿದ್ದರು.

ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ನಾದಬ್ರಹ್ಮ ಸಂಗೀತ ಸಭಾದಲ್ಲಿ ಆಯೋಜಿಸಿದ್ದ ಅಭಿನಂದನಾ ಕಾರ್ಯಕ್ರಮದಲ್ಲಿ ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಹಾಗೂ ಕನ್ನಡ ವಿದ್ವಾಂಸ ನಾಡೋಜ ಟಿ.ವಿ. ವೆಂಕಟಾಚಲ ಶಾಸ್ತ್ರಿ ಅವರು ಪ್ರಶಸ್ತಿ ಪುರಸ್ಕೃತರನ್ನು ಸನ್ಮಾನಿಸಿ ಅಭಿನಂದಿಸಿದರು.

ಬಳಿಕ ಅಭಿನಂದನಾ ಭಾಷಣ ಮಾಡಿದ ಸಂಸ್ಕೃತ ವಿದ್ವಾಂಸ ಡಾ.ಹೆಚ್.ವಿ.ನಾಗರಾಜರಾವ್, ನಮ್ಮ ದೇಶ ಮತ್ತು ರಾಜ್ಯದ ಸಾಂಸ್ಕೃತಿಕ ಕಲೆಗಳಲ್ಲಿಯೇ ಕಾವ್ಯ ಮತ್ತು ಗಾಯನವನ್ನು ಒಳಗೊಂಡ ಗಮಕ ಕಲೆಗೆ ವಿಶೇಷ ಸ್ಥಾನಮಾನವಿದ್ದು, ಇದೊಂದು ವೈಶಿಷ್ಟ್ಯತೆಯುಳ್ಳ ಕಲೆಯೂ ಆಗಿದೆ. ಸಂಸ್ಕೃತ ಭಾಷೆಯಲ್ಲೂ ಇಲ್ಲದ ಷಟ್ಪದಿ ಸಾಹಿತ್ಯ ಗಮಕ ಕಲೆಯಲ್ಲಿರುವುದರಿಂದಲೇ ವಿಶೇಷತೆ ಪಡೆದಿದೆ ಎಂದರು.

ಮೈಸೂರಿನಲ್ಲಿ ಗಮಕ ಕಲೆಯನ್ನು ದೇಶದಾದ್ಯಂತ ಪಸರಿಸಿದ ಕೀರ್ತಿ ಕೃಷ್ಣಗಿರಿ ಕೃಷ್ಣರಾಯರಿಗೆ ಸಲ್ಲುತ್ತದೆ. ಅವರ ಪುತ್ರರಾಗಿ ಅವರದ್ದೇ ದಾರಿಯಲ್ಲಿ ಸಾಗಿಬಂದ ಕೃ.ರಾಮಚಂದ್ರ ಅವರು ಕೂಡ ಗಣನೀಯ ಸಾಧನೆ ಮೂಲಕ ಕಲೆಯನ್ನು ಉಳಿಸಿ–ಬೆಳೆಸುವ ಕೈಂಕರ್ಯ ಮಾಡಿದ್ದಾರೆ. ಗಮಕ ಗಾಯನದಲ್ಲಿ ಒಂದೊಂದು ಪದವನ್ನು ಬಹಳ ಎಚ್ಚರಿಕೆಯಿಂದ ಧ್ವನಿಯ ಏರಿಳಿತದೊಂದಿಗೆ ಹಾಡಬೇಕು. ಹಾಗೆಯೇ ಗಾಯನದ ಬಳಿಕ ವ್ಯಾಖ್ಯಾನವನ್ನು ಸಹ ಮಾಡಬೇಕು. ವ್ಯಾಖ್ಯಾನ ಮಾಡದಿದ್ದರೆ ಗಮಕ ಗಾಯನ ಅರ್ಥವಾಗುವುದಿಲ್ಲ. ಈ ನಿಟ್ಟಿನಲ್ಲಿ ಕೃ.ರಾಮಚಂದ್ರ ಅವರು ಸುಪ್ರಸಿದ್ಧ ವ್ಯಾಖ್ಯಾನಕಾರರೂ ಆಗಿದ್ದಾರೆ ಎಂದು ಶ್ಲಾಘಿಸಿದರು.

ವೃತ್ತಿಯಲ್ಲಿ ಅವರು ಇಂಜಿನಿಯರ್ ಆದರೂ ಪ್ರವೃತ್ತಿಯಲ್ಲಿ ಪ್ರಸಿದ್ಧ ಗಮಕಿಯಾಗಿದ್ದಾರೆ. ಭ್ರಷ್ಟಾಚಾರ, ಲಂಚ ತುಂಬಿರುವ ವ್ಯವಸ್ಥೆಯಲ್ಲಿ ಪ್ರಾಮಾಣಿಕರಾಗಿ ಸೇವೆ ಸಲ್ಲಿಸಿದ್ದಾರೆ. ಅವರ ಸಾಂಸ್ಕೃತಿಕ ಕಲಾ ಸೇವೆಗೆ ಕುಮಾರವ್ಯಾಸ ಪ್ರಶಸ್ತಿ ಸಂದಿರುವುದು ಅಭಿನಂದನಾರ್ಹ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಇದೇ ವೇಳೆ ಕೃ.ರಾಮಚಂದ್ರ ಅವರೊಂದಿಗೆ ಅವರ ಪತ್ನಿ ವಿದುಷಿ ಶ್ರೀಮತಿ ತುಳಸಿ ರಾಮಚಂದ್ರ ಅವರನ್ನು ಅಭಿನಂದಿಸಲಾಯಿತು. ಪರಂಪರೆ ಪದಾಧಿಕಾರಿಗಳು ಉಪಸ್ಥಿತರಿದ್ದರು.

ವಿಶೇಷಚೇತನರಿಗೆ ಮತದಾನ ಮಾಹಿತಿಗೆ 'ಸಕ್ಷಮ್ ಆ್ಯಪ್'

ಮೈಸೂರು, ಮಾ.26(ಎಂಕೆ)– ವಿಶೇಷಚೇತನ ಮತದಾರರು ಮುಕ್ತ ಹಾಗೂ ಸುಗಮವಾಗಿ ಮತದಾನ ಮಾಡಲು ಭಾರತ ಚುನಾವಣಾ ಆಯೋಗವು ಮೊದಲ ಬಾರಿಗೆ ಸಕ್ಷಮ್ ಆ್ಯಪ್(SAKSHAM APP) ಪರಿಚಯಿಸಿದ್ದು, ವಿಶೇಷಚೇತನರು ಈ ಆ್ಯಪ್ ಮೂಲಕ ಚುನಾವಣೆಗೆ ಸಂಬಂಧಪಟ್ಟಂತೆ ಎಲ್ಲಾ ಮಾಹಿತಿಗಳನ್ನು ಪಡೆಯಬಹುದಾಗಿದೆ.



ಮತದಾರರಾಗಿ ಹೊಸದಾಗಿ ನೋಂದಣಿ ಮಾಡುವುದು. ಮತಗಟ್ಟೆಯಲ್ಲಿ ಲಭ್ಯವಿರುವ ಸೌಲಭ್ಯಗಳ ಮಾಹಿತಿ ಪಡೆಯುವುದು. ಮತಗಟ್ಟೆಗೆ ತೆರಳಲು ತ್ರಿಚಕ್ರವಾಹನವನ್ನು ಮುಂಗಡವಾಗಿ ಕಾಯ್ದಿರಿಸುವುದು. ದೂರನ್ನು ದಾಖಲಿಸುವ ಜೊತೆಗೆ ಭಾರತ ಚುನಾವಣಾ ಆಯೋಗವು ಹೊರತಂದಿರುವ ಎಲ್ಲಾ ಚುನಾವಣಾ ಲೇಖನಗಳು ಹಾಗೂ ಸಂದೇಶಗಳನ್ನು ಸಕ್ಷಮ್ ಆ್ಯಪ್‌ನಲ್ಲಿ ನೋಡಬಹುದಾಗಿದೆ.

ವಿಶೇಷಚೇತನರ ಸ್ನೇಹಿ ಉಪಕ್ರಮಗಳಾದ ನೆಲ ಅಂತಸ್ತಿನಲ್ಲಿ ಮತಗಟ್ಟೆಗಳನ್ನು ಸ್ಥಾಪನೆ, ರ್ಯಾಂಪ್ ವ್ಯವಸ್ಥೆ, ವಾಹನ ನಿಲುಗಡೆ ವ್ಯವಸ್ಥೆ, ದೃಷ್ಟಿದೋಷವುಳ್ಳವರಿಗೆ ಬ್ರೈಲ್ ಲಿಪಿಯಲ್ಲಿ ಮಾದರಿ ಮತಪತ್ರವನ್ನು ಮುದ್ರಿಸಿ ಪ್ರದರ್ಶಿಸಿರುವುದು, ಮತಗಟ್ಟೆಯಲ್ಲಿ ಸಹಾಯ ಮಾಡಲು ಸ್ವಯಂ ಸೇವಕರ ನೇಮಕ, ಕುಡಿಯುವ ನೀರಿನ ವ್ಯವಸ್ಥೆ, ನೆರಳಿನ ವ್ಯವಸ್ಥೆ, ಶೌಚಾಲಯ ವ್ಯವಸ್ಥೆ, ತ್ರಿಚಕ್ರವಾಹನ ವ್ಯವಸ್ಥೆ, ಪ್ರತ್ಯೇಕ ಸರತಿ ಸಾಲು ವ್ಯವಸ್ಥೆ ಕಲ್ಪಿಸಿರುವುದರ ಬಗ್ಗೆಯೂ ಸಕ್ಷಮ್ ಆ್ಯಪ್ ಮೂಲಕ ಮಾಹಿತಿಯನ್ನು ಪಡೆದು ಮತಗಟ್ಟೆಯಲ್ಲಿ ಆರಾಮದಾಯಕವಾಗಿ ಬಂದು ಮತದಾನ ಮಾಡಬಹುದಾಗಿರುತ್ತದೆ.

ಈ ಆ್ಯಪ್ ಮೂಲಕ ತಮ್ಮ ಭಾವಚಿತ್ರವುಳ್ಳ ಮತದಾರರ ಚೀಟಿಯ ಸಂಖ್ಯೆಯನ್ನು ಬಳಕೆ ಮಾಡಿ ತಮ್ಮ ಮತಗಟ್ಟೆ ಯಾವುದು ಎಂಬುದನ್ನು ತಿಳಿದುಕೊಳ್ಳಬಹುದಾಗಿದೆ. ಇ.ವಿ.ಎಂ ಹಾಗೂ ವಿ.ವಿ.ಪ್ಯಾಟ್ ಬಗ್ಗೆ ಹೆಚ್ಚಿನ ಮಾಹಿತಿಗಳನ್ನು ಪಡೆದುಕೊಳ್ಳಬಹುದಾಗಿದೆ. ಈ ಎಲ್ಲಾ ಸೌಲಭ್ಯಗಳನ್ನು ಚುನಾವಣಾ ಆಯೋಗವು ಒದಗಿಸಿರುವುದರಿಂದ ವಿಶೇಷಚೇತನ ಮತದಾರರು ಸಂತೋಷದಿಂದ ನಿರ್ಭೀತರಾಗಿ, ಆರಾಮದಾಯಕವಾಗಿ ತಮ್ಮ ಮತಗಟ್ಟೆಗೆ ಬಂದು ಮತ ಚಲಾಯಿಸಬೇಕೆಂದು ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷೆ ಹಾಗೂ ಜಿಪಂ ಸಿಇಓ ಕೆ.ಎಂ.ಗಾಯತ್ರಿ ತಿಳಿಸಿದ್ದಾರೆ.

ಲೋಕಸಭಾ ಚುನಾವಣೆ : ರಾಜ್ಯದಲ್ಲಿ ಎಸ್‌ಯುಸಿಐ–ಸಿ ಪಕ್ಷದಿಂದ 19 ಅಭ್ಯರ್ಥಿಗಳು ಸ್ಪರ್ಧೆ

ಮೈಸೂರಿನಿಂದ ಸುನೀಲ್, ಚಾ.ನಗರದಿಂದ ಸುಮಾ ಕಣಕ್ಕೆ

ಮೈಸೂರು, ಮಾ.26(ಜಿಎ)– ಲೋಕಸಭಾ ಚುನಾವಣೆಯಲ್ಲಿ ಕರ್ನಾಟಕದಿಂದ ಸೋಷಲಿಸ್ಟ್ ಯೂನಿಟಿ ಸೆಂಟರ್ ಆಫ್ ಇಂಡಿಯಾ–ಕಮ್ಯುನಿಸ್ಟ್ (ಎಸ್.ಯುಸಿಐ–ಸಿ) ಪಕ್ಷದ 19 ಅಭ್ಯರ್ಥಿಗಳು ಸ್ಪರ್ಧಿಸುತ್ತಿದ್ದು, ಮೈಸೂರು –ಕೊಡಗು ಲೋಕಸಭಾ ಕ್ಷೇತ್ರದಿಂದ ಟಿ.ಆರ್.ಸುನಿಲ್, ಚಾಮರಾಜನಗರ ಕ್ಷೇತ್ರದಿಂದ ಎಸ್.ಸುಮಾ, ಕಣಕ್ಕಿಳಿಯುವರು ಎಂದು ಪಕ್ಷದ ರಾಜ್ಯ ಸಮಿತಿ ಸದಸ್ಯ ಬಿ.ರವಿ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಿರುದ್ಯೋಗ ಮತ್ತು ಬೆಲೆಯೇರಿಕೆ ಸಮಸ್ಯೆ ನಿವಾರಿಸುವಲ್ಲಿ ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ವಿಫಲವಾಗಿದ್ದು, ಚುನಾವಣಾ ಬಾಂಡ್ ಮೂಲಕ ಭ್ರಷ್ಟಾಚಾರಕ್ಕೆ ಹೊಸ ವ್ಯಾಖ್ಯಾನ ನೀಡಿದೆ. ಕೋಮುವಾದ, ಬಂಡವಾಳಶಾಹಿ ನೀತಿಯನ್ನು ಮತ್ತಷ್ಟು ವ್ಯಾಪಕಗೊಳಿಸಿದೆ. ಕಾಂಗ್ರೆಸ್ ನೇತೃತ್ವದ ಇಂಡಿಯಾ ಕೂಟವೂ ಅವಕಾಶಕ್ಕಾಗಿ ಜನಪರ ಮಾತುಗಳನ್ನಾಡುತ್ತಿದ್ದು, ಶೋಷಿತ ಮತ್ತು ರೈತಪರ ಆಡಳಿತ ನೀಡಲು ಅವರು ಬದ್ಧರಾಗಿಲ್ಲ. ಆದ್ದರಿಂದ, ಜನರ ಹೋರಾಟದ ಭಾಗವಾಗಿ ನಾವು ಚುನಾವಣೆಯಲ್ಲಿ ಸ್ಪರ್ಧಿಸುತ್ತಿದ್ದೇವೆ ಎಂದರು.

ಮೈಸೂರು ವಿಶ್ವವಿದ್ಯಾಲಯದಿಂದ ಸ್ನಾತಕೋತ್ತರ ಪದವಿ ಪಡೆದಿರುವ ಟಿ.ಆರ್. ಸುನಿಲ್, ಪಕ್ಷದ ಯುವಜನ ಸಂಘಟನೆ ಎಐಡಿವೈಓ ಮೂಲಕ ನೇಮಕಾತಿ ಅಕ್ರಮ, ಖಾಲಿ ಹುದ್ದೆಗಳ ಭರ್ತಿ, ಅತಿಥಿ ಶಿಕ್ಷಕರ ಸಮಸ್ಯೆ, ವಿದ್ಯಾರ್ಥಿಗಳ ಸಮಸ್ಯೆ ನಿವಾರಣೆಗೆ ಚಳವಳಿ ರೂಪಿಸಿ, ಯಶಸ್ವಿಯಾಗಿದ್ದಾರೆ. ನಾಗರಹೊಳೆ ವ್ಯಾಪ್ತಿಯ ಆದಿವಾಸಿಗಳ ಸಂಕಷ್ಟಗಳ ಕುರಿತು ಹೋರಾಟ ನಡೆಸಿ ಸರ್ಕಾರದ ಗಮನ ಸೆಳೆದಿದ್ದಾರೆ. ಶ್ರಮಿಕರ, ಕಾರ್ಮಿಕರ, ರೈತರ ಸಮಸ್ಯೆಗಳ ಪರಿಹಾರಕ್ಕೆ ಸದಾ ಮುನ್ನುಗ್ಗುವ ಗುಣವಿದ್ದು, ಕ್ಷೇತ್ರದ ಮತದಾರರು ಅವರನ್ನು ಗೆಲ್ಲಿಸಬೇಕು ಎಂದು ಮನವಿ ಮಾಡಿದರು. ಸುದ್ದಿಗೋಷ್ಠಿಯಲ್ಲಿ ಪಕ್ಷದ ಚಾಮರಾಜ ನಗರ ಮೀಸಲು ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಎಸ್.ಸುಮಾ, ಪಕ್ಷದ ಮುಖಂಡರಾದ ಚಂದ್ರಶೇಖರ್ ಮೇಟಿ, ಎಂ.ಉಮಾದೇವಿ, ವಿ.ಯಶೋಧರ್, ಎಸ್.ಎಚ್.ಹರೀಶ್ ಉಪಸ್ಥಿತರಿದ್ದರು.



ಮೈಸೂರಿನ ಟೆಂಪಲ್ ರಸ್ತೆಯಲ್ಲಿರುವ ಬಿಜೆಪಿ ಯುವ ಮುಖಂಡ ಕವೀಶ್‌ಗೌಡ ಅವರ ನಿವಾಸಕ್ಕೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮಂಗಳವಾರ ಸೌಹಾರ್ದ ಭೇಟಿ ನೀಡಿದ್ದರು.

ನಿವೇಶನ ವಿಚಾರವಾಗಿ ವ್ಯಕ್ತಿಯ ಹತ್ಯೆ ಯತ್ನ: ಆರೋಪಿಗೆ ಸಜೆ

ಮೈಸೂರು, ಮಾ.26(ಎಂಕೆ)– ನಿವೇಶನ ವಿಚಾರಕ್ಕೆ ವ್ಯಕ್ತಿಯೊಬ್ಬರನ್ನು ಲಾಂಗ್‌ನಿಂದ ಕೊಚ್ಚಿ ಕೊಲೆ ಮಾಡಲು ಯತ್ನಿಸಿದ ಆರೋಪಿಗೆ 2 ವರ್ಷ ಕಠಿಣ ಹಾಗೂ 6 ತಿಂಗಳ ಸಾದಾ ಸಜೆ ವಿಧಿಸಿ, ಮೈಸೂರಿನ 7ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ತೀರ್ಪು ಪ್ರಕಟಿಸಿದೆ.

ನಂಜನಗೂಡು ತಾಲೂಕಿನ ದೇವನೂರು ಗ್ರಾಮದ ನಿವಾಸಿ ಡಿ.ಎಸ್.ರಾಕೇಶ್, ತಮ್ಮ ಮನೆಯ ಪಕ್ಕದಲ್ಲಿದ್ದ ಸಂಬಂಧಿಕರಾದ ಮಹದೇವಯ್ಯ ಅವರ ಖಾಲಿ ನಿವೇಶನವನ್ನು ಕೊಂಡುಕೊಳ್ಳಲು ಇಚ್ಛಿಸಿ, ಮಹದೇವಯ್ಯ ಅವರ ಮಗ ಲೋಕೇಶ್‌ಗೆ ಸ್ವಲ್ಪ ಹಣವನ್ನು ನೀಡಿದ್ದಾರೆ. ಆದರೆ ಈ ಖಾಲಿ ನಿವೇಶನದಲ್ಲಿಯೇ ತನ್ನ ದನ–ಕರು, ಮೇಕೆಗಳನ್ನು ಕಟ್ಟಿಹಾಕುತ್ತಿದ್ದ ಸಿ.ಮಹೇಶ್ ಅಲಿಯಾಸ್ ಜೋಗಿ, ಖಾಲಿ ನಿವೇಶನ ನನಗೆ ಬೇಕೆಂದು ಕ್ಯಾತೆ ತೆಗೆದಿದ್ದಾನೆ. ಈ ಸಂಬಂಧ ಹಲವು ಬಾರಿ ಗಲಾಟೆಗಳಾಗಿದ್ದು, 2022ರ ಅ.10 ರಂದು ಸಂಜೆ 6.30ಕ್ಕೆ ಸಿ.ಮಹೇಶ್, ಕೊಲೆ ಮಾಡುವ ಉದ್ದೇಶದಿಂದ ಲಾಂಗ್ ತಂದು ರಾಕೇಶ್ ತಲೆಯ ಎಡಭಾಗಕ್ಕೆ ಹೊಡೆದಿದ್ದರಿಂದ ತೀವ್ರ ಸ್ವರೂಪದ ಗಾಯವುಂಟಾಗಿದೆ. ಈ ಸಂಬಂಧ ಕವಲಂದೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಕವಲಂದೆ ಪೊಲೀಸ್ ಠಾಣೆ ಆರಕ್ಷಕ ಉಪನಿರೀಕ್ಷಕ ಬಿ.ಮಹೇಂದ್ರ ನ್ಯಾಯಾಲಯಕ್ಕೆ ಸಲ್ಲಿಸಿದ ದೋಷಾರೋಪಣಾ ಕುರಿತು ವಿಚಾರಣೆ ನಡೆಸಿದ ಮೈಸೂರಿನ 7ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರಾದ ಎಂ.ರಮೇಶ್ ಅವರು, ಕೊಲೆ ಯತ್ನ ಮಾಡಿರುವುದು ದೃಢಪಟ್ಟ ಮೇರೆಗೆ ಆರೋಪಿ ಸಿ.ಮಹೇಶ್‌ಗೆ ಐಪಿಸಿ ಸೆಕ್ಷನ್ 307 ಅಡಿಯಲ್ಲಿ ಎರಡು ವರ್ಷ ಕಠಿಣ ಶಿಕ್ಷೆ ಸಜೆ ಮತ್ತು 10 ಸಾವಿರ ದಂಡ, ಐಪಿಸಿ ಸೆಕ್ಷನ್ 504 ಅಡಿಯಲ್ಲಿ 6 ತಿಂಗಳ ಸಾದಾ ಸಜೆ ಮತ್ತು 1 ಸಾವಿರ ರೂ. ದಂಡ ವಿಧಿಸಿ ತೀರ್ಪು ಪ್ರಕಟಿಸಿದ್ದಾರೆ. ಸರ್ಕಾರಿ ಅಭಿಯೋಜಕರಾದ ಕೆ.ನಾಗರಾಜ ಸರ್ಕಾರದ ಪರ ವಾದ ಮಂಡಿಸಿದ್ದರು.

4 ಕೋಟಿ ಮೌಲ್ಯದ ಚಿನ್ನ, ವಜ್ರ ಬೆಳ್ಳಿ ವಶಕ್ಕೆ ಪಡೆದ ಪೊಲೀಸರು

ಚಿಕ್ಕಮಗಳೂರು, ಮಾ.26: ದಾಖಲೆ ಇಲ್ಲದೇ ಸಾಗಿಸುತ್ತಿದ್ದ ನಾಲ್ಕು ಕೋಟಿ ಮೌಲ್ಯದ ಚಿನ್ನ, ವಜ್ರ ಬೆಳ್ಳಿ ವಶಕ್ಕೆ ಪಡೆದ ಘಟನೆ ಜಿಲ್ಲೆಯ ತರಿಕೆರೆ ತಾಲೂಕಿನ ಎಂ.ಸಿ. ಹಳ್ಳಿ ಚೆಕ್‌ಪೋಸ್ಟ್ ಬಳಿ ನಡೆದಿದೆ. 6 ಕೆಜಿ 586 ಗ್ರಾಂ ಚಿನ್ನ, 1 ಕೆಜಿ 71.492 ಗ್ರಾಂ ವಜ್ರಾಭರಣ, 1 ಕೆಜಿ ಬೆಳ್ಳಿ ವಸ್ತುಗಳನ್ನು ಚೆಕ್‌ಪೋಸ್ಟ್ ಸಿಬ್ಬಂದಿ ವಶಕ್ಕೆ ಪಡೆದಿದ್ದಾರೆ.

ಎಂ.ಸಿ. ಹಳ್ಳಿ ಚೆಕ್ ಪೋಸ್ಟ್ ಬಳಿ ಪೊಲೀಸರು ವಾಹನಗಳನ್ನು ತಪಾಸಣೆ ನಡೆಸುತ್ತಿದ್ದರು. ಈ ವೇಳೆ ಬಂದ ಒಂದು ಕಾರು ಪೊಲೀಸರಿಗೆ ಅನುಮಾನ ಹುಟ್ಟಿಸಿದೆ. ಹೀಗಾಗಿ ಕಾರನ್ನು ತಡೆದು ಪರಿಶೀಲನೆ ನಡೆಸಿದಾಗ ಕೋಟ್ಯಾಂತರ ಮೌಲ್ಯದ ಚಿನ್ನಾಭರಣಗಳು ಪತ್ತೆಯಾಗಿವೆ. ಸಾಗಿಸಲಾಗುತ್ತಿದ್ದ ಚಿನ್ನ, ಬೆಳ್ಳಿ, ಡೈಮಂಡ್‌ಗಳ ದಾಖಲೆಗಳನ್ನು ಕೇಳಿದಾಗ ಸಂಬಂಧಪಟ್ಟವರು ದಾಖಲೆ ನೀಡಿಲ್ಲ. ಹೀಗಾಗಿ ಚಿನ್ನಾಭರಣಗಳನ್ನು ಪೊಲೀಸರು ಜಪ್ತಿ ಮಾಡಿ ಚಿನ್ನಾಭರಣದ ಮೂಲದ ಕುರಿತು ತನಿಖೆ ನಡೆಸುತ್ತಿದ್ದಾರೆ.

ಬೆಂಗಳೂರಿನಿಂದ ಶಿವಮೊಗ್ಗ ಜಿಲ್ಲೆಗೆ ಕೋಟ್ಯಂತರ ಮೌಲ್ಯದ ಚಿನ್ನ, ಡೈಮಂಡ್ಸ್ ಹಾಗೂ ಬೆಳ್ಳಿ ವಸ್ತುಗಳನ್ನು ಟ್ರಕ್ ಮೂಲಕ ಸಾಗಾಟ ಮಾಡಲಾಗುತ್ತಿತ್ತು. ಈ ವೇಳೆ ಚುನಾವಣಾಧಿಕಾರಿಗಳು, ಪೊಲೀಸರು ಟ್ರಕ್ ತಡೆದು ಪರಿಶೀಲನೆ ನಡೆಸಿದಾಗ ಚಿನ್ನಾಭರಣಗಳನ್ನು ಸಾಗಿಸುತ್ತಿರುವುದು ಬೆಳಕಿಗೆ ಬಂದಿದೆ. ಪ್ರಾಥಮಿಕ ತನಿಖೆ ವೇಳೆ ದಾಖಲೆ ಇಲ್ಲದೆ ಸಾಗಾಟ ಮಾಡುತ್ತಿರುವುದು ತಿಳಿದುಬಂದ ಹಿನ್ನೆಲೆ ಅವುಗಳನ್ನು ವಶಕ್ಕೆ ಪಡೆದಿದ್ದಾರೆ.

ನಾಳೆ 53ನೇ ರಾಷ್ಟ್ರೀಯ ಸುರಕ್ಷತಾ ದಿನಾಚರಣೆ

ಮೈಸೂರು,ಮಾ.26(ಪಿಎಂ)– ಕಾರ್ಖಾನೆಗಳು, ಬಾಯ್ಲರುಗಳು, ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆ, ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಪರ್ಸನಲ್ ಮ್ಯಾನೇಜ್‌ಮೆಂಟ್ ಮೈಸೂರು ಚಾಪ್ಟರ್, ನಂಜನಗೂಡು ಇಂಡಸ್ಟ್ರೀಸ್ ಅಸೋಸಿಯೇಷನ್ ಸಂಯುಕ್ತಾಶ್ರಯದಲ್ಲಿ ಮಾ.28ರಂದು ಮೈಸೂರಿನ ಕಲಾಮಂದಿರದಲ್ಲಿ ಬೆಳಗ್ಗೆ 10ಕ್ಕೆ 53ನೇ ರಾಷ್ಟ್ರೀಯ ಸುರಕ್ಷತಾ ದಿನಾಚರಣೆ –2024 ಅನ್ನು ಆಯೋಜಿಸಲಾಗಿದೆ.

'ಉತ್ಕೃಷ್ಟ ಪರಿಸರ ಸಾಮಾಜಿಕ ಮತ್ತು ಆಡಳಿತಕ್ಕಾಗಿ ಸುರಕ್ಷತಾ ನಾಯಕತ್ವದತ್ತ ಗಮನ ಹರಿಸೋಣ' ಧ್ಯೇಯದಡಿ ಈ ಬಾರಿಯ ಸುರಕ್ಷತಾ ದಿನಾಚರಣೆ ಆಚರಿಸಲಾಗುತ್ತಿದೆ. ಅಂದು ಬೆಳಗ್ಗೆ 8ಕ್ಕೆ ನಗರ ಪೊಲೀಸ್ ಆಯುಕ್ತ ಬಿ.ರಮೇಶ್ ಸುರಕ್ಷತಾ ನಡಿಗೆಗೆ ಚಾಲನೆ ನೀಡಲಿದ್ದಾರೆ. ಇದೇ ವೇಳೆ ಕಾರ್ಮಿಕ ನ್ಯಾಯಾಲಯದ ಪ್ರಿಸೈಡಿಂಗ್ ಆಫೀಸರ್ ಟಿ.ಶ್ರೀನಿವಾಸ್ ಸುರಕ್ಷತಾ ಧ್ವಜಾರೋಹಣ ನೆರವೇರಿಸಲಿದ್ದಾರೆ.

ಬೆಳಗ್ಗೆ 10ಕ್ಕೆ ಸಾರ್ವಜನಿಕ ಸಮಾರಂಭ ನಡೆಯಲಿದ್ದು, ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ. ಕಾರ್ಖಾನೆಗಳು, ಬಾಯ್ಲರುಗಳು ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆ ಮೈಸೂರು ವಿಭಾಗದ ಜಂಟಿ ನಿರ್ದೇಶಕ ಹೆಚ್.ಎಸ್. ನರೇಂದ್ರ ಬಾಬು ಪ್ರಾಸ್ತಾವಿಕವಾಗಿ ಮಾತನಾಡಲಿದ್ದಾರೆ. ಕಾರ್ಖಾನೆಗಳು, ಬಾಯ್ಲರುಗಳು ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆ ಬೆಂಗಳೂರು ನಿರ್ದೇಶಕ ಕೆ.ಶ್ರೀನಿವಾಸ್ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ಮಾಜಿ ಸಚಿವ ಕೋಟೆ ಎಂ.ಶಿವಣ್ಣ, ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ.ರಾಜೀವ್ ಸೇರಿದಂತೆ

ಬಿಜೆಪಿ–ಜೆಡಿಎಸ್‌ನ ಹಲವು ಮುಖಂಡರು ಇಂದು ಕಾಂಗ್ರೆಸ್ ಸೇರ್ಪಡೆ

ಮೈಸೂರು,ಮಾ.26(ಪಿಎಂ)– ಮುಖ್ಯಮಂತ್ರಿ ಸಿದ್ದರಾಮಯ್ಯ ತವರು ಮೈಸೂರು ಜಿಲ್ಲೆಯಲ್ಲಿ ಲೋಕಸಭಾ ಚುನಾವಣೆ ಕಳೆಗಟ್ಟಿದ್ದು, ಈ ನಡುವೆ ಬಿಜೆಪಿ ಮತ್ತು ಜೆಡಿಎಸ್‌ನ ಹಲವು ಮುಖಂಡರು ಕಾಂಗ್ರೆಸ್ ಸೇರ್ಪಡೆಯಾಗುತ್ತಿದ್ದಾರೆ. ಇದಕ್ಕಾಗಿ ವೇದಿಕೆಯೂ ಸಜ್ಜಾಗಿದೆ.

ಬಿಜೆಪಿ ಮುಖಂಡ, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಹೆಚ್.ವಿ.ರಾಜೀವ್, ಜೆಡಿಎಸ್ ಮುಖಂಡ ಹಾಗೂ ಮಾಜಿ ಮೇಯರ್ ಬಿ.ಎಲ್.ಭೈರಪ್ಪ, ಪಾಲಿಕೆ ಮಾಜಿ ಸದಸ್ಯ ಹಾಗೂ ಜೆಡಿಎಸ್ ಮುಖಂಡ ಕೆ.ವಿ. ಮಲ್ಲೇಶ್, ಬಿಜೆಪಿ ಮುಖಂಡ ಹಾಗೂ ಮೈಸೂರು ಜಿಪಂ ಮಾಜಿ ಸದಸ್ಯ ಸದಾನಂದ ಸೇರಿದಂತೆ ಅವರ ಬೆಂಬಲಿಗರು ನಾಳೆ (ಮಾ.27) ಬೆಳಗ್ಗೆ 10ಕ್ಕೆ ಮೈಸೂರಿನ ವಿದ್ಯಾರಣ್ಯಪುರಂನ ಭೂತಾಳೆ ಮೈದಾನದಲ್ಲಿ ನಡೆಯುವ ಸಮಾರಂಭದಲ್ಲಿ ಕಾಂಗ್ರೆಸ್ ಸೇರ್ಪಡೆಯಾಗಲಿದ್ದಾರೆ.

ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ಆಪ್ತ ವಲಯದಲ್ಲಿ ಗುರುತಿಸಿಕೊಂಡಿದ್ದ ಹೆಚ್.ವಿ.ರಾಜೀವ್ ಅವರು ಮುಡಾ ಅಧ್ಯಕ್ಷರಾಗಿದ್ದರು. 2023ರ ವಿಧಾನಸಭಾ ಚುನಾವಣೆಯಲ್ಲಿ ಕೆ.ಆರ್ ಕ್ಷೇತ್ರದ ಬಿಜೆಪಿ ಟಿಕೆಟ್‌ನ ಪ್ರಬಲ ಆಕಾಂಕ್ಷಿಯಾಗಿದ್ದರು. ಟಿಕೆಟ್ ಸಿಗದ ಕಾರಣ ಬಿಜೆಪಿಯಿಂದ ಅಂತರ ಕಾಯ್ದುಕೊಂಡಿದ್ದ ಹೆಚ್.ವಿ.ರಾಜೀವ್ ಇದೀಗ ಕಾಂಗ್ರೆಸ್ ಸೇರ್ಪಡೆಯಾಗುತ್ತಿದ್ದಾರೆ.



ಕೋಟೆ ಎಂ.ಶಿವಣ್ಣ



ಹೆಚ್.ವಿ.ರಾಜೀವ್

ಜೆಡಿಎಸ್ ಮುಖಂಡ ಕೆ.ವಿ.ಮಲ್ಲೇಶ್ ಮೈಸೂರಿನ ಕೆಆರ್ ಕ್ಷೇತ್ರದಲ್ಲಿ ಜೆಡಿಎಸ್ ಅಭ್ಯರ್ಥಿಯಾಗಿ 2018 ಹಾಗೂ 2023ರ ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧಿಸಿ ಪರಾಭವಗೊಂಡಿದ್ದರು. ಅಲ್ಲದೆ ಇದಕ್ಕೂ ಪೂರ್ವದಲ್ಲಿ ಜೆಡಿಎಸ್ ಪಾಲಿಕೆ ಸದಸ್ಯರಾಗಿಯೂ ಒಮ್ಮೆ ಆಯ್ಕೆಯಾಗಿದ್ದರು. ಇದೀಗ ಇವರೂ ಕಾಂಗ್ರೆಸ್‌ನತ್ತ ಮುಖ ಮಾಡಿದ್ದಾರೆ.

ಜೊತೆಗೆ ನಾಳೆ (ಮಾ.27) ಮಧ್ಯಾಹ್ನ 3ಕ್ಕೆ ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಮೈಸೂರು ಹಾಗೂ ಕೊಡಗು ಲೋಕಸಭಾ ಕ್ಷೇತ್ರದ ಚುನಾವಣೆ ಪ್ರಯುಕ್ತ ನಡೆಯುವ ಮೈಸೂರು ನಗರ ವ್ಯಾಪ್ತಿಯ ಮೂರು ವಿಧಾನಸಭಾ ಕ್ಷೇತ್ರಗಳು ಹಾಗೂ ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಕಾರ್ಯಕರ್ತರ ಸಮಾವೇಶದಲ್ಲಿ ಬಿಜೆಪಿಯ ಹಿರಿಯ ಮುಖಂಡ ಹಾಗೂ ಮಾಜಿ ಸಚಿವ ಕೋಟೆ ಎಂ.ಶಿವಣ್ಣ ಅವರು ತಮ್ಮ ಬೆಂಬಲಿಗರೊಂದಿಗೆ ಬಿಜೆಪಿ ತೊರೆದು ಕಾಂಗ್ರೆಸ್ ಸೇರುತ್ತಿದ್ದಾರೆ. ಈ ಎರಡೂ ಕಾರ್ಯಕ್ರಮಗಳಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಸಚಿವರು, ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಪಾಲ್ಗೊಳ್ಳಲಿದ್ದಾರೆ.

ವಿಜೃಂಭಣೆಯ ಶ್ರೀಗುಂಜಾ ನರಸಿಂಹಸ್ವಾಮಿ ಬ್ರಹ್ಮ ರಥೋತ್ಸವ



ಮಹಾಲಕ್ಷ್ಮಿ ಶ್ರೀಗುಂಜಾನರಸಿಂಹಸ್ವಾಮಿ ಬ್ರಹ್ಮ ರಥೋತ್ಸವ ವಿಜೃಂಭಣೆಯಿಂದ ನಡೆಯಿತು.

ತಿ.ನರಸೀಪುರ, ಮಾ.26– ತ್ರಿವೇಣಿ ಸಂಗಮ ಕ್ಷೇತ್ರ ಖ್ಯಾತಿಯ ತಿರುಮ ಕೂಡಲು ನರಸೀಪುರದ ಪ್ರಸಿದ್ಧ ಶ್ರೀಗುಂಜಾ ನರಸಿಂಹಸ್ವಾಮಿ ದಿವ್ಯ ಬ್ರಹ್ಮ ರಥೋತ್ಸವ ಸಾವಿರಾರು ಭಕ್ತರ ಹರ್ಷೋದ್ಗಾರದ ನಡುವೆ ಮಂಗಳವಾರ ವಿಜೃಂಭಣೆಯಿಂದ ನೆರವೇರಿತು.

ತಹಸೀಲ್ದಾರ್ ಟಿ.ಜಿ.ಸುರೇಶ್ ಆಚಾರ್ ಗೈರಿನಲ್ಲಿ ರಾಜಸ್ವ ನಿರೀಕ್ಷಕ ಮಹೇಂದ್ರ ದೇವಾಲಯದ ಎದುರು ಅಲಂಕಾರ ಗೊಂಡು ಕಂಗೊಳಿಸುತ್ತಿದ್ದ ರಥಕ್ಕೆ ಪೂಜೆ ಸಲ್ಲಿಸುವ ಮೂಲಕ ರಥೋತ್ಸವಕ್ಕೆ ಚಾಲನೆ ನೀಡಿದರು. ಈ ವೇಳೆ ರಾಜ್ಯದ ವಿವಿಧೆಡೆ ಗಳಿಂದ ಆಗಮಿಸಿದ್ದ ಸಾವಿರಾರು ಭಕ್ತರು ಭಕ್ತಿ ಭಾವದಿಂದ ರಥವನ್ನು ಎಳೆದರು.

ದೇವಾಲಯದ ಆವರಣದಿಂದ ಆರಂಭಗೊಂಡ ರಥೋತ್ಸವ ವಿಶ್ವಕರ್ಮ ರಸ್ತೆ, ಪ್ರಾಥಮಿಕ ಶಾಲೆ ರಸ್ತೆ, ತೇರಿನ ಬೀದಿ ಮೂಲಕ ಯಾವುದೇ ಅಡೆತಡೆ ಇಲ್ಲದೇ ಸ್ವಸ್ಥಾನ ತಲುಪಿತು. ಅಲಂಕೃತಗೊಂಡ ರಥದಲ್ಲಿ ವಿರಾಜಮಾನರಾಗಿದ್ದ ಮಹಾಲಕ್ಷ್ಮಿ ಸಮೇತ ಶ್ರೀಗುಂಜಾ ನರಸಿಂಹ ಸ್ವಾಮಿ ಉತ್ಸವ ಮೂರ್ತಿಗಳನ್ನು ಕಂಡು ಪುಳಕಿತರಾದ ಭಕ್ತರು ರಥೋತ್ಸವದ ವೈಭವ ಕಣ್ತುಂಬಿಕೊಂಡರು. ಅಲ್ಲದೇ ಭಕ್ತರು ರಥಕ್ಕೆ ಹಣ್ಣು ಜವನ ಎಸೆದು ಧನ್ಯತೆ ಮೆರೆದರು.

ರಥೋತ್ಸವ ಹಿನ್ನೆಲೆಯಲ್ಲಿ ಪಟ್ಟಣ ಸೇರಿದಂತೆ ಗುಂಜಾನರಸಿಂಹಸ್ವಾಮಿ ದೇವಸ್ಥಾನ ಜನಸಾಗರದಿಂದ ತುಂಬಿ ಹೋಗಿತ್ತು. ಈ ಬಾರಿ ಯುವಕರ ಬಣ್ಣದೋಕುಳಿಗೆ ನಿಷೇಧ ಹೇರಲಾಗಿತ್ತು. ನೆತ್ತಿ ಸುಡುವ ಸುಡು ಬಿಸಿಲಿನ ನಡುವೆಯೂ ಸಾವಿರಾರು ಭಕ್ತರು ಉತ್ಸವದಲ್ಲಿ ಪಾಲ್ಗೊಂಡು ಭಕ್ತಿಭಾವ ಮೆರೆದರು.

ರಥೋತ್ಸವ ಅಂಗವಾಗಿ ದೇವಾಲಯದಲ್ಲಿ ಬೆಳಗ್ಗೆಯಿಂದಲೇ ಪ್ರಧಾನ ಅರ್ಚಕ ಸಂಪತ್ ಕುಮಾರ್, ಆಗಮಿಕ ರಾಜೀವ್ ನೇತೃತ್ವದಲ್ಲಿ ಧಾರ್ಮಿಕ ಕೈಂಕರ್ಯಗಳು, ಅಭಿಷೇಕಗಳು ಸಾಂಗವಾಗಿ ನೆರವೇರಿದವು.

ಪಟ್ಟಣದ ರಥದ ಬೀದಿಗಳಲ್ಲಿ ಉತ್ಸವ ಮೂರ್ತಿಗಳ ಮಂಟಪೋತ್ಸವ ನಡೆಯಿತು. ಮದುವಣಗಿತ್ತಿಯಂತೆ ಸಿಂಗಾರಗೊಂಡಿದ್ದ ರಥದ ಬಳಿಗೆ ಉತ್ಸವ ಮೂರ್ತಿಗಳನ್ನು ಹೊತ್ತು ತಂದು ವೇದ ಮಂತ್ರ ಪಠಿಸಿ ರಥದಲ್ಲಿ ಪ್ರತಿಷ್ಠಾಪಿಸಲಾಯಿತು.

ಸಂಪ್ರದಾಯ ಪಾಲನೆ: ಅನೇಕ ವರ್ಷಗಳಿಂದ ನಡೆದು ಬಂದ ಸಂಪ್ರದಾಯದಂತೆ ವ್ಯಾಸರಾಜಪುರದ ಯಜಮಾನರು ಆಲಗೂಡು ಗ್ರಾಮಕ್ಕೆ ತೆರಳಿ ಅಲ್ಲಿನ ಯಜಮಾನರನ್ನು ರಥೋತ್ಸವದಲ್ಲಿ ಭಾಗ ವಹಿಸುವಂತೆ ಆಹ್ವಾನ ನೀಡಿ, ಅವರನ್ನು ಕರೆತಂದು ಪಟ್ಟಣದ ಯಜಮಾನರ ಜೊತೆಗೂಡಿ ಮಹಾ ಮಂಗಳಾರತಿ ನೆರವೇರಿಸಿ ಪ್ರದಕ್ಷಿಣೆ ಹಾಕಿದರು. ಉತ್ಸವ ಮೂರ್ತಿಗಳಿಗೆ ಮಹಾಮಂಗಳಾರತಿ ನೆರವೇರಿದ ನಂತರ ಬ್ರಹ್ಮ ರಥೋತ್ಸವ ವಿಧ್ಯುಕ್ತವಾಗಿ ಆರಂಭವಾಯಿತು.

ರಥೋತ್ಸವ ಹಿನ್ನೆಲೆಯಲ್ಲಿ ಚಾಮರಾಜನಗರ ಮೀಸಲು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಎಸ್.ಬಾಲರಾಜ್ ಹಾಗು ಕಾಂಗ್ರೆಸ್ ಸಂಭಾವ್ಯ ಅಭ್ಯರ್ಥಿ ಸುನೀಲ್ ಬೋಸ್ ಭೇಟಿ ನೀಡಿ ದೇವರ ದರ್ಶನ ಪಡೆದರು. ನಂತರ ಅಭಿಮಾನಿಗಳು ಹಣ್ಣು ಜವನಕ್ಕೆ ಸುನೀಲ್ ಬೋಸ್ ಎಂಪಿ ಎಂದು ಬರೆದು ತೇರಿಗೆಸೆದರು.

ನೀರು ಮಜ್ಜಿಗೆ, ಪಾನಕ ವಿತರಣೆ: ರಥೋತ್ಸವ ಹಿನ್ನೆಲೆ ಪಟ್ಟಣದಾದ್ಯಂತ ವರ್ತಕರು, ವಿವಿಧ ಸಂಘಟನೆಗಳ ಮುಖ್ಯಸ್ಥರು, ಜವಳಿ ಅಂಗಡಿ ಮಾಲೀಕರು, ಆಟೋ ಮಾಲೀಕರು, ಶಾಮಿಯಾನ ಅಂಗಡಿಯವರು, ಹೋಟೆಲ್ ಮಾಲೀಕರ ಸಂಘದವರು ಭಕ್ತರಿಗೆ ನೀರು ಮಜ್ಜಿಗೆ, ಪಾನಕ ವಿತರಿಸಿದರು. ಪಟ್ಟಣದ ಎಲ್ಲೆಡೆ ರೈಸ್‌ಬಾತ್ ವಿತರಣೆ ಹಮ್ಮಿಕೊಳ್ಳಲಾಗಿತ್ತು.

ಯುವಕರ ಬಣ್ಣದೋಕುಳಿ ಪೊಲೀಸರ ಲಾಠಿ ರುಚಿ: ರಥೋತ್ಸವ ವೇಳೆ ಬಣ್ಣದೋಕುಳಿಗೆ ತಾಲೂಕು ಆಡಳಿತ ನಿಷೇಧ ಹೇರಿತ್ತು. ಆದರೂ ಕೆಲ ಯುವಕರು ಪರಸ್ಪರ ಬಣ್ಣ ಎರಚಿ ಕಿಚ್ಚ ಸುದೀಪ್ ಭಾವಚಿತ್ರವಿರುವ ಬಾವುಟವನ್ನು ಉತ್ಸವದ ವೇಳೆ ಪ್ರದರ್ಶಿಸಲು ಮುಂದಾದರು. ಇದಕ್ಕೆ ಅವಕಾಶ ಕೊಡದ ಪೊಲೀಸರು ಅವರಿಗೆ ಲಾಠಿ ರುಚಿ ತೋರಿಸಿ ಅಲ್ಲಿಂದ ಚದುರಿಸಿದರು.

ದೇವಸ್ಥಾನ ಪಾರುಪತ್ತೆದಾರ್ ಪ್ರದೀಪ್ (ದೀಪು), ವಿಧಾನಪರಿಷತ್ ಮಾಜಿ ಸದಸ್ಯ ಸಿ.ರಮೇಶ್, ಪುರಸಭೆ ಮಾಜಿ ಅಧ್ಯಕ್ಷರಾದ ಟಿ.ಎಂ. ನಂಜುಂಡಸ್ವಾಮಿ, ಮಹದೇವಸ್ವಾಮಿ, ಬಸವಣ್ಣ, ಸದಸ್ಯರಾದ ಸಿ.ಪ್ರಕಾಶ್, ಬಾದಾಮಿ ಮಂಜು, ಎಸ್.ಕೆ.ಕಿರಣ್, ಮೆಡಿಕಲ್ ನಾಗರಾಜು, ನಾಯಕ ಸಮಾಜದ ಯಜಮಾನ ಮಹದೇವಪ್ಪ ಮತ್ತಿತರರಿದ್ದರು.

ರಥೋತ್ಸವಕ್ಕೆ ಚಾಲನೆ ನೀಡುವ ವೇಳೆ ಚಾಮರಾಜನಗರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಎಸ್.ಬಾಲರಾಜ್ ಹಾಗೂ ಕಾಂಗ್ರೆಸ್ ಸಂಭಾವ್ಯ ಅಭ್ಯರ್ಥಿ ಸುನೀಲ್ ಬೋಸ್ ಮುಖಾಮುಖಿ ಭೇಟಿಯಾದರು. ಆದರೆ ಒಬ್ಬರ ಮುಖ ಒಬ್ಬರು ನೋಡಲಿಲ್ಲ, ಮಾತನಾಡಲಿಲ್ಲ. ಬಿಜೆಪಿ ಕಾರ್ಯಕರ್ತರೊಂದಿಗೆ ಬಾಲರಾಜ್, ಕಾಂಗ್ರೆಸ್ ಕಾರ್ಯಕರ್ತರೊಂದಿಗೆ ಸುನೀಲ್ ಬೋಸ್ ಫೋಟೋಗೆ ಪೋಸ್ ಕೊಟ್ಟು ರಥಕ್ಕೆ ಪೂಜೆ ಸಲ್ಲಿಸಿ ಅಲ್ಲಿಂದ ತೆರಳಿದರು. ಚುನಾವಣೆ ಕಣ ಇನ್ನೂ ರಂಗೇರಿಲ್ಲವಾದರೂ ಇಬ್ಬರ ನಡೆ ತೀವ್ರ ಕುತೂಹಲ ಕೆರಳಿಸಿತು.

ಮೈಸೂರು ಚಿತ್ರಮಂದಿರಗಳಲ್ಲಿ



ಪದ್ಮ ಚಿತ್ರಮಂದಿರ	(ದೂ: 2521923)
ಊರು ಪೇರು ಭೈರವಕೋನಾ (ತೆ)	4 ಪ್ರದರ್ಶನಗಳು,
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಕರಟಕ ಧಮನಕ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಸೈತಾನ್ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಭೀಮ (ತೆ)	4 ಪ್ರದರ್ಶನಗಳು
ಗಾಯಿತ್ರಿ	
ಜಾಕಿ (ಕ)	4 ಪ್ರದರ್ಶನಗಳು
ರಾಜಕಮಲ್	
ಪ್ರೇಮುಲು (ತೆ)	4 ಪ್ರದರ್ಶನಗಳು
ಸಂಗಂ	
ಬ್ಲಿಂಕ್ (ಕ)	4 ಪ್ರದರ್ಶನಗಳು
ಲಿಡೋ	
ದಿಲ್ ಕುಷ್ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಊರು ಪೇರು ಭೈರವಕೋನಾ (ತೆ)	4 ಪ್ರದರ್ಶನಗಳು
ಪ್ರಭಾ	
ಶಾಖಾಹಾರಿ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಕುಂಗ್ ಫು ಪಾಂಡ 4(3ಡಿ) (ಇಂ): ಬೆ.11ಕ್ಕೆ, ಸಂ.4ಕ್ಕೆ, ಸಂ.6ಕ್ಕೆ, ರಾ.8ಕ್ಕೆ. ಕರಟಕ ದಮನಕ (ಕ): ಮ.1ಕ್ಕೆ, ಓಂ ಭೀಮ್ ಬುಶ್ (ತೆ): ರಾ.10ಕ್ಕೆ.
ಸ್ಕ್ರೀನ್ 2	ಮಂಜುಮ್ಮೆಲ್ ಬಾಯ್ಸ್ (ಮ): ಬೆ.10.30ಕ್ಕೆ, ರಾ.7.20ಕ್ಕೆ, ದಿಲ್‌ಖುಷ್ (ಕ): ಮ.1.25ಕ್ಕೆ, ಆರ್ಟಿಕಲ್ 370 (ಹಿಂ): ಸಂ.4.10ಕ್ಕೆ, ಅಂಚಕಲ್ಲಕೊಕ್ಕನ್ (ಮ): ರಾ.10ಕ್ಕೆ.
ಸ್ಕ್ರೀನ್ 3	ತೂತು ಕಾಸು (ಕ): ಬೆ.10.45ಕ್ಕೆ, ಲೈನ್‌ಮನ್ (ಕ): ಮ.1.30ಕ್ಕೆ, ಯೋಧ (ಹಿಂ): ಸಂ.4.15ಕ್ಕೆ, ಜಾಕಿ (ಕ): ರಾ.7.05ಕ್ಕೆ, ರಜಾಕರ್ ಸೈಲೆಂಟ್ ಜಿನೋಸೈಡ್ ಆಫ್ ಹೈದ್ರಾಬಾದ್ (ತೆ): ರಾ.9.55ಕ್ಕೆ.
ಸ್ಕ್ರೀನ್ 4	ಜಾಕಿ (ಕ): ಬೆ.10.30ಕ್ಕೆ, ರೆಬೆಲ್ (ತ): ಮ.1.20ಕ್ಕೆ, ಸ್ವತಂತ್ರ್ಯ ವೀರ ಸಾವರ್ಕರ್ (ಹಿಂ): ಸಂ.4.10ಕ್ಕೆ, ರಾ.7.30ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಮಡಗಾಂವ್ ಎಕ್ಸ್‌ಪ್ರೆಸ್ (ಹಿಂ): ಮ.12.15ಕ್ಕೆ, ಸಂ.6.15ಕ್ಕೆ, ರಾ.9.20ಕ್ಕೆ, ಸೈತಾನ್ (ಹಿಂ): ಮ.3.20ಕ್ಕೆ.
ಸ್ಕ್ರೀನ್ 2	ಜಾಕಿ (ಕ): ಮ.12.55ಕ್ಕೆ, ರಾ.7.15ಕ್ಕೆ, ಕರಟಕ ದಮನಕ (ಕ): ಸಂ.4ಕ್ಕೆ, ಮಂಜುಮ್ಮೆಲ್ ಬಾಯ್ಸ್ (ಮ): ರಾ.10.20ಕ್ಕೆ.
ಸ್ಕ್ರೀನ್ 3	ಮಂಜುಮ್ಮೆಲ್ ಬಾಯ್ಸ್ (ಮ): ಬೆ.10ಕ್ಕೆ, ರಾ.7ಕ್ಕೆ, ಓಂ ಭೀಮ್ ಬುಶ್ (ತೆ): ಮ.1ಕ್ಕೆ, ಯೋಧ (ಹಿಂ): ಸಂ.4.05ಕ್ಕೆ, ಸ್ವತಂತ್ರ್ಯ ವೀರ ಸಾವರ್ಕರ್ (ಹಿಂ): ರಾ.10ಕ್ಕೆ.
ಸ್ಕ್ರೀನ್ 4	ಸ್ವತಂತ್ರ್ಯ ವೀರ ಸಾವರ್ಕರ್ (ಹಿಂ): ಬೆ.10ಕ್ಕೆ, ಮ.3.55ಕ್ಕೆ, ಕುಂಗ್ ಫು ಪಾಂಡ 4(3ಡಿ) (ಇಂ): ಮ.1.40ಕ್ಕೆ, ರಾ.7.35ಕ್ಕೆ, ರಾ.9.50ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಪಾರ್ಕಿಂಗ್ (ಕ): ಬೆ.10.35ಕ್ಕೆ, ಸಪ್ತ ಸಾಗರದಾಚೆ ಎಲ್ಲೋ 2 (ಕ): ಮ.1.10ಕ್ಕೆ, ಬ್ಯಾಡ್ ಮ್ಯಾನರ್ಸ್ (ಕ): ಸಂ.4ಕ್ಕೆ, ಅರ್ಧಂಬರ್ಧ ಪ್ರೇಮಕಥೆ (ಕ): ಸಂ.6.35ಕ್ಕೆ, ಅನ್ನಪೂರ್ಣಿ (ತ): ರಾ.9.15ಕ್ಕೆ
ಸ್ಕ್ರೀನ್ 2	ಅನಿಮಲ್ (ಹಿಂ): ಬೆ.10ಕ್ಕೆ, ಸಂ.6ಕ್ಕೆ, ರಾ.9.45ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ಮ.1.45ಕ್ಕೆ.
ಸ್ಕ್ರೀನ್ 3	ಸ್ಯಾಮ್ ಬಹದ್ದೂರ್ (ಹಿಂ): ಬೆ.10.10ಕ್ಕೆ, ಸಂ.4.50ಕ್ಕೆ, ಅನಿಮಲ್ (ಹಿಂ): ಮ.1.05ಕ್ಕೆ, ರಾ.7.45ಕ್ಕೆ
ಸ್ಕ್ರೀನ್ 4	ಸಪ್ತ ಸಾಗರದಾಚೆ ಎಲ್ಲೋ 2 (ಕ): ಬೆ.10.45ಕ್ಕೆ, ಅನಿಮಲ್ (ಹಿಂ): ಮ.2.40ಕ್ಕೆ, ನೆಪೋಲಿಯನ್ (ಇಂ): ಸಂ.6.25ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್
ಮೊ.ನಂ: 8951357139

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಆರ್ಟಿಕಲ್ 370 (ಹಿಂ): ಬೆ.9ಕ್ಕೆ, ಮ.12.20ಕ್ಕೆ, ಮ.3.40ಕ್ಕೆ, ರಾ.7ಕ್ಕೆ, ರಾ.10.20ಕ್ಕೆ, ಡ್ಯೂನ್ ಪಾರ್ಟ್ 2 (ಇಂ): ಬೆ.8.30ಕ್ಕೆ, ಮ.12ಕ್ಕೆ, ಮ.3.30ಕ್ಕೆ, ರಾ.7ಕ್ಕೆ, ರಾ.10.30ಕ್ಕೆ, ಡೆಮೋನ್ ಸ್ಲೇಯರ್ (ಜ): ಸಂ.4.30ಕ್ಕೆ, ಆಪರೇಷನ್ ವ್ಯಾಲೆಂಟೈನ್ (ತೆ & ಹಿಂ): ಬೆ.9.45ಕ್ಕೆ, ಮ.3.40ಕ್ಕೆ, ಸಂ.6.35ಕ್ಕೆ, ರಾ.9.30ಕ್ಕೆ, ಲಾಪತಾ ಲೇಡಿಸ್ (ಹಿಂ): ಬೆ.10.35ಕ್ಕೆ, ಸಂ.4.10ಕ್ಕೆ, ರಾ.9.45ಕ್ಕೆ, ಮಂಜುಮ್ಮೆಲ್ ಬಾಯ್ಸ್ (ಮ): ಬೆ.10.20ಕ್ಕೆ, ಮ.1.25ಕ್ಕೆ, ರಾ.7.25ಕ್ಕೆ, ತೇರಿ ಬತೂನ್ ಮೇ ಐಸಾ ಉಲ್ಝಾ ಜಿಯಾ (ಹಿಂ): ಬೆ.11.55ಕ್ಕೆ, ಕ್ರೀಂ (ಕ): ಸಂ.6.55ಕ್ಕೆ, ಪ್ರೇಮಲು (ಮ): ರಾ.10.20ಕ್ಕೆ, ಜೋಶುವಾ (ತ): ಮ.1.20ಕ್ಕೆ, ಸಂ.6.55ಕ್ಕೆ, ಭ್ರಮಯುಗಂ (ಮ): ರಾ.9.45ಕ್ಕೆ, ವಾರನಂ ಆಯಿರಂ (ತ): ಮ.3.40ಕ್ಕೆ.

ಸೂಚನೆ: ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಬೆಟ್ಟದಪುರದಲ್ಲಿ ಮತದಾನ ಜಾಗೃತಿ ಕಾರ್ಯಕ್ರಮ



ಬೆಟ್ಟದಪುರದಲ್ಲಿ ಮತದಾನ ಜಾಗೃತಿ ಕಾರ್ಯಕ್ರಮ ನಡೆಯಿತು.

ಬೆಟ್ಟದಪುರ, ಮಾ.26– ಇಲ್ಲಿನ ಗ್ರಾಪಂ ಹಾಗೂ ಆರೋಗ್ಯ ಇಲಾಖೆ ವತಿಯಿಂದ ಗ್ರಾಮದ ಬಸ್ ನಿಲ್ದಾಣದಲ್ಲಿ ಮತದಾನ ಜಾಗೃತಿ ಕಾರ್ಯಕ್ರಮ ನಡೆಯಿತು.

ಪಿಡಿಓ ಮಂಜುನಾಥ್ ಮಾತನಾಡಿ, ಮತದಾನ ಅತ್ಯಂತ ಪವಿತ್ರವಾದದು. ನಮಗೆ ಬೇಕಾದ ನಾಯಕನನ್ನು ಆಯ್ಕೆ ಮಾಡುವ ಮೂಲಕ ದೇಶಕ್ಕೆ ಭದ್ರ ಬುನಾದಿ ಹಾಕುವ ಉತ್ತಮ ಸರ್ಕಾರವನ್ನು ಅಧಿಕಾರಕ್ಕೆ ತರಲು ಮತದಾನ ಪ್ರಮುಖ ಪಾತ್ರ ವಹಿಸುತ್ತದೆ. ಹೀಗಾಗಿ ಮತದಾನ ಹಬ್ಬದಲ್ಲಿ ಪಾಲ್ಗೊಂಡು ಪ್ರತಿಯೊಬ್ಬರೂ ಮತ ಚಲಾಯಿಸಬೇಕೆಂದು ಸಲಹೆ ನೀಡಿದರು.

ಬೆಟ್ಟದಪುರ ಆರೋಗ್ಯ ಕೇಂದ್ರದ ಆರೋಗ್ಯಾಧಿಕಾರಿ ಡಾ.ಪೂಜಾ ಮಾತನಾಡಿ, ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಮತದಾನ ಮಾಡಿ ಮತದಾನದ ಪವಿತ್ರತೆ ತಿಳಿಯಬೇಕು. ಮತದಾನದಿಂದ ನಮಗೆ ಏನು ಉಪಯೋಗ ಎನ್ನದೇ ನಮ್ಮ ಹಕ್ಕನ್ನು ಚಲಾಯಿಸಿ ಉತ್ತಮ ನಾಯಕನನ್ನು ಆಯ್ಕೆ ಮಾಡಿದ್ದೇವೆ ಎಂಬ ಹೆಗ್ಗಳಿಕೆ ಮಹಿಳೆಯರಲ್ಲಿ ಮೂಡಬೇಕು ಎಂದರು. ಕಾರ್ಯಕ್ರಮದಲ್ಲಿ ಆರೋಗ್ಯ ನಿರೀಕ್ಷಕ ಕುಮಾರ್, ಅಂಗನವಾಡಿ, ಆಶಾ ಕಾರ್ಯಕರ್ತೆಯರು, ಗ್ರಾಪಂ ನೌಕರರು ಹಾಗೂ ಸಾರ್ವಜನಿಕರು ಹಾಜರಿದ್ದರು.

ದಡದಹಳ್ಳಿ, ಬೆದ್ದಲಪುರ ಹಾಡಿಗಳಿಗೆ ಸೋಲಾರ್ ಲೈಟ್ ವಿತರಣೆ



ಸರಗೂರು, ಮಾ.26– ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್ ಹಾಗೂ ಟ್ರೆಲಿಕ್ಸ್ ಸಂಸ್ಥೆ ವತಿಯಿಂದ ತಾಲೂಕಿನ ದಡದಹಳ್ಳಿ ಮತ್ತು ಬೆದ್ದಲಪುರ ಹಾಡಿಗಳಿಗೆ ಸೋಲಾರ್ ಲೈಟ್ ವಿತರಿಸಲಾಯಿತು.

ಟೆಲಿಕ್ಸ್ ಸಂಸ್ಥೆ ವ್ಯವಸ್ಥಾಪಕ ನಿರ್ದೇಶಕ ಮಹಿಪಾಲ್ ನಾಯರ್ ಮಾತನಾಡಿ, ಕತ್ತಲಿನಲ್ಲಿ ವಾಸಿಸುವ ಹಾಡಿ ಜನರಿಗೆ ಸೋಲಾರ್ ಲೈಟ್ ಅವಶ್ಯವಿದ್ದು, ದಡದಹಳ್ಳಿ ಹಾಡಿಯ 33 ಕುಟುಂಬ ಹಾಗೂ ಬೆದ್ದಲಪುರ ಹಾಡಿಯ 8 ಕುಟುಂಬಗಳಿಗೆ 15 ಸೋಲಾರ್ ಲೈಟ್ ವಿತರಿಸುವ ಮೂಲಕ ಸಂಪೂರ್ಣ ಸೌರ ವಿದ್ಯುಚ್ಛಕ್ತಿ ಹಾಡಿಗಳನ್ನಾಗಿ ಮಾಡಲಾಗಿದೆ. ಮುಂದಿನ ದಿನಗಳಲ್ಲಿ ಇನ್ನಿತರ ಹಲವು ಸೌಲಭ್ಯಗಳನ್ನು ಕಲ್ಪಿಸುವ ಮೂಲಕ ಹಾಡಿ ಬೆಳವಣಿಗೆಗೆ ಸಹಕರಿಸುವುದಾಗಿ ಭರವಸೆ ನೀಡಿದರು.

ನಿವೃತ್ತ ಐಪಿಎಸ್ ಅಧಿಕಾರಿ, ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಚಾಮನ್ ಲಾಲ್ ಮಾತನಾಡಿ, ಟ್ರೆಲಿಕ್ಸ್ ಸಂಸ್ಥೆ ಮತ್ತು ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್ ಸಂಸ್ಥೆ ಕಾರ್ಯವನ್ನು ಪ್ರಶಂಸಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್ ಸಿಇಓ ಸವಿತ, ಹಾಡಿ ಅಭಿವೃದ್ಧಿಗೆ ಸ್ವಸಹಾಯ ಸಂಘಗಳ ಪಾತ್ರ ಬಹಳ ಮುಖ್ಯ. ಈ ನಿಟ್ಟಿನಲ್ಲಿ ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್ ಇದುವರೆಗೂ ಸಂಘ ಸಂಸ್ಥೆಗಳು ಮತ್ತು ದಾನಿಗಳಿಂದ ಒಟ್ಟು 12 ಹಾಡಿಗಳಿಗೆ 140 ಬೀದಿದೀಪ ಕಲ್ಪಿಸಿದೆ. ಮುಂದಿನ ದಿನಗಳಲ್ಲಿ ಮತ್ತಷ್ಟು ಹಾಡಿಗಳನ್ನು ಸಂಪೂರ್ಣ ಸೌರವಿದ್ಯುತ್ ಹಾಡಿಗಳನ್ನಾಗಿ ಮಾಡಲು ಪ್ರಯತ್ನಿಸಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಟ್ರೆಲಿಕ್ಸ್ ಇಂಡಿಯಾದ ಮಧುಕರ್ ಪೈ, ಕೋಮಲಿನ್ ಕೌರ್, ಸಾಮಾಜಿಕ, ಆರ್ಥಿಕ ಸಬಲೀಕರಣ ವಿಭಾಗದ ಮುಖ್ಯಸ್ಥ ಡಾ.ಡೆನ್ನಿಸ್ ಚೌಹಾಣ್, ವ್ಯವಸ್ಥಾಪಕರಾದ ಪಿ.ಡಿ.ನಾಯಕ್, ಅಬ್ದುಲ್ ರಶೀದ್, ನಾಗೇಶ್ ಸೇರಿದಂತೆ ಹಾಡಿ ಜನರಿದ್ದರು.

ದೇವರಾಜ ಅರಸು ಅಭಿಮಾನಿಗಳ ಸಮಾವೇಶ



ಹುಣಸೂರು, ಮಾ.26– ತಾಲೂಕಿನ ದೇವರಾಜ ಅರಸು ಅಭಿಮಾನಿಗಳ ವೇದಿಕೆ ವತಿಯಿಂದ ನಗರದ ಅಂಬೇಡ್ಕರ್ ಭವನದಲ್ಲಿ ದೇವರಾಜ ಅರಸು ಅಭಿಮಾನಿಗಳ ಸಮಾಲೋಚನಾ ಸಮಾವೇಶ ನಡೆಯಿತು.

ವೇದಿಕೆ ಅಧ್ಯಕ್ಷ ಬಿಳಿಕೆರೆ ರಾಜು ಮಾತನಾಡಿ, ದೇಶದಲ್ಲಿ ಅಧಿಕಾರದಲ್ಲಿರುವ ಕೋಮುವಾದಿ ಬಿಜೆಪಿ ಸರ್ಕಾರ ದಲಿತ, ಹಿಂದುಳಿದ ಅಲ್ಪಸಂಖ್ಯಾತ ಸಮುದಾಯಗಳ ವಿರೋಧಿ ಆಡಳಿತ ನಡೆಸುತ್ತಿದೆ. ಪ್ರಸ್ತುತ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿಯನ್ನು ಅಧಿಕಾರದಿಂದ ದೂರವಿಡುವ ಮಹತ್ವದ ಜವಾಬ್ದಾರಿ ನಮ್ಮ ನಿಮ್ಮೆಲ್ಲರ ಮೇಲಿದೆ ಎಂದರು.

ಈ ಹಿಂದೆ ಕಾಂಗ್ರೆಸ್ ನಾಯಕ ದಿ.ಚಂದ್ರಪ್ಪ ಅರಸು ಅವರ ನಿಕಟವರ್ತಿಯಾಗಿದ್ದವನು ನಾನು. ಕಾಂಗ್ರೆಸ್ ದಲಿತರ ಹಿತಾಸಕ್ತಿಗಾಗಿ ಏನೇನು ಕೆಲಸ ಮಾಡಿದೆ ಎಂಬುದನ್ನು ಬಹಳ ಹತ್ತಿರದಿಂದ ಕಂಡಿದ್ದೇನೆ. ಪ್ರಸ್ತುತ ಸಂವಿಧಾನದ ಆಶಯಗಳನ್ನು ಕಾಪಾಡುವ ಪರ್ಯಾಯ ಶಕ್ತಿಯಾಗಿ ನಮಗೆ ಕಾಂಗ್ರೆಸ್ ಪಕ್ಷ ಕಾಣುತ್ತಿದೆ. ಗೃಹ ಸಚಿವ ಡಾ.ಜಿ.ಪರಮೇಶ್ವರ್ ಮುಖ್ಯಮಂತ್ರಿಗಳೊಂದಿಗೆ ಮಾತನಾಡಿ ನಮ್ಮೆಲ್ಲರನ್ನು ಪಕ್ಷಕ್ಕೆ ಸೇರ್ಪಡೆ ಮಾಡಿಕೊಳ್ಳುವ ಭರವಸೆ ನೀಡಿದ್ದಾರೆ. ನಾವೆಲ್ಲರೂ ಅವರ ಮಾರ್ಗದರ್ಶನದಲ್ಲಿ ಮುಂದುವರಿಯಬೇಕಾದ ಅವಶ್ಯಕತೆ ಇದೆ ಎಂದರು.

ದಲಿತರ ಬಹುದಿನಗಳ ಬೇಡಿಕೆಯಾಗಿರುವ ದಲಿತರ ಸಮುದಾಯ ಭವನಕ್ಕೆ ಎಲ್ಲರೂ ಕೈಜೋಡಿಸಬೇಕು. ಮುಖ್ಯಮಂತ್ರಿ ಸಿದ್ದರಾಮಯ್ಯನವರು ದಲಿತಪರ ಕಾಳಜಿ ಉಳ್ಳವರಾಗಿದ್ದು, ನಮ್ಮ ಸಮುದಾಯ ಭವನ ನಿರ್ಮಾಣಕ್ಕೆ ಅವರ ನೆರವು ಕೋರಬಹುದು. ಜೊತೆಗೆ ನಾಯಕರಾದ ಡಾ.ಜಿ.ಪರಮೇಶ್ವರ್, ಡಾ.ಹೆಚ್.ಸಿ. ಮಹದೇವಪ್ಪ ಹಾಗೂ ಪ್ರಿಯಾಂಕ ಖರ್ಗೆ ನಮ್ಮ ಬೆನ್ನೆಲುಬಾಗಿದ್ದಾರೆ. ಇವರೆಲ್ಲರ ಸಂಪೂರ್ಣ ಸಹಕಾರ ಪಡೆದು ಮೈಸೂರಿನಲ್ಲಿ ಭವ್ಯ ಸಮುದಾಯ ಭವನ ನಿರ್ಮಿಸಿಕೊಳ್ಳಬಹುದು. ಹೀಗಾಗಿ ಸ್ಥಳೀಯ ನಾಯಕರ ಜೊತೆಗಿನ ಭಿನ್ನಾಭಿಪ್ರಾಯ ಮರೆತು ಕಾಂಗ್ರೆಸ್‌ನೊಂದಿಗೆ ಸಾಗುವ ಹೊಣೆಗಾರಿಕೆ ಅರಿತು ಹೆಜ್ಜೆ ಹಾಕೋಣ ಎಂದು ಕರೆ ನೀಡಿದರು.

ಸಮಾವೇಶದ ಅಧ್ಯಕ್ಷತೆ ವಹಿಸಿದ್ದ ದಲಿತ ಮುಖಂಡ ವರದರಾಜ ಮಾತನಾಡಿ, ಪ್ರಸ್ತುತ ನಮ್ಮ ಸಂವಿಧಾನ ಅಪಾಯದಲ್ಲಿದೆ. ಅದನ್ನು ರಕ್ಷಿಸಬೇಕಾದರೆ ನಾವು ಕೋಮುವಾದಿಗಳ ವಿರುದ್ಧ ಸಮರ ಸಾರಬೇಕಾಗಿದೆ ಎಂದರು. ಸಮಾವೇಶದಲ್ಲಿ ಗ್ರಾಪಂ ಸದಸ್ಯರಾದ ಚಂದ್ರಚಾರ್, ಪ್ರಭಾಕರ್, ಮುಖಂಡರಾದ ಜಗ್ಗೇಗೌಡ, ಭೋಗ ಚಾರ್, ಲೋಕೇಶ್, ಮುದ್ದು ಚೆಲುವಯ್ಯ, ಚೆಲುವರಾಜ್ ಬಸವರಾಜ್ ಸೇರಿದಂತೆ ಇನ್ನಿತರರಿದ್ದರು.



ಹುಣಸೂರು ತಾಲೂಕಿನ ಹನಗೋಡು ಗ್ರಾಮದಲ್ಲಿ ಮಂಗಳವಾರ ಶ್ರೀಮಹದೇಶ್ವರ ದೇವರ ಮೆರವಣಿಗೆ ನಡೆಯಿತು. ಬಳಿಕ ಭಕ್ತರಿಗೆ ಪ್ರಸಾದ ವಿನಿಯೋಗ ಮಾಡಲಾಯಿತು.

ಶಾಸಕರು, ಮಾಜಿ ಶಾಸಕರ ಆಶೀರ್ವಾದ ಪಡೆದ ಬೋಸ್




ತಿ.ನರಸೀಪುರ, ಮಾ.26– ಚಾಮರಾಜನಗರ ಮೀಸಲು ಲೋಕಸಭಾ ಕ್ಷೇತ್ರ ಕಾಂಗ್ರೆಸ್ ಟಿಕೆಟ್ ಆಕಾಂಕ್ಷಿ ಸುನೀಲ್ ಬೋಸ್ ಅವರು ಶಾಸಕರಾದ ಎ.ಆರ್. ಕೃಷ್ಣಮೂರ್ತಿ, ನರೇಂದ್ರ ಹಾಗೂ ಮಾಜಿ ಶಾಸಕ ಜಯಣ್ಣ ಅವರನ್ನು ಭೇಟಿ ಮಾಡಿ ಆಶೀರ್ವಾದ ಪಡೆದರು.

ಹಲವು ಮಂದಿ ಟಿಕೆಟ್ ಆಕಾಂಕ್ಷಿಗಳಿದ್ದರೂ, ನನಗೆ ಟಿಕೆಟ್ ದೊರೆಯಲಿದೆ ಎಂಬ ಆತ್ಮವಿಶ್ವಾಸದೊಂದಿಗೆ ಕ್ಷೇತ್ರದಲ್ಲಿ ಮಿಂಚಿನ ಸಂಚಾರ ನಡೆಸುತ್ತಿರುವ ಸಮಾಜ ಕಲ್ಯಾಣ ಇಲಾಖೆ ಸಚಿವ ಹೆಚ್.ಸಿ.ಮಹದೇವಪ್ಪ ಪುತ್ರ ಸುನೀಲ್ ಬೋಸ್ ಪಕ್ಷದ ಮುಖಂಡರು, ಕಾರ್ಯಕರ್ತರನ್ನು ಭೇಟಿ ಮಾಡಿ ಮಾತುಕತೆ ನಡೆಸಿ ಚುನಾವಣಾ ಅಖಾಡಕ್ಕಿಳಿಯಲು ಸಜ್ಜಾಗುತ್ತಿದ್ದಾರೆ.


ಸುನೀಲ್ ಬೋಸ್ ಮಾತನಾಡಿ, ಸಿಎಂ ಸಿದ್ದರಾಮಯ್ಯ ಹಾಗೂ ಪಕ್ಷದ ವರಿಷ್ಠರ ಆಶೀರ್ವಾದಿಂದ ಈ ಬಾರಿ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಲು ನನಗೆ ಟಿಕೆಟ್ ದೊರೆಯಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಒಂದು ವೇಳೆ ಟಿಕೆಟ್ ಸಿಗದಿದ್ದರೇ ಪಕ್ಷದ ಅಭ್ಯರ್ಥಿ ಪರ ಪ್ರಚಾರ ನಡೆಸಿ ಸಂಸತ್ತಿಗೆ ಕಳುಹಿಸಲಾಗುವುದು ಎಂದರು. ಈ ವೇಳೆ ಆಪ್ತ ಸಹಾಯಕ ಲಕ್ಷ್ಮಿ ನಾರಾಯಣ್ ಇದ್ದರು.

ಮಂಡಲ ಮಾಧ್ಯಮ ವಕ್ತಾರರಾಗಿ ನೇಮಕ



ಹುಣಸೂರು, ಮಾ.26– ಹುಣಸೂರು ಗ್ರಾಮಾಂತರ ಮಂಡಲ ಮಾಧ್ಯಮ ವಕ್ತಾರರನ್ನಾಗಿ ಹರವೆ ರವಿಕುಮಾರ್ ಅವರನ್ನು ಮೈಸೂರು ಜಿಲ್ಲಾ ಗ್ರಾಮಾಂತರ ಅಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ ನೇಮಕಮಾಡಿ ಆದೇಶ ಹೊರಡಿಸಿದ್ದಾರೆ.

ಹಿಂದುಳಿದ ವರ್ಗಗಳ ಅಧ್ಯಕ್ಷರಾಗಿ ನೇಮಕ



ಬೆಟ್ಟದಪುರ, ಮಾ.26– ಪಿರಿಯಾಪಟ್ಟಣ ತಾಲೂಕಿನ ಬಿಜೆಪಿ ಹಿಂದುಳಿದ ವರ್ಗಗಳ ಅಧ್ಯಕ್ಷರಾಗಿ ಹಿಟ್ನೆ ಹೆಬ್ಬಾಗಿಲು ಗ್ರಾಮದ ಪ್ರವೀಣ್ ಉಪ್ಪಾರ್ ಅವರನ್ನು ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವ ಸ್ವಾಮಿ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ.

ಪುತ್ರನಿಗೆ ಟಿಕೆಟ್ ಸಿಗಲೆಂದು ವಿಶೇಷ ಪೂಜೆ



ಮೂಗೂರು, ಮಾ.26– ಚಾಮರಾಜನಗರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಟಿಕೆಟ್ ಹಂಚಿಕೆ ಕಗ್ಗಂಟು ನಿವಾರಣೆಯಾಗಿ ಪುತ್ರ ಸುನೀಲ್ ಬೋಸ್‌ಗೆ ಅವಕಾಶ (ಟಿಕೆಟ್) ಸಿಗಲೆಂದು ವಿನೋದಮ್ಮ ಮಹದೇವಪ್ಪ ವಿಶೇಷ ಪೂಜೆ ಸಲ್ಲಿಸಿ ಪ್ರಾರ್ಥಿಸಿದರು.

ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಸಿ.ಮಹದೇವಪ್ಪನವರ ಪತ್ನಿ ವಿನೋದಮ್ಮ ಮಂಗಳವಾರ ಗ್ರಾಮದ ಶ್ರೀತ್ರಿಪುರ ಸುಂದರಿ ಅಮ್ಮನವರ ದೇಗುಲಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿದರು.

ಬಳಿಕ ಮಾತನಾಡಿದ ಅವರು, ಪಕ್ಷ ಸಂಘಟನೆಗೊಳಿಸುವ ಮೂಲಕ ತಂದೆಯಂತೆ ಜನಸೇವೆ ಮಾಡಲು ಹಾತೊರೆಯುವ ಸುನೀಲ್ ಬೋಸ್ ಅವರಿಗೆ ಚಾಮರಾಜನಗರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧಿಸಲು ಪಕ್ಷದ ವರಿಷ್ಠರು ಅವಕಾಶ ಮಾಡಿಕೊಡಬೇಕು ಎಂದು ಮನವಿ ಮಾಡಿದರು.

ಈ ವೇಳೆ ಎಂ.ಡಿ.ಬಸವರಾಜು ಅಭಿಮಾನಿ ಬಳಗದ ಪದಾಧಿಕಾರಿಗಳು ಸಚಿವರ ಪತ್ನಿ ವಿನೋದಮ್ಮ ಮಹದೇವಪ್ಪ ಅವರನ್ನು ಸನ್ಮಾನಿಸಿದರು. ಈ ಸಂದರ್ಭ ನಾಗೇಂದ್ರ ಪುಟ್ಟಮಾದನಾಯ್ಕ, ಗ್ರಾಮಸ್ಥರು ಉಪಸ್ಥಿತರಿದ್ದರು.

ಲೋಕಸಭಾ ಚುನಾವಣೆಗೆ ಸಕಲ ಸಿದ್ಧತೆ: ಕುಮುದಾ ಶರತ್



ಸುದ್ದಿಗೋಷ್ಠಿಯಲ್ಲಿ ಸಹಾಯಕ ಚುನಾವಣಾಧಿಕಾರಿ ಕುಮುದಾ ಶರತ್ ಮಾತನಾಡಿದರು.

ಹೆಚ್.ಡಿ.ಕೋಟೆ, ಮಾ.26– ಲೋಕಸಭಾ ಚುನಾವಣೆಗೆ ತಾಲೂಕಿನಲ್ಲಿ ಸಕಲ ಸಿದ್ಧತೆ ಕೈಗೊಳ್ಳಲಾಗಿದೆ ಎಂದು ಸಹಾಯಕ ಚುನಾವಣಾಧಿಕಾರಿ ಕುಮುದಾ ಶರತ್ ತಿಳಿಸಿದರು.

ಪಟ್ಟಣದ ಪುರಸಭಾ ಕಚೇರಿಯಲ್ಲಿರುವ ಸಹಾಯಕ ಚುನಾವಣಾಧಿಕಾರಿ ಕಚೇರಿಯಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹೆಚ್.ಡಿ.ಕೋಟೆ ಕ್ಷೇತ್ರದಲ್ಲಿ 2,27,921 ಮಂದಿ ಮತದಾರರಿದ್ದು, ಈ ಪೈಕಿ 1,13,761 ಪುರುಷರು, 1,14,140 ಮಹಿಳೆಯರು, 12 ತೃತೀಯಲಿಂಗಿಗಳಿದ್ದಾರೆ. ಇದೇ ಪ್ರಥಮ ಬಾರಿಗೆ 3433 ಮಂದಿ ನೋಂದಣಿಯಾದ ಮತದಾರರಿದ್ದು, 3713 ಮಂದಿ 85 ವರ್ಷ ಮೇಲ್ಪಟ್ಟ ಮತದಾರರಿದ್ದಾರೆ ಎಂದ ಅವರು, ಪ್ರತಿಯೊಬ್ಬರೂ ಮತದಾನ ಮಾಡುವಂತೆ ತಿಳಿಸಿದರು.

ತಾಲೂಕಿನ ಬಾವಲಿ, ಕಂಚಮಳ್ಳಿ ಹಾಗೂ ಚಾಮನಹಳ್ಳಿಹುಂಡಿ ಗ್ರಾಮಗಳಲ್ಲಿ ಚೆಕ್‌ಪೋಸ್ಟ್‌ಗಳನ್ನು ತೆರೆಯಲಾಗಿದ್ದು, ಈ ಭಾಗದಲ್ಲಿ ಸಂಚರಿಸುವ ವಾಹನಗಳನ್ನು ತಪಾಸಣೆ ಮಾಡಲಾಗುತ್ತಿದೆ. ಯಾವುದೇ ಅಕ್ರಮ ಕಂಡು ಬಂದಲ್ಲಿ, ನಿಗದಿಗಿಂತ ಹೆಚ್ಚು ಹಣ ಸಾಗಿಸುವುದು ಕಂಡು ಬಂದಲ್ಲಿ ಸೀಜ್ ಮಾಡುವಂತೆ ಸೂಚಿಸಲಾಗಿದೆ ಎಂದರು.

ಯಾವುದೇ ವ್ಯಕ್ತಿ 50 ಸಾವಿರಕ್ಕಿಂತ ಹೆಚ್ಚು ಹಣ ಕೊಂಡೊಯ್ಯುವಂತಿಲ್ಲ. ಒಂದು ವೇಳೆ ಹಣವಿದ್ದರೇ ಅದಕ್ಕೆ ಪೂರಕ ದಾಖಲೆ ಇರಬೇಕು. ಒಂದು ವೇಳೆ ದಾಖಲೆಗಳಿಲ್ಲದ ಪಕ್ಷದಲ್ಲಿ ವಶಪಡಿಸಿಕೊಂಡ ಹಣವನ್ನು ಸೂಕ್ತ ದಾಖಲೆ ನೀಡಿ ಬಿಡಿಸಿಕೊಂಡು ಹೋಗಬಹುದು ಎಂದರು.

ಪ್ರಸ್ತುತ ಗ್ರಾಮಗಳಲ್ಲಿ ಜಾತ್ರೆಗಳು ನಡೆಯುತ್ತಿದ್ದು, ಜಾತ್ರೆಗಳಲ್ಲಿ ಚುನಾವಣೆಗೆ ಸಂಬಂಧಿಸಿದ ಯಾವುದೇ ಚಟುವಟಿಕೆ ನಡೆಸುವಂತಿಲ್ಲ. ಪಕ್ಷದ ಅಭ್ಯರ್ಥಿ, ಮುಖಂಡರಿರುವ ಬ್ಯಾನರ್ ಅಳವಡಿಸುವಂತಿಲ್ಲ. ಜಾತ್ರೆ ಆಯೋಜನೆ ಸಂಬಂಧ ಗ್ರಾಮದ ಮುಖಂಡರು ಚುನಾವಣಾಧಿಕಾರಿಗಳಿಗೆ ಮಾಹಿತಿ ನೀಡಬೇಕು ಎಂದರು.

ಮದುವೆ, ಮನೆಗಳಲ್ಲಿ ನಡೆಯುವ ಯಾವುದೇ ಶುಭ ಸಮಾರಂಭಗಳಿಗೆ ಒಪ್ಪಿಗೆ ಅಗತ್ಯವಿಲ್ಲ. ಆದರೆ ಗ್ರಾಮದಲ್ಲಿ, ಗ್ರಾಮದ ಸಮುದಾಯ ಭವನಗಳಲ್ಲಿ ಸಮಾರಂಭ ನಡೆಸಲು ಸ್ಥಳೀಯ ಪೊಲೀಸ್ ಮತ್ತು ಕಂದಾಯ ಇಲಾಖೆ ಅನುಮತಿ ಕಡ್ಡಾಯವಾಗಿ ಪಡೆಯಬೇಕು ಎಂದರು.

ಚುನಾವಣೆಗೆ ಸಂಬಂಧಿಸಿದಂತೆ ನೀತಿ ಉಲ್ಲಂಘನೆ ಕಂಡು ಬಂದರೆ ಕೂಡಲೇ ಸಾರ್ವಜನಿಕರು ದೂ.08228–255325ಗೆ ಕರೆ ಮಾಡಿ ದೂರು ನೀಡಬಹುದು ಎಂದರು.

ಚುನಾವಣಾ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ಆಯಾ ಪಕ್ಷಗಳು ಗಮನದಲ್ಲಿಟ್ಟುಕೊಂಡು ಪ್ರಚಾರ ನಡೆಸಬಹುದು. ಚುನಾವಣಾ ಆಯೋಗದಿಂದ 3 ಎಸ್‌ಎಸ್‌ಟಿ ತಂಡ, 1 ವಿವಿಟಿ ತಂಡ, ಒಂದು ಅಕೌಂಟಿಂಗ್ ತಂಡ ಸೇರಿದಂತೆ ಆರು ತಂಡಗಳನ್ನು ನೇಮಕ ಮಾಡಲಾಗಿದೆ. ಜೊತೆಗೆ 28 ಸೆಕ್ಟರ್ ಅಧಿಕಾರಿಗಳನ್ನು ಕೂಡ ನೇಮಕ ಮಾಡಲಾಗಿದೆ. ತಾಲೂಕಿನಲ್ಲಿ 282 ಮತಗಟ್ಟೆಗಳನ್ನು ಸ್ಥಾಪಿಸಲಾಗಿದ್ದು, ಈ ಪೈಕಿ 56 ಮತಗಟ್ಟೆಗಳನ್ನು ಸೂಕ್ಷ್ಮ ಮತಗಟ್ಟೆಗಳೆಂದು ಗುರುತಿಸಲಾಗಿದೆ ಎಂದರು.

ಇನ್ಸ್‌ಪೆಕ್ಟರ್ ಶಬ್ಬೀರ್ ಹುಸೇನ್ ಮಾತನಾಡಿ, ಇದುವರೆಗೂ 12 ಅಬಕಾರಿ ಪ್ರಕರಣ ದಾಖಲಿಸಲಾಗಿದೆ. ಮುಂದಿನ ದಿನಗಳಲ್ಲಿ ತಾಲೂಕಿನ ಮದ್ಯ ಮಾರಾಟಗಾರರು ಚುನಾವಣೆ ನೀತಿ ಸಂಹಿತೆಗೆ ಅನುಗುಣವಾಗಿ ಮದ್ಯ ಮಾರಾಟ ಮಾಡಬೇಕು ಎಂದರು.ಈ ವೇಳೆ ತಹಸೀಲ್ದಾರ್ ಶ್ರೀನಿವಾಸ್ ಹಾಜರಿದ್ದರು.

ಬಿ.ಎಸ್.ದತ್ತಾತ್ರೇಯಗೆ ಪಿಹೆಚ್.ಡಿ ಪದವಿ



ಮೈಸೂರು,ಮಾ.26(ಪಿಎಂ)– ಡಾ.ಎಸ್.ಇಂದುಮತಿ ಅವರ ಮಾರ್ಗದರ್ಶನದಲ್ಲಿ ಬಿ.ಎಸ್.ದತ್ತಾತ್ರೇಯ ಅವರು ಅರ್ಥಶಾಸ್ತ್ರದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ 'ಎಂಪ್ಲಾಯ್‌ಮೆಂಟ್ ಅಂಡ್ ಸ್ಕಿಲ್ ಡೆವಲಪ್‌ಮೆಂಟ್ ಇನಿಟಿಯೇಟಿವ್ಸ್ ಇನ್ ಇಂಡಿಯಾ ; ಆ್ಯನ್ ಎಂಪಿರಿಕಲ್ ಸ್ಟಡಿ' ಎಂಬ ಮಹಾಪ್ರಬಂಧವನ್ನು ಮೈಸೂರು ವಿವಿ ಪಿಹೆಚ್.ಡಿ ಪದವಿಗೆ ಅಂಗೀಕರಿಸಿದೆ.


ಮಾನ್ಯ ಮುಖ್ಯಮಂತ್ರಿಗಳಾದ ಸನ್ಮಾನ್ಯ
ಶ್ರೀ ಸಿದ್ದರಾಮಯ್ಯ ರವರ ನೇತೃತ್ವದಲ್ಲಿ
ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾಗುತ್ತಿರುವ
ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ (MUDA) ಮಾಜಿ ಅಧ್ಯಕ್ಷರಾದ
ಎಚ್.ವಿ. ರಾಜೀವ್ ಹಾಗೂ
ಮುಖಂಡರು ಹಾಗೂ ಬೆಂಬಲಿಗರಿಗೆ
ಸುಸ್ವಾಗತ
ಎನ್. ಶಿವಕುಮಾರ್
ಕೆ.ಎಸ್. ರಾಮಪ್ರಸಾದ್
ಎಸ್.ವಿ. ಮಲ್ಲಿಕಾರ್ಜುನ್
ಶ್ರೀ ಶಿವಸಾಯಿ ಎಂಟರ್‌ಪ್ರೈಸಸ್


ಕೆ.ಪಿ.ಸಿ.ಸಿ. ಕಾರ್ಯಾಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಲಿರುವ
ಸನ್ಮಾನ್ಯ ಶ್ರೀ ತನ್ವೀರ್ ಸೇಠ್ ರವರಿಗೆ ಅಭಿನಂದನೆಗಳು
ಶ್ರೀಧರ್ ಸಿ.
ಮಾಜಿ ಉಪಮಹಾಪೌರರು
ಮೈಸೂರು ಮಹಾನಗರ ಪಾಲಿಕೆ
ಸತ್ಯರಾಜ್ ಜಿ.ಎಸ್.
ಮಾಜಿ ಸದಸ್ಯರು, ಮೈಸೂರು ಮಹಾನಗರ ಪಾಲಿಕೆ
ಪ್ರದೀಪ್ ಚಂದ್ರ
ಮಾಜಿ ಸದಸ್ಯರು, ಮೈಸೂರು ಮಹಾನಗರ ಪಾಲಿಕೆ
ರಘು ಡಿ.


ಬಿಜೆಪಿ – ಜೆಡಿಎಸ್ ಸಮನ್ವಯ ಸಭೆ
ಪ್ರಕಟಣೆ : ಸಂಸದರು, ಶಾಸಕರು, ಮಾಜಿ ಶಾಸಕರು, ಬಿಜೆಪಿ – ಜೆಡಿಎಸ್ ಪಕ್ಷಗಳ ಅಧ್ಯಕ್ಷರು ಹಾಜರಿರುವವರು.
ಎರಡು ಪಕ್ಷದ ಪದಾಧಿಕಾರಿಗಳು, ಮುಖಂಡರು, ಬೂತ್ ಮಟ್ಟದ ಕಾರ್ಯಕರ್ತರು ಹಾಗೂ ಎಲ್ಲಾ ಪ್ರಮುಖರು
ಭಾಗವಹಿಸುವಂತೆ ಕೋರುತ್ತೇವೆ
ದಿನಾಂಕ : 27-03-2024 ಸಂಜೆ : 5.00 ಗಂಟೆಗೆ ಸ್ಥಳ : ಕಾಳಿಂಗರಾವ್ ಸಭಾ ಮಂಟಪ, ವಸ್ತು ಪ್ರದರ್ಶನ ಪ್ರಾಧಿಕಾರದ ಮೈದಾನ, ಮೈಸೂರು